ಸಂಪುಟ: 04 ಸಂಚಿಕೆ: 222 ಪುಟಗಳು: 08 ಶುಕ್ರವಾರ 25 ಅಕ್ಟೋಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**

ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು


# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


## 16 ಲಕ್ಷ ಲಂಚ ಪಡೆಯುತ್ತಿದ್ದಾಲೇ ಲೋಕಾ ಬಲೆಗೆ ಬೆಸ್ಕಾಂ ಎಇಇ, ಎಇ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಗುತ್ತಿಗೆದಾರರೊಬ್ಬರಿಂದ ಬರೋಬ್ಬರಿ 16 ಲಕ್ಷ ಲಂಚವನ್ನು ಸ್ವೀಕರಿಸುತ್ತಿದ್ದಾಗಲೇ ಬೆಸ್ಕಾಂ ಎಇಇ, ಎಇ ಇಬ್ಬರೂ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಬೆಂಗಳೂರಿನ ಅವಲಹಳ್ಳಿಯ ವಿಭಾಗದ ಬೆಸ್ಕಾಂ ಎಇಇ ರಮೇಶ್ ಬಾಬು ಹಾಗೂ ಎಇ ನಾಗೇಶ್ ಎಂಬುವರು ಗುತ್ತಿಗೆದಾರರೊಬ್ಬರಿಂದ ಲಂಚಕ್ಕೆ ಬೇಡಿಕೆ ಇಟ್ಟಿದ್ದರು.ಈ ಸಂಬಂಧ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಲಾಗಿತ್ತು. ಇಂದು 16 ಲಕ್ಷ ಲಂಚದ ಹಣವನ್ನು ಪಡೆಯುತ್ತಿದ್ದಾಗಲೇ ಬೆಸ್ಕಾಂ ಎಇಇ ರಮೇಶ್ ಬಾಬು ಹಾಗೂ ಎಇ ನಾಗೇಶ್ ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಆಗೇ ಹಿಡಿದಿದ್ದಾರೆ. ಈ ಸಂಬಂಧ ಇಬ್ಬರನ್ನು ವಶಕ್ಕೆ ಪಡೆದು, ವಿಚಾರಣೆ ನಡೆಸುತ್ತಿದ್ದಾರೆ.

## ಹೊಸ ಯುವಕರ ಬೆಂಬಲ ದೊಡ್ಡ ಪ್ರಮಾಣದಲ್ಲಿ ದೊರೆಯುತ್ತಿದೆ

• ಉದಯವಾಹಿನಿ, ಹಾವೇರಿ

ಶಿಗ್ಗಾವಿಯಲ್ಲಿ ಅದ್ಭುತವಾದ ಬೆಂಬಲ ದೊರೆಯುತ್ತಿದೆ. ನಮ್ಮ ಆತ್ಮೀಯರು, ಹಿರಿಯರ ಬೆಂಬಲದ ಜೊತೆಗೆ ಹೊಸ ಯುವಕರ ಬೆಂಬಲ ದೊಡ್ಡ ಪ್ರಮಾಣದಲ್ಲಿ ಸಿಗುತ್ತಿದೆ. ಈ ಬಾರಿ ಚುನಾವಣೆಯಲ್ಲಿ ದೊಡ್ಡ ಜನಶಕ್ತಿ ನಮ್ಮ ಪರವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಶಿಗ್ಗಾವಿಯಲ್ಲಿ ಈ ಬಾರಿ ಹೊಸ ಯುವಕರ ತಂಡ ನಮ್ಮ ಜೊತೆಗೆ ದೊಡ್ಡ ಪ್ರಮಾಣದಲ್ಲಿ ಬರುತ್ತಿದೆ ಎಂದರು. ದಕ್ಷಿಣ ಕನ್ನಡ ಉಡುಪಿ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್ ನಡೆದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕಿಶೋರ್ ಕುಮಾರ್ ಪುತ್ತೂರು ಆಯ್ಕೆ ಆಗಿದ್ದು, ಅದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರಿಂದ ಖಾಲಿಯಾಗಿದ್ದ ಸ್ಥಾನ. ಅಲ್ಲಿ ಜನ ಪ್ರತಿನಿಧಿಗಳು ನಮ್ಮ ಪರವಾಗಿದ್ದಾರೆ. ಅಲ್ಲದೇ, ಕಳೆದ ಒಂದೂವರೆ ವರ್ಷದಿಂದ ರಾಜ್ಯ ಸರ್ಕಾರದ ದುರಾಡಳಿತದ ವಿರುದ್ಧ ಜನರು ಮತ ಹಾಕಿದ್ದಾರೆ. ಅಲ್ಲಿ ಪಜ್ಞಾವಂತ ಮತದಾರರಿದ್ದಾರೆ. ಗ್ರಾಮ ಪಂಚಾಯತಿ, ಸ್ಥಳೀಯ ನಗರಸಭೆಯ ಸದಸ್ಯರು ಮತದಾನ ಮಾಡಿದ್ದಾರೆ ಎಂದರು. ರಾಜ್ಯ ಸರ್ಕಾರ ಸ್ಥಳೀಯ ಸಂಸ್ಥೆಗಳಿಗೆ ಎರಡು ಸಾವಿರ ಕೋಟಿ ರೂ. ಕೊಟ್ಟಿಲ್ಲ. ಇವರು ಕೇಂದ್ರ ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ ಎಂದರು.

## ಮುಡಾ: ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಸಿಎಂ ಮೇಲ್ಮನವಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಸಂಬಂಧ ಸಿಎಂ ಸಿದ್ಧರಾಮಯ್ಯ ವಿರುದ್ಧದ ತನಿಖೆಗೆ ರಾಜ್ಯಪಾಲರು ಅನುಮತಿ ನೀಡಿದ್ದರು. ಈ ಕ್ರಮವನ್ನು ಪ್ರಶ್ನಿಸಿ ಹೈಕೋರ್ಟ್ ಏಕಸದಸ್ಯ ಪೀಠಕ್ಕೆ ಅರ್ಜಿಯನ್ನು ಸಿಎಂ ಸಲ್ಲಿಸಿದ್ದರು. ಈ ಅರ್ಜಿಯ ವಾದ ಪ್ರತಿವಾದ ಆಲಿಸಿದ್ದಂತ ನ್ಯಾಯಪೀಠವು ರಾಜ್ಯಪಾಲರ ನಿರ್ಧಾರವನ್ನು ಎತ್ತಿ ಹಿಡಿದಿತ್ತು. ಈಗ ಈ ತೀರ್ಪು ರದ್ದುಗೊಳಿಸುವಂತೆ ವಿಭಾಗೀಯ ಪೀಠಕ್ಕೆ ಸಿಎಂ ಸಿದ್ಧರಾಮಯ್ಯ ಮೇಲ್ಮನವಿ ಸಲ್ಲಿಸಿದ್ದಾರೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ವಿರುದ್ಧದ ಮುಡಾ ಹಗರಣವನ್ನು ತನಿಖೆ ನಡೆಸಲು ರಾಜ್ಯಪಾಲರು ಅನುಮತಿ ನೀಡಿದ್ದರು. ಇದನ್ನು ಪ್ರಶ್ನಿಸಿ ಹೈಕೋರ್ಟ್ ಗೆ ಸಿದ್ಧರಾಮಯ್ಯ ಅರ್ಜಿ ಸಲ್ಲಿಸಿದ್ದರು.

## ಅದಿರು ಸಾಗಾಣೆ ಕೇಸಲ್ಲಿ ದೋಷಿ ಎಂದು ಕೋರ್ಟ್ ತೀರ್ಪು

• ಉದಯವಾಹಿನಿ, ಬೆಂಗಳೂರು

ಬೆಲೇಕೇರಿ ಬಂದರಿನಿಂದ ಅಕ್ರಮವಾಗಿ ಅದಿರು ಸಾಗಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾರವಾರ ಕ್ಷೇತ್ರದ ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ದೋಷಿ ಎಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ನಿಂದ ತೀರ್ಪು ನೀಡಲಾಗಿದೆ. ಬೆಲೇಕೇರಿ ಅದಿರು ನಾಪತ್ತೆ ಪ್ರಕರಣದ ತೀರ್ಪು ಪ್ರಕಟಿಸಲಾಗಿದ್ದು, ಶಾಸಕ ಸತೀಶ್ ಸೈಲ್ ಸೇರಿದಂತೆ ಎಲ್ಲಾ ಆರೋಪಿಗಳು ದೋಷಿ ಎಂದು ಒಟ್ಟು ಆರು ಪ್ರಕರಣಗಳಲ್ಲಿ ಮೂರು ಕೇಸ್ ಗಳ ತೀರ್ಪು ಪ್ರಕಟಿಸಲಾಗಿದೆ. ಆರೋಪಿಗಳನ್ನು ಕಸ್ಟಡಿಗೆ ಪಡೆಯಲು ಕೋರ್ಟ್ ಸೂಚನೆ ನೀಡಿದೆ. ನಾಳೆ ಶಿಕ್ಷೆಯ ಪ್ರಮಾಣವನ್ನು ಕೋರ್ಟ್ ಘೋಷಿಸಲಿದೆ. ಜಪ್ತಿಯಾಗಿದ್ದ 11,312 ಮೆಟ್ರಿಕ್ ಟನ್ ಅದಿರನ್ನು ಅನುಮತಿ ಇಲ್ಲದೆ ಅಕ್ರಮವಾಗಿ ಸಾಗಿಸಲಾಗಿತ್ತು. ಎಲ್ಲಾರೂ ದೋಷಿ ಎಂದು 82ನೇ ಸಿಸಿಹೆಚ್ ಜನಪ್ರತಿನಿಧಿಗಳ ಕೋರ್ಟ್ ಹೇಳಿದ್ದು, ಎಲ್ಲಾ ಅಪರಾಧಿಗಳನ್ನು ಕಸ್ಟಡಿಗೆ ಪಡೆಯಲು ಆದೇಶ ಹೊರಡಿಸಲಾಗಿದೆ.

## ಯಾರೇ ಬಂದರೂ ಸಂಡೂರಿನಲ್ಲಿ ಕಾಂಗ್ರೆಸ್ ಗೆಲ್ಲುತ್ತದೆ: ಸಚಿವ

• ಉದಯವಾಹಿನಿ, ಬಳ್ಳಾರಿ

ಸಂಡೂರು ಕಾಂಗ್ರೆಸ್ ಭದ್ರಕೋಟೆ. ಯಾರೇ ಬಂದರೂ ಕಾಂಗ್ರೆಸ್ ಗೆಲ್ಲುತ್ತದೆ. ಸಾವಿರಾರು ಸಂಖ್ಯೆಯಲ್ಲಿ ಕಾರ್ಯಕರ್ತರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದ್ದೇವೆ. ರಾಜಕೀಯ ಮಾಡಲು ಎಲ್ಲಾರೂ ಬರುತ್ತಾರೆ ಎಂದು ಸಚಿವ ಸಂತೋಷ ಲಾಡ್ ಅವರು ಪರೋಕ್ಷವಾಗಿ ಜನಾರ್ದನ ರೆಡ್ಡಿಗೆ ಟಾಂಗ್ ನೀಡಿದರು. ಕಾಂಗ್ರೆಸ್ ಗ್ಯಾರಂಟಿ ಯೋಜನೆ ರಾಹುಲ್ ಗಾಂಧಿ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಅವರ ಕೆಲಸ ನಮಗೆ ಗೆಲ್ಲುವಂತೆ ಮಾಡುತ್ತದೆ. ತುಕಾರಾಂ ಮಾಡಿರುವ ಒಳ್ಳೆಯ ಕೆಲಸವೇ ಗೆಲುವಿಗೆ ಕಾರಣವಾಗಲಿದೆ. ಜನಾರ್ದನ ರೆಡ್ಡಿಗೆ ಮನೆಯಿಲ್ಲ ಮನೆ ಮಾಡ್ತಾರೆ. ನಮಗೆ ಮೊದಲಿಂದಲೂ ಮನೆ ಇದೆ ಎಂದು ಜನಾರ್ದನ ರೆಡ್ಡಿ ಸಂಡೂರಿನಲ್ಲಿ ಮನೆ ಮಾಡಿರುವುದಕ್ಕೆ ಟಾಂಗ್ ನೀಡಿದರು.



### ರಂಗೇರಿದ ಉಪಕದನ

# ಉಭಯ ಪಕ್ಷಗಳ ಶಕ್ತಿ ಪ್ರದರ್ಶನ



- ಸೈನಿಕನ ಬೆನ್ನಿಗೆ ನಿಂತ ಡಿಕೆ ಬ್ರದರ್ಸ್!
- ಕಾಂಗ್ರೇಸ್ ಪಕ್ಷದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ ಸಿಪಿ ಯೋಗೇಶ್ವರ್
- ಬೃಹತ್ ಮೆರವಣಿಗೆ ಸಾಥ್,
- ಉಪಕದನಲ್ಲಿ ಆಡಳಿತ ಪ್ರತಿಪಕ್ಷಗಳ ಶಕ್ತಿ ಪ್ರದರ್ಶನ



• ಉದಯವಾಹಿನಿ, ಬೆಂಗಳೂರು

ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಪ್ರತಿಷ್ಠೆಯ ಕಣವಾಗಿ ಜಿದ್ದಾಜಿದ್ದಿನ ಕುರುಕ್ಷೇತ್ರವಾಗಿರುವ ರಾಜ್ಯದ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಕಾವು ರಂಗೇರಿದ್ದು, ಕಾಂಗ್ರೆಸ, ಬಿಜೆಪಿ ಅಭ್ಯರ್ಥಿಗಳು ಶಕ್ತಿ ಪ್ರದರ್ಶನ ಮೂಲಕ ನಾಮಪತ್ರ ಸಲ್ಲಿಕೆ ಗುರುವಾರ ಮಾಡಿದ್ದಾರೆ. ಇಂದು ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾದ ಹಿನ್ನಲೆ ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಕ್ಷೇತ್ರಗಳಲ್ಲಿ ಕೈ, ಕಮಲ ಅಭ್ಯರ್ಥಿಗಳು ಭಾರೀ ಸಂಖ್ಯೆಯ ಬೆಂಬಲದೊಂದಿಗೆ ಆಗಮಿಸಿ ಚುನಾವಣಾ ಅಧಿಕಾರಿಗಳಿಗೆ ಉಮೇದುವಾರಿಕೆ ಸಲ್ಲಿಸಿದರು. ಅಧಿಕೃತವಾಗಿ ಸಿಪಿ ಯೋಗೇಶ್ವರ್ ಚನ್ನಪಟ್ಟಣ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ. ಚನ್ನಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ನಾಮಪತ್ರ ಸಲ್ಲಿಕೆ ಮಾಡಿದರು. ಸಿಪಿ ಯೋಗೇಶ್ವರ್ ನಾಮಪತ್ರ ಸಲ್ಲಿಕೆಯ ರೋಡ್ ಶೋ ವೇಳೆ ಅಪಾರ ಜನಸಾಗರದೊಂದಿಗೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ , ಸಚಿವ ರಾಮಲಿಂಗಾ ರೆಡ್ಡಿ ಸಾಥ್ ನೀಡಿದ್ದಾರೆ. ಅಭಿವೃದ್ಧಿಗೆ ಕೈ ಜೋಡಿಸಬೇಕು ಎನ್ನುವ ದೃಷ್ಟಿಯಿಂದ ಸಿಪಿ ಯೋಗೇಶ್ವರ್ ಕಾಂಗ್ರೆಸ್ ಸೇರಿದ್ದು ಚನ್ನಪಟ್ಟಣದ ಸ್ವರೂಪವೇ ಬದಲಾಗಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

**ಚನ್ನಪಟ್ಟಣ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲುವ ವಿಶ್ವಾಸವಿದೆ-ಸಿಎಂ:** ಜನರು ಸಿ.ಪಿ.ಯೋಗೇಶ್ವರನ್ನು ಆಶೀರ್ವದಿಸಿ ಬೆಂಬಲಿಸುವ ನಂಬಿಕೆಯಿದೆ. ಕಾಂಗ್ರೆಸ್ ಅಭ್ಯರ್ಥಿ ದೊಡ್ಡ ಅಂತರದಲ್ಲಿ ಗೆಲ್ಲುವ ವಿಶ್ವಾಸವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಚನ್ನಪಟ್ಟಣದ ಉಪಚುನಾವಣೆಯಲ್ಲಿ ಜೆಡಿಎಸ್ ನವರು ಯಾರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡುತ್ತಾರೆ ಎನ್ನುವುದು ಮುಖ್ಯವಲ್ಲ.

ಸಿ.ಪಿ. ಯೋಗೇಶ್ವರ್ ಅವರು ಕಾಂಗ್ರೆಸ್ ಪಕ್ಷದಲ್ಲಿದ್ದು, ಎರಡು ಬಾರಿ ಶಾಸಕರಾಗಿದ್ದರು. ಬಿಜೆಪಿ ಹಾಗೂ ಎನ್ ಡಿಎ ನಿಂದ ಅವರಿಗೆ ಅನ್ಯಾಯವಾದ ಕಾರಣ ಅವರು ಮತ್ತೆ ಕಾಂಗ್ರೆಸ್ ಪಕ್ಷಕ್ಕೆ ಮರಳಿದ್ದಾರೆ. ಕಾಂಗ್ರೆಸ್ ಪಕ್ಷದ ಸಿದ್ಧಾಂತವನ್ನೊಪ್ಪಿ ಮರಳಿ ಬಂದಿರುವ ಯೋಗೇಶ್ವರ್ ನ್ನು ಇಡೀ ಕಾಂಗ್ರೆಸ್ ಪಕ್ಷ ಸ್ವಾಗತಿಸಿದೆ.

ಸಿ.ಪಿ.ಯೋಗೇಶ್ವರ ಅವರು ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿ. ಜೆಡಿಎಸ್ ಬಿಜೆಪಿಯವರು ಚನ್ನಪಟ್ಟಣ ಕ್ಷೇತ್ರಕ್ಕೆ ಯಾರನ್ನೇ ನಿಲ್ಲಿಸಿದರೂ ಕೂಡ, ಕಾಂಗ್ರೆಸ್ ನ ಅಭ್ಯರ್ಥಿಯೇ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದರು. ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಕಾರ್ಯಕ್ರಮಗಳು, ಗ್ಯಾರಂಟಿ ಯೋಜನೆಗಳು ನುಡಿದಂತೆ ನಡೆಯುವ ನಮ್ಮ ಬದ್ಧತೆಯನ್ನು ತೋರಿಸುತ್ತದೆ ಎಂದರು.

**ಕುಮಾರಸ್ವಾಮಿ ಮಗನೇ ನಿಲ್ಲಲಿ, ಪತ್ನಿಯೇ ನಿಲ್ಲಲಿ ಯೋಗೇಶ್ವರ್ ಗೆಲ್ತಾರೆ:** ಯೋಗೇಶ್ವರ್ ಪರ ರೋಡ್ ಶೋ ನಲ್ಲಿ ಭಾಗವಹಿಸಿ ಚನ್ನಪಟ್ಟಣ ಜನತೆಗೆ ಕರೆ ನೀಡಿದ ಸಿಎಂ, ಕುಮಾರಸ್ವಾಮಿಗೆ ಚನ್ನಪಟ್ಟಣ ಮರೆತುಹೋಗಿ ಮಂಡ್ಯಕ್ಕೆ ಸೀಮಿತರಾಗಿದ್ದಾರೆ. ಬಿಜೆಪಿ ಒಕ್ಕೂಟದಿಂದ ಕುಮಾರಸ್ವಾಮಿಯೇ ನಿಲ್ಲಲಿ, ನಿಖಿಲ್ ಕುಮಾರಸ್ವಾಮಿಯೇ ನಿಲ್ಲಲಿ, ಅನಿತಾ ಕುಮಾರಸ್ವಾಮಿಯವರೇ ನಿಲ್ಲಲಿ ಇಲ್ಲಿ ಕಾಂಗ್ರೆಸ್ ಪಕ್ಷದ ಯೋಗೀಶ್ವರ್ ಅವರೇ ಭರ್ಜರಿ ಜಯಗಳಿಸೋದು ಖಚಿತ ಎಂದು ಭರವಸೆ ವ್ಯಕ್ತಪಡಿಸಿದರು.ಚನ್ನಪಟ್ಟಣದ ಅಭಿವೃದ್ಧಿ ಕೆಲಸಗಳು ಮುಂದಿನ ತಿಂಗಳಿನಿಂದ ಶಾಸಕರಾಗಿ ಯೋಗೀಶ್ವರ್ ಅವರು ಮುಂದುವರೆಸುತ್ತಾರೆ. ಇವತ್ತು ನಾಮಪತ್ರ ಸಲ್ಲಿಕೆ ಬಳಿಕ ನಾನು ಮತ್ತೆ ಚನ್ನಪಟ್ಟಣಕ್ಕೆ ಪ್ರಚಾರಕ್ಕೆ ಬರುತ್ತೇನೆ ಎಂದರು.

**ಚನ್ನಪಟ್ಟಣಕ್ಕೆ 500 ಕೋಟಿ ಅನುದಾನ ನೀಡಿದ್ದೇವೆ**

ಚನ್ನಪಟ್ಟಣಕ್ಕೆ ಹೊಸರೂಪವನ್ನು ನೀಡುವುದಕ್ಕೆ ನಾವು ಬದ್ಧವಾಗಿದ್ದೇವೆ. ಕರ್ನಾಟಕದ ಅಭಿವೃದ್ದಿಯೇ ನಮ್ಮ ಸಂಕಲ್ಪ. ಈ ಗುರಿಯನ್ನಿಟ್ಟುಕೊಂಡು ಕಾಂಗ್ರೆಸ್ ಸರ್ಕಾರ ಕೆಲಸ ಮಾಡುತ್ತಿದೆ. ಚನ್ನಪಟ್ಟಣದ ಅಭಿವೃದ್ದಿಗೆ ಮುಖ್ಯಮಂತ್ರಿಗಳ ಬಳಿ ಮಾತನಾಡಿ ಸುಮಾರು 500 ಕೋಟಿ ಅನುದಾನ ನೀಡಲಾಗಿದೆ ಎಂದರು. ಜಾತ್ಯಾತೀತ ಎನ್ನುವ ಹೆಸರನ್ನು ಇಟ್ಟುಕೊಂಡಿರುವ ಜನತಾದಳ ಕೋಮುವಾದಿ ಬಿಜೆಪಿ ಜೊತೆ ಏಕೆ ಮೈತ್ರಿ ಮಾಡಿಕೊಂಡಿತು. ದಳದವರು ಅನುಕೂಲದ ರಾಜಕಾರಣಕ್ಕಾಗಿ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಕುಮಾರಸ್ವಾಮಿ ಅವರು ತಮ್ಮ ಭಾವನನ್ನೇ ಬಿಜೆಪಿಯಿಂದ ಕಣಕ್ಕೆ ಇಳಿಸಿದರು.

**ಕಾರ್ಯಕರ್ತರ ಕೈ ಬಿಡುವುದಿಲ್ಲ**

ಡಿ.ಕೆ.ಶಿವಕುಮಾರ್ ಹಾಗೂ ಸುರೇಶ್ ಅವರನ್ನು ನಂಬಿ ಬಿಜೆಪಿ ಮತ್ತು ದಳದಿಂದ ಅನೇಕ ಕಾರ್ಯಕರ್ತರು ಬಂದಿದ್ದಾರೆ. ನೀವು ನಮ್ಮ ಕೈ ಬಲಪಡಿಸಿದ್ದೀರಿ, ಯಾವುದೇ ಕಾರಣಕ್ಕೂ ನಿಮ್ಮ ಹಾಗೂ ಕಾಂಗ್ರೆಸ್ ಕಾರ್ಯಕರ್ತರನ್ನು ನಡು ನೀರಿನಲ್ಲಿ ಕೈ ಬಿಡುವ ಪ್ರಶ್ನೆಯಿಲ್ಲ. ಭವಿಷ್ಯದಲ್ಲಿಯೂ ನಿಮ್ಮ ಜೊತೆ ನಾವಿರುತ್ತೇವೆ. ಯೋಗೇಶ್ವರ್ ಅವರ ಜೊತೆಯೂ ಇರುತ್ತೇವೆ.






**ಶುಭ ಘಳಿಗೆಯಲ್ಲಿ ಯೋಗೇಶ್ವರ್ ಪಕ್ಷ ಸೇರಿದ್ದಾರೆ**

ಎರಡು ಬಾರಿ ಸಿಎಂ ಆಗಿದ್ದಾಗ ಚನ್ನಪಟ್ಟಣ ಕ್ಷೇತ್ರದ ಅಭಿವೃದ್ಧಿಗೆ ತಮ್ಮ ಕೊಡುಗೆ ಏನು ಎನ್ನುವ ಪಟ್ಟಿಯನ್ನು ಕುಮಾರಸ್ವಾಮಿ ಅವರು ಬಿಡುಗಡೆ ಮಾಡಲಿ. ಕ್ಷೇತ್ರದ ಅಭಿವೃದ್ದಿಗೆ ಅವರ ಸಾಕ್ಷಿ ಗುಡ್ಡೆಯನ್ನು ಜನರ



ಮುಂದಿಡಲಿ. ಶುಭ ಘಳಿಗೆಯಲ್ಲಿ ಯೋಗೇಶ್ವರ್ ಪಕ್ಷ ಸೇರಿದ್ದಾರೆ. ಇವರ ಕೈ ಬಲಪಡಿಸುವುದರ ಮೂಲಕ ದೇಶಕ್ಕೆ ಬಲವಾದ ಸಂದೇಶ ನೀಡಬೇಕು. ಅತಿ ಹೆಚ್ಚು ಮತಗಳ ಅಂತರದಿಂದ ಇವರನ್ನು ಗೆಲ್ಲಿಸಬೇಕು ಎಂದು ಮನವಿ ಮಾಡುತ್ತೇನೆ. ಮುಂದಿನ ದಿನಗಳಲ್ಲಿ ಸಾಕಷ್ಟು ಸಿನಿಮಾಗಳನ್ನು ನಾವು ನೋಡಬೇಕಿದೆ. ಚುನಾವಣೆ ಗೆಲ್ಲುವುದೊಂದೇ ನಮ್ಮ ಗುರಿ. ಲೋಕಸಭಾ ಚುನಾವಣೆಯಲ್ಲಿ ಡಿ.ಕೆ.ಸುರೇಶ್ ಅವರಿಗೆ ಚನ್ನಪಟ್ಟಣದ ಜನತೆ 80 ಸಾವಿರಕ್ಕೂ ಹೆಚ್ಚು ಮತಗಳನ್ನು ನೀಡಿದ್ದರು. ಆದರೆ ಮಿಕ್ಕ ಕಡೆ ಕಡಿಮೆ ಮತಗಳು ಬಂದ ಕಾರಣಕ್ಕೆ ಗೆಲುವು ಸಾಧ್ಯವಾಗಲಿಲ್ಲ.

1 ಸಿಪಿ ಯೋಗೇಶ್ವರ್ ಚನ್ನಪಟ್ಟಣ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಕೆ


2 ಸಿಪಿವೈ ಗೆ ರೋಡ್ ಶೋ ವೇಳೆ ಅಪಾರ ಜನಸಾಗರದೊಂದಿಗೆ ಸಿಎಂ ಡಿಸಿಎಂ, ಸಚಿವ ರಾಮಲಿಂಗಾ ರೆಡ್ಡಿ ಸಾಥ್

3 ಕುಮಾರಸ್ವಾಮಿಯೇ ನಿಲ್ಲಲಿ, ನಿಖಿಲ್ ಕುಮಾರಸ್ವಾಮಿಯೇ ನಿಲ್ಲಲಿ, ಅನಿತಾ ಕುಮಾರಸ್ವಾಮಿ ಯವರೇ ನಿಲ್ಲಲಿ ಇಲ್ಲಿ ಕಾಂಗ್ರೆಸ್ ಪಕ್ಷದ ಯೋಗೀಶ್ವರ್ ಅವರೇ ಭರ್ಜರಿ ಜಯಗಳಿಸೋದು

# ಚನ್ನಪಟ್ಟಣ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ

| ಪ್ರಧಾನಿ ಮೋದಿ ಅವರ ಆಶೀರ್ವಾದವಿದೆ | ಮೋದಿ ಅವರ ಬೆಂಬಲದಿಂದ ಕುಮಾರಸ್ವಾಮಿ | ಅಶೋಕ್ ಎಲ್ಲಾರೂ ಒಟ್ಟಾಗಿ ಸೇರಿದ್ದೇವೆ

• ಉದಯವಾಹಿನಿ, ಬೆಂಗಳೂರು



ತೀವ್ರ ಕುತೂಹಲ ಕೆರಳಿಸಿದ್ದಂತ ಚನ್ನಪಟ್ಟಣ ಉಪ ಚುನಾವಣೆ ಕ್ಷೇತ್ರದ ಅಭ್ಯರ್ಥಿಯ ಹೆಸರು ಕೊನೆಗೂ ಘೋಷಣೆಯಾಗಿದೆ. ಚನ್ನಪಟ್ಟಣ ವಿಧಾನಸಭಾ ಉಪ ಚುನಾವಣೆಗೆ ಜೆಡಿಎಸ್ ಹಾಗೂ ಬಿಜೆಪಿಯ ಎನ್‌ಡಿ ಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಅವರು ಸ್ಪರ್ಧಿಸಲಿದ್ದಾರೆ ಎಂಬುದಾಗಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರು ಹೆಸರನ್ನು ಘೋಷಿಸಿದ್ದಾರೆ.

ಬೆಂಗಳೂರಿನ ಡಾಲರ್ಸ್ ಕಾಲೋನಿಯಲ್ಲಿರುವಂತ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ನಿವಾಸದಲ್ಲಿ ಜೆಡಿಎಸ್ ಹಾಗೂ ಬಿಜೆಪಿಯ ನಾಯಕರು ಸೇರಿ ಈ ಸಂಬಂಧ ಅಂತಿಮ ಚರ್ಚೆಯನ್ನು ನಡೆಸಿದರು.

**ನೂರಕ್ಕೆ ನೂರು ಚುನಾವಣೆಯಲ್ಲಿ ನಿಂತು ಗೆಲ್ಲುವ ವಿಶ್ವಾಸ**

ಈ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದಂತ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರು, ಎನ್ ಡಿಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ಅವರನ್ನು ಇವತ್ತು ನಮ್ಮ ಅಭ್ಯರ್ಥಿ ಅಂತ ಘೋಷಣೆ ಮಾಡಿದ್ದೇವೆ. ಪ್ರಧಾನಿ ಮೋದಿ ಅವರ ಆಶೀರ್ವಾದವಿದೆ. ಮೋದಿ ಅವರ ಬೆಂಬಲದಿಂದ ಕುಮಾರಸ್ವಾಮಿ, ಅಶೋಕ್ ಎಲ್ಲಾರೂ ಒಟ್ಟಾಗಿ ಸೇರಿದ್ದೇವೆ. ನೂರಕ್ಕೆ ನೂರು ಚುನಾವಣೆಯಲ್ಲಿ ನಿಂತು ಗೆಲುವು ಸಾಧಿಸಲಿದ್ದಾರೆ ಎಂದರು.



**ಗೆಲ್ಲಿಸುವ ಜವಾಬ್ದಾರಿ ನಿಮ್ಮದು**



ಬೆಂಗಳೂರಿನ ಶೇಷಾದ್ರಿಪುರಂನಲ್ಲಿರುವಂತ ಜೆಡಿಎಸ್ ಕಚೇರಿಯಲ್ಲಿ ನಡೆದಂತ ಚನ್ನಪಟ್ಟಣ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದಂತ ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ ನಿಮ್ಮ ಮಗ. ನಿಮ್ಮ ಮಡಿಲಿಗೆ ಹಾಕಿದ್ದೇನೆ. ಗೆಲ್ಲಿಸುವ ಜವಾಬ್ದಾರಿ ನಿಮ್ಮ ಮೇಲಿದೆ ಎಂಬುದಾಗಿ ಭಾವನಾತ್ಮಕವಾಗಿ ಹೇಳಿದ್ದಾರೆ ಎಂಬುದಾಗಿ ತಿಳಿದು ಬಂದಿದೆ. ಅಂದಹಾಗೇ ಇಂದಿನ ಚನ್ನಪಟ್ಟಣ ಜೆಡಿಎಸ್ ಕಾರ್ಯಕರ್ತರ ಸಭೆಯಲ್ಲಿ ಚನ್ನಪಟ್ಟಣ ಉಪ ಚುನಾವಣೆಗೆ ನಿಖಿಲ್ ಕುಮಾರಸ್ವಾಮಿ ಹೆಸರು ಫೈನಲ್ ಮಾಡಲಾಗಿದೆ.

**ಪ್ರಚಾರ ಮಾಡಲು ದೇವೇಗೌಡರು ಸಿದ್ಧ!**



ಚನ್ನಪಟ್ಟಣ ಉಪ ಚುನಾವಣಾ ರಂಗೇರಿದ ಬೆನ್ನಲ್ಲೇ ಕಾಂಗ್ರೇಸ್ ಅಭ್ಯರ್ಥಿಯಾಗಿ ಸಿ.ಪಿ. ಯೋಗೇಶ್ವರ್ ಕಣಕ್ಕಿಳಿದರೆ, ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಚನ್ನಪಟ್ಟಣಕ್ಕೆ ಅಧಿಕೃತವಾಗಿ ನಿಖಿಲ್ ಕುಮಾರಸ್ವಾಮಿ ಅವರನ್ನು ಎನ್ ಡಿಎ ಘೋಷಿಸಿದೆ. ಇನ್ನು ಮೊಮ್ಮಗನ ಪರ ಪ್ರಚಾರ ಮಾಡಲು ಚನ್ನಪಟ್ಟಣದಲ್ಲಿ ವಾಸ್ತವ್ಯ ಹೂಡಲು ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠರಾದ ಎಚ್.ಡಿ. ದೇವೇಗೌಡರು ತಿಳಿಸಿದ್ದಾರೆ. ಚನ್ನಪಟ್ಟಣದಲ್ಲಿ ವಾಸ್ತವ್ಯ ಹೂಡಿ. ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರ ಪ್ರಚಾರ ಮಾಡುವುದಾಗಿ ದೇವೇಗೌಡರು ಘೋಷಿಸಿದ್ದಾರೆ. ಕಾರ್ಯಕರ್ತರ ಒತ್ತಾಯದ ಮೇರೆಗೆ ನಿಖಿಲ್ ಕುಮಾರಸ್ವಾಮಿ ಇಂದು ನಾಮಪತ್ರ ಸಲ್ಲಿಸಲಿದ್ದಾರೆ.

# ಬ್ರ್ಯಾಂಡ್ ಬೆಂಗಳೂರು ಬೇಡ, ಸುರಕ್ಷಿತವಾದ 'ರೆಗ್ಯುಲರ್ ಬೆಂಗಳೂರು' ನೀಡಿದರೆ ಸಾಕು

▸▸ ಬಾಬುಸಾಪಾಳ್ಯದಲ್ಲಿ ಕಟ್ಟಡ ಕುಸಿದ ಸ್ಥಳಕ್ಕೆ ಭೇಟಿ ▸▸ ಸಂತ್ರಸ್ತರು ಹಾಗೂ ಅಧಿಕಾರಿಗಳೊಂದಿಗೆ ಮಾತುಕತೆ ▸▸ ನಗರದಲ್ಲಿ ದಿನಕ್ಕೊಂದು ಅವಘಡ

• ಉದಯವಾಹಿನಿ, ಬೆಂಗಳೂರು


ಕಾಂಗ್ರೆಸ್ ಸರ್ಕಾರ ಬೆಂಗಳೂರನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ಸರ್ಕಾರ ನಮಗೆ ಬ್ರ್ಯಾಂಡ್ ಬೆಂಗಳೂರು ನೀಡುವುದು ಬೇಡ, ಸುರಕ್ಷಿತವಾದ ರೆಗ್ಯುಲರ್ ಬೆಂಗಳೂರು ನೀಡಿದರೆ ಸಾಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಬಾಬುಸಾಪಾಳ್ಯದಲ್ಲಿ ಕಟ್ಟಡ ಕುಸಿದ ಸ್ಥಳಕ್ಕೆ ಭೇಟಿ ನೀಡಿದ ಅವರು, ಸಂತ್ರಸ್ತರು ಹಾಗೂ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಬಂದ ನಂತರ ಬ್ರ್ಯಾಂಡ್ ಬೆಂಗಳೂರು ಎಂಬ ಹೆಸರು ಹುಟ್ಟುಹಾಕಿದ್ದಾರೆ. ಆದರೆ ನಗರದಲ್ಲಿ ದಿನಕ್ಕೊಂದು ಅವಘಡ ಸಂಭವಿಸುತ್ತಿದೆ. ಬಾಬುಸಾಪಾಳ್ಯದಲ್ಲಿ ಕಟ್ಟಡ ಕುಸಿತವಾಗಿದ್ದು, ಎಂಟು ಅಮಾಯಕರು ಮೃತರಾಗಿದ್ದಾರೆ. ಇಲ್ಲಿನ 20 ಅಡಿ ರಸ್ತೆಗೆ ಹೆಚ್ಚೆಂದರೆ 3 ಮಹಡಿ ನಿರ್ಮಿಸಬಹುದು. ಆದರೆ 7 ಮಹಡಿ ನಿರ್ಮಿಸಲು ಹೊರಟಿದ್ದರಿಂದ ಅವಘಡ ನಡೆದಿದೆ. ಬಿಬಿಎಂಪಿ ಅಧಿಕಾರಿಗಳು ಇದನ್ನು ಸರಿಯಾಗಿ ನಿರ್ವಹಣೆ ಮಾಡಿದ್ದರೆ ಎಲ್ಲಾವೂ ಸರಿ ಇರುತ್ತಿತ್ತು ಎಂದರು.

ಕಾಂಗ್ರೆಸ್ ಸರ್ಕಾರ ಇಂತಹ ಯಾವುದೇ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಕೆಲ ತಿಂಗಳ ಹಿಂದೆ ವಿದ್ಯುತ್ ತಂತಿ ತಗುಲಿ ತಾಯಿ ಮತ್ತು ಮಗು ಮೃತಪಟ್ಟಾಗ ಅದಕ್ಕೆ ಇಲಿ ಕಾರಣ ಎಂದು ಹೇಳಿದ್ದರು. ಮಳೆ ನೀರಿನಲ್ಲಿ ಮಗು ಕೊಚ್ಚಿಕೊಂಡು ಹೋಗಿರುವುದು, ಮರ ಬೀಳುವುದರಿಂದ ಅನಾಹುತ ಮೊದಲಾದವು ಬ್ರ್ಯಾಂಡ್ ಬೆಂಗಳೂರಿನ ಮಹಿಮೆಯಿಂದ ಆಗುತ್ತಿದೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬರುವ ರಸ್ತೆಯ ಎರಡೂ ಬದಿ ಕಸ ರಾಶಿಯಾಗಿ ಬಿದ್ದಿದೆ. ಅಂದರೆ ಉಪಮುಖ್ಯಮಂತ್ರಿಯಾಗಲೀ, ಮುಖ್ಯಮಂತ್ರಿಯಾಗಲಿ, ಇಲ್ಲಿ ಯಾರಿಗೂ ಬೆಲೆ ಇಲ್ಲ.

ಒಂದು ವಾರದಿಂದ ಸರಿಯಾಗಿ ಕಸ ವಿಲೇವಾರಿ ಮಾಡಿಲ್ಲ. ವಿದ್ಯುತ್ ಕಂಬಗಳಿಂದ ಇನ್ನೆಷ್ಟು ಜನ ಸಾಯುತ್ತಾರೆಂದು ಗೊತ್ತಿಲ್ಲ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಳ್ಳಲಿ ಎಂದರು.



> ಪೌರಕಾರ್ಮಿಕರ ಮನೆಗಳಿಗೂ ನೀರು ನುಗ್ಗಿದೆ. ಜನರು ಮನೆಗಳಲ್ಲಿ ಇರಲು ಸಾಧ್ಯವಾಗುತ್ತಿಲ್ಲ. ರಾಜಧಾನಿ ಬೆಂಗಳೂರನ್ನು ರಾಜ್ಯ ಸರ್ಕಾರ ಸಂಪೂರ್ಣ ಕಡೆಗಣಿಸಿದೆ. ಸರ್ಕಾರ ಗಾಢ ನಿದ್ದೆಯಲ್ಲಿದ್ದು, ಮೃತಪಟ್ಟವರ ಕುಟುಂಬದ ಶಾಪ ತಟ್ಟಲಿದೆ
> -ಆರ್. ಅಶೋಕ್, ವಿಪಕ್ಷ ನಾಯಕ

**ಯಾವುದೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿಲ್ಲ**

ಕಟ್ಟಡ ನಿರ್ಮಾಣದ ವಿಚಾರದಲ್ಲಿ ಸರ್ಕಾರ ಮಾರ್ಗಸೂಚಿ ರೂಪಿಸಬೇಕು. ಕಟ್ಟಡಗಳ ಬಗ್ಗೆ ಸದಾ ನಿಗಾ ಇರಿಸುವ ಕೆಲಸ ಮಾಡಬೇಕು. ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗ, ಪ್ರತಿ ಮಳೆಗಾಲಕ್ಕೆ ಮುನ್ನ ಸಭೆ ನಡೆಸಿ, ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸೂಚಿಸಲಾಗಿತ್ತು. ಜೊತೆಗೆ ಹಣ ಕೂಡ ಬಿಡುಗಡೆ ಮಾಡಲಾಗಿತ್ತು. ಆದರೆ ಈಗ ಸರ್ಕಾರ ಸಭೆ ನಡೆಸಿಲ್ಲ, ಪರಿಹಾರ ಕಾರ್ಯಾಚರಣೆಗೆ, ರಾಜಕಾಲುವೆ ಹೂಳು ತೆಗೆಯಲು ಹಣ ಬಿಡುಗಡೆ ಮಾಡಿಲ್ಲ. ಯಾವುದೇ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿಲ್ಲ. ಜನರು ಅಧಿಕಾರ ಕೊಟ್ಟಾಗ ಕೆಲಸ ಮಾಡಬೇಕೆ ಹೊರತು, ಹಿಂದಿನವರು ಏನು ಮಾಡಿದ್ದಾರೆ ಎಂದು ಮಾತಾಡಬಾರದು. ಕಾಂಗ್ರೆಸ್‌ನವರು ಮೊದಲು ಕೆಲಸ ಮಾಡಲಿ. ಆಪಾದನೆ ಮಾಡಿಕೊಂಡು ಇದ್ದರೆ, ಅದರ ಪರಿಣಾಮ ಎದುರಿಸಬೇಕಾಗುತ್ತದೆ ಎಂದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,947/Gram24ct ₹7,285/Gram22ct | ಬೆಳ್ಳಿ: ₹102.00/Gram



**ಸಿದ್ಧಸೂಕ್ತಿ**

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ

## ಊರ್ಧ್ವಂ ನಾಭೇರ್ಮೇಧ್ಯತರಃ

ಮನುಸ್ಮೃತಿಯ ಪ್ರಥಮಾಧ್ಯಾಯದ ತೊಂಭತ್ತೆರಡರಿಂದ ತೊಂಭತ್ತಾರನೇ ಶ್ಲೋಕಗಳ ವಿವರಣೆ. ಪುರುಷ ಶ್ರೇಷ್ಠ. ಆದರಲ್ಲೂ ಪುರುಷನ ಹೊಕ್ಕಳಿನ ಮೇಲ್ಭಾಗ ಶ್ರೇಷ್ಠತರ. ಮುಖ ಶ್ರೇಷ್ಠತಮ. ಈ ಶ್ರೇಷ್ಠತಮ ಮುಖದಿಂದ ಹುಟ್ಟಿದ್ದರಿಂದಲೂ ಕ್ಷತ್ರಿಯಾದಿಗಳಿಗಿಂತ ಮೊಟ್ಟಮೊದಲು ಹುಟ್ಟಿದ್ದರಿಂದಲೂ ಅಧ್ಯಾಪನ ಪೌರೋಹಿತ್ಯದ ಮೂಲಕ ವೇದಗಳ ಸಂರಕ್ಷಣೆಯ ಹೊಣೆ ಹೊತ್ತಿರುವುದರಿಂದಲೂ ಧರ್ಮಪ್ರಶಾಸನೆ ಮಾಡುವುದರಿಂದಲೂ ಬ್ರಾಹ್ಮಣನು ಈ ಜಗತ್ತಿಗೆ ಒಡೆಯ. ಬ್ರಹ್ಮನು ತಪಸ್ಸು ಮಾಡಿ ತನ್ನ ಸ್ವಂತ ಮುಖದಿಂದ ಮೊದಲು ಬ್ರಾಹ್ಮಣನನ್ನು ಸೃಷ್ಟಿಸಿದನು. ಈ ಬ್ರಾಹ್ಮಣನ ಮುಖದಿಂದ ದೇವತೆಗಳು ಹವಿಸ್ಸನ್ನು, ಪಿತೃಗಳು ಪಿಂಡವನ್ನು ಉಣ್ಣುತ್ತಾರೆ. ಆದ್ದರಿಂದ ಈ ಬ್ರಾಹ್ಮಣನಿಗಿಂತ ಯಾರೂ ಹೆಚ್ಚಲ್ಲ. ಜೀವರಾಶಿಗಳಲ್ಲಿ ಪ್ರಾಣಿಗಳು ಶ್ರೇಷ್ಠ. ಪ್ರಾಣಿಗಳಲ್ಲಿ ಬುದ್ಧಿಜೀವಿಗಳು ಶ್ರೇಷ್ಠ. ಬುದ್ಧಿಜೀವಿಗಳಲ್ಲಿ ಮಾನವರು ಶ್ರೇಷ್ಠ. ಮಾನವರಲ್ಲಿ ಬ್ರಾಹ್ಮಣರು ಶ್ರೇಷ್ಠ. ಬ್ರಹ್ಮ ಪರಮಾತ್ಮನನ್ನು ತಿಳಿದವರು ವೇದೋಪನಿಷತ್ತುಗಳನ್ನು ಅರಿತವರು ಪಾಠಮಾಡುವವರು ಯಜ್ಞ ಜಪ ತಪ ಪೂಜೆ ಪುನಸ್ಕಾರ ಮಾಡುವವರು ಎಲ್ಲರಲ್ಲಿ ತನ್ನನ್ನು ತನ್ನಲ್ಲಿ ಎಲ್ಲರನ್ನೂ ಸಮಭಾವದಿಂದ ಕಾಣುವ ಧರ್ಮಾತ್ಮ ಸಂತ ಮಹಾತ್ಮ ಯಾವುದೇ ಜಾತಿಯವನಾದರೂ ಆತ ಬ್ರಾಹ್ಮಣ ಎನ್ನುವುದಾದರೆ ಖಂಡಿತ ಆತ ಸರ್ವ ಪೂಜ್ಯ ಎಂಬುದರಲ್ಲಿ ವಾದವಿಲ್ಲ.

## ಬೆಂಗಳೂರಲ್ಲಿ ನಿಯಮಬಾಹಿರ ಕಟ್ಟಡಗಳ ವಿರುದ್ಧ ಕ್ರಮಕ್ಕೆ ಸಿಎಂ ಕಟ್ಟಪ್ಪಣೆ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನಿಯಮಬಾಹಿರವಾಗಿ ನಿರ್ಮಿಸಲಾಗಿರುವ ಕಟ್ಟಡಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಟ್ಟಪ್ಪಣೆ ಮಾಡಿದ್ದಾರೆ. ಬಾಬುಸಾಪಾಳ್ಯದಲ್ಲಿ ಕಟ್ಟಡ ಕುಸಿತವಾಗಿರುವ ಸ್ಥಳಕ್ಕೆ ಭೇಟಿ ನೀಡಿದ ವೇಳೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಮುಖ್ಯಮಂತ್ರಿಗಳು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಅನಧಿಕೃತ ಕಟ್ಟಡಗಳ ವಿರುದ್ಧ ಕಠಿಣ ಕ್ರಮ ಜರುಗಿಸುವಂತೆ ಸೂಚಿಸಿದರು. ಈ ನಿಟ್ಟಿನಲ್ಲಿ ವಿಭಾಗೀಯ ಅಧಿಕಾರಿಗೂ ನೋಟೀಸ್ ನೀಡಿ ಕ್ರಮ ಕೈಗೊಳ್ಳಬೇಕು. ಅನಧಿಕೃತ ನಿರ್ಮಾಣ ನಿಲ್ಲಿಸುವಂತೆ ನೋಟೀಸ್ ನೀಡಿದ್ದರೂ ನಿರ್ಮಾಣ ಮುಂದುವರೆಸಿದ ಮಾಲೀಕರು, ಗುತ್ತಿಗೆದಾರ, ಎಂಜಿನಿಯರ್ ಎಲ್ಲರ ವಿರುದ್ಧವೂ ಕಠಿಣ ಕಾನೂನು ಕ್ರಮ ಆಗಬೇಕು ಎಂದು ಎಂದು ಬಿಬಿಎಂಪಿ ಮುಖ್ಯ ಆಯುಕ್ತರಿಗೆ ಸಿಎಂ ಆಗ್ರಹಿಸಿದರು. ಸಚಿವ ಭೈರತಿ ಸುರೇಶ್, ಎಂ.ಸಿ.ಸುಧಾಕರ್, ಶಾಸಕ ಭೈರತಿ ಬಸವರಾಜ್ ಹಾಗೂ ಬಿಬಿಎಂಪಿ ಮುಖ್ಯ ಆಯುಕ್ತರು ಮತ್ತು ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.ಘಟನಾ ಸ್ಥಳ ಪರಿಶೀಲನೆ ಬಳಿಕ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು. ಅಗತ್ಯ ಇರುವ ಎಲ್ಲಾ ಆಧುನಿಕ ವ್ಯವಸ್ಥೆ ಬಳಿಕ ಕಾರ್ಮಿಕರಿಗೆ ಚಿಕಿತ್ಸೆ ನೀಡುವಂತೆ ಸೂಚನೆ ನೀಡಿದರು.

## ಟ್ರಾಫಿಕ್‌ಗೆ ತತ್ತರಿಸಿದ ಟೆಕ್ಕಿಗಳು, ಬ್ರಿಡ್ಜ್ ಮೇಲೇ ಕಾರು ಬಿಟ್ಟು ಪಾದಯಾತ್ರೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಟ್ರಾಫಿಕ್ ಜಾಮ್ ಮತ್ತೊಮ್ಮೆ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗುತ್ತಿದ್ದು, ಬೆಂಗಳೂರಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆ ಪ್ರವಾಹ ಮಾತ್ರವಲ್ಲದೇ ಟ್ರಾಫಿಕ್ ಜಾಮ್ ಗೂ ತನ್ನ ಕೊಡುಗೆ ನೀಡುತ್ತಿದೆ. ಕಳೆದ ಕೆಲ ದಿನಗಳಿಂದ ಬೆಂಗಳೂರಿನಲ್ಲಿ ಸುರಿಯುತ್ತಿರುವ ಭಾರಿ ಮಳೆ ಸಿಲಿಕಾನ್ ಸಿಟಿಯ ಜನರನ್ನು ಹೈರಾಣಾಗಿಸಿದ್ದು, ಒಂದೆಡೆ ರಸ್ತೆ ಮೇಲೆ ನಿಂತ ನೀರು, ಪ್ರವಾಹ ಜನರನ್ನು ಕಾಡುತ್ತಿದ್ದರೆ ಮತ್ತೊಂದೆಡೆ ಕಿಮೀ ಗಟ್ಟಲೆ ಸಂಚಾರ ದಟ್ಟಣೆ ಸವಾರರ ತಾಳ್ಮೆ ಪರೀಕ್ಷಿಸುತ್ತಿದೆ. ಅಂತೆಯೇ ಬುಧವಾರ ಸಂಜೆ ಸುರಿದ ಮಳೆಯಿಂದಾಗಿ ಎಲೆಕ್ಟ್ರಾನಿಕ್ ಸಿಟಿ ಮೇಲ್ಸೇತುವೆ ಮೇಲೆ ಭಾರಿ ಪ್ರಮಾಣದ ಸಂಚಾರ ದಟ್ಟಣೆಗೆ ಕಾರಣವಾಗಿದ್ದು, ಕಿಮೀ ಗಟ್ಟಲೆ ವಾಹನಗಳು ರಸ್ತೆ ಮೇಲೆ ನಿಂತಿದ್ದ ಫೋಟೋಗಳು ಮತ್ತು ವಿಡಿಯೋಗಳು ವೈರಲ್ ಆಗುತ್ತಿವೆ. ಇನ್ನು ಎಲೆಕ್ಟ್ರಾನಿಕ್ ಸಿಟಿ ಮೇಲ್ಸೇತುವೆ ಮೇಲೆ ಸಾಮಾನ್ಯವಾಗಿಯೇ ಸಂಚಾರ ದಟ್ಟಣೆ ಇರುತ್ತದೆ. ಅಂತಹುದರಲ್ಲಿ ಮಳೆ ಬಂದರೆ ಇಲ್ಲಿ ಪರಿಸ್ಥಿತಿ ಮತ್ತಷ್ಟು ಹದಗೆಡುತ್ತದೆ. ಬುಧವಾರ ಸಂಜೆ ಭಾರಿ ಮಳೆ ಸುರಿದ ಹಿನ್ನಲೆಯಲ್ಲಿ ರಸ್ತೆಗಳು ಜಲಾವೃತಗೊಂಡಿದ್ದವು. ಹೀಗಾಗಿ ಸಂಚಾರ ಪೊಲೀಸರು ಮುಂಜಾಗ್ರತಾ ಕ್ರಮವಾಗಿ ಎಲೆಕ್ಟ್ರಾನಿಕ್ ಸಿಟಿ ಮೇಲ್ಸೇತುವೆಯ ಒಂದು ಬದಿಯನ್ನು ಬಂದ್ ಮಾಡಿದ್ದಾರೆ. ಇದರಿಂದಾಗಿ ಎರಡು ಗಂಟೆಗೂ ಹೆಚ್ಚು ಕಾಲ ಟ್ರಾಫಿಕ್ ಜಾಮ್ ಉಂಟಾಗಿತ್ತು.

## ಮೇಲ್ಸೇತುವೆ ಮೇಲೆ ಸರಣಿ ಅಪಘಾತ 7 ಕಾರು ಜಖಂ, ಮಗುವಿಗೆ ಗಾಯ

• ಉದಯವಾಹಿನಿ, ಬೆಂಗಳೂರು,

ಸುರಿಯುತ್ತಿರುವ ಭಾರಿ ಮಳೆ ಕುರಿತ ಅವಘಡಗಳ ನಡುವೆಯೇ ಇತ್ತ ಯಲಹಂಕದಲ್ಲಿ ಗುರುವಾರ ಮುಂಜಾನೆ ಸರಣಿ ಅಪಘಾತ ಸಂಭವಿಸಿದೆ. ಯಲಹಂಕ ಮೇಲ್ಸೇತುವೆ ಮೇಲೆ ಇಂದು ಬೆಳಗ್ಗೆ 6 ರಿಂದ 6.30ರ ನಡುವೆ ಸರಣಿ ಅಪಘಾತ ಸಂಭವಿಸಿದ್ದು, ಘಟನೆಯಲ್ಲಿ 7 ಕಾರುಗಳು ಅಪಘಾತಕ್ಕೀಡಾಗಿವೆ. ಪರಿಣಾಮ 7 ಕಾರುಗಳೂ ಒಂದರ ಹಿಂದೆ ಒಂದು ಗುದ್ದುಕೊಂಡು ಜಖಂ ಆಗಿದ್ದು, ಈ ಪೈಕಿ ಒಂದು ಕಾರಿನಲ್ಲಿದ್ದ ಮಗುವಿನ ಕೈಗೆ ಗಂಭೀರ ಗಾಯವಾಗಿದೆ. ಸದ್ಯ ಹೆಚ್ಚಿನ ಅನಾಹುತ ಸಂಭವಿಸಿಲ್ಲ. ಯಲಹಂಕಕ್ಕೆ ತೆರಳುವ ಮುಖ್ಯರಸ್ತೆಯಲ್ಲೇ ಈ ಅಪಘಾತ ಸಂಭವಿಸಿದ ಪರಿಣಾಮ, ಈ ರಸ್ತೆಯಲ್ಲಿ ಟ್ರಾಫಿಕ್ ಜಾಮ್ ಆಗಿದ್ದು ಫ್ಲೈಓವರ್ ಬಳಿ ವಾಹನಗಳು ಸಾಲುಗಟ್ಟಿ ನಿಂತಿವೆ. ನಿಧಾನಗತಿಯಲ್ಲಿ ವಾಹನಗಳು ಸಂಚರಿಸುತ್ತಿವೆ. ಬೆಂಗಳೂರಿನಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಬೆಂಗಳೂರಿನಲ್ಲಿ ಇನ್ನೂ 4 ದಿನ ಭಾರೀ ಮಳೆಯಾಗಲಿದೆ.

## ಆನೆ ಸ್ನಾನ ಮಾಡಿಸುವಾಗ ಕೆರೆಯಲ್ಲಿ ಮುಳುಗಿ ಕಾವಾಡಿಗ ಸಾವು

• ಉದಯವಾಹಿನಿ, ಬೆಂಗಳೂರು,

ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಆನೆ ಸ್ನಾನ ಮಾಡುತ್ತಿದ್ದ ವೇಳೆ ಕಾವಾಡಿ ಕೆಳಗೆ ಬಿದ್ದು ಸಾವನ್ನಪ್ಪಿದ್ದಾರೆ. ಕಾವಾಡಿ ಗೋಪಾಲ್ ಎಂಬವರು ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಆನೆ ಪಾಲನಾ ಕೇಂದ್ರ ಪ್ರದೇಶದ ಸೀಗೆಕಟ್ಟೆ ಕೆರೆಯಲ್ಲಿ 10 ವರ್ಷದ ಸಂಪತ್ ಎಂಬ ಆನೆಯನ್ನು ಸ್ವಚ್ಛಗೊಳಿಸುವ ವೇಳೆ ಘಟನೆ ನಡೆದಿದೆ. ಆನೆಯ ಮೈತೊಳೆಯುವಾಗ ಆಕಸ್ಮಿಕವಾಗಿ ಆನೆಯು ಗಾಬರಿಗೊಂಡು ಕೆರೆಯ ಆಳಕ್ಕೆ ಇಳಿದ ಪರಿಣಾಮ ಕೆರೆಯ ಆಳದಲ್ಲಿ ಮುಳುಗಿ ಕಾವಾಡಿಗ ಸಾವನ್ನಪ್ಪಿದ್ದಾರೆ. ಸ್ಥಳದಲ್ಲಿಯೇ ಇದ್ದ ಇತರೆ ಸಿಬ್ಬಂದಿ ಅವರನ್ನು ರಕ್ಷಿಸಿಸಲು ಪ್ರಯತ್ನಿಸಿದರೂ, ಸಫಲವಾಗಿಲ್ಲ. ವಿಷಯ ತಿಳಿಯುತ್ತಿದ್ದಂತೆ ಉದ್ಯಾನದ ಸಿಬ್ಬಂದಿ ಬನ್ನೇರುಘಟ್ಟ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬನ್ನೇರುಘಟ್ಟ ಪೊಲೀಸರು, ಈಜು ತಜ್ಞರು, ಅಗ್ನಿ ಶಾಮಕ ದಳದ ಸಿಬ್ಬಂದಿ ಮೂರು ತಾಸು ಕಾರ್ಯಾಚರಣೆ ನಡೆಸಿ ಗೋಪಾಲ್ ಮೃತದೇಹ ಹೊರತೆಗೆದರು. ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ. ಬಿಬಿಪಿ ಕಾರ್ಯನಿರ್ವಾಹಕ ನಿರ್ದೇಶಕ ಸೂರ್ಯ ಸೇನ್ ಮಾತನಾಡಿ, ಇದೇ ಮೊದಲ ಬಾರಿಗೆ ಇಂತಹ ಘಟನೆ ನಡೆದಿದೆ. ಆನೆಗಳು ಆಡುವ ಮತ್ತು ಸ್ನಾನ ಮಾಡುವ ಸರೋವರವು ಆಳವಾಗಿದೆ ಮತ್ತು ಯಾವಾಗಲೂ ತುಂಬಿರುತ್ತದೆ. ಆದರೆ, ಇಂದು ಕೆರೆ ಕೆಸರುಮಯವಾಗಿತ್ತು.

# ಸಿ.ಟಿ ರವಿ ಸಹಕಾರ ಸಿಪಿ ಯೋಗೇಶ್ವರ್‌ಗೆ ಇದೆ: ಸ್ಫೋಟಕ ಹೇಳಿಕೆ

## ಮಾಜಿ ಸಂಸದ ಡಿ.ಕೆ. ಸುರೇಶ್ ಹೇಳಿಕೆ ನೀಡಿದ್ದು, ತೀವ್ರ ಕುತೂಹಲ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಹಿರಿಯ ನಾಯಕ ಸಿಟಿ ರವಿ ಅವರ ಸಹಕಾರ ಕಾಂಗ್ರೆಸ್ ಅಭ್ಯರ್ಥಿ ಸಿಪಿ ಯೋಗೇಶ್ವರ್‌ಗೆ ಇದೆ. ಮಿಕ್ಕ ವಿಶ್ಲೇಷಣೆ ನೀವು (ಮಾಧ್ಯಮದವರು) ಮಾಡಿಕೊಳ್ಳಿ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಅವರು ಹೇಳಿಕೆ ನೀಡಿದ್ದು, ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಸಿ.ಪಿ.ಯೋಗೇಶ್ವರ್ ಅವರನ್ನು ಪಕ್ಷಕ್ಕೆ ಸೇರಿಸಿಕೊಂಡು ಕಾಂಗ್ರೆಸ್ ದುರ್ಬಲವೆಂದು ತೋರಿಸಿಕೊಂಡಿದೆ ಎನ್ನುವ ಸಿ.ಟಿ.ರವಿ ಅವರ ಹೇಳಿಕೆ ಕುರಿತು ಸದಾಶಿವನಗರದ ತಮ್ಮ ನಿವಾಸದಲ್ಲಿ ಮಾಧ್ಯಮದವರ ಜೊತೆಗೆ ಮಾತನಾಡಿ, ಬಿಜೆಪಿಯವರ ಹಾಗೂ ಬಿಜೆಪಿಯ ಬಗ್ಗೆ ನಾನು ವಿಶ್ಲೇಷಣೆ ಮಾಡಲು ಹೋಗುವುದಿಲ್ಲ. ವಿಶ್ಲೇಷಣೆಯನ್ನು ತೀವ್ರವಾಗಿ ಮಾಡಬಹುದು ಆದರೆ ಮಾಡುವುದಿಲ್ಲ ಎಂದರು.

ಬಿಜೆಪಿಯ ಕೆಲ ನಾಯಕರಿಂದಾಗಿ ಯೋಗೇಶ್ವರ್ ಕಾಂಗ್ರೆಸ್ ಸೇರಿದ್ದಾರೆ ಎಂಬ ಕುಮಾರಸ್ವಾಮಿ, ನಿಖಿಲ್ ಅವರ ಹೇಳಿಕೆ ಕುರಿತು ಮಾತನಾಡಿ, ನಾನು ಸಿ.ಟಿ.ರವಿಯವರ ಹೇಳಿಕೆಗೆ ಮಾತ್ರ ಉತ್ತರ ನೀಡುತ್ತಿದ್ದು, ಮಿಕ್ಕ ಚರ್ಚೆ, ವಿಶ್ಲೇಷಣೆಯನ್ನು ನೀವು ಮಾಡಿ. ಮಾಧ್ಯಮದವರು ಹೆಚ್ಚು ವ್ಯಾಖ್ಯಾನ ಮಾಡುವುದರಿಂದ ಇದರ



ಉದಯವಾಹಿನಿ ಚಿತ್ರ

ಸಾಧಕ– ಬಾಧಕಗಳು ಹಾಗೂ ಕಳೆದ ಒಂದು ವಾರಗಳಿಂದ ನಡೆದ ವಿದ್ಯಮಾನಗಳನ್ನು ರಾಜ್ಯದ ಜನರಿಗೆ ನೀವು ತಿಳಿಸಬೇಕು ಎಂದರು. ನಿಖಿಲ್ ಅಥವಾ ಅನಸೂಯಾ ಮಂಜುನಾಥ್ ಅವರನ್ನು ಕಣಕ್ಕೆ ಇಳಿಸಬೇಕು ಎನ್ನುವ ಚರ್ಚೆಯ ಕುರಿತು ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗೆ ಉತ್ತರಿಸಿ, ಅದು ಆಯಾಯ ಪಕ್ಷದ ತೀರ್ಮಾನ ಎಂದ ಅವರು, ಚನ್ನಪಟ್ಟಣದಲ್ಲಿ ಜೆಡಿಎಸ್ ನಿಂದ ಪ್ರಬಲ ವ್ಯಕ್ತಿಯನ್ನೇ ಕಾಂಗ್ರೆಸ್ ಗೆ ಕರೆತರಲಾಗುತ್ತದೆ ಎನ್ನುವ ಸುದ್ದಿಯ ಬಗ್ಗೆ ಕಾದು ನೋಡೋಣ ಎಂದರು.

ಚನ್ನಪಟ್ಟಣದಲ್ಲಿ ಡಿ.ಕೆ.ಸುರೇಶ್ ಅವರಿಗೆ ಟಿಕೆಟ್ ನೀಡಲು ಶಿವಕುಮಾರ್ ಅವರು ಹಿಂದೇಟು ಹಾಕಿದರು ಎನ್ನುವ ಬಗ್ಗೆ ಕೇಳಿದಾಗ ನಾನು ಲೋಕಸಭಾ ಚುನಾವಣೆಯಲ್ಲಿ ಸೋತಿದ್ದೇನೆ. ತಕ್ಷಣ ಇನ್ನೊಂದು ಚುನಾವಣೆಗೆ ನಿಂತರೆ, ಜನರಿಗೆ ಒಳ್ಳೆಯ ಸಂದೇಶ ನೀಡಿದಂತೆ ಆಗುವುದಿಲ್ಲ. ಹೀಗಾಗಿ ನಾನು ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಸ್ಪಷ್ಟವಾಗಿ ಹೈಕಮಾಂಡ್ ಗೆ ಹಾಗೂ ಪಕ್ಷದ ವರಿಷ್ಠರಿಗೆ ತಿಳಿಸಿದ್ದೆ. ಅನೇಕ ಕಾರ್ಯಕರ್ತರು ನಾನೇ ನಿಲ್ಲಬೇಕು ಎಂದು ಹೇಳಿದರು. ನಾನು ಪಕ್ಷದ ತೀರ್ಮಾನಕ್ಕೆ ಬದ್ಧನಾಗಿದ್ದೇನೆ ಎಂದರು.

> **ಶಿಗ್ಗಾಂವಿಯಲ್ಲಿ ಮುಸ್ಲಿಂ ಅಭ್ಯರ್ಥಿ ಹೊರತಾಗಿ ಬೇರೆಯವರನ್ನು ಘೋಷಣೆ ಮಾಡಲಾಗುತ್ತದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಇದನ್ನು ಪಕ್ಷದ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಸ್ಕ್ರೀನಿಂಗ್ ಕಮಿಟಿಯವರು ಈಗಾಗಲೇ ನಾಲ್ಕರಿಂದ ಐದು ಜನ ಆಕಾಂಕ್ಷಿಗಳ ಹೆಸರನ್ನು ದೆಹಲಿಗೆ ಕಳಿಸಿರಬಹುದು. ಮಾಜಿ ಮುಖ್ಯಮಂತ್ರಿ ಕ್ಷೇತ್ರವಾಗಿರುವುದರಿಂದ, ಗೆಲ್ಲುವಂತಹ ಪ್ರಭಾವಿ ವ್ಯಕ್ತಿಗೆ ಟಿಕೆಟ್ ನೀಡಬಹುದು ಎಂದರು.**

> **ಅಲ್ಪಸಂಖ್ಯಾತರಿಗೆ ಟಿಕೆಟ್ ನೀಡಿ ಎನ್ನುವ ಸಚಿವ ಜಮೀರ್ ಅವರ ಬಹಿರಂಗ ಹೇಳಿಕೆ ಬಗ್ಗೆ ಕೇಳಿದಾಗ, ಪ್ರತಿ ಬಾರಿಯೂ ಶಿಗ್ಗಾಂವಿ ಕ್ಷೇತ್ರದಲ್ಲಿ ಮುಸ್ಲಿಮರಿಗೆ ಟಿಕೆಟ್ ನೀಡಲಾಗುತ್ತಿದೆ. ಕ್ಷೇತ್ರದ ಅಭ್ಯರ್ಥಿ ಆಯ್ಕೆ ಉಸ್ತುವಾರಿಯನ್ನು ಜಮೀರ್ ಅವರಿಗೆ ಹೈಕಮಾಂಡ್ ನೀಡಿರುವುದರಿಂದ ಅವರು ಸಹ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಕಾರಣಕ್ಕೆ ಈ ರೀತಿಯ ಬೇಡಿಕೆ ಇಡುವುದು ಸಹಜ ಎಂದರು.**
> –ಡಿಕೆ ಸುರೇಶ್

ಯೋಗೇಶ್ವರ್ ಅವರು ಪಕ್ಷದಲ್ಲಿ ಮೂರು ವರ್ಷ ದುಡಿದ ನಂತರ ಟಿಕೆಟ್ ನೀಡಿ ಎನ್ನುವ ಕಾರ್ಯಕರ್ತರ ಹೇಳಿಕೆಗಳ ಬಗ್ಗೆ ಕೇಳಿದಾಗ, ಪಕ್ಷದ ಶಿಸ್ತಿನ ಸಿಪಾಯಿಗಳಾಗಿ ನಾವುಗಳು, ಮುಖಂಡರು, ಕಾರ್ಯಕರ್ತರಾದಿಯಾಗಿ ಎಲ್ಲರೂ ಪಕ್ಷ ತೆಗೆದುಕೊಂಡಿರುವ ತೀರ್ಮಾನಕ್ಕೆ ಬದ್ಧವಾಗಿರಬೇಕಾಗುತ್ತದೆ. ಒಬ್ಬೊಬ್ಬರದು ಒಂದೊಂದು ಅಭಿಪ್ರಾಯವಿರುತ್ತದೆ. ನಾಮಪತ್ರ ಸಲ್ಲಿಕೆಯಾದ ನಂತರ ಎಲ್ಲರ ಬಳಿಯೂ ನಾನೇ ಖುದ್ದಾಗಿ ಮಾತನಾಡುತ್ತೇನೆ ಎಂದರು.

## ಐಟಿ ಉದ್ಯೋಗಿಗಳಿಗೆ ಗುಡ್ ನ್ಯೂಸ್: ಬರಲಿವೆ ಊಬರ್ ಬಸ್

• ಉದಯವಾಹಿನಿ, ಬೆಂಗಳೂರು,

ಸಂಚಾರ ದಟ್ಟಣೆಯಲ್ಲಿ ವಿಶ್ವಮಟ್ಟದಲ್ಲಿ ಖ್ಯಾತಿ ಪಡೆದ ಬೆಂಗಳೂರಿನಲ್ಲಿ ನಿತ್ಯ ಓಡಾಡುವುದೇ ಹರಸಾಹಸವಾಗಿದೆ. ನಿತ್ಯ ಐಟಿ–ಬಿಟಿ ಕಂಪನಿಗಳಿಗೆ ಸಂಚರಿಸುವ ನೌಕರರು ಈ ಟ್ರಾಫಿಕ್ ನಿಂದ ಹೈರಾಣಾಗಿದ್ದಾರೆ. ಇವರೆಗಲ್ಲ ಉಬರ್ ಇಂಡಿಯಾ ಸಂಸ್ಥೆ ಖುಷಿ ಸುದ್ದಿಯೊಂದನ್ನು ನೀಡಿದೆ. ಸಂಚಾರ ಕಿರಿ ಕಿರಿ ತಪ್ಪಿಸಲು ಐಟಿ ಕಾರಿ ಡಾರ್‌ಗಳಿಗೆ ಹೊಸ ಸಂಚಾರ ಸೇವೆ ನೀಡಲು ಸಂಸ್ಥೆ ಮುಂದಾಗಿದೆ.

ಹೌದು, ಬೆಂಗಳೂರಿನ ಐಟಿ ಕಂಪನಿಗಳಿಗೆ ತೆರಳುವವರಿಗೆ ಉಬರ್ ಸಂಸ್ಥೆಯು 'ಉಬರ್ ಬಸ್' ಸೇವೆಯನ್ನು ಬೆಂಗಳೂರಿಗೆ ಪರಿಚಯಿಸಲು ಮುಂದಾಗಿದೆ. ಈ ಮೂಲಕ ಕಡಿಮೆ ದರದಲ್ಲಿ



ಉದಯವಾಹಿನಿ ಚಿತ್ರ

ಉತ್ತಮ ಬಸ್ ಸೇವೆ ನೀಡುವುದರ ಜೊತೆಗೆ ಬೆಂಗಳೂರು ಟ್ರಾಫಿಕ್ ನಿಯಂತ್ರಿಸುವಲ್ಲಿ ಉಬರ್ ಮಹತ್ವದ ಕೊಡುಗೆ ನೀಡಲಿದೆ. ಹಾಗಾದರೆ ಎಲ್ಲಿಂದ ಎಲ್ಲಿಗೆ ಎಷ್ಟು ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಈ ಹೊಸ ಬಸ್ ಸೇವೆ ಲಭ್ಯವಾಗಲಿದೆ?. ಯಾವಾಗ ಆರಂಭ? ಮಾಹಿತಿ ಇಲ್ಲಿದೆ. ದೆಹಲಿ, ಕೊಲ್ಕತ್ತಾ, ಹೈದರಾಬದ್ ಸೇರಿದಂತೆ ಇನ್ನಿತರ ಮಹಾನಗರಗಳಲ್ಲಿ ಸೇವೆ ನೀಡುತ್ತಿರುವ ಈ ಉಬರ್ ಕಂಪನಿಯು

> **ಹೆಚ್ಚು ಟ್ರಾಫಿಕ್ ಕಂಡು ಬರುವ ಕೆ.ಆರ್.ಪುರಂ, ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಎಲೆಕ್ಟ್ರಾನಿಕ್ ಸಿಟಿ, ಮಾರತ್ತಹಳ್ಳಿ, ಬೊಮ್ಮನಹಳ್ಳಿ, ಮಹಾದೇವಪುರ ಐಟಿ ಕಾರಿಡಾರ್‌ಗಳ ನೌಕರರಿಗೆ ಸೇವೆ ನೀಡುವ ಪ್ಲಾನ್ ಇದೆ ಎಂದು ಉಬರ್ ಇಂಡಿಯಾ ಕಂಪನಿ ಮುಖ್ಯಸ್ಥ ಪ್ರಭಜೀತ್ ಸಿಂಗ್ ಅವರು ಮಾಹಿತಿ ನೀಡಿದ್ದಾರೆ.**

ಬೆಂಗಳೂರಿನಲ್ಲಿ ಆರಂಭದಲ್ಲಿ 18 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಐಟಿ ಕಾರಿಡಾರ್/ಕಂಪನಿಗಳಿಗೆ ಸಂಪರ್ಕ ಸೇವೆ ಒದಗಿಸಲಿದೆ.

## ರಾಜ್ಯದ 8, 9, 10ನೇ ತರಗತಿ ಮಧ್ಯವಾರ್ಷಿಕ ಪರೀಕ್ಷೆ ಫಲಿತಾಂಶ ಪ್ರಕಟಿಸದಂತೆ ಶಿಕ್ಷಣ ಇಲಾಖೆ ಆದೇಶ

• ಉದಯವಾಹಿನಿ, ಬೆಂಗಳೂರು,

ರಾಜ್ಯದ 8, 9 ಮತ್ತು 10ನೇ ತರಗತಿ ಮಧ್ಯ ವಾರ್ಷಿಕ ಪರೀಕ್ಷೆಯ ಫಲಿತಾಂಶವನ್ನು ಪ್ರಕಟ ಮಾಡದಂತೆ ಶಿಕ್ಷಣ ಇಲಾಖೆ ಆದೇಶಿಸಿದೆ. ಈ ಮೂಲಕ ಮಧ್ಯ ವಾರ್ಷಿಕ ಪರೀಕ್ಷೆ ಫಲಿತಾಂಶಕ್ಕೆ ತಡೆ ನೀಡಿದೆ. ಸಂಬಂಧ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ರಾಜ್ಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಶಾಲಾ ಮುಖ್ಯಸ್ಥರಿಗೆ ಪತ್ರ ಬರೆದು ಸೂಚಿಸಿದ್ದಾರೆ. ಘನ ಸರ್ವೋಚ್ಚ ನ್ಯಾಯಾಲಯವು ಮುಂದಿನ ಆದೇಶದವರೆಗೂ ರಾಜ್ಯದ ಎಲ್ಲಾ ಶಾಲೆಗಳಲ್ಲಿ 8, 9 ಮತ್ತು 10ನೇ ತರಗತಿಯ ಮಧ್ಯವಾರ್ಷಿಕ ಪರೀಕ್ಷೆಯ (SA-1) ಫಲಿತಾಂಶವನ್ನು ಪ್ರಕಟಿಸದಿರಲು ಹಾಗೂ ಯಾವುದೇ ಶಾಲೆಯು ಈವರೆವಿಗೂ ಮಧ್ಯವಾರ್ಷಿಕ ಪರೀಕ್ಷೆ (SA-1) ಅನ್ನು ನಡೆಸಿಲ್ಲದಿದ್ದಲ್ಲಿ ಅಂತಹ ಶಾಲೆಯು ಪರೀಕ್ಷೆಯನ್ನು ನಡೆಸದಿರಲು ಆದೇಶಿಸಿರುತ್ತದೆ. ಅದರಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ನಡೆಸಲಾಗಿರುವ 8, 9 ಮತ್ತು 10ನೇ ತರಗತಿಯ ಮಧ್ಯವಾರ್ಷಿಕ ಪರೀಕ್ಷೆಗಳ (SA-1) ಫಲಿತಾಂಶವನ್ನು ಮುಂದಿನ ಆದೇಶದವರೆಗೂ ಪ್ರಕಟಿಸದಂತೆ ಸಂಬಂಧಿಸಿದ ಶಾಲಾ ಮುಖ್ಯಸ್ಥರಿಗೆ ಸೂಚನೆ ನೀಡಿ ಅಗತ್ಯ ಕ್ರಮವಹಿಸಲು ತಿಳಿಸಿದೆ ಎಂದಿದ್ದಾರೆ.

# ಸುಸ್ವರಲಯ ಪ್ರೌಢ ಸಂಗೀತ ಕಲಾಶಾಲೆ 25ನೇ ವಾರ್ಷಿಕೋತ್ಸವ

## ಬಸವನಗುಡಿ ವಾಡಿಯಾ ಸಭಾಂಗಣದಲ್ಲಿ ಖ್ಯಾತ ಕಲಾವಿದರ ಕಛೇರಿ ಆಯೋಜನೆ, ಪ್ರವೇಶ ಉಚಿತ

• ಉದಯವಾಹಿನಿ, ಬೆಂಗಳೂರು,

ರಾಜಧಾನಿಯ ಸುಸ್ವರಲಯ ಪ್ರೌಢ ಸಂಗೀತ ಕಲಾಶಾಲೆಗೆ 25ನೇ ವಸಂತ. ಕರ್ನಾಟಕ ಸಂಗೀತದಲ್ಲಿ ಗಾಯನ ಮತ್ತು ಮೃದಂಗ ವಾದನಕ್ಕೆ ಮಾತ್ರ ಸೀಮಿತಗೊಳಿಸಿಕೊಳ್ಳದೇ ಇನ್ನೂ ಹಲವಾರು ಪ್ರಕಾರಗಳಲ್ಲಿ ತನ್ನ ಸಂಗೀತ ಕೈಂಕರ್ಯವನ್ನು ಸಲ್ಲಿಸುತ್ತಿರುವ ಕಲಾಶಾಲೆಯ 25 ನೇ ಅರ್ಥಪೂರ್ಣ ವಾರ್ಷಿಕೋತ್ಸವದ ಅಂಗವಾಗಿ ಬಸವನಗುಡಿ ವಾಡಿಯಾ ಸಭಾಂಗಣದಲ್ಲಿ (ಇಂಡಿಯನ್ ಇನ್‌ಸ್ಟಿಟ್ಯೂಟ್ ಆವರ್ಲ್ಡ್ ಕಲ್ಚರ್)ಪ್ರಖ್ಯಾತ ಕಲಾವಿದರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ ಗಾಯನ, ವಾದನ ಕಛೇರಿ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆ ಪ್ರಾಚಾರ್ಯ ವಿದ್ವಾನ್ ಎಚ್.ಎಸ್. ಸುಧೀಂದ್ರ ತಿಳಿಸಿದ್ದಾರೆ.

ಅಕ್ಟೋಬರ್ 25ರ ಸಂಜೆ 4ಕ್ಕೆ ವಿದುಷಿ ರೂಪಾ ಶ್ರೀಕಾಂತ ಅವರಿಂದ ಶಾಸ್ತ್ರೀಯ ಗಾಯನವಿದೆ. ಕುಮಾರಿ ಮಹತಿ ಸಹಗಾಯನವಿದ್ದು, ಪಕ್ಕವಾದ್ಯದಲ್ಲಿ ವಿದ್ವಾಂಸರಾದ ಅದಮ್ಯ ರಮಾನಂದ್ ಮೃದಂಗ, ದೀಪಾ ಶಾಸ್ತ್ರಿ ಪಿಟೀಲು ಮತ್ತು ಶ್ರೀಶೈಲ ಘಟ ಸಹಕಾರ ನೀಡಲಿದ್ದಾರೆ. ನಂತರ ಪಿ ಸಿ ವಿವೇಕ್, ನಂದನ್ ಜ್ಯೋಶಿಯರ್, ಮಣಿಕಂಠನ್, ಸುಪ್ರಿಯಾ ಪೂಮಗಮೆ ಮತ್ತು ಅಪರ್ಣಾ ಅವರಿಂದ ತಾಳವಾದ್ಯವಿದೆ. ಸಂಜೆ 6.45ರಿಂದ ವಿದ್ವಾನ್ ಪಟ್ಟಾಭಿರಾಮ ಪಂಡಿತ್ ಗಾಯನವಿದೆ. ವಿದ್ವಾನ್. ಎಚ್.ಎಸ್. ಸುಧೀಂದ್ರ ಮೃದಂಗ, ಡಾ. ಕೆ. ವಿ. ಕೃಷ್ಣ ಪಿಟೀಲು ಮತ್ತು ಡಾ. ಟ್ರಿಚ್ಚಿ ಮುರಳಿ ಘಟ ಸಹಕಾರವಿದೆ.

26ರ ಬೆಳಗ್ಗೆ 10. 15ಕ್ಕೆ ವಿದ್ಯಾರ್ಥಿಗಳಿಂದ ತಾಳವಾದ್ಯವಿದೆ. ದತ್ತ ಪ್ರಸಾದ್, ಆದಿಶೇಷ, ಅಕ್ಷಜ, ಹಿರಣ್ಮಯ ವಿ ಶರ್ಮ,ಅಭಿಷೇಕ ಬಾಲಕೃಷ್ಣ, ಲಕ್ಷ್ಮೀಶ ಭಟ್ ಶ್ರೀಪಾದ ನಾಗೇಶ್, ಸಂಜಯ್ ಸುದರ್ಶನ, ಕಿರಣ್ ಜ್ಯೋಶಿಯರ್ ಮತ್ತು ಶ್ರೀಕರ ಜನಾರ್ಧನ ಅವರು ಕಲಾ ಪ್ರದರ್ಶನ ಮಾಡಲಿದ್ದಾರೆ. ನಂತರ 'ಕರ್ನಾಟಕ ಶಾಸ್ತ್ರೀಯ ಸಂಗೀತಕ್ಕೆ ಹರಿದಾಸರ ಕೊಡುಗೆ' ಬಗ್ಗೆ ವಿದುಷಿ. ಗೀತಾ ರಮಾನಂದ ರವರಿಂದ ಪ್ರಾತ್ಯಕ್ಷಿಕೆ ಇದೆ. ಸಂಜೆ 4. 30ಕ್ಕೆ ವಿದ್ವಾನ್ ಸುಪ್ರದೀಪ್ ಅವರ ಕೊಳಲು ವಾದಕ ಕಛೇರಿ ಇದ್ದು, ಪಕ್ಕವಾದ್ಯದಲ್ಲಿ ವಿದ್ವಾನ್. ಶ್ರೀನಿವಾಸ್ ಮೃದಂಗ, ಕೇಶವ ಮೋಹನ್‌ಕುಮಾರ್ ಪಿಟೀಲು ಮತ್ತು ಹರಿಹರಪುರ ಅಭಿಜಿತ್ ಘಟ ಸಾಥ್ ನೀಡಲಿದ್ದಾರೆ. ಸಂಜೆ 6ಕ್ಕೆ ವಿದುಷಿ ಚಂದನಬಾಲಾ ಕಲ್ಯಾಣ್ ಅವರ ಶಾಸ್ತ್ರೀಯ ಸಂಗೀತ ಕಛೇರಿ ನೆರವೇರಲಿದೆ.



ಉದಯವಾಹಿನಿ ಚಿತ್ರ

27ರ ಬೆಳಗ್ಗೆ 9.30ಕ್ಕೆ ಸುಸ್ವರಲಯ ಶಾಲೆ ವಿದ್ಯಾರ್ಥಿಗಳಿಂದ ತಾಳವಾದ್ಯವಿದೆ. ವಿಷ್ಣು ರಘುನಾಥನ್, ವಿಶ್ವನಾಥ, ಚಂದ್ರಮೌಳಿ, ಅವನೀಶ, ದಿಗಂತ ಭಟ್, ಸಿ. ಸುಧೀಂದ್ರ ಮತ್ತು ಅನಿರುದ್ಧ ಕೃಷ್ಣ ಕಲಾಪ್ರೌಢಿಮೆ ಪ್ರದರ್ಶಿಸಲಿದ್ದಾರೆ. ಬೆಳಗ್ಗೆ 10ಕ್ಕೆ ಸಂಪ್ರದಾಯ ಭಜನೆ: ವಿದ್ವಾಂಸರಾದ ವಿನಯ್‌ಚಂದ್ರ ಮೆನನ್, ಗಣೇಶ ವೆಂಕಟೇಶ್ವರನ್, ನಟೇಶನ್ ತಂಡ. 11:15ಕ್ಕೆ ಡಾ. ಶ್ರೀಕಾಂತಂ ನಾಗೇಂದ್ರ ಶಾಸ್ತ್ರಿ ಅವರಿಂದ ಪ್ರಾತ್ಯಕ್ಷಿಕೆ. ವಿಷಯ: ನವತಿ ಮೇಳ ರಾಗ ,ತಾಳ ಮಾಲಿಕೆ– ಲಕ್ಷ್ಯ ಮತ್ತು ಲಕ್ಷ್ಯಣ. ಸಂಜೆ 4. 30ಕ್ಕೆ ವಿದುಷಿ ಅದಿತಿ ಪ್ರಹ್ಲಾದ್ ಅವರ ಶಾಸ್ತ್ರೀಯ ಸಂಗೀತ ಕಛೇರಿ ಸಂಪನ್ನಗೊಳ್ಳಲಿದೆ. ನಂತರ ಬೆಂಗಳೂರು ಸಹೋದರರಿಂದ ( ವಿದ್ವಾನ್ ಹರಿಹರನ್– ವಿದ್ವಾನ್ ಅಶೋಕ್) ಹಾಡುಗಾರಿಕೆ ನೆರವೇರಲಿದೆ. ಕಲಾಭಿಮಾನಿಗಳು ಭಾಗವಹಿಸಬೇಕು ಎಂದು ವಿದ್ವಾನ್ ಸುಧೀಂದ್ರ ತಿಳಿಸಿದ್ದಾರೆ.

**ವಿದ್ವಾಂಸ, ವಿದುಷಿಯರು ಭಾಗಿ**

ರೂಪಾ ಶ್ರೀಕಾಂತ
- ಸುಧೀಂದ್ರ ಎಚ್.ಎಸ್.
- ಚಂದನಬಾಲಾ ಕಲ್ಯಾಣ್
- ಶ್ರೀಕಾಂತಂ ನಾಗೇಂದ್ರ ಶಾಸ್ತ್ರಿ
- ಬೆಂಗಳೂರು ಬದ್ರರ್ಸ್ ( ಅಶೋಕ್ ಮತ್ತು ಹರಿಹರನ್)

## ಲಿಫ್ಟ್ ಶಾಫ್ಟ್‌ನಲ್ಲಿ ಮುಳುಗಿ 7 ವರ್ಷದ ಬಾಲಕ ಸಾವು

• ಉದಯವಾಹಿನಿ, ಬೆಂಗಳೂರು,

ಭಾರೀ ಮಳೆಯ ಮಧ್ಯೆ ಬೆಂಗಳೂರಿನಲ್ಲಿ ನಿರ್ಮಾಣ ಹಂತದ ಕಟ್ಟಡದಲ್ಲಿ ಮಳೆ ನೀರಿನಿಂದ ತುಂಬಿದ 5 ಅಡಿ ಆಳದ ತೆರೆದ ಲಿಫ್ಟ್ ಶಾಫ್ಟ್‌ನಲ್ಲಿ ಮುಳುಗಿ 7 ವರ್ಷದ ಬಾಲಕ ಮೃತಪಟ್ಟಿದ್ದಾನೆ. ಕಾಡುಗೋಡಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೃತ ಬಾಲಕನನ್ನು ಕನ್ನಮಂಗಲ ನಿವಾಸಿ 2ನೇ ತರಗತಿಯಲ್ಲಿ ಓದುತ್ತಿರುವ ಸುಹಾಸ್ ಗೌಡ ಎಂದು ಗುರುತಿಸಲಾಗಿದೆ.

**ನಡೆದ ಘಟನೆಯೇನು?:** ನಿನ್ನೆ ಬುಧವಾರ ಬೆಳಗ್ಗೆ 9:15ರ ಸುಮಾರಿಗೆ ಸುಹಾಸ್ ತನ್ನ ಸ್ನೇಹಿತ ರೊಂದಿಗೆ ನಿರ್ಮಾಣ ಹಂತದಲ್ಲಿರುವ ಕಟ್ಟಡದ ಬಳಿ ಆಟವಾಡುತ್ತಿದ್ದನು. ಕಟ್ಟಡದ ನೆಲ ಅಂತಸ್ತಿನ ಒಳಗೆ ಹೋಗಿದ್ದಾಗ ಲಿಫ್ಟ್ ಗಾಗಿ ಅಗೆದಿದ್ದ ಜಾಗದಲ್ಲಿ ಬಿದ್ದಿದ್ದಾನೆ. ನಗರದಲ್ಲಿ ಸುರಿದ ಭಾರೀ ಮಳೆಯಿಂದಾಗಿ ಲಿಫ್ಟ್‌ಗಾಗಿ 5 ಅಡಿ ಆಳದ ತೆರೆದ ಜಾಗದಲ್ಲಿ ನೀರು ತುಂಬಿದ್ದು, ಸುಹಾಸ್ ನೀರಿನಲ್ಲಿ



ಉದಯವಾಹಿನಿ ಚಿತ್ರ

ಮುಳುಗಿ ಮೃತಪಟ್ಟಿದ್ದಾನೆ. ಸ್ನೇಹಿತ ಬಿದ್ದದ್ದು ನೋಡಿ, ಅವನ ಇಬ್ಬರು ಸ್ನೇಹಿತರು ಹತ್ತಿರದ ನಿವಾಸಿಗಳಿಗೆ ತಿಳಿಸಿದ್ದಾರೆ. ಅವರು ಅವನನ್ನು ಹೊರಗೆಳೆದು ಹತ್ತಿರದ ಆಸ್ಪತ್ರೆಗೆ ಸಾಗಿಸಿದರು, ಆದರೆ ವೈದ್ಯರು ಅಷ್ಟರಲ್ಲಾಗಲೆ ಮಗು ಮೃತಪಟ್ಟಿದೆ ಎಂದು ಹೇಳಿದರು. ಹಾಲಿನ ಡೈರಿಗಾಗಿ ಕಟ್ಟಡವನ್ನು ನಿರ್ಮಿಸಲಾಗುತ್ತಿದ್ದು, ಡೈರಿ ಅಧ್ಯಕ್ಷ ಸಣ್ಣಪ್ಪ ಮತ್ತು ಅನಿಲ್ ವಿರುದ್ಧ ಬಿಎನ್‌ಎಸ್ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಆರೋಪಿಗಳನ್ನು ಬಂಧಿಸಲು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಭ್ರಷ್ಟಾಚಾರ ನಿಗ್ರಹಿಸಲು ಯುವ ಪೀಳಿಗೆ ಕಾನೂನಿನ ಅರಿವು

• ಉದಯವಾಹಿನಿ, ಬೆಂಗಳೂರು,

ರಾಜ್ಯ ಮಾಹಿತಿ ಹಕ್ಕು, ಸಾಮಾಜಿಕ ಕಾರ್ಯಕರ್ತರ ವೇದಿಕೆ ವತಿಯಿಂದ ಹಮ್ಮಿ ಕೊಂಡಿದ್ದ ಮಾಹಿತಿ ಹಕ್ಕು ದಿನಾಚರಣೆ ಹಾಗೂ ಸಂಘಟನೆಯ 5ನೆ ವಾರ್ಷಿಕೋತ್ಸವದ ಅಂಗವಾಗಿ ಆಗಮಿಸಿದ್ದ ನಿವೃತ್ತ ನ್ಯಾಯಮೂರ್ತಿ ಶ್ರೀಯುತ ಸಂತೋಷ್ ಹೆಗ್ಡೆಯವರು ಮಾತನಾಡಿ ಸಮಾಜದಲ್ಲಿ ನಡೆಯುತ್ತಿರುವ ಲಂಚ ಕೊರತನ ಮತ್ತು ಭ್ರಷ್ಟಾಚಾರ ನಿಗ್ರಹಿಸಲು ಯುವ ಪೀಳಿಗೆಯಲ್ಲಿ ಕಾನೂನಿನ ಅರಿವು ಬೇಕು ಹಾಕು ಯುವಕರು ಈ ಭ್ರಷ್ಟ ವ್ಯವಸ್ಥೆ ವಿರುದ್ದು ಪ್ರಶ್ನೆ ಮಾಡುವ ಅರಿವನ್ನು ಯುವಕರು ಬೆಳೆಸಿಕೊಳ್ಳಬೇಕು. ರಾಜಕಾರಣಿ ಮಕ್ಕಳು ರಾಜಕಾರಣಿ ಗಳು ಆಗುವುದು ನಿಲ್ಲಬೇಕು. ಸಮಾಜದ ಬಗ್ಗೆ ಕಾಳಜಿ ಇರುವ ವ್ಯಕ್ತಿಗಳು ಮಾತ್ರ ರಾಜಕಾರಣದಲ್ಲಿ



ಉದಯವಾಹಿನಿ ಚಿತ್ರ

ಉಳಿಯಬೇಕು. ಶಿಕ್ಷಣದ ಜೊತೆಗೆ ಉತ್ತಮ ಸಮಾಜ ಕಟ್ಟುವಲ್ಲಿ ಯುವಕರು ಮುಂದಾಗಬೇಕು ಎಂದರು. ಇದೇ ಸಂದರ್ಭದಲ್ಲಿ ಬೆಟ್ಟಲ್ಲಿ ಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿಗಳು ಮಾತನಾಡಿ ಸಮಾಜದಲ್ಲಿನ ಭ್ರಷ್ಟಚಾರ ತಡೆಗಟ್ಟಲು ಗ್ರಾಮ ಪಂಚಾಯತಿ ಯಿಂದ ಪ್ರಾರಂಭ ಮಾಡಿ ವಿಧಾನ ಸೌದ ವರೆಗೆ ಭ್ರಷ್ಟ ಚಾರ ನಿರ್ಮೂಲನೆ ಅಭಿಯಾನ ಶುರು ಆಗಬೇಕು. ಹಾಗೂ ಸಾಮಾಜಿಕ ಹೋರಾಟಗಾರರಿಗೆ, ಮಾಹಿತಿ ಹಕ್ಕು ಕಾರ್ಯಕರ್ತರು ಭ್ರಷ್ಟಾಚಾರದ ವಿರುದ್ಧ ಪ್ರಾಮಾಣಿಕ ಹೋರಾಟ ಮಾಡುವುದರ ಮುಕಾಂತರ ಭ್ರಷ್ಟಚಾರದ ವಿರುದ್ದ ದ್ವನಿ ಆಗಬೇಕು ಎಂದು ಕರೆ ಕೊಟ್ಟರು. ಕಾರ್ಯಕ್ರಮದಲ್ಲಿ ಮಾಹಿತಿ ಹಕ್ಕು ಆಯೋಗದ ವತಿಯಿಂದ ಸರ್ಕಾರದ ಖಜಾನೆಗೆ ಅಧಿಕಾರಿಗಳಿಂದ ದಂಡ ತುಂಬಿಸಿದ ಸಾಮಾಜಿಕ ಕಾರ್ಯಕರ್ತರಿಗೆ ವಿಚಾರಕ್ರಾಂತಿ ರತ್ನ ಪ್ರಶಸ್ತಿ ನೀಡಿ ಸನ್ಮಾನಿ ಸಲಾಯಿತು.

ಮಾಹಿತಿ ಹಕ್ಕು ಅಧ್ಯಾಯನ ಕೇಂದ್ರದ ವೀರೇಶ್ ಬೆಳ್ಳೂರ್, ಸಂಸ್ಥಾಪಕರಾದ ಹೆಚ್ ಜಿ ರಮೇಶ್ ಕುಣಿಗಲ್, ರಾಜ್ಯಾಧ್ಯಕ್ಷರಾದ ಚೆನ್ನಯ್ಯ ಎಂ ವಸ್ತ್ರದ್, ಸಂಘಟನೆಯ ಓಂಕಾರಪ್ಪ, ರಾಜ್ಯದ ವಿವಿಧ ಜಿಲ್ಲೆಗಳಿಂದ ಕಾರ್ಯಕರ್ತರು ಉಪಸ್ಥಿತರಿದ್ದರು....

# ಮೃತಪಟ್ಟವರಿಗೆ 5 ಲಕ್ಷ ರೂ. ಪರಿಹಾರ ಘೋಷಿಸಿದ ಸಿದ್ದರಾಮಯ್ಯ

## ಬಾಬುಸಾಬ್‌ಪಾಳ್ಯದಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿತ ಪ್ರಕರಣದಲ್ಲಿ 8 ಜನರು ಸಾವು

• ಉದಯವಾಹಿನಿ, ಬೆಂಗಳೂರು,

ಕಟ್ಟಡ ಕುಸಿತ ಪ್ರಕರಣದಲ್ಲಿ ಮೃತಪಟ್ಟವರಿಗೆ 5 ಲಕ್ಷ ರೂ. ಪರಿಹಾರ ಘೋಷಣೆ ಮಾಡಲಾಗಿದ್ದು, ಘಟನೆಯಲ್ಲಿ ಗಾಯಗೊಂಡವರ ಚಿಕಿತ್ಸೆಯನ್ನು ಸಂಪೂರ್ಣವಾಗಿ ಸರ್ಕಾರವೇ ಭರಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಂಗಳೂರಿನ ಬಾಬುಸಾಪಾಳ್ಯದಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಬಾಬುಸಾಪಾಳ್ಯದಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿತ ಪ್ರಕರಣದಲ್ಲಿ 8 ಜನರು ಸಾವು ಸಂಭವಿಸಿದ್ದು, ಅವರ ಶವಗಳನ್ನು ಹೊರತೆಗೆಯಲಾಗಿದ್ದು, ಉಳಿದಂತೆ 8 ಜನರನ್ನು ರಕ್ಷಣೆ ಮಾಡಲಾಗಿದೆ. ಅವರಲ್ಲಿ ಆರು ಜನರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಉಳಿದವರಿಗೆ ಗಂಭೀರ ಗಾಯಗಳಾಗಿವೆ. ರಕ್ಷಣೆ ಮಾಡಿರುವವರು ಪ್ರಾಣಾಪಾಯದಿಂದ ಪಾರಾಗಿದ್ದು, ಅವರ ಚಿಕಿತ್ಸಾ ವೆಚ್ಚವನ್ನು ಸಂಪೂರ್ಣವಾಗಿ ಸರ್ಕಾರವೇ ಭರಿಸುತ್ತಿದೆ. ಸಾವನ್ನಪ್ಪಿರುವ 8 ಜನರಿಗೆ ತಲಾ 2 ಲಕ್ಷ ಕಾರ್ಮಿಕ ಇಲಾಖೆಯಿಂದ , 3 ಲಕ್ಷ ಬಿಬಿಎಂಪಿಯಿಂದ , ಒಟ್ಟು 5 ಲಕ್ಷ ರೂ.ಗಳ ಪರಿಹಾರವನ್ನು ಘೋಷಣೆ ಮಾಡಲಾಗಿದೆ. ಇದು ರೆವಿನ್ಯೂ ಬಡಾವಣೆಯಾಗಿದ್ದು, ಈ ಕಟ್ಟಡವನ್ನು ಅನಧಿಕೃತವಾಗಿ ಪರವಾನಗಿ ಪಡೆಯದೇ ನಿರ್ಮಿಸಲಾಗಿದೆ. ಅನಧಿಕೃತ ಕಾಮಗಾರಿ ಎಂದು ನೋಟೀಸು ನೀಡಲಾಗಿದ್ದರೂ,



ಉದಯವಾಹಿನಿ ಚಿತ್ರ

> **ಬಿಜೆಪಿ ಸರ್ಕಾರದ ಅವಧಿಯಲ್ಲಿ ಅನಧಿಕೃತ ಕಟ್ಟಡಗಳ ಸಮೀಕ್ಷೆ ನಡೆಸಲಾಗಿದ್ದರ ವಸ್ತುಸ್ಥಿತಿ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಯಾವುದೇ ಸರ್ಕಾರವಿದ್ದರೂ , ಇಂತಹ ವಿಷಯಗಳು ಪ್ರಸ್ತುತವಾಗಿರುತ್ತವೆ. ಕೆಲವರು ಈ ಬಗ್ಗೆ ಕಾನೂನು ಮೊರೆ ಹೋಗಿದ್ದಾರೆ. ಈ ವಿಷಯದ ಬಗ್ಗೆ ಪರಿಶೀಲನೆ ನಡೆಸಲಾಗುವುದು ಎಂದರು.**

ನಿರ್ಮಾಣ ಮಾಡಿರುವುದರಿಂದ, ಸಂಬಂಧಪಟ್ಟ ಎಇಇ ಯನ್ನು ಅಮಾನತುಗೊಳಿಸಲಾಗಿದೆ. ಈ ಪ್ರದೇಶದ ವ್ಯಾಪ್ತಿಗೆ ಬರುವ ವಿಭಾಗೀಯ ಅಧಿಕಾರಿಗೂ ಹಾಗೂ ಎಕ್ಸಿಕ್ಯೂಟಿವ್ ಇಂಜಿನಿಯರ್ ಅವರಿಗೂ ನೋಟೀಸು ಜಾರಿ ಮಾಡುವಂತೆ ಸೂಚನೆ ನೀಡಲಾಗಿದೆ. ಪ್ರಕರಣದಲ್ಲಿ ಗಾಯಗೊಂಡವರಿಗೆ ಚಿಕಿತ್ಸಾ ವೆಚ್ಚ ಭರಿಸುವ ಜೊತೆಗೆ ಪರಿಹಾರವನ್ನೂ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದರು. ಜನರು ಕಾನೂನಿನ ಪ್ರಕಾರ ಮನೆಗಳನ್ನು ನಿರ್ಮಿಸಬೇಕೇ ಹೊರತು ಕಾನೂನು ಬಾಹಿರವಾಗಿ ಮನೆಗಳನ್ನು ಕಟ್ಟಬಾರದೆಂದು ಜನರಲ್ಲಿ ಸಿಎಂ ಮನವಿ ಮಾಡಿದರು. ಕಾಮಗಾರಿ ನಿಲ್ಲಿಸುವಂತೆ ನೋಟೀಸು ನೀಡಿದ ನಂತರವೂ ಕಟ್ಟಡ ಮಾಲೀಕರು ಹಾಗೂ ಗುತ್ತಿಗೆದಾರರು ಕಾಮಗಾರಿಯನ್ನು ನಿಲ್ಲಿಸದ ಕಾರಣ , ಈ ದುರಾದೃಷ್ಟರ ಘಟನೆ ನಡೆದಿದೆ. ಇಂತಹ ಘಟನೆಗಳು ಮರುಕಳಿಸದಿರಲು , ಸಾರ್ವಜನಿಕರು ಕಟ್ಟಡ ನಿರ್ಮಾಣಕ್ಕೆ ಮುಂಚಿತವಾಗಿ ಅನುಮತಿ ಪಡೆಯಬೇಕು ಮತ್ತು ಎಇಇ ನಿಂದ ಸೂಕ್ತ ಪರಿಶೀಲನೆಯಾಗಬೇಕು. ಇದರ ಜೊತೆಗೆ ಕಳಪೆ ಕಾಮಗಾರಿ ಮಾಡದೇ ಕಟ್ಟಡದ ಗುಣಮಟ್ಟವನ್ನು ಕಾಯ್ದುಕೊಳ್ಳಬೇಕು. ಸರ್ಕಾರ ಮಳೆ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡುತ್ತಿಲ್ಲ ಎಂದು ಪ್ರತಿಪಕ್ಷದವರ ಮಾತು ಕೇಳಿಬರುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಟೀಕೆಗಳನ್ನು ಮಾಡುವುದು ಸುಲಭ. ಹಿಂದಿನ ಸರ್ಕಾರದ ಅವಧಿಯಲ್ಲೂ ಮಳೆ ಸಂಭವಿಸಿದ್ದು , ಪ್ರತಿಪಕ್ಷದ ನಾಯಕನಾಗಿ ನಾನು ದೋಣಿಯಲ್ಲಿ ಕುಳಿತು ಸ್ಥಳ ವೀಕ್ಷಣೆ ಮಾಡಿದ್ದೆ. ನೂರಾರು ವರ್ಷಗಳಲ್ಲಿ ಯಲಹಂಕದಲ್ಲಿ ಒಂದೇ ದಿನ 170 ಮಿ.ಮೀ. ಮಳೆ ಬಿದ್ದಿದೆ. ಈ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸುವ ಶಕ್ತಿ ಸರ್ಕಾರಕ್ಕೆ ಇರಬೇಕಾಗುತ್ತದೆ. ಆ ಭಾಗದಲ್ಲಿ ಸುಮಾರು ಸಾವಿರಕ್ಕೂ ಹೆಚ್ಚು ಕುಟುಂಬಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ.

> **ಈ ಕಟ್ಟಡ ಕುಸಿತ ಕಳಪೆ ಕಾಮಗಾರಿಯಿಂದಾಗಿದೆಯೇ ಹೊರತು ಮಳೆಯ ಕಾರಣದಿಂದಲ್ಲ. ಇನ್ನು ಮುಂದೆ ಯಾವುದೇ ಕಾರಣಕ್ಕೂ ಅನಧಿಕೃತ ಕಟ್ಟಡಗಳಿಗೆ ಅನುಮತಿ ನೀಡಬಾರದು. ಒಂದು ವೇಳೆ ನಿರ್ಮಿಸಿದರೆ, ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು. ಇನ್ನುಮುಂದೆ ಇಂತಹ ಘಟನೆಗಳು ನಡೆಯದಂತೆ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳುವಂತೆ ಬಿಬಿಎಂಪಿ ಆಯುಕ್ತರಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದರು.**

> **ರಕ್ಷಣಾ ಕಾರ್ಯಗಳನ್ನು ಮಾಡಲಾಗುತ್ತಿದೆ. ಈ ವರ್ಷ ಮಳೆ ಜಾಸ್ತಿ ಆಗಿದ್ದು, ಇನ್ನೂ ಹೆಚ್ಚು ಮೂಲಸೌಕರ್ಯಗಳ ಅಭಿವೃದ್ಧಿ ಆಗಬೇಕಿದೆ. ರಾಜಕಾಲುವೆಗಳಲ್ಲಿ ಒತ್ತುವರಿ ಕ್ಲಿಯರ್ ಮಾಡಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ವಿಪತ್ತುನಿರ್ವಹಣೆಗಾಗಿ 3 ಸಾವಿರ ಕೋಟಿರೂ.ಗಳ ಸಾಲವನ್ನು ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.**

# ಚಿಕ್ಕಬಳ್ಳಾಪುರ ನಗರಸಭೆ: ಪೌರಾಯುಕ್ತ ಹುದ್ದೆಗೆ ಅಧಿಕಾರಿಗಳ ಹಿಂದೇಟು

● ನಗರಸಭೆ ಇತಿಹಾಸದಲ್ಲಿಯೇ ಇದೇ ಮೊದಲ ಬಾರಿಗೆ ಇಂತಹ ಸ್ಥಿತಿ ಇದೆ ಎನ್ನುತ್ತಾರೆ ನಗರಸಭೆ ಸದಸ್ಯರು

• ಉದಯವಾಹಿನಿ ಚಿಕ್ಕಬಳ್ಳಾಪುರ

ಜಿಲ್ಲಾ ಕೇಂದ್ರ ಚಿಕ್ಕಬಳ್ಳಾಪುರ ನಗರಸಭೆ ಪೌರಾಯುಕ್ತರ ಹುದ್ದೆಗೆ 'ಕಾಯಂ' ಅಧಿಕಾರಿ ಬರುವ ಲಕ್ಷಣಗಳು ಸದಸ್ಯಕ್ಕೆ ಕಾಣುತ್ತಿಲ್ಲ. ಚಿಕ್ಕಬಳ್ಳಾಪುರ ಪೌರಾಯುಕ್ತ ಹುದ್ದೆಗೆ ಬರಲು ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ. ಚಿಕ್ಕಬಳ್ಳಾಪುರ ನಗರಸಭೆ ಇತಿಹಾಸದಲ್ಲಿಯೇ ಇದೇ ಮೊದಲ ಬಾರಿಗೆ ಇಂತಹ ಸ್ಥಿತಿ ಇದೆ ಎನ್ನುತ್ತಾರೆ ನಗರಸಭೆ ಸದಸ್ಯರು ಮತ್ತು ಅಧಿಕಾರಿಗಳು.

ಈ 'ಬದಲಾವಣೆ' ನಗರಸಭೆಯ ಪಟ್ಟಭದ್ರರ ಆಟಗಳನ್ನು ಸಾರಿ ಹೇಳುತ್ತವೆ. ಅಲ್ಲದೆ ರಾಜಕೀಯ ಇಚ್ಛಾಶಕ್ತಿಯ ಕೊರತೆ ಮತ್ತು ಹಿತಾಸಕ್ತಿ ಪೌರಾಯುಕ್ತರ ಹುದ್ದೆ ಖಾಲಿ ಇರಲು ಕಾರಣವಾಗಿದೆ.

ಸದ್ಯಕ್ಕೆ ಈ ಹುದ್ದೆಗೆ ಬರಲು ಅಧಿಕಾರಿಗಳು 'ಒಲ್ಲೆ' ಎನ್ನುತ್ತಿದ್ದಾರೆ. ನಗರಸಭೆ ಕಾಂಗ್ರೆಸ್ ಸದಸ್ಯ ಎಸ್.ಎಂ.ರಫೀಕ್, 'ನಗರಸಭೆ ಪೌರಾಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಮಂಜುನಾಥ್ ಕೇವಲ ಮುಖ್ಯಾಧಿಕಾರಿ ಅಷ್ಟೇ. ಅವರು ಪೌರಾಯುಕ್ತರಾಗಿ ಕೆಲಸ ಮಾಡಲು ಮುನಿಸಿಪಾಲ್ ಕಾಯ್ದೆ ಪ್ರಕಾರ ವಿದ್ಯಾರ್ಹತೆ ಹೊಂದಿಲ್ಲ. ಅವರನ್ನು ಕೂಡಲೇ ಬದಲಾವಣೆ ಮಾಡಬೇಕು' ಎಂದು ಹೈಕೋರ್ಟ್ ಮೊರೆ ಹೋಗಿದ್ದಾರೆ. ಆದ ಕಾರಣ 2024ರ ಜುಲೈ ಮೊದಲ ವಾರದಲ್ಲಿ ಮಂಜುನಾಥ್ ಹುದ್ದೆಯಿಂದ ವರ್ಗಾವಣೆಯಾದರು. ನಂತರ ಪರಿಸರ ಎಂಜಿನಿಯರ್ ಪಿ.ಉಮಾಶಂಕರ್, ಪ್ರಭಾರ ಪೌರಾಯುಕ್ತರಾದರು. ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯ ನಂತರ 'ಪ್ರಭಾರ' ಜವಾಬ್ದಾರಿಯನ್ನು ಉಪವಿಭಾಗಾಧಿಕಾರಿ ಅವರಿಗೆ ವಹಿಸಲಾಯಿತು. ಜಿಲ್ಲೆಯ ಇತರೆ ನಗರಸ್ಥಳೀಯ ಸಂಸ್ಥೆಗಳೂ ಸೇರಿದಂತೆ ರಾಜ್ಯದ ಬಹಳಷ್ಟು ನಗರಸ್ಥಳೀಯ ಸಂಸ್ಥೆಗಳಲ್ಲಿ ಪೌರಾಯುಕ್ತರಾಗಿ ಕೆಲಸ ನಿರ್ವಹಿಸುತ್ತಿರುವವರು 'ಗ್ರೇಡ್ 1' ಅಧಿಕಾರಿಗಳಲ್ಲ. ಹೀಗಿದ್ದರೂ ಅರ್ಹತೆಯ ಕಾರಣ ಚಿಕ್ಕಬಳ್ಳಾಪುರ ನಗರಸಭೆಯ ಪೌರಾಯುಕ್ತರು ಮಾತ್ರ ಬದಲಾವಣೆಯಾಗಿದ್ದಾರೆ.

ಉಪವಿಭಾಗಾಧಿಕಾರಿ ಅವರಿಗೆ ಪ್ರಭಾರ ಜವಾಬ್ದಾರಿ ವಹಿಸಲಾಗಿದೆ. ಆದರೆ ಅವರಿಗೆ ಕಾರ್ಯಭಾರದ ಒತ್ತಡ ಹೆಚ್ಚು. ವಿದ್ಯಾರ್ಹತೆಯೇ ಮಾನದಂಡವಾಗಿರುವ ಕಾರಣ ಗ್ರೇಡ್-1 ಅಧಿಕಾರಿಯೇ ನಗರಸಭೆಗೆ ಪೌರಾಯುಕ್ತರಾಗಿ ಬರಬೇಕಿದೆ. ಆದರೆ ಚಿಕ್ಕಬಳ್ಳಾಪುರ ನಗರಸಭೆ ಬೆಳವಣಿಗೆಗಳ ಬಗ್ಗೆ ತಿಳಿದ ಅಧಿಕಾರಿಗಳು ಇದರ ಗೊಡವೆಯೇ ಬೇಡ ಎಂದು ಹಿಂದೆ ಸರಿಯುತ್ತಿದ್ದಾರೆ ಎನ್ನುತ್ತವೆ ಮೂಲಗಳು. ನಗರದ ಅಭಿವೃದ್ಧಿ ಮತ್ತು ನಾಗರಿಕರ ಸಮಸ್ಯೆಗಳ ಪರಿಹಾರಕ್ಕೆ ಪೌರಾಯುಕ್ತರ ಜವಾಬ್ದಾರಿ ಪ್ರಮುಖವಾದುದು. ಮಳೆಗಾಲದಲ್ಲಿ ಪೌರಾಯುಕ್ತರು ಸಮಸ್ಯೆಯಾದ ಸ್ಥಳಗಳಿಗೆ ತಕ್ಷಣವೇ ಭೇಟಿ ನೀಡಿ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದರು. ನಾಗರಿಕರ ಸಮಸ್ಯೆಗಳನ್ನು ಆಲಿಸುತ್ತಿದ್ದರು. ಇ-ಖಾತೆಗಳು ಸಹ ಚುರುಕಾಗುತ್ತಿದ್ದವು.

ಆದರೆ ಕಾಯಂ ಪೌರಾಯುಕ್ತರು ಇಲ್ಲದ ಕಾರಣ ಈ ಎಲ್ಲವೂ ಆಮೆಗತಿಯಲ್ಲಿದೆ. ಜನರು ಹೈರಾಣಾಗುತ್ತಿದ್ದಾರೆ ಎಂದು ನಗರಸಭೆ ಸದಸ್ಯರೊಬ್ಬರು ಬೇಸರ ವ್ಯಕ್ತಪಡಿಸುವರು. ಇತ್ತೀಚಿನ ವರ್ಷಗಳಲ್ಲಿ ನಗರಸಭೆ ಪೌರಾಯುಕ್ತರ ಹುದ್ದೆ ರಾಜಕೀಯ ದಾಳವಾಗುತ್ತಿದೆ ಎನ್ನುವುದಕ್ಕೆ ವರ್ಗಾವಣೆಗಳೇ ಸಾಕ್ಷಿ. 2021ರ ತರುವಾಯ ಅಧಿಕಾರವಹಿಸಿಕೊಂಡ ಯಾವ ಪೌರಾಯುಕ್ತರೂ ಸಹ ಒಂದು ವರ್ಷ ಅಧಿಕಾರ ಪೂರ್ಣಗೊಳಿಸಿಲ್ಲ. 2021ರಿಂದ ಇಲ್ಲಿಯವರೆಗೆ ಎಂಟು ಮಂದಿ ಪೌರಾಯುಕ್ತರ ಹುದ್ದೆಯಲ್ಲಿ ಕೆಲಸ ಮಾಡಿದ್ದಾರೆ. 2021 ಆಗಸ್ಟ್ 18ರಿಂದ 19ರವರೆಗೆ ಅಂದರೆ ಕೇವಲ ಒಂದೇ ದಿನ ಮಾತ್ರ ಡಿ.ಎನ್.ಮಾಧವನ್ ಪ್ರಭಾರ ಪೌರಾಯುಕ್ತರಾಗಿದ್ದರು. 2021 ಆ.19ರಿಂದ 2022ರ ಜು.15ರವರೆಗೆ ಎನ್.ಮಹಾಂತೇಶ್, 2022ರಜು.15ರಿಂದ 2022ರ ಸೆ.2ರವರೆಗೆ ಎಂ.ರೇಣುಕ ಈ ಹುದ್ದೆಯಲ್ಲಿ ಇದ್ದರು.

**ಪೌರಾಯುಕ್ತರಾಗಿ ಕೆಲಸ**

**ಉಮಾಶಂಕರ್ 2022ರ ಸೆ.2ರಿಂದ 2023ರ ಮಾ.20ರವರೆಗೆ ಪ್ರಭಾರ ಪೌರಾಯುಕ್ತರಾಗಿ ಕೆಲಸ ನಿರ್ವಹಿಸಿದರು. ನಂತರ 2023ರ ಮಾ.21ರಿಂದ 2023ರ ಆ.16ರವರೆಗೆ ಪಂಪಾಶ್ರೀ ಯು.ಪಿ ಕೆಲಸ ಮಾಡಿದರು. 2023ರ ಆ.16ರಿಂದ ಮಂಜುನಾಥ್ ಪೌರಾಯುಕ್ತರಾಗಿ ನೇಮಕವಾದರು. ಮತ್ತೆ ಉಮಾಶಂಕರ್ ಅವರಿಗೆ ಪ್ರಭಾರ ಜವಾಬ್ದಾರಿ ನೀಡಲಾಯಿತು. ಈಗ ಉಪವಿಭಾಗಾಧಿಕಾರಿ ಅಶ್ವಿನ್ ಕುಮಾರ್ ಪ್ರಭಾರದ ಜವಾಬ್ದಾರಿಯಲ್ಲಿ ಇದ್ದಾರೆ.**



ಉದಯವಾಹಿನಿ ಚಿತ್ರ

**ಚುನಾಯಿತ ಪ್ರತಿನಿಧಿಗಳಷ್ಟೇ ಪೌರಾಯುಕ್ತರು ಸಹ ಮುಖ್ಯ. ಜಿಲ್ಲಾ ಕೇಂದ್ರದ ನಗರಸಭೆಗೆ ಪೌರಾಯುಕ್ತರ ನೇಮಕವಾಗಿಲ್ಲ. ಈ ಹಿಂದೆ ಯಾವತ್ತಾದರೂ ಈ ರೀತಿಯಲ್ಲಿ ಆಗಿತ್ತಾ -ಡಾ.ಕೆ.ಸುಧಾಕರ್, ಸಂಸದ**

**ರಾಜಕೀಯ ಇಚ್ಛಾಶಕ್ತಿಯ ಕೊರತೆ**

## ಕೆರೆ ಅಭಿವೃದ್ಧಿಗೆ 60,000 ಲಂಚ ಪಡೆಯುವಾಗ ಆರ್‌ಎಫ್‌ಒ ಲೋಕಾಯುಕ್ತ ಬಲೆಗೆ

• ಉದಯವಾಹಿನಿ, ಚಾಮರಾಜನಗರ

ಅರಣ್ಯ ವ್ಯಾಪ್ತಿಯಲ್ಲಿ ಕೆರೆ ಅಭಿವೃದ್ಧಿಗೆ ಲಂಚಕ್ಕೆ ಬೇಡಿಕೆ ಇಟ್ಟು ಆರ್‌ಎಫ್‌ಒ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಹನೂರು ತಾಲ್ಲೂಕಿನ ಕೌದಳ್ಳಿಯಲ್ಲಿ ನಡೆದಿದೆ. ಹಾಗಾದರೆ ಯಾವ ಕಾರಣಕ್ಕಾಗಿ ಎಷ್ಟು ಹಣಕ್ಕೆ ಬೇಡಿಕೆ ಇಟ್ಟಿದ್ದರು ಎನ್ನುವ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ಗಮನಿಸಿ.

ಮಲೆ ಮಹದೇಶ್ವರ ವನ್ಯಜೀವಿಧಾಮದ ಕೌದಳ್ಳಿ ಆರ್‌ಎಫ್‌ಒ ಕಾಂತರಾಜ್ ಚೌಹಾಣ್ ಲೋಕಾಯುಕ್ತ ಬಲೆಗೆ ಬಿದ್ದ ಅಧಿಕಾರಿ. ಮಾರ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಲ್ ರೋಡ್ ಅರಣ್ಯ ವ್ಯಾಪ್ತಿಯಲ್ಲಿ ಕೆರೆ ಅಭಿವೃದ್ಧಿ ಮಾಡಲು ಗ್ರಾಮ ಪಂಚಾಯಿತಿ ಸದಸ್ಯ ಜೋಸೆಫ್ ಆಳ್ಬಗನ್‌ನಿಂದ 60,000 ರೂಪಾಯಿ ಹಣ ಪಡೆಯುವಾಗ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ ಎಂದು ತಿಳಿದುಬಂದಿದೆ.

ಮಾರ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಲ್ ರೋಡ್ ಅರಣ್ಯ ಪ್ರದೇಶ ವ್ಯಾಪ್ತಿಯ



ಉದಯವಾಹಿನಿ ಚಿತ್ರ

ಮೊರನೂರು ಹುಣಸೆ ಮರ ಬಾವಿಯ ಹತ್ತಿರ 10,00,000 ರೂಪಾಯಿ ವೆಚ್ಚದಲ್ಲಿ ಕೆರೆ ಅಭಿವೃದ್ಧಿ ಮಾಡಲು ಕ್ರಿಯಾ ಯೋಜನೆ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳಲಾಗಿತ್ತು. ಆದರೆ, ವಲಯ ಅರಣ್ಯಾಧಿಕಾರಿ ಕಾಮಗಾರಿ ನಡೆಸಬೇಕಾದರೆ ತನಗೆ 80,000 ರೂಪಾಯಿ ಹಣ ನೀಡಬೇಕು. ಇಲ್ಲದಿದ್ರೆ, ಕಾಮಗಾರಿ ನಡೆಸಲು ಅವಕಾಶ ಮಾಡಿಕೊಡುವುದಿಲ್ಲ ಎಂದು ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

**ಪ್ರಕರಣ ದಾಖಲು**

**ಇನ್ನು ಲಂಚದ ಬೇಡಿಕೆಯಿಂದ ಬೇಸತ್ತ ಗ್ರಾಮ ಪಂಚಾಯಿತಿ ಸದಸ್ಯ ಜೋಸೆಫ್ ಆಳ್ಬಗನ್ ಚಾಮರಾಜನಗರ ಲೋಕಾಯುಕ್ತ ಕಚೇರಿಗೆ ದೂರು ನೀಡಿದ್ದರು. ದೂರು ನೀಡುವ ವೇಳೆ ಈಗಾಗಲೇ ವಲಯ ಅರಣ್ಯಾಧಿಕಾರಿಗೆ ಮುಂಗಡ ಹಣವಾಗಿ 20,000 ರೂಪಾಯಿ ಮೇಲಿರುವುದಾಗಿಯೂ ಮಾಹಿತಿ ನೀಡಿದ್ದರು. ಪ್ರಕರಣ ದಾಖಲಿಸಿಕೊಂಡ ಲೋಕಾಯುಕ್ತ ಪೊಲೀಸರು ಉಳಿಕೆ 60,000 ರೂಪಾಯಿ ಹಣ ಸ್ವೀಕರಿಸುವುದಾಗ ದಾಳಿ ನಡೆಸಿ ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ ಎನ್ನಲಾಗಿದೆ.**

## ಹೆದ್ದಾರಿಗೂ ತಟ್ಟಿದ ಬಿಪಿಎಲ್ ಕಾರ್ಡ್ ರದ್ದು ನಿರ್ಧಾರ

• ಉದಯವಾಹಿನಿ, ಚಾಮರಾಜನಗರ

ರಾಜ್ಯದಲ್ಲಿ ನಕಲಿ ದಾಖಲೆ ನೀಡಿ ಪಡೆದಿರುವಂತಹ ಬಿಜೆಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲು ಸರ್ಕಾರ ಮುಂದಾಗಿದೆ. ಮತ್ತೊಂದೆಡೆ ಸರ್ಕಾರ ಅವೈಜ್ಞಾನಿಕವಾಗಿ ಸರ್ವೆ ಮಾಡಿ ಬಡವರ ಹೊಟ್ಟೆ ಮೇಲೆ ಹೊಡೆಯುವಂತಹ ಕೆಲಸವನ್ನು ಮಾಡುತ್ತಿದೆ ಎನ್ನುವ ಆರೋಪಗಳು ಕೇಳಿಬರುತ್ತಿವೆ.

ಇದೀಗ ಗಡಿಜಿಲ್ಲೆ ಚಾಮರಾಜನಗರ ಜಿಲ್ಲೆಯಲ್ಲೂ ಈ ಬಗ್ಗೆ ಕನ್ನಡಪರ ಹೋರಾಟಗಾರರು ಧ್ವನಿ ಎತ್ತಿದ್ದಾರೆ. ಬಿಪಿಎಲ್ ಕಾರ್ಡ್‌ಗಳನ್ನು ಅವೈಜ್ಞಾನಿಕವಾಗಿ ರದ್ದು ಪಡಿಸಲಾಗುತ್ತಿದೆ ಎಂದು ಆರೋಪಿಸಿ ಕನ್ನಡಪರ ಹೋರಾಟಗಾರರು ತಮಟೆ ಬಾರಿಸಿ, ರಸ್ತೆ ತಡೆದು ಆಕ್ರೋಶ ಹೊರಹಾಕಿದ ಘಟನೆ ಚಾಮರಾಜನಗರದಲ್ಲಿ ನಡೆದಿದೆ. ರಾಷ್ಟ್ರೀಯ ಹೆದ್ದಾರಿ ಹಾದುಹೋಗುವ ಚಾಮರಾಜನಗರದ



ಉದಯವಾಹಿನಿ ಚಿತ್ರ

ಭುವನೇಶ್ವರಿ ವೃತ್ತದಲ್ಲಿ ಚಾ.ರಂ. ಶ್ರೀನಿವಾಸಗೌಡ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ತಮಟೆ ಬಾರಿಸಿ ಆಹಾರ ಇಲಾಖೆ ವಿರುದ್ಧ ಘೋಷಣೆ ಕೂಗಿ ಕಿಡಿಕಾರಿದರು. ಬಿಪಿಎಲ್ ಕಾರ್ಡ್‌ಗಳನ್ನು ಮನ ಬಂದಂತೆ ರದ್ದು ಮಾಡಿ ಬಡವರ ಬಾಯಿಗೆ ಮಣ್ಣು ಹಾಕುತ್ತಿದ್ದಾರೆ. ಈ ಕಾರ್ಡ್‌ಗಳನ್ನು ಅವೈಜ್ಞಾನಿಕವಾಗಿ ರದ್ದು ಮಾಡಿದ್ದು, ಅರ್ಹರಿಗೆ ಮತ್ತೇ ಕಾರ್ಡ್ ನೀಡಬೇಕು. ಇಲ್ಲದಿದ್ದರೇ ನಿರಂತರವಾಗಿ ಧರಣಿ ಮಾಡಬೇಕಾಗುತ್ತದೆ ಎಂದು ಹೋರಾಟಗಾರರು ಎಚ್ಚರಿಕೆ ನೀಡಿದರು.

## ಯೋಗೀಶ್ವರ್ 50 ಸಾವಿರ ಮತಗಳಿಂದ ಗೆಲ್ಬೇಕು: ಸಿಎಂ

• ಉದಯವಾಹಿನಿ, ಚನ್ನಪಟ್ಟಣ

ಚನ್ನಪಟ್ಟಣ ಉಪ ಚುನಾವಣೆ ಫಲಿತಾಂಶ ನಾನೂ ನೋಡ್ತೀನಿ. ಕನಿಷ್ಠ 50 ಸಾವಿರ ಮತಗಳ ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿ ಯೋಗೀಶ್ವರ್ ಅವರು ಜಯಗಳಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಕರೆ ನೀಡಿದರು.

ಯೋಗೀಶ್ವರ್ ಪರ ರೋಡ್ ಶೋ ನಲ್ಲಿ ಭಾಗವಹಿಸಿ ಚನ್ನಪಟ್ಟಣ ಜನತೆಗೆ ಕರೆ ನೀಡಿದ್ದು, ಕೆರೆಗಳಿಗೆ ಜೀವದಾನ ಮಾಡಿದ ಯೋಗೀಶ್ವರ್ ಅಭಿವೃದ್ಧಿ ಪರವಾಗಿ ಇರುವುದರಿಂದಲೇ ಐದು ಬಾರಿ ಶಾಸಕರಾಗಿದ್ದು ಕಾಂಗ್ರೆಸ್ಸಿಗೆ ಮರಳಿದ್ದಾರೆ.

ಇವರನ್ನು ನಾವೆಲ್ಲಾ ಸ್ವಾಗತಿಸಿದ್ದೇವೆ. ಯೋಗೀಶ್ವರ್ ಗೆಲ್ಲುವ ಮೂಲಕ ಚನ್ನಪಟ್ಟಣದಲ್ಲಿ ನಿಂತು ಹೋಗಿರುವ ಅಭಿವೃದ್ಧಿಗೆ ಮರು ಚಾಲನೆ ನೀಡಿ ಎಂದು ಕರೆ ನೀಡಿದರು.

ಕುಮಾರಸ್ವಾಮಿಗೆ ಚನ್ನಪಟ್ಟಣ ಮರೆತುಹೋಗಿ ಮಂಡ್ಯಕ್ಕೆ ಸೀಮಿತರಾಗಿದ್ದಾರೆ. ಬಿಜೆಪಿ ಒಕ್ಕೂಟದಿಂದ ಕುಮಾರಸ್ವಾಮಿಯೇ ನಿಲ್ಲಲಿ, ನಿಖಿಲ್ ಕುಮಾರಸ್ವಾಮಿಯೇ ನಿಲ್ಲಲಿ, ಶ್ರೀಮತಿ ಅನಿತಾ ಕುಮಾರಸ್ವಾಮಿಯವರೇ ನಿಲ್ಲಲಿ ಇಲ್ಲಿ ಕಾಂಗ್ರೆಸ್ ಪಕ್ಷದ ಯೋಗೀಶ್ವರ್ ಅವರೇ ಭರ್ಜರಿ ಜಯಗಳಿಸೋದು ಖಚಿತ ಎಂದು ಭರವಸೆ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

**ನಮ್ಮದು ಜನಕಲ್ಯಾಣದ ಸರ್ಕಾರ. ಈ ಸರ್ಕಾರದಲ್ಲಿ ಯೋಗೀಶ್ವರ್ ಅವರು ಇರಬೇಕು. ಹೆಚ್.ಡಿ.ಕುಮಾರಸ್ವಾಮಿಯವರು ಶಾಸಕರಾಗಿ, ಮುಖ್ಯಮಂತ್ರಿ ಆಗಿದ್ದಾಗಲೂ ಮಾಡದ ಚನ್ನಪಟ್ಟಣದ ಅಭಿವೃದ್ಧಿ ಕೆಲಸಗಳು ಮುಂದಿನ ತಿಂಗಳಿನಿಂದ ಶಾಸಕರಾಗಿ ಯೋಗೀಶ್ವರ್ ಅವರು ಮುಂದುವರೆಸುತ್ತಾರೆ. ಇವತ್ತು ನಾಮಪತ್ರ ಸಲ್ಲಿಕೆ ಬಳಿಕ ನಾನು ಮತ್ತೆ ಚನ್ನಪಟ್ಟಣಕ್ಕೆ ಪ್ರಚಾರಕ್ಕೆ ಬರುತ್ತೇನೆ**
**-ಮುಖ್ಯಮಂತ್ರಿ ಸಿದ್ದರಾಮಯ್ಯ**

## ಧಾರಾಕಾರ ಮಳೆಗೆ ಕುಸಿದು ಬಿದ್ದ ಮನೆಗೆ ಉಪ ತಹಶೀಲ್ದಾರ್ ಭೇಟಿ

• ಉದಯವಾಹಿನಿ,ಶಿಡ್ಲಘಟ್ಟ

ಸುಮಾರು ದಿನಗಳಿಂದ ಎಡ ಬಿಡದೆ ಸುರಿಯುತ್ತಿರುವ ಮಳೆಯ ಅವಾಂತರಕ್ಕೆ ವೃದ್ದೆ ವೆಂಕಟಮ್ಮ ವಾಸಿಸುತ್ತಿದ್ದ ಮನೆ ನೆಲಸಮವಾಗಿದೆ. ಸಂಕಷ್ಟದಲ್ಲಿದ್ದ ನಿವಾಸಿ ಮನೆಗೆ ತಾಲ್ಲೂಕು ಗ್ರೇಡ್ 2 ತಹಶೀಲ್ದಾರ್ ಪೂರ್ಣಿಮಾ ಭೇಟಿ ನೀಡಿ ಸಾಂತ್ವನ ಹೇಳಿದರು.

ತಾಲ್ಲೂಕಿನ ಕೊತ್ತನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗೊರಮಡಗು ಗ್ರಾಮದ ನಿವಾಸಿ ವೆಂಕಟಮ್ಮ ಹಲವಾರು ವರ್ಷಗಳಿಂದ ತನ್ನ ಮೊಮ್ಮಗನ ಜೊತೆ ವಾಸಿಸುತ್ತಿದ್ದಳು. ತಡರಾತ್ರಿ ಬಿದ್ದ ಧಾರಕಾರ ಮಳೆಗೆ ಮನೆಯೆಲ್ಲಾ ಶಿಥಿಲಗೊಂಡು ಕುಸಿದು ಬಿದ್ದಿರುವ ಘಟನೆ ನಡೆದಿದೆ. ಸ್ಥಳಕ್ಕೆ ಉಪ ತಹಶೀಲ್ದಾರ್ ಭೇಟಿ ನೀಡಿ ಮನೆಯನ್ನು ಪರಿಶೀಲಿಸಿ ವೃದ್ದೆಯನ್ನು ಬೇರೊಂದು ಮನೆಗೆ ಸ್ಥಳಾಂತರ ಮಾಡಿಸಿ ಆರೋಗ್ಯ ವಿಚಾರಣೆ ಮಾಡಿ ಧೈರ್ಯ ತುಂಬಿದರು. ನಂತರ ಮಾತ ನಾಡಿದ ಇತ್ತೀಚೆಗೆ ಸುರಿದ ಧಾರಾಕಾರ ಮಳೆಗೆ ಗೊರಮಡಗು ಗ್ರಾಮದಲ್ಲಿ ಇರುವ ವೃದ್ದೆಯ ಮನೆಯು ನೆಲಸಮವಾಗಿದ್ದು, ನಾನು ಸಹ ಸಂಪೂರ್ಣವಾಗಿ ಪರಿಶೀಲನೆ ಮಾಡಿದ್ದೇನೆ ಶೇ.80 ರಷ್ಟು ಮನೆ ಹಾನಿಯಾಗಿದೆ. ಸರ್ಕಾರಕ್ಕೆ ವರದಿಯನ್ನು ಕೂಡಲೇ ಸಲ್ಲಿಸುತ್ತೇನೆ. ಆದಷ್ಟು ಬೇಗ ಸರ್ಕಾರದಿಂದ 1.20 ಲಕ್ಷ ಹಣ ಬಿಡುಗಡೆ ಆಗುತ್ತದೆ ಹಾಗೂ ಸರ್ಕಾರದಿಂದ ಬರುವ ಎಲ್ಲಾ ಸೌಲಭ್ಯಗಳನ್ನು ವೃದ್ದೆ ವೆಂಕಟಮ್ಮ ಅವರಿಗೆ ಒದಗಿಸುವ ಕೆಲಸ ಮಾಡುತ್ತೇನೆ ಎಂದರು.


ಉದಯವಾಹಿನಿ ಚಿತ್ರ

**ಬೇರೊಂದು ಮನೆಗೆ ಸ್ಥಳಾಂತರ**

ಹಲವು ವರ್ಷಗಳಿಂದ ಈ ಗ್ರಾಮದ ದಲಿತ ಕಾಲೋನಿಗಳು ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿದ್ದು, ಚರಂಡಿ,ಸಿಸಿ ರಸ್ತೆಗಳ ಅಭಿವೃದ್ಧಿಯಾಗಬೇಕಿದೆ. ಗೋಮಾಳ ಜಮೀನಿನಲ್ಲಿ ಮನೆ ನಿರ್ಮಾಣ ಮಾಡಿರುವುದರಿಂದ ಹಕ್ಕು ಪತ್ರಗಳು ಇಲ್ಲದೇ ಪರದಾಡುತ್ತಿದ್ದಾರೆ. ಸರ್ವೇ ನಂಬರ್ ನಲ್ಲಿ ಮನೆ ನಿರ್ಮಾಣ ಆಗಿದೆ ಆದಷ್ಟು ಬೇಗ ಅಕ್ರಮ ಸಕ್ರಮ ಮಾಡಲು ತಾವು ದಯವಿಟ್ಟು ಪರಿಶೀಲಿಸಿ ಬಡವರಿಗೆ ಅನುಕೂಲ ಮಾಡಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದರು.

ಗ್ರಾಮದಲ್ಲಿ ಇರುವ ಸಮಸ್ಯೆಗಳನ್ನು ಲಿಖಿತವಾಗಿ ನಮಗೆ ಕೊಡಿ ನಂತರ ಪಶೀಲಿಸಿ ಸರ್ವೇ ಮಾಡಿ ಕ್ರಮವಹಿಸಲಾಗುವುದು ಎಂದು ಅಧಿಕಾರಿ ಗ್ರೇಡ್2 ತಹಶೀಲ್ದಾರ್ ಪೂರ್ಣಿಮಾ ತಿಳಿಸಿದರು.

ಗ್ರಾಮ ಲೆಕ್ಕಾಧಿಕಾರಿ ರೇವಣ್ಣ ಸಿದ್ದಪ್ಪ,ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪಾರ್ವತಮ್ಮ ಶ್ರೀನಿವಾಸ್, ಗ್ರಾಮದ ಮುಖಂಡ ನಾರಾಯಣಸ್ವಾಮಿ, ಸದಸ್ಯ ವೆಂಕಟರೋಣಪ್ಪ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಂಜುನಾಥ್,ಮುನಿವೀರಪ್ಪ,ಮುನಿಗಂಗಪ್ಪ, ಶ್ರೀರಾಮಪ್ಪ ಮತ್ತಿತರರು ಹಾಜರಿದ್ದರು.

## ಸಾಕಾನೆ ಶಿಬಿರಗಳಲ್ಲಿ ಹೆಣ್ಣಾನೆಗೆ ಬರ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಸಾಕಾನೆ ಶಿಬಿರಗಳಲ್ಲಿ ಹೆಣ್ಣಾನೆಗಳ ಸಂಖ್ಯೆ ತೀರಾ ಕಡಿಮೆ ಇದೆ. ಇದು ಗಂಡಾನೆಗಳ ನಡುವಿನ ಕಲಹಕ್ಕೆ ಕಾರಣವಾಗಿದೆ ಎಂದು ಮಾವುತರು ಹೇಳುತ್ತಾರೆ.

ಜಿಲ್ಲೆಯ ದುಬಾರೆಯಲ್ಲಿ 26, ಹಾರಂಗಿಯಲ್ಲಿ 6, ಮತ್ತಿಗೋಡುವಿನಲ್ಲಿ 11 ಸಾಕಾನೆಗಳಿವೆ. ಇವುಗಳ ಪೈಕಿ ದುಬಾರೆಯಲ್ಲಿ 3, ಮತ್ತಿಗೋಡುವಿನಲ್ಲಿ 2 ಹೆಣ್ಣಾನೆಗಳು ಮಾತ್ರವೇ ಇವೆ. ದುಬಾರೆ ಯಲ್ಲಿರುವ 3 ಹೆಣ್ಣಾನೆಗಳ ಪೈಕಿ 2ಕ್ಕೆ ವಯಸ್ಸಾಗಿದ್ದರೆ, ಮತ್ತೊಂದು ಮರಿಯಾನೆ. ಹಾಗೆಯೇ, ಮತ್ತಿಗೋಡು ವಿನಲ್ಲಿರುವ ಎರಡೂ ಹೆಣ್ಣಾನೆಗಳು ಮರಿಯಾನೆಗಳೇ ಆಗಿವೆ. ಹಾರಂಗಿಯಲ್ಲಿ ಒಂದೇ ಒಂದು ಹೆಣ್ಣಾನೆಯೂ ಇಲ್ಲ.

ಇದರಿಂದ ಗಂಡಾನೆಗಳ ನಡುವೆ ಕಾದಾಟ, ಕಲಹಗಳು ದಿನಂಪ್ರತಿ ಹೆಚ್ಚುತ್ತಿವೆ. ಈ ಆನೆಗಳನ್ನು ನಿಯಂತ್ರಿಸು ವಲ್ಲಿ ಮಾವುತರು ಮತ್ತು ಕಾವಾಡಿಗಳು ಹೈರಾಣಾಗುತ್ತಿದ್ದಾರೆ. ತುರ್ತಾಗಿ ಸದೃಢ ಹೆಣ್ಣಾನೆಗಳ ಅಗತ್ಯ ಇದೆ' ಎಂದು ಹೆಸರು ಬಹಿರಂಗಪಡಿಸಲು ಬಯಸದ ಮಾವುತರೊಬ್ಬರು ತಿಳಿಸಿದರು. ಭಾನುವಾರವಷ್ಟೇ ಧನಂಜಯ ಮತ್ತು ಕಂಜನ್ ನಡುವೆ ಕಾದಾಟ ಏರ್ಪಟ್ಟಿತ್ತು. ಇದರಿಂದ ಪ್ರವಾಸಿಗರಲ್ಲಿ ಮಾತ್ರವಲ್ಲ ಅರಣ್ಯಾಧಿಕಾರಿಗಳಲ್ಲೂ ಆತಂಕ ಸೃಷ್ಟಿಯಾಗಿತ್ತು. ಒಂದು ವೇಳೆ ಇರುವ ಗಂಡಾನೆಗಳಿಗೆ ಸಾಕಾಗುವಷ್ಟು ಸದೃಢ ಹೆಣ್ಣಾನೆಗಳು ಇದ್ದರೆ ಇಂತಹ ಕಾದಾಟ, ಕಲಹಗಳು ಉಂಟಾಗುವುದಿಲ್ಲ ಎಂದು ಅರಣ್ಯಾಧಿಕಾರಿಗಳೇ ಹೇಳುತ್ತಾರೆ.


ಉದಯವಾಹಿನಿ ಚಿತ್ರ

ಮೈಸೂರು ಜಿಲ್ಲೆಯ ಶಿಬಿರಗಳಲ್ಲೂ ವಿರಳ ಸಂಖ್ಯೆಯಲ್ಲೇ ಹೆಣ್ಣಾನೆಗಳಿವೆ. ಆದರೆ, ಬನ್ನೇರುಘಟ್ಟದಲ್ಲಿ ಸ್ವಲ್ಪ ಹೆಚ್ಚಿನ ಸಂಖ್ಯೆಯಲ್ಲಿ ಹೆಣ್ಣಾನೆಗಳಿದ್ದು, ಅಲ್ಲಿಂದ ಕೆಲವೊಂದನ್ನು ಕೊಡಗಿನ ಶಿಬಿರಗಳಿಗೆ ಕಳುಹಿಸಿಕೊಡುವಂತೆ ಈ ಹಿಂದೆಯೇ ಪ್ರಸ್ತಾವ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ' ಎಂದು ಹೆಸರು ಬಹಿರಂಗಪಡಿಸಲು ಬಯಸದ ಅರಣ್ಯಾಧಿಕಾರಿಯೊಬ್ಬರು ತಿಳಿಸಿದರು.

## ವಿದ್ಯುತ್ ತಂತಿ ತಗುಲಿ ಇಬ್ಬರು ದ್ವಿಚಕ್ರ ವಾಹನ ಸವಾರರು ಸ್ಥಳದಲ್ಲೇ ಸಾವು

• ಉದಯವಾಹಿನಿ, ಚಾಮರಾಜನಗರ

ಭಾರೀ ಮಳೆಗೆ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದ ವೇಳೆ ರಸ್ತೆ ಬದಿಯಲ್ಲಿ ಜೋತುಕೊಂಡಿದ್ದ ವಿದ್ಯುತ್ ತಂತಿ ತಗುಲಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಚಾಮರಾಜನಗರದಲ್ಲಿ ನಡೆದಿದೆ.

ಮೃತಪಟ್ಟವರನ್ನು ತಾಲ್ಲೂಕಿನ ಅಯ್ಯನಪುರ ಗ್ರಾಮದ ನಿವಾಸಿಗಳಾದ ನಾಗೇಂದ್ರ (48 ವ) ಮತ್ತು ಮಲ್ಲೇಶ್ (40 ವ) ಎಂದು ಗುರುತಿಸಲಾಗಿದೆ. ನಿನ್ನೆ ರಾತ್ರಿ ದ್ವಿಚಕ್ರ ವಾಹನದಲ್ಲಿ ಅಯ್ಯನಪುರ-ಹಿತ್ತಲಗುಡ್ಡೆ ರಸ್ತೆಯಲ್ಲಿ ತೆರಳುತ್ತಿದ್ದಾಗ, ವಿದ್ಯುತ್ ಕಂಬದ ಕೆಳಭಾಗದಲ್ಲಿ ಜೋತುಕೊಂಡಿದ್ದ ತಂತಿ ತಗುಲಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ.

ಸ್ಥಳಕ್ಕೆ ಪೂರ್ವ ಪೊಲೀಸ್ ಠಾಣೆ ಪೊಲೀಸರು ಭೇಟಿ ನೀಡಿದ್ದು, ಈವರೆಗೆ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ. ಆದರೇ ಚೆಸ್ಕಾಂ ವತಿಯಿಂದ ಸೂಕ್ತ ಪರಿಹಾರ ನೀಡುವಂತೆ ಆಗ್ರಹಿಸಿ ಮೃತರ ಸಂಬಂಧಿಕರು ಪ್ರತಿಭಟನೆ ನಡೆಸುವ ಸಾಧ್ಯತೆ ಇದೆ ಎಂದು ಸ್ಥಳೀಯರೊಬ್ಬರು ಮಾಹಿತಿ ನೀಡಿದರು.

## ನದಿಯಲ್ಲಿ ಕೊಚ್ಚಿ ಹೋಗುತ್ತಿದ್ದ ಎತ್ತಿನ ಗಾಡಿ ರಕ್ಷಣೆ

• ಉದಯವಾಹಿನಿ, ಶ್ರೀರಂಗಪಟ್ಟಣ

ಲೋಕಪಾವನಿ ನದಿಯ ನೀರಿನ ಸೆಳೆತಕ್ಕೆ ಸಿಕ್ಕಿ ಕೊಚ್ಚಿ ಹೋಗುತ್ತಿದ್ದ ಖಾಲಿ ಎತ್ತಿನ ಗಾಡಿಯನ್ನು ಪೊಲೀಸರು ಹಾಗೂ ಸ್ಥಳೀಯರು ಬುಧವಾರ ರಕ್ಷಿಸಿದರು.

ತಾಲ್ಲೂಕಿನ ಶ್ರೀನಿವಾಸ ಅಗ್ರಹಾರ ಗ್ರಾಮದ ರಾಜು ಅವರಿಗೆ ಸೇರಿದ ಖಾಲಿ ಎತ್ತಿನ ಗಾಡಿ ನೀರಿನ ಸೆಳೆತಕ್ಕೆ ಕೊಚ್ಚಿ ಹೋಗುತ್ತಿತ್ತು. ಗಾಡಿಯನ್ನು ತೊಳೆಯಲು ರಾಜು ಬಾಬುರಾಯನಕೊಪ್ಪಲು ಬಳಿ ಹರಿಯುವ ಲೋಕಪಾವನಿ ನದಿಗೆ ಎತ್ತುಗಳ ಸಹಿತ ಗಾಡಿಯನ್ನು ಇಳಿಸಿದಾಗ ಈ ಘಟನೆ ನಡೆಯಿತು.

ನೀರಿನ ಸೆಳೆತ ಹೆಚ್ಚಾದುದನ್ನು ಗಮನಿಸಿದ ರಾಜು ತಕ್ಷಣ ಎತ್ತುಗಳ ಹಗ್ಗಗಳನ್ನು ಬಿಚ್ಚಿದರು. ಎತ್ತುಗಳು ಈಜಿ ದಡ ಸೇರಿದವು. ರಾಜು ಕೂಡ ಈಜಿಕೊಂಡು ದಡಕ್ಕೆ ಬಂದರು.

ಆದರೆ ಗಾಡಿ ಸುಮಾರು 100 ಮೀಟರ್ ದೂರ ಕೊಚ್ಚಿಕೊಂಡು ಹೋಗಿ ಸೇತುವೆ ಸಿಕ್ಕಿಕೊಂಡಿತ್ತು. ಅಕ್ಕಪಕ್ಕದ ಗ್ರಾಮಗಳ ಜನರು ಗಾಡಿಯನ್ನು ದಡಕ್ಕೆ ತರಲು ಯತ್ನಿಸಿ ವಿಫಲರಾದರು. ಸ್ಥಳಕ್ಕೆ ಆಗಮಿಸಿದ ಪೊಲೀಸರು ಕ್ರೇನ್ ತರಿಸಿ ಗಾಡಿಯನ್ನು ಸುರಕ್ಷಿತವಾಗಿ ನದಿಯಿಂದ ಮೇಲೆ ಎತ್ತಿದರು. ನಾಗಮಂಗಲ ತಾಲ್ಲೂಕಿನಲ್ಲಿ ಹುಟ್ಟುವ ಲೋಕಪಾವನಿ ನದಿ ಕಳೆದ ಒಂದು ವಾರದಿಂದ ಮೈದುಂಬಿ ಹರಿಯುತ್ತಿದೆ.


ಉದಯವಾಹಿನಿ ಚಿತ್ರ

ನಾಗಮಂಗಲ ಮತ್ತು ಪಾಂಡವಪುರ ತಾಲ್ಲೂಕುಗಳಲ್ಲಿ ಬೀಳುವ ಮಳೆ ನೀರು ಈ ನದಿಗೆ ಸೇರುತ್ತಿದೆ. ದಿನದಿಂದ ದಿನಕ್ಕೆ ನದಿಯ ನೀರಿನ ಮಟ್ಟ ಹೆಚ್ಚುತ್ತಿದೆ.

# ಮೈಸೂರಿನ ಕಲಾ ಸುರುಚಿಯಲ್ಲಿ ಮತ್ತೆ ಸಾಹಿತ್ಯ ಚಾವಡಿ ಶುರು

● ಹೊಸ ಸಾಹಿತ್ಯ ಸೃಷ್ಟಿಗೂ ಮತ್ತು ಸಾಹಿತಿಗಳು ಓದುಗರ ನಡುವೆ ಸಂಬಂಧದ ಸೇತುವೆ ನಿರ್ಮಾಣಕ್ಕೂ ಇದು ಸಾಧ್ಯ

• ಉದಯವಾಹಿನಿ ಮೈಸೂರು

ಸಾಹಿತ್ಯಾಸಕ್ತರನ್ನು ಒಂದೆಡೆ ಸೇರಿಸಿ ಮುಖಾಮುಖಿ ಚರ್ಚೆಯ ಮೂಲಕ ಹಿರಿಯ ಮತ್ತು ಕಿರಿಯ ಸಾಹಿತಿಗಳೊಂದಿಗೆ ಸಾಹಿತ್ಯಾಸಕ್ತರನ್ನು ಒಂದೆಡೆ ಸೇರಿಸಿ ಸಾಹಿತ್ಯದ ವಾತಾವರಣವನ್ನು ನಿರ್ಮಿಸುವ ಕೆಲಸವನ್ನು ಮೈಸೂರಿನ ಕುವೆಂಪು ನಗರದಲ್ಲಿರುವ ಕಲಾ ಸುರುಚಿ ಮಾಡುತ್ತಾ ಬಂದಿದೆ.

ಎಲ್ಲೋ ಒಂದು ಕಡೆ ಸಾಹಿತ್ಯ ಚಟುವಟಿಕೆಗಳು ನಿಧಾನವಾಗಿ ನೇಪಥ್ಯಕ್ಕೆ ಸರಿಯುತ್ತಿದೆಯೇನೋ ಎಂಬ ಪರಿಸ್ಥಿತಿ ನಿರ್ಮಾಣವಾಗಿರುವ ಈ ಕಾಲದಲ್ಲಿ ಸಾಹಿತ್ಯ ಚಾವಡಿಯ ಮೂಲಕ ಒಂದು ಗೂಡಿಸಿ ಚರ್ಚೆಗೆ ದೂಡುವುದು ಆ ಮೂಲಕ ಹೊಸ ಸಾಹಿತ್ಯ ಸೃಷ್ಟಿಗೂ ಮತ್ತು ಸಾಹಿತಿಗಳು ಓದುಗರ ನಡುವೆ ಸಂಬಂಧದ ಸೇತುವೆ ನಿರ್ಮಾಣಕ್ಕೂ ಇದು ಸಾಧ್ಯವಾಗಿದೆ. ಮೈಸೂರಿನ ಕುವೆಂಪುನಗರದ ಸಿಂಧುವಳ್ಳಿ ಅನಂತಮೂರ್ತಿ ಅವರ ಸುರುಚಿ ರಂಗಮನೆಯಲ್ಲಿ 30-3-2008 ರಲ್ಲಿ ಸಾಹಿತ್ಯ ಚಾವಡಿಯು ಪ್ರಾರಂಭವಾಯಿತು. ಪ್ರತಿ ತಿಂಗಳ ಕೊನೆಯ ಈ ನಾಡಿನ ಹಿರಿ ಕಿರಿಯ ಸಾಹಿತಿಗಳೊಡನೆ ಸಾಹಿತ್ಯಾಸಕ್ತರು ಸೇರಿ ಸ್ಪಂದಿಸುತ್ತಾ ತೆರೆದ ಮುಖಾಮುಖಿ ಚರ್ಚೆಯಾಗುತ್ತಿತ್ತು.

ವರ್ಷದಲ್ಲಿ ಒಂದೆರಡು ಬಾರಿ 'ಸಾಹಿತಿ ಮತ್ತು ಬದುಕು' ಎನ್ನುವ ವಿಶೇಷ ಕಾರ್ಯಕ್ರಮವೂ ನಡೆಯುತ್ತಿತ್ತು. ಇದರಲ್ಲಿ ನಾಡಿನ ಸಾಹಿತ್ಯ ಸಾಧಕರು ಭಾಗವಹಿಸುತ್ತಿದ್ದರು.

ಈ ಕಾರ್ಯಕ್ರಮದಲ್ಲಿ ಸಾಹಿತಿಗಳ ಸಾಹಿತ್ಯ ಸಾಧನೆ ಮತ್ತು ಬದುಕಿನ ಬಗ್ಗೆ ಮುಕ್ತ ಚರ್ಚೆಯಾಗುತ್ತಿತ್ತು. ಈ ಚಾವಡಿಯು ನಿರಂತರ 145 ತಿಂಗಳುಗಳವರೆಗೆ ಕ್ರಿಯಾಶೀಲವಾಗಿದ್ದು, ಕೊರೊನಾ ಸಮಯದಲ್ಲಿ ಸ್ಥಗಿತಗೊಂಡಿತು. ಆ ನಂತರ ಮತ್ತೆ ಪ್ರಾರಂಭವಾದರೂ ಪ್ರತಿ ತಿಂಗಳ ಕಾರ್ಯಕ್ರಮದ ನಿರಂತರತೆಯನ್ನು ಕಾಪಾಡಿಕೊಳ್ಳಲು ಸಾಧ್ಯವಾಗಲಿಲ್ಲ. ಈಗ ಇದನ್ನು ಪುನಶ್ಚೇತನಗೊಳಿಸುವ ಕೆಲಸವನ್ನು ಮತ್ತೆ ಮಾಡಲಾಗುತ್ತಿರುವುದು ನಿಜಕ್ಕೂ ಶ್ಲಾಘನೀಯ ಕಾರ್ಯವಾಗಿದೆ. ಈ ಬಾರಿ ಮತ್ತೆ 27 ಅಕ್ಟೋಬರ್ 2024 ರಂದು ಬೆಳಿಗ್ಗೆ 10.30ಕ್ಕೆ ಸಾಹಿತಿ ವಸುಧೇಂದ್ರ ಅವರ ಹೊಸ ಕಾದಂಬರಿ 'ರೇಷ್ಮೆ ಬಟ್ಟೆ' ಬಗ್ಗೆ ಸಂವಾದವನ್ನು ಏರ್ಪಡಿಸಲಾಗಿದೆ. ಇದು 150 ನೇ ಮಾಸಿಕ ಸಾಹಿತ್ಯ ಚಾವಡಿಯಾಗಿದೆ ಎನ್ನುವುದೇ ಖುಷಿಯ ವಿಚಾರವಾಗಿದೆ. ವಿಶ್ವವಿದ್ಯಾಲಯ, ಸಂಘ ಸಂಸ್ಥೆಗಳು ಅಥವಾ ಸರಕಾರದ ನೆರವಿಲ್ಲದೆ ಜನಸಾಮಾನ್ಯ ಸಾಹಿತ್ಯ ಚಿಂತಕರ ಸಹ ಸ್ಪಂದನ ವೇದಿಕೆಯಾಗಿ ಕ್ರಿಯಾಶೀಲವಾಗುವ ಆದರ್ಶದೊಂದಿಗೆ ಮತ್ತೆ ಅಭಿಯಾನವನ್ನು ಪ್ರಾರಂಭಿಸಿರುವ ಈ ಚಾವಡಿಯನ್ನು ಮುನ್ನಡೆಸುವ ಜವಾಬ್ದಾರಿ ನಮ್ಮ ಸಮಾಜಕ್ಕಿದೆ ಎಂದು ನಂಬಲಾಗಿದೆ ಎನ್ನುವುದು ಕಲಾಸುರುಚಿ ಬಳಗದ ಆಶಯವಾಗಿದೆ. ಪ್ರವಾಸ ಪ್ರಿಯರಾಗಿರುವುದರಿಂದ ದೇಶ ವಿದೇಶಗಳನ್ನು ಸುತ್ತುವುದರಲ್ಲಿ ಆಸ್ಥೆ ಇರಿಸಿಕೊಂಡಿದ್ದಾರೆ. ಐಟಿ ಕ್ಷೇತ್ರದಲ್ಲಿ 20 ವರ್ಷ ಇದ್ದ ಶ್ರೀಯುತರು ಈಗ ತಮ್ಮದೇ ಪ್ರಕಾಶನ ಸಂಸ್ಥೆ ಛಂದವನ್ನು ನಡೆಸುತ್ತ, ಆಪ್ತಸಮಾಲೋಚಕರಾಗಿಯೂ ಕೆಲಸ ಮಾಡುತ್ತಿದ್ದಾರೆ. ವಸುಧೇಂದ್ರ ಅವರ ಚಾರಣ ಪ್ರೀತಿ ಅವರನ್ನು ಪ್ರಪಂಚದ ಎಲ್ಲ ಕಡೆ ಕರೆದೊಯ್ದಿದೆ. ತಾಂಜಾನಿಯಾದ ಕಿಲಿಮಾಂಜರೋ ಪರ್ವತ ಮತ್ತು ಹಿಮಾಲಯದ ಅನೇಕ ಪರ್ವತಗಳನ್ನು ಹತ್ತಿದ ಉತ್ಸಾಹಿ ವಸುಧೇಂದ್ರ, ತಮ್ಮ ಬಿಡುವಿನ ವೇಳೆಯಲ್ಲಿ ಅಭಿಜಾತ ಸಂಗೀತ ಕೇಳಲು ಬಯಸುತ್ತಾರೆ. ಇವರು ಈ ಬಾರಿಯ ಅತಿಥಿಯಾಗಿದ್ದಾರೆ ಎನ್ನುವುದು ಖುಷಿಯ ವಿಚಾರವಾಗಿದೆ.

**ವಿಮರ್ಶಕರ ಮತ್ತು ಓದುಗರ ಮನ್ನಣೆ**



ಉದಯವಾಹಿನಿ ಚಿತ್ರ

**ಕನ್ನಡದ ಹೊರಗೂ ಜನಪ್ರಿಯತೆ**

**ಈ ಬಾರಿಯ ಸಾಹಿತ್ಯಚಾವಡಿಯಲ್ಲಿ ವಸುಧೇಂದ್ರ ಅವರು ಪಾಲ್ಗೊಳ್ಳುತ್ತಿದ್ದು ಅವರ ಬಗ್ಗೆ ಹೇಳಬೇಕೆಂದರೆ, ವಸುಧೇಂದ್ರ ಕನ್ನಡದ ಹಿರಿಯ ಲೇಖಕರು. ಅವರು ತಮ್ಮ ಕಥೆ ಮತ್ತು ಕಾದಂಬರಿಗಳಿಂದ ಪ್ರಸಿದ್ಧರಾಗಿದ್ದಾರೆ. ಅವರ ಅನೇಕ ಪುಸ್ತಕಗಳು ಮರುಮುದ್ರಣಗಳನ್ನು ಕಂಡಿದ್ದು ವಿಮರ್ಶಕರ ಮತ್ತು ಓದುಗರ ಮನ್ನಣೆ ಪಡೆದಿವೆ. ಅವರ ಮೋಹನಸ್ವಾಮಿ ಅನೇಕ ಭಾಷೆಗಳಿಗೆ ಅನುವಾದ ವಾಗಿದ್ದು, ಕನ್ನಡದ ಹೊರಗೂ ಜನಪ್ರಿಯತೆ ಗಳಿಸಿದೆ.**

**ಇತ್ತೀಚೆಗೆ ಅವರು ಬರೆದ ಕಾದಂಬರಿ ತೇಜೋ ತುಂಗಭದ್ರಾದಲ್ಲಿ ಕರ್ನಾಟಕ ಮತ್ತು ಪೋರ್ಚುಗಲ್‌ಗಳನ್ನು ಬೆಸೆಯುವ, ವಿಜಯನಗರದ ಉತ್ತುಂಗ ಕಾಲದ ಕಥೆಯನ್ನು ಹೊಸ ರೀತಿಯಲ್ಲಿ ಹೇಳುವ ಪ್ರಯತ್ನವಿದೆ. ಅವರ ಮೊತ್ತ ಮೊದಲ ಕೃತಿ 'ನಮ್ಮಮ್ಮ ಅಂದ್ರೆ ನನಗಿಷ್ಟ' ಇಂದಿಗೂ ಜನಪ್ರಿಯವಾಗಿದೆ. ಕರ್ನಾಟಕ ಅಕಾಡೆಮಿ, ಮತ್ತು ಯು. ಆರ್ ಅನಂತಮೂರ್ತಿ ಪ್ರಶಸ್ತಿಗಳನ್ನು ಒಳಗೊಂಡು ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿರುವ ವಸುಧೇಂದ್ರ ಅವರು ಬೆಂಗಳೂರಿನಲ್ಲಿ ವಾಸವಾಗಿದ್ದಾರೆ.**

## ಮಿನಿ ನ್ಯೂಸ್

### ಉಪ ಚುನಾವಣೆ: ಯೋಗೇಶ್ವರ್ ನಾಮಪತ್ರ ಸಲ್ಲಿಕೆ ಮೆರವಣಿಗೆಗೆ ಸಿಎಂ, ಡಿಸಿಎಂ ಸಾಥ್

• ಉದಯವಾಹಿನಿ, ಚನ್ನಪಟ್ಟಣ

ಉಪ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸಿ.ಪಿ. ಯೋಗೇಶ್ವರ್ ಅವರ ನಾಮಪತ್ರ ಸಲ್ಲಿಕೆಯ ಮೆರವಣಿಗೆ ಪಟ್ಟಣದಲ್ಲಿ ಶುರುವಾಯಿತು. ಪಟ್ಟಣದ ಚಿಕ್ಕಮಳೂರಿನಲ್ಲಿರುವ ಕಾಂಗ್ರೆಸ್ ಕಚೇರಿಯಿಂದ ಶುರುವಾದ ಮೆರವಣಿಗೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಭೈರತಿ ಸುರೇಶ್, ರಾಮಲಿಂಗಾ ರೆಡ್ಡಿ, ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ, ಮಾಜಿ ಸಂಸದ ಡಿ.ಕೆ. ಸುರೇಶ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಭಾಗವಹಿಸಿದ್ದರು.ಬೆಂಗಳೂರು- ಮೈಸೂರು ರಸ್ತೆಯಲ್ಲಿ ಸಾಗಿದ ಮೆರವಣಿಗೆ ತಹಶೀಲ್ದಾರ್ ಕಚೇರಿ ತಲುಪಿತು. ಮೆರವಣಿಗೆಯುದ್ದಕ್ಕೂ ಕಾಂಗ್ರೆಸ್ ಧ್ವಜಗಳು ರಾರಾಜಿಸಿದವು. ಡೊಳ್ಳು, ತಮಟೆ ಕಲಾವಿದರು ಮೆರವಣಿಗೆಗೆ ಮೆರಗು ತಂದರು.

### ಹಾಡ ಹಗಲೇ ಮನೆಗೆ ನುಗ್ಗಿ ಒಂಟಿ ಮಹಿಳೆ ಹೆದರಿಸಿ ದರೋಡೆ

• ಉದಯವಾಹಿನಿ, ಮಂಡ್ಯ

ಜಿಲ್ಲೆಯಲ್ಲಿ ಬೆಚ್ಚಿ ಬೀಳಿಸೋ ಘಟನೆ ಎನ್ನುವಂತೆ ಮನೆಯೊಂದರಲ್ಲಿ ಒಂಟಿಯಾಗಿದ್ದಂತ ಮಹಿಳೆಯನ್ನು ಹೆದರಿಸಿದಂತ ಇಬ್ಬರು ಮುಸುಕುದಾರಿಗಳು, ಮಾರಕಾಸ್ತ್ರಗಳಿಂದ ಹೆದರಿಸಿ ನಗದು, ಚಿನ್ನಾಭರಣ ದೋಚಿ ಪರಾರಿಯಾಗಿರುವಂತ ಘಟನೆ ನಡೆದಿದೆ.

ಹೌದು ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನ ಮೆಳ್ಳಹಳ್ಳಿಯಲ್ಲಿ ಹಾಡು ಹಗಲೇ ಮನೆಗೆ ನುಗ್ಗಿ ಮಹಿಳೆಯನ್ನ ಹೆದರಿಸಿ ಕಳ್ಳತನ ನಡೆಸಲಾಗಿದೆ. ಹರ್ಷಿತಾ ಎಂಬಾಕೆ ಮನೆಯಲ್ಲಿ ಒಬ್ಬರೇ ಇದ್ದುದ್ದನ್ನ ಗಮನಿಸಿದ ಇಬ್ಬರು ಮುಸುಕುದಾರಿಗಳು ಮನೆಗೆ ನುಗ್ಗಿ ಮಾರಕಾಸ್ತ್ರದಿಂದ ಹೆಸರಿಸಿದ್ದಾರೆ. ಆ ಬಳಿಕ ಬೀರುವಿನಲ್ಲಿದ್ದ ಸುಮಾರು 25ಗ್ರಾಂ ಚಿನ್ನಾಭರಣ ಹಾಗೂ 1.60ಲಕ್ಷ ನಗದ ದೋಚಿ ಪರಾರಿಯಾಗಿದ್ದಾರೆ. ಘಟನಾ ಸ್ಥಳಕ್ಕೆ ಡಿವೈಎಸ್ಪಿ ಕೃಷ್ಣಪ್ಪ, ಸರ್ಕಲ್ ಇನ್ಸ್‌ಪೆಕ್ಟರ್ ಶಿವಕುಮಾರ್ ಹಾಗೂ ಪಿಎಸ್‌ಐ ಪುಟ್ಟಮಾದು ನೇತೃತ್ವದಲ್ಲಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ಕೆ.ಎಂ.ದೊಡ್ಡಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಇಂದಿನಿಂದ ಹಾಕಿ ರಸದೌತಣ

• ಉದಯವಾಹಿನಿ ಗೋಣಿಕೊಪ್ಪಲು

ದಕ್ಷಿಣ ಕೊಡಗಿನ ಕ್ರೀಡೆ ಮತ್ತು ಸಾಂಸ್ಕೃತಿಕ ಕೇಂದ್ರ ಎನ್ನಿಸಿಕೊಂಡಿರುವ ಪೊನ್ನಂಪೇಟೆ ಮತ್ತೊಂದು ಹಾಕಿ ಹಬ್ಬಕ್ಕೆ ಅಣಿಯಾಗುತ್ತಿದೆ.ಅ.24ರಿಂದ 30ರವರೆಗೆ ಮೈಸೂರು ವಿಭಾಗ ಮಟ್ಟ ಮತ್ತು ರಾಜ್ಯಮಟ್ಟದ ಪ್ರಾಥಮಿಕ ಹಾಗೂ ಪೌಢಶಾಲಾ ವಿದ್ಯಾರ್ಥಿಗಳ ಹಾಕಿ ಪಂದ್ಯಗಳು ಪೊನ್ನಂಪೇಟೆ ಕರ್ನಾಟಕ ಪಬ್ಲಿಕ್ ಶಾಲೆಯ ಟರ್ಫ್ ಮೈದಾನದಲ್ಲಿ ನಡೆಯಲಿವೆ.

ಇದಕ್ಕಾಗಿ ಟರ್ಫ್ ಮೈದಾನವನ್ನು ಸಜ್ಜುಗೊಳಿಸುವ ಕಾರ್ಯದಲ್ಲಿ ಟೂರ್ನಿ ಸಂಚಾಲಕ ಹಾಗೂ ಪೊನ್ನಂಪೇಟೆ ಸ್ಪೋರ್ಟ್ಸ್ ಹಾಸ್ಟೆಲ್ ತರಬೇತುದಾರ ಡ್ಯಾನಿ ಈರಪ್ಪ ತಮ್ಮ ಸಹಪಾಠಿಗಳೊಡನೆ ನಿರತರಾಗಿದ್ದಾರೆ. ಮೈದಾನದ ಸುತ್ತ ಸ್ವಚ್ಛಗೊಳಿಸಿ ಅಗತ್ಯವಿರುವ ಕಡೆ ನೀರು ಸಿಂಪಡಿಸಿದ್ದಾರೆ. ಗೋಲ್ ಪೋಸ್ಟ್, ಮೈದಾನದ ಮಾರ್ಕಿಂಗ್ ಮೊದಲಾದವುಗಳನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ. ಮೈದಾನ ಒಣಗದಂತೆ ನೀರು ಹಾಯಿಸಿ ಹಸಿರುಗೊಳಿಸಿದ್ದಾರೆ. ವಿಭಾಗ ಮಟ್ಟದ ಟೂರ್ನಿ ಸೆ.24 ಮತ್ತು 25ರಂದು ನಡೆಯಲಿದೆ. 14ರ ವಯೋಮಾನದೊಳಗಿನ ಬಾಲಕರ ವಿಭಾಗದಲ್ಲಿ ಮೈಸೂರು, ಹಾಸನ, ಮಂಗಳೂರು, ಕೊಡಗು ಜಿಲ್ಲೆಗಳ 4 ತಂಡಗಳು ಪಾಲ್ಗೊಳ್ಳಲಿವೆ. ಬಾಲಕಿಯರ ವಿಭಾಗದಲ್ಲಿ ಕೊಡಗು, ಹಾಸನ ಮತ್ತು ಮಂಗಳೂರು ಜಿಲ್ಲೆಯ 3 ತಂಡಗಳು ಭಾಗವಹಿಸಲಿವೆ. 17ರ ವಯೋಮಾನದ ಬಾಲಕರ ವಿಭಾಗದಲ್ಲಿ ಮೈಸೂರು, ಹಾಸನ, ಕೊಡಗು, ದಕ್ಷಿಣ ಕನ್ನಡ ಜಿಲ್ಲೆಗಳ ಒಟ್ಟು 4 ತಂಡಗಳು ಭಾಗವಹಿಸಲಿವೆ. ಬಾಲಕಿಯರ ವಿಭಾಗದಲ್ಲಿ ಕೊಡಗು, ಹಾಸನ ಮತ್ತು ಮಂಗಳೂರು ತಂಡಗಳು ಮಾತ್ರ ಪಾಲ್ಗೊಳ್ಳಲಿವೆ.

### ಕ್ರೀಡೆ ಮತ್ತು ಶಿಕ್ಷಣ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ: ನರೇಂದ್ರಕುಮಾರ್

• ಉದಯವಾಹಿನಿ,ಶಿಡ್ಲಘಟ್ಟ

ಕ್ರೀಡೆ ಮತ್ತು ಶಿಕ್ಷಣ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ, ಕ್ರೀಡೆ ಎಂಬುದು ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ಸದೃಢಗೊಳಿಸುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎ ನರೇಂದ್ರ ಕುಮಾರ್ ತಿಳಿಸಿದರು.

ನಗರದ ನೆಹರು ಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ನಡೆದ ತಾಲ್ಲೂಕು ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣದ ಜೊತೆಗೆ ಕ್ರೀಡೆಯನ್ನು ಸಮತೋಲನವಾಗಿ ನೋಡಬೇಕು. ಕ್ರೀಡೆಯಲ್ಲಿ ಸೋಲು, ಗೆಲುವನ್ನು ಸಮಾನವಾಗಿ ಸ್ವೀಕರಿಸಿದಾಗ ನಾವೆ ಲ್ಲರೂ ಒಂದೇ ಎಂಬ ಮನೋಭಾವ ಮೂಡುತ್ತದೆ. ಶಿಕ್ಷಣ ಮತ್ತು ಕ್ರೀಡೆಯಲ್ಲಿ ವಿಶಿಷ್ಟತೆ ಮೆರೆಯಬೇಕು. ಶಿಡ್ಲಘಟ್ಟ ತಾಲ್ಲೂಕು ವಿದ್ಯಾರ್ಥಿಗಳು ಕ್ರೀಡೆಯಲ್ಲಿ ಹೋಬಳಿ ಮಟ್ಟದಿಂದ ರಾಷ್ಟ್ರಮಟ್ಟದ ವರೆಗೂ ಹೆಸರು ಪಡೆಯಬೇಕು. ಕ್ರೀಡಾಪಟುಗಳು ಇಲ್ಲಿನ ಮಣ್ಣಿನ ಗುಣವನ್ನು ದೇಶಕ್ಕೆ ಸಾರಬೇಕು ಎಂದು ಸಲಹೆ ನೀಡಿದರು.

ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ದೇವೇಂದ್ರಪ್ಪ ಮಾತನಾಡಿ, ಕ್ರೀಡೆಗಳಲ್ಲಿ ಮಕ್ಕಳು ಭಾಗವಹಿಸುವುದರಿಂದ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಹೆಚ್ಚಳಕ್ಕೆ ಸಹಕಾರಿಯಾಗುತ್ತದೆ. ವಿದ್ಯಾರ್ಥಿಗಳು ತಮ್ಮ ಓದಿನ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲೂ ಭಾಗವಹಿಸಿ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಕ್ರೀಡೆಯಿಂದ ಶಿಸ್ತು, ಸಂಯಮ ಮತ್ತು ಆರೋಗ್ಯ ವೃದ್ಧಿಸುತ್ತದೆ.

ಕ್ರೀಡೆಯಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ. ಪ್ರತಿಯೊಬ್ಬರೂ ಗೆಲ್ಲಬೇಕು ಎಂದು ಕ್ರೀಡೆಯಲ್ಲಿ ಪಾಲ್ಗೊಳ್ಳುತ್ತಾರೆ. ಆದರೆ ಉತ್ತಮ ತರಬೇತಿ ಪರಿಣತಿಯನ್ನು ಹೊಂದಿದವರು ಮಾತ್ರ ಗೆಲವು ಸಾಧಿಸುತ್ತಾರೆ.

ಸೋಲು ಕೊನೆಯಲ್ಲ, ಗೆಲವು ಶಾಶ್ವತವಲ್ಲ ಎಂದರು. ತಾಲ್ಲೂಕು ದೈಹಿಕ ಶಿಕ್ಷಣ ಅಧ್ಯಕ್ಷ ಪ್ರಕಾಶ್ ಬಾಬು ಕೆವಿ,ಕಾರ್ಯದರ್ಶಿ ಕೃಷ್ಣಪ್ಪ ಬಿ.ಕೆ, ಖಜಾಂಚಿ ಸಿ.ಕೆ ರವಿ, ದೈಹಿಕ



ಉದಯವಾಹಿನಿ ಚಿತ್ರ

ಅಂತರಾಳದಿಂದ..

EDITORIAL

# ಚನ್ನಪಟ್ಟಣದ ಗೊಂಬೆಯಾಟ

ವರ್ಷಗಳ ಹಿಂದೆ ಚನ್ನಪಟ್ಟಣದ ಗೊಂಬೆಗಳ ಕುರಿತಂತೆ ಪ್ರಧಾನಿ ನರೇಂದ್ರ ಮೋದಿಯವರು 'ಮನ್ ಕಿ ಬಾತ್‌ನಲ್ಲಿ ಪ್ರಸ್ತಾಪಿಸಿದ್ದರು. ಇದೀಗ ಚನ್ನಪಟ್ಟಣದ ರಾಜಕೀಯ ಗೊಂಬೆಗಳು ದಿಲ್ಲಿ ವರಿಷ್ಠರ ಸೂತ್ರ ಹರಿದು ಸ್ವತಂತ್ರವಾಗಿ ಕುಣಿಯುವ ಮೂಲಕ ಮಾಧ್ಯಮಗಳಲ್ಲಿ ಸುದ್ದಿಯಲ್ಲಿವೆ. ರಾಜ್ಯದಲ್ಲಿ ನಡೆಯುವ ಉಪಚುನಾವಣೆಯು ಚನ್ನಪಟ್ಟಣದ ಕಾರಣಕ್ಕಾಗಿ ರಂಗು ಪಡೆದುಕೊಂಡಿದೆ. ಮಂಡ್ಯವೂ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಕೋಮು ವಿಷವನ್ನು ಹರಡುವುದಕ್ಕಾಗಿ ಜೆಡಿಎಸ್‌ನ ಸಂಗ ಆರೆಸ್ಸೆಸ್‌ಗೂ ಬೇಕಾಗಿದೆ ಜೆಡಿಎಸ್ ಸ್ಥಿತಿ ಎಷ್ಟು ದಯನೀಯವಾಗಿದೆಯೆಂದರೆ ಬಿಜೆಪಿಯ ಅಭ್ಯರ್ಥಿಯಾದರೂ ಸರಿ, ಜೆಡಿಎಸ್ ಪಕ್ಷದಿಂದ ಸ್ಪರ್ಧಿಸಿದರೆ ಸಾಕು ಎಂದು ಅಂಗಲಾಚುವ ಮಟ್ಟಕ್ಕೆ ಇಳಿದಿದೆ. ಬಿಜೆಪಿಯಿಂದ ಸ್ಪರ್ಧಿಸಲು ಅವಕಾಶವಿಲ್ಲ ಎಂದಾದರೆ ಸ್ವತಂತ್ರವಾಗಿ ಸ್ಪರ್ಧಿಸುತ್ತೇನೆಯೇ ಹೊರತು, ಜೆಡಿಎಸ್‌ನಿಂದ ಸ್ಪರ್ಧಿಸಲಾರೆ ಎಂದು ಟಿಕೆಟ್ ಆಕಾಂಕ್ಷಿ ಸಿ.ಪಿ.ಯೋಗೇಶ್ವರ್ ಘೋಷಿಸಿದ್ದರು. ಇದೀಗ ಬಿಜೆಪಿಯಿಂದ ಟಿಕೆಟ್ ಸಿಗುವುದಿಲ್ಲ ಎನ್ನುವುದು ಖಚಿತವಾಗುತ್ತಿದ್ದಂತೆಯೇ ಕಾಂಗ್ರೆಸ್‌ಗೆ ಪಕ್ಷಾಂತರಗೊಂಡಿದ್ದಾರೆ. ಎರಡು ಬಾರಿ ಕುಮಾರಸ್ವಾಮಿ ಅವರು ಸ್ಪರ್ಧಿಸಿ ಗೆದ್ದಿರುವ ಕಾರಣಕ್ಕಾಗಿ, ಚನ್ನಪಟ್ಟಣದ ಮೇಲೆ ಜೆಡಿಎಸ್ ಹಕ್ಕು ಸಾಧಿಸುತ್ತದೆ. ಚನ್ನಪಟ್ಟಣದ ರಾಜಕೀಯ ಇತಿಹಾಸವನ್ನು ನೋಡಿದರೆ ಅದು ಯಾವುದೇ ಪಕ್ಷಕ್ಕೂ ನಿಷ್ಠೆಯನ್ನು ಪ್ರದರ್ಶಿಸಿದ ಕ್ಷೇತ್ರವಲ್ಲ ಅನೇಕ ಸಂದರ್ಭದಲ್ಲಿ ಅದು ಪಕ್ಷಕ್ಕಿಂತ ವ್ಯಕ್ತಿಯನ್ನು ನೆಚ್ಚಿಕೊಂಡಿದೆ. ಮಾಜಿ ಮುಖ್ಯಮಂತ್ರಿ ಎನ್ನುವ ಕಾರಣಕ್ಕಾಗಿ ಕುಮಾರಸ್ವಾಮಿಯವರನ್ನು ಗೆಲ್ಲಿಸಿದ ಚನ್ನಪಟ್ಟಣ, ಅನಿತಾ ಕುಮಾರಸ್ವಾಮಿಯವರನ್ನು ಸೋಲಿಸಲು ಹಿಂದೆ ಮುಂದೆ ನೋಡಲಿಲ್ಲ. ಹಾಗೆ ನೋಡಿದರೆ ಈ ಕ್ಷೇತ್ರದ ಮೇಲೆ ಕುಮಾರಸ್ವಾಮಿಗಿಂತಲೂ ಯೋಗೇಶ್ವರ್ ಅವರಿಗೆ ಹೆಚ್ಚು ಹಿಡಿತವಿದೆ ಎನ್ನುವುದನ್ನು ಈ ಹಿಂದಿನ ರಾಜಕೀಯ ಅಂಕಿಸಂಕಿಗಳು ಸ್ಪಷ್ಟಪಡಿಸುತ್ತವೆ. 2018 ಮತ್ತು 2023ರಲ್ಲಿ ಎಚ್.ಡಿ. ಕುಮಾರಸ್ವಾಮಿಯವರು ಬಿಜೆಪಿಯ ಸಿ.ಪಿ.ಯೋಗೇಶ್ವರ್ ಅವರ ವಿರುದ್ಧ ಗೆದ್ದಿರುವುದೇನೋ ನಿಜ. ಆದರೆ, ಈ ಕ್ಷೇತ್ರವನ್ನು ಜೆಡಿಎಸ್ ಎರಡು ಬಾರಿ ಗೆದ್ದಿದ್ದರೆ, ಯೋಗೇಶ್ವರ್ ಐದು ಬಾರಿ ಗೆದ್ದಿದ್ದಾರೆ. ಅವರು ಯಾವುದೇ ಒಂದು ಪಕ್ಷವನ್ನು ನೆಚ್ಚಿಕೊಂಡು ಗೆದ್ದವರಲ್ಲ ಎರಡು ಬಾರಿ ಕಾಂಗ್ರೆಸ್‌ನಿಂದ, ಒಂದು ಬಾರಿ ಬಿಜೆಪಿಯಿಂದ ಮತ್ತೊಂದು ಬಾರಿ ಸಮಾಜವಾದಿ ಪಾರ್ಟಿಯಿಂದ ಮಾತ್ರವಲ್ಲ ಒಂದು ಬಾರಿ ಸ್ವತಂತ್ರ ಅಭ್ಯರ್ಥಿಯಾಗಿಯೂ ಗೆದ್ದಿದ್ದಾರೆ. ಯಾವುದೇ ರಾಷ್ಟ್ರೀಯ ಅಥವಾ ಪ್ರಾದೇಶಿಕ ಪಕ್ಷದ ಬೆಂಬಲವಿಲ್ಲದೆ ಪಕ್ಷೇತರನಾಗಿ ನಿಂತಾಗಲೂ ಗೆಲ್ಲಿಸಿದ ಕ್ಷೇತ್ರವನ್ನು ಯೋಗೇಶ್ವರ್ ಕೈ ಬಿಟ್ಟರೆ ತಮ್ಮ ರಾಜಕೀಯ ಭವಿಷ್ಯಕ್ಕೆ ತಾವೇ ಕಲ್ಲು ಹಾಕಿಕೊಂಡ ಹಾಗೆ. ಈ ಕಾರಣದಿಂದಲೇ ಅವರು ಚನ್ನಪಟ್ಟಣದಲ್ಲಿ ಬಿಜೆಪಿಯಿಂದ ಟಿಕೆಟ್‌ಗಾಗಿ ಪಟ್ಟು ಹಿಡಿದು ಕೂತಿದ್ದರು. ಹಿಡಿದ ಪಟ್ಟನ್ನು ಅವರು ಬಿಡುವುದಿಲ್ಲ ಎನ್ನುವುದು ಮನವರಿಕೆಯಾಗಿಯೇ 'ಹಾಗಾದರೆ ಜೆಡಿಎಸ್‌ನಿಂದಲೇ ಸ್ಪರ್ಧಿಸಿ' ಎಂದು ಕುಮಾರಸ್ವಾಮಿ ಮನವಿ ಮಾಡಿಕೊಂಡರು. ಯಾಕೆಂದರೆ ಯೋಗೇಶ್ವರ್ ಬಂಡಾಯ ಅಭ್ಯರ್ಥಿಯಾಗಿ ನಿಂತರೆ, ಜೆಡಿಎಸ್‌ಗೆ ಸೋಲು ಕಟ್ಟಿಟ್ಟ ಬುತ್ತಿ ಬಿದ್ದರೂ ಮೀಸೆ ಮಣ್ಣಾಗಲಿಲ್ಲ ಎಂದು ಹೇಳಿಕೊಳ್ಳುವ ಅವಕಾಶಕ್ಕಾಗಿ ಜೆಡಿಎಸ್‌ನಿಂದ ಯೋಗೇಶ್ವರ್ ಅವರಿಗೆ ಟಿಕೆಟ್ ನೀಡುವ ನಿರ್ಧಾರಕ್ಕೆ ಕುಮಾರಸ್ವಾಮಿ ಬಂದಿದ್ದರು. ಆದರೆ ಜೆಡಿಎಸ್‌ನಿಂದ ಚುನಾವಣೆಗೆ ನಿಂತು ಗೆಲುವಿನ ಹೆಗ್ಗಳಿಕೆಯನ್ನು ಗೌಡರ ಕುಟುಂಬಕ್ಕೆ ಒಪ್ಪಿಸುವುದಕ್ಕಿಂತ ಸ್ವತಂತ್ರವಾಗಿ ಸ್ಪರ್ಧಿಸುವುದು ಅಥವಾ ಕಾಂಗ್ರೆಸ್‌ನಿಂದ ಸ್ಪರ್ಧಿಸುವುದೇ ಬುದ್ಧಿವಂತಿಕೆ ಎಂದು ಯೋಗೇಶ್ವರ್ ಅವರು ಭಾವಿಸಿರಬೇಕು. ಮೈತುಂಬಾ ಕಳಂಕವನ್ನು ಹೊತ್ತುಕೊಂಡ ಜೆಡಿಎಸ್‌ನಿಂದ ಯೋಗೇಶ್ವರ್ ಸ್ಪರ್ಧಿಸದೇ ಇರುವ ಮೂಲಕ ಮುತ್ಸದ್ದಿತನವನ್ನು ಪ್ರದರ್ಶಿಸಿದ್ದಾರೆ. ಸದ್ಯಕ್ಕೆ ರೇವಣ್ಣ ಪ್ರಜ್ವಲ್ ಗೌಡ, ಸೂರಜ್ ಗೌಡ ಅವರು ತಮ್ಮ ಲೈಂಗಿಕ ಹಗರಣಗಳಿಂದ ಜೆಡಿಎಸ್‌ಗೆ ಅದೆಂತಹ ಕಳಂಕವನ್ನು ತಂದಿಟ್ಟಿದ್ದಾರೆ ಎಂದರೆ, ಮಾನೆ ಮರ್ಯಾದೆ ಎಂದು ಅಂಜುವ ಯಾವ ಸಭ್ಯ ರಾಜಕಾರಣಿಯೂ ಅತ್ತ ಕಡೆ ಹಾಯಲಾರ. ಅದುದರಿಂದ ಸಹಜವಾಗಿಯೇ ಯೋಗೇಶ್ವರ್ ಜೆಡಿಎಸ್‌ನಿಂದ ಸ್ಪರ್ಧಿಸಲು ಹಿಂದೇಟು ಹಾಕಿದ್ದಾರೆ. ಇದೇ ಸಂದರ್ಭದಲ್ಲಿ ಸ್ವತಂತ್ರವಾಗಿ ಸ್ಪರ್ಧಿಸುವ ನಿರ್ಧಾರದಿಂದ ಕೊನೆಯ ಕ್ಷಣದಲ್ಲಿ ಹಿಂದೆ ಸರಿದು ಕಾಂಗ್ರೆಸ್ ಟಿಕೆಟ್‌ನಿಂದ ಸ್ಪರ್ಧಿಸಲು ಮುಂದಾಗಿದ್ದಾರೆ. ಇದರಿಂದ ಕಾಂಗ್ರೆಸ್‌ಗೂ ಲಾಭವಿದೆ, ಜೊತೆಗೇ ಯೋಗೇಶ್ವರ್ ಅವರಿಗೂ ಲಾಭವಿದೆ. ಯೋಗೇಶ್ವರ್ ಅಧಿಕಾರವನ್ನು ಗುರಿಯಾಗಿಟ್ಟುಕೊಂಡು ಬಿಜೆಪಿ ಸೇರಿದ್ದಾರೆಯೇ ಹೊರತು, ಬಿಜೆಪಿಯ ಸಿದ್ಧಾಂತದ ಮೇಲಿನ ನಂಬಿಕೆಯಿಂದ ಅಲ್ಲ ಅವರ ಈ ಹಿಂದಿನ ರಾಜಕೀಯ ನಡೆಗಳನ್ನು ನೋಡಿದರೆ ಇದು ಸ್ಪಷ್ಟವಾಗುತ್ತದೆ. ಅವರು ತಕ್ಕಂತೆ ಪಕ್ಷಗಳನ್ನು ಬದಲಾಯಿಸುತ್ತಾ ಬಂದಿದ್ದಾರೆ. ಅವರನ್ನು ಪಕ್ಷಗಳು ಬಳಸಿದ್ದಕ್ಕಿಂತ ರಾಜಕೀಯ ಪಕ್ಷಗಳನ್ನು ಅವರು ಬಳಸಿಕೊಂಡದ್ದೇ ಹೆಚ್ಚು ಅವರಿಗೆ ತಮ್ಮ ಸ್ವಂತ ವರ್ಚಸ್ಸಿನ ಮೇಲೆಯೇ ಹೆಚ್ಚು ನಂಬಿಕೆಯಿದ್ದಂತಿದೆ. ಸದ್ಯಕ್ಕೆ ಹೇಗಾದರೂ ಸರಿ, ಬಿಜೆಪಿ, ಜೆಡಿಎಸ್ಗೆ ಮುಖಭಂಗವನ್ನುಂಟು ಮಾಡುವುದು ಕಾಂಗ್ರೆಸ್ ಗುರಿಯಾದರೆ, ಯೋಗೇಶ್ವರ್‌ಗೆ ಈ ಚುನಾವಣೆಯಲ್ಲಿ ಗೆದ್ದರೆ ಸರಕಾರದಲ್ಲಿ ಉನ್ನತ ಸ್ಥಾನವನ್ನು ಸುಲಭದಲ್ಲಿ ತನ್ನದಾಗಿಸಲು ಸಾಧ್ಯವಾಗುತ್ತದಕಾಂಗ್ರೆಸ್ ಸರಕಾರವಿರುವುದರಿಂದ, ಚನ್ನಪಟ್ಟಣವನ್ನು ಗೆಲ್ಲಲು ಅವರಿಗೆ ಅದು ಪೂರಕವಾಗಬಹುದು. ಚನ್ನಪಟ್ಟಣ ಒಕ್ಕಲಿಗ ಸಮುದಾಯದ ಪ್ರಾಬಲ್ಯವನ್ನು ಹೊಂದಿರುವ ಕ್ಷೇತ್ರ, ಯೋಗೇಶ್ವರ್ ಒಕ್ಕಲಿಗರು ಮಾತ್ರವಲ್ಲ, ಅವರ ಬೆನ್ನಿಗೆ ನಿಂತಿರುವ ಡಿ.ಕೆ. ಶಿವಕುಮಾರ್ ಕೂಡ ಒಕ್ಕಲಿಗರು, ಜೆಡಿಎಸ್‌ನ ಲೈಂಗಿಕ ಹಗರಣಗಳಿಂದ ಒಕ್ಕಲಿಗ ಸಮುದಾಯ ತೀವ್ರ ಮುಜುಗರವನ್ನು ಅನುಭವಿಸುತ್ತಿದೆ ಮಾತ್ರವಲ್ಲ. ಒಕ್ಕಲಿಗ ಯುವಕರನ್ನು ಆರೆಸ್ಸೆಸ್ ಹೊಡಿಬಡಿ ರಾಜಕೀಯಕ್ಕೆ ಕುಮಾರಸ್ವಾಮಿ ಬಲಿಕೊಡುತ್ತಿರುವ ಬಗ್ಗೆಯೂ ಒಕ್ಕಲಿಗ ಸಮುದಾಯದ ಹಿರಿಯರಲ್ಲಿ ಅಸಮಾಧಾನಗಳಿವೆ. ಇಂತಹ ಸಂದರ್ಭದಲ್ಲಿ ಚನ್ನಪಟ್ಟಣದ ಒಕ್ಕಲಿಗರಿಗೆ ಯೋಗೇಶ್ವರ್ ಅಲ್ಲದೇ ಬೇರೆ ಆಯ್ಕೆಯೇ ಇಲ್ಲ ಎನ್ನುವ ಸ್ಥಿತಿಯಿದೆ. ಇದೇ ಸಂದರ್ಭದಲ್ಲಿ ದಲಿತರು ಮತ್ತು ಮುಸ್ಲಿಮರೂ ಕಾಂಗ್ರೆಸನ್ನು ಈ ಬಾರಿ ಪೂರ್ಣ ಪ್ರಮಾಣದಲ್ಲಿ ತಬ್ಬಿಕೊಳ್ಳುವ ಲಕ್ಷಣಗಳಿವೆ.

**ಮಾಜಿ ಮುಖ್ಯಮಂತ್ರಿ, ಹಾಲಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ತೆರವು ಮಾಡಿರುವ ಕ್ಷೇತ್ರ ಇದಾಗಿರುವುದರಿಂದ ಈ ಕ್ಷೇತ್ರವನ್ನು ಬಿಜೆಪಿಯು ಬಿಟ್ಟುಕೊಡುವ ಮೂಲಕ ಎನ್‌ಡಿಎ ಮೈತ್ರಿಯನ್ನು ಎತ್ತಿ ಹಿಡಿಯಬೇಕು ಎನ್ನುವುದು ಜೆಡಿಎಸ್ ಪಟ್ಟು ಈ ಮೂಲಕ, ರಾಜ್ಯದಲ್ಲಿ ತನ್ನ ಸುಪುತ್ರ ನಿಖಿಲ್ ಕುಮಾರಸ್ವಾಮಿಗೆ ಒಂದು ನೆಲೆಯನ್ನು ಒದಗಿಸಿಕೊಡುವುದು ಕುಮಾರಸ್ವಾಮಿ ಅವರ ಒಳಗಿನ ಹಂಬಲ. ಚನ್ನಪಟ್ಟಣದಲ್ಲಿ ತನ್ನ ಪಾಲನ್ನು ಪಡೆದುಕೊಳ್ಳಲು ವಿಫಲವಾದರೆ, ಅದು ಜೆಡಿಎಸ್ ಭಾರೀ ಮುಖಭಂಗವಾಗಲಿದೆ ಮಾತ್ರವಲ್ಲ ಬಿಜೆಪಿ-ಜೆಡಿಎಸ್ ಮೈತ್ರಿಯ ಮೇಲೆ ಅದು ಪರಿಣಾಮ ಬೀರಲಿದೆ. ಸದ್ಯಕ್ಕೆ ಬಿಜೆಪಿಗೆ ಜೆಡಿಎಸ್ ಬೇಡವಾದರೂ, ಜೆಡಿಎಸ್‌ನ ತೆಕ್ಕೆಯಲ್ಲಿರುವ ಒಕ್ಕಲಿಗ ಸಮುದಾಯದ ಅಗತ್ಯವಿದೆ.**

# ಧನ ತ್ರಯೋದಶಿಯ ದಿನದಂದು ಹೊಸ ಚಿನ್ನ ಖರೀದಿಸುವ ವಾಡಿಕೆ

• ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

ಇದನ್ನೇ ಆಡುಭಾಷೆಯಲ್ಲಿ 'ಧನತೇರಸ್' ಎನ್ನುತ್ತಾರೆ. ಈ ದಿನ ವ್ಯಾಪಾರಿಗಳು ತಿಜೋರಿಯನ್ನು ಪೂಜಿಸುತ್ತಾರೆ. ವ್ಯಾಪಾರಿ ವರ್ಷವು ಒಂದು ದೀಪಾವಳಿಯಿಂದ ಇನ್ನೊಂದು ದೀಪಾವಳಿಯ ವರೆಗೆ ಇರುತ್ತದೆ. ಹೊಸ ವರ್ಷದ ಲೆಕ್ಕದ ಖಾತೆ-ಪುಸ್ತಕಗಳನ್ನು ಈ ದಿನವೇ ತರುತ್ತಾರೆ. ನಮ್ಮ ಜೀವನವು ಧನದಿಂದಾಗಿ ಸರಿಯಾಗಿ ನಡೆದಿರುತ್ತದೆ, ಆದುದರಿಂದ ಈ ಧನವನ್ನು ಪೂಜಿಸುತ್ತಾರೆ. ಇಲ್ಲಿ ಧನವೆಂದರೆ ಶುದ್ಧ ಲಕ್ಷ್ಮೀ. ಶ್ರೀಸೂಕ್ತದಲ್ಲಿ ವಸು, ಜಲ, ವಾಯು, ಅಗ್ನಿ ಮತ್ತು ಸೂರ್ಯ ಇವುಗಳಿಗೆ ಧನವೆಂದೇ ಹೇಳಲಾಗಿದೆ. ಯಾವ ಧನಕ್ಕೆ ನಿಜವಾದ ಅರ್ಥವಿದೆಯೋ ಅವಳೇ ನಿಜವಾದ ಲಕ್ಷ್ಮಿ ! ಇಲ್ಲದಿದ್ದಲ್ಲಿ ಅಲಕ್ಷ್ಮೀಯಿಂದ ಅನರ್ಥವಾಗುತ್ತದೆ.

ಧನತ್ರಯೋದಶಿಯ ದಿನದಂದು ಹೊಸ ಚಿನ್ನವನ್ನು ಖರೀದಿಸುವ ವಾಡಿಕೆಯಿದೆ. ಇದರಿಂದ ವರ್ಷವಿಡೀ ಮನೆಯಲ್ಲಿ ಧನಲಕ್ಷ್ಮೀ ವಾಸಿಸುತ್ತಾಳೆ. ವಾಸ್ತವದಲ್ಲಿ ಲಕ್ಷ್ಮೀ ಪೂಜೆಯ ಸಮಯದಲ್ಲಿ ಇಡೀ ವರ್ಷದ ಜಮಾಖರ್ಚನ್ನು ಕೊಡುವುದಿರುತ್ತದೆ. ಧನತ್ರಯೋದಶಿಯವರೆಗೆ ಬಾಕಿ ಉಳಿದ ಸಂಪತ್ತನ್ನು ಪ್ರಭುಕಾರ್ಯಕ್ಕಾಗಿ ಖರ್ಚು ಮಾಡಿದರೆ, ಸತ್‌ಕಾರ್ಯಕ್ಕಾಗಿ ಧನವು ಖರ್ಚಾಗುವುದರಿಂದ ಧನಲಕ್ಷ್ಮೀಯು ಕೊನೆತನಕ ಲಕ್ಷ್ಮೀರೂಪದಲ್ಲಿ ಮನೆಯಲ್ಲಿ ಇರುತ್ತಾಳೆ. ಧನವೆಂದರೆ ಹಣ. ಈ ಹಣವು ಕಪ್ಪು ಹಣವಾಗಿರದೇ, ಸ್ವತಃ ಕಷ್ಟದಿಂದಗಳಿಸಿದ ಮತ್ತು ಇಡೀ ವರ್ಷದಲ್ಲಿ ಒಂದೊಂದು ಪೈಸೆಯನ್ನು ಜಮೆ ಮಾಡಿದ್ದಾಗಿರಬೇಕು. ಈ ಹಣದಲ್ಲಿ ಕನಿಷ್ಠಪಕ್ಷ 1/6 ರಷ್ಟು ಭಾಗವನ್ನು ಪ್ರಭುಕಾರ್ಯಕ್ಕಾಗಿ ಖರ್ಚು ಮಾಡಬೇಕು, ಎಂದು ಶಾಸ್ತ್ರವು ಹೇಳುತ್ತದೆ. ಹಿಂದಿನ ಕಾಲದಲ್ಲಿ ರಾಜ-ಮಹಾರಾಜರು ವರ್ಷದ ಕೊನೆಯಲ್ಲಿ ತಮ್ಮ ಸಂಪೂರ್ಣ ಖಜಾನೆಯನ್ನು ಸತ್ಪಾತ್ರರಿಗೆ ದಾನ ಮಾಡಿ ಖಾಲಿ ಮಾಡುತ್ತಿದ್ದರು. ಆಗ ಅವರಿಗೆ ನಾವು ಧನ್ಯರಾದೆವೆಂದು ಅನಿಸುತ್ತಿತ್ತು. ಇದರಿಂದಾಗಿ ಜನತೆ, ರಾಜನ ನಡುವಿನ ಸಂಬಂಧವು ಕೌಟುಂಬಿಕ ಸ್ವರೂಪದ್ದಾಗಿತ್ತು. ರಾಜನ ಖಜಾನೆಯು ಜನತೆಯದ್ದಾಗಿದ್ದು ರಾಜನು ಕೇವಲ ಆ ಖಜಾನೆಯ ಸಂರಕ್ಷಕನಾಗಿರುತ್ತಿದ್ದನು. ಇದರಿಂದ ಜನರು ಸಹ ಯಾವುದೇ ಪ್ರತಿಬಂಧವಿಲ್ಲದೇ ತೆರಿಗೆಯನ್ನು ನೀಡುತ್ತಿದ್ದರು. ಸಹಜವಾಗಿಯೇ ಖಜಾನೆಯು ಪುನಃ ತುಂಬುತ್ತಿತ್ತು. ಧನವನ್ನು ಸತ್‌ಕಾರ್ಯಕ್ಕಾಗಿ ವಿನಿಯೋಗಿಸುವುದರಿಂದ ಆತ್ಮಬಲವು ಹೆಚ್ಚಾಗುತ್ತದೆ. ಹಣವೆಂದರೆ ಕೇವಲ ಧನವಾಗಿಲ್ಲ, ಪಂಚಮಹಾಭೂತಗಳೇ ನಿಜವಾದ ಧನಗಳಾಗಿವೆ. ಯಾವುದರಿಂದ ನಮ್ಮ ಜೀವನದ ಪೋಷಣೆಯು ಸುವ್ಯವಸ್ಥಿತವಾಗಿ ನಡೆಯುತ್ತದೆಯೋ ಅಂತಹ ಧನವನ್ನು ಪೂಜಿಸುತ್ತಾರೆ. ಇಲ್ಲಿ ಧನ ಎಂದರೆ ಶುದ್ಧ ಲಕ್ಷ್ಮೀ. ಶ್ರೀಸೂಕ್ತದಲ್ಲಿ ಭೂಮಿ, ಜಲ, ವಾಯು, ಅಗ್ನಿ, ಸೂರ್ಯ ಇವುಗಳನ್ನು ಧನವೆಂದೇ ಕರೆಯಲಾಗಿದೆ. ಯಾವ ಧನಕ್ಕೆ ನಿಜವಾದ ಅರ್ಥವಿದೆಯೋ ಅದುವೇ ನಿಜವಾದ ಲಕ್ಷ್ಮೀ.

**ವೈದ್ಯರು ದಿನ ಧನ್ವಂತರಿಯ ಪೂಜೆ**

**ಯಮದೀಪದಾನ :** ಯಮರಾಜನ ಕಾರ್ಯವು ಪ್ರಾಣಹರಣ ಮಾಡುವುದಾಗಿದೆ. ಕಾಲಮೃತ್ಯುವು ಯಾರಿಗೂ ತಪ್ಪಿಲ್ಲ ಮತ್ತು ಅದನ್ನು ತಪ್ಪಿಸಲೂ ಆಗುವುದಿಲ್ಲ. ಆದರೆ ಅಕಾಲ ಮೃತ್ಯುವು ಯಾರಿಗೂ ಬರಬಾರದೆಂದು ಧನತ್ರಯೋದಶಿಯಂದು ಯಮಧರ್ಮನಿಗೆ ಕಣಕದಿಂದ ತಯಾರಿಸಿದ ಎಣ್ಣೆಯ ದೀಪವನ್ನು ತಯಾರಿಸಿ ಸಂಜೆಯ ಹೊತ್ತಿನಲ್ಲಿ ಮನೆಯ ಹೊರಗೆ ದಕ್ಷಿಣಕ್ಕೆ ಮುಖ ಮಾಡಿಡಬೇಕು. ಇತರ ಯಾವುದೇ ದಿನದಂದು ದೀಪವನ್ನು ದಕ್ಷಿಣ ದಿಕ್ಕಿಗೆ ಮುಖ ಮಾಡಿ ಇಡುವುದಿಲ್ಲ. ಈ ದಿನ ಮಾತ್ರ ದೀಪವನ್ನು ದಕ್ಷಿಣಕ್ಕೆ ಮುಖ ಮಾಡಿಡಬೇಕು. ಆನಂತರ ಮುಂದಿನ ಮಂತ್ರದಿಂದ ಪ್ರಾರ್ಥನೆಯನ್ನು ಮಾಡಬೇಕು. ಮೃತ್ಯುನಾ ಪಾಶದಂಡಾಭ್ಯಾಂ ಕಾಲೇನ ಶ್ಯಾಮ ಯಾಸಹ । ತ್ರಯೋದಶ್ಯಾಂದಿಪದಾನಾತ್ ಸೂರ್ಯಜಃ ಪ್ರೀಯತಾಂ ಮಮ ॥ ಅರ್ಥ : ಧನತ್ರಯೋದಶಿಯಂದು ಯಮನಿಗೆ ನೀಡಿದ ದೀಪದ ದಾನದಿಂದ ಅವನು ಪ್ರಸನ್ನನಾಗಿ ನನ್ನನ್ನು ಮೃತ್ಯುಪಾಶ ಮತ್ತು ಶಿಕ್ಷೆಯಿಂದ ಮುಕ್ತಗೊಳಿಸಲಿ.

ಆಧಾರ : ಸನಾತನ ಸಂಸ್ಥೆ ನಿರ್ಮಿಸಿದ ಗ್ರಂಥ 'ಹಬ್ಬ, ಧಾರ್ಮಿಕ ಉತ್ಸವ ಮತ್ತು ವ್ರತಗಳು'


### ಧನ್ವಂತರಿ ಜಯಂತಿ

**ಆಯುರ್ವೇದದ ದೃಷ್ಟಿಯಿಂದ ಈ ದಿನವು ಧನ್ವಂತರಿ ಜಯಂತಿಯ ದಿನವಾಗಿದೆ. ವೈದ್ಯರು ಈ ದಿನ ಧನ್ವಂತರಿಯ ಪೂಜೆಯನ್ನು ಮಾಡುತ್ತಾರೆ. ಬೇವಿನ ಎಲೆಯ ಸಣ್ಣ-ಸಣ್ಣ ತುಂಡು ಮತ್ತು ಸಕ್ಕರೆಯನ್ನು 'ಪ್ರಸಾದ'ವೆಂದು ಎಲ್ಲರಿಗೂ ಕೊಡುತ್ತಾರೆ. ಇದರಲ್ಲಿ ಬಹುದೊಡ್ಡ ಅರ್ಥವಿದೆ. ಬೇವು ಅಮೃತದಿಂದ ಉತ್ಪನ್ನವಾಗಿದೆ. ಧನ್ವಂತರಿಯು ಅಮೃತತತ್ವವನ್ನು ಕೊಡುವವನಾಗಿದ್ದಾನೆ ಎಂಬುದು ಇದರಿಂದ ಸ್ಪಷ್ಟ ವಾಗುತ್ತದೆ. ಪ್ರತಿದಿನ ಬೇವಿನ ಐದಾರು ಎಲೆಗಳನ್ನು ತಿಂದರೆ ರೋಗಗಳು ಬರುವ ಸಂಭವವೇ ಕಡಿಮೆಯಾಗುತ್ತದೆ. ಬೇವಿಗೆ ಇಷ್ಟೊಂದು ಮಹತ್ವವಿರುವುದರಿಂದಲೇ ಈ ದಿನ ಅದನ್ನು ಧನ್ವಂತರಿಯ ಪ್ರಸಾದವೆಂದು ಕೊಡುತ್ತಾರೆ. ಬೇವಿನ ಆಧ್ಯಾತ್ಮಿಕ ಮಹತ್ವವನ್ನು ಸನಾತನದ ಗ್ರಂಥ 'ಹಬ್ಬ, ಧಾರ್ಮಿಕ ಉತ್ಸವ ಮತ್ತು ವ್ರತಗಳು' ಇದರಲ್ಲಿ ಕೊಡಲಾಗಿದೆ.**

# ಬೆಂಗಳೂರಿನ ಇಬ್ಬರು ಸೇರಿದಂತೆ 8 ಬಿಜೆಪಿ ಶಾಸಕರು ಕಾಂಗ್ರೆಸ್‌ಗೆ

• ಉದಯವಾಹಿನಿ, ಬೆಂಗಳೂರು,

ಲೋಕಸಭಾ ಚುನಾವಣೆಯ ಬಳಿಕ ರಾಜ್ಯದಲ್ಲಿ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆಯ ಗದ್ದಲ ಜೋರಾಗಿದೆ. ಕಳೆದ ವಿಧಾನಸಭಾ ಚುಣಾವಣೆಯಲ್ಲಿ ಕಾಂಗ್ರೆಸ್ 135 ಸ್ಥಾನಗಳನ್ನ ಗೆದ್ದು ಸರ್ಕಾರ ರಚನೆ ಮಾಡಿದ್ರು ಸಹ ಕರ್ನಾಟಕದಲ್ಲಿ ಸದ್ದಿಲ್ಲದೇ ಆಪರೇಷನ್ ಹಸ್ತ ನಡೆಯುತ್ತಿದೆ. ಮುಡಾ ಹಗರಣ , ವಾಲ್ಮೀಕಿ ಹಗರಣದಲ್ಲಿ ಸಿಲುಕಿರುವ ಸಿದ್ದರಾಮಯ್ಯ ಸರ್ಕಾರ ಪತನವಾಗಲಿದ್ದು, ಕೆಲ ಕಾಂಗ್ರೆಸ್ ಶಾಸಕರು ಬಿಜೆಪಿ ಸೇರಲಿದ್ದಾರೆ ಎಂದು ಕೇಸರಿ ಪಡೆ ನಾಯಕರು ಹೇಳಿದ್ದಾರೆ. ಆದರೆ, ಚನ್ನಪಟ್ಟಣ ಕ್ಷೇತ್ರದ ಸದ್ಯ ರಾಜ್ಯ ರಾಜಕಾರಣದಲ್ಲಿ ಭಾರೀ ಸಂಚಲನ ಮೂಡಿಸಿದೆ. ಬಿಜೆಪಿ ಟಿಕೆಟ್ ಸಿಗದ ಹಿನ್ನಲೆ ಸಿಪಿ ಯೋಗೇಶ್ವರ್ ಅವರು ಬಿಜೆಪಿಗೆ ಗುಡ್‌ಬೈ ಹೇಳಿ ಕಾಂಗ್ರೆಸ್‌ನಿಂದ ಕಣಕ್ಕಿಳಿದಿದ್ದಾರೆ. ಈ ಎಲ್ಲಾ ಬೆಳವಣಿಗೆಯ ನಡುವೆ ಬಿಜೆಪಿಯ 8 ಶಾಸಕರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಾರೆ ಎಂದು ಬೆಂಗಳೂರಿನ ಬಿಜೆಪಿ ಶಾಸಕರೊಬ್ಬರು ಹೊಸ ಬಾಂಬ್ ಸಿಡಿಸಿದ್ದಾರೆ. ಬಿಜೆಪಿಯಿಂದ ಕಾಂಗ್ರೆಸ್‌ಗೆ 8 ಜನ ಶಾಸಕರು ಹೋಗುತ್ತಾರೆ. ಅದರಲ್ಲೂ ಬೆಂಗಳೂರಿನ ಇಬ್ಬರು ಬಿಜೆಪಿ ಶಾಸಕರು ಕಾಂಗ್ರೆಸ್ ಸೇರ್ಪಡೆಯಾಗುತ್ತಾರೆ ಎಂದು ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಅವರು ಹೇಳಿಕೆ ನೀಡಿದ್ದು, ಸದ್ಯ ರಾಜ್ಯ ರಾಜಕೀಯದಲ್ಲಿ ದೊಡ್ಡ ಸಂಚಲನ ಸೃಷ್ಟಿಸುವಂತೆ ಮಾಡಿದೆ. ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯಗೆ **ಮತ್ತೊಂದು ಸಂಕಷ್ಟ:** ಇಡಿ ಕೈಸೇರಿತು ವೈಟ್ನರ್ ಹಾಕಿದ್ದ ಮೂಲಕ ದಾಖಲೆ



**ಬಿಜೆಪಿಯಿಂದ ಕಾಂಗ್ರೆಸ್‌ಗೆ ಎಂಟು ಜನ ಶಾಸಕರು ಹೋಗುತ್ತಾರೆ. ಅದರಲ್ಲೂ ಬೆಂಗಳೂರಿನ ಇಬ್ಬರು ಬಿಜೆಪಿ ಶಾಸಕರು ಕಾಂಗ್ರೆಸ್ ಸೇರ್ಪಡೆಯಾಗುತ್ತಾರೆ. ನನ್ನ ಮೇಲೆ ಯಾವುದೇ ಶಿಸ್ತು ಕ್ರಮ ಜರುಗಿಸಿದ್ರು ನನಗೆ ಭಯವಿಲ್ಲ. ಅಶೋಕ್ ಮಾತಿಗೆ ಬೆಲೆ ಕೊಡಬಾರದು. ಸದ್ಯದಲ್ಲಿ ನೋಡುತ್ತಿರಿ ಇನ್ನು ಎಂಟು ಮಂದಿ ಕಾಂಗ್ರೆಸ್‌ಗೆ ಹೋಗುತ್ತಾರೆ ಎಂದು ಯಶವಂತಪುರ ಕ್ಷೇತ್ರದ ಬಿಜೆಪಿ ಶಾಸಕ ಎಸ್‌ಟಿ ಸೋಮಶೇಖರ್ ಅವರು ಬಹಿರಂಗವಾಗಿಯೇ ಹೇಳಿದ್ದಾರೆ.**

**ಸಿಪಿ ಯೋಗೇಶ್ವರ್ ರಿಂದ ಚೆನ್ನಾಗಿ ಕೆಲಸ ಮಾಡಿಸಿಕೊಂಡು ಈಗ ಕೈ ಬಿಟ್ಟರು. ನನ್ನ ಮೇಲೆ ಯಾವುದೇ ಶಿಸ್ತು ಕ್ರಮ ಜರುಗಿಸಿದ್ರು ನನಗೆ ಭಯವಿಲ್ಲ. ನನಗೆ ನನ್ನ ಕ್ಷೇತ್ರದ ಅಭಿವೃದ್ಧಿಯಾಗಬೇಕು. ಅದಕ್ಕೆ ನಾನು ನಿರಂತರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡುತ್ತೇನೆ ಎಂದು ಹೇಳಿದರು.**

**ಎಸ್ ಟಿ ಸೋಮಶೇಖರ್**


# ಸಂಸ್ಕಾರವೆಂದರೇನು?



**ವಿಶ್ವಾಸ್.ಡಿ.ಗೌಡ**

**• ಉದಯವಾಹಿನಿ, ವಿಶೇಷ**

ಕೈಯಲ್ಲಿ ಕೋಟಿ ಇದ್ದರು ಹಿರಿಯರು ಕಂಡೊಡನೆ ಕಾಲಿಗೆ ಬೀಳೋದು ಸಂಸ್ಕಾರ..!
ಎಷ್ಟೇ ಆಧುನಿಕತೆ ಬಂದರು ಹಣೆಯ ಮೇಲಿನ ಬೊಟ್ಟು ಸಂಸ್ಕಾರ..!
ಎಷ್ಟೇ ಆಧುನಿಕತೆಯ ಗಾಳಿ ಬೀಸಿದರು ಹೆರಳ ತುಂಬ ಹೂವು ಸಂಸ್ಕಾರ..!
ಡಿಗ್ರಿ ಮೇಲೆ ಡಿಗ್ರಿ ಪಡೆದರು ಗುರು ಕಂಡೊಡನೆ ತೋರಿಸುವ ಭಯ ಭಕ್ತಿ ಸಂಸ್ಕಾರ..! ಯಜಮಾನಿಕೆ ದೊಡ್ಡಸ್ತಿಕೆ ಇದ್ದರು ಚಿಕ್ಕವರಿಗೆ ತೋರಿಸೋ ಪ್ರೀತಿ ವಿಶ್ವಾಸ ಕಳಕಳಿ ಸಂಸ್ಕಾರ..!
ನಮ್ಮ ನಡವಳಿಕೆಯಲ್ಲಿರೋ ನಯ ವಿನಯ ನಾಜೂಕತನ ಸಂಸ್ಕಾರ..!
ಓದು ಬರಹ ಉದ್ಯೋಗದ ಹೊರತಾಗಿಯೂ ಹೊರುವ ಜವಾಬ್ದಾರಿ ಸಂಸ್ಕಾರ..!
ಖಾಯಿಲೆಯ ತಂದೆಯನ್ನು ಮಗನಂತೆಯೇ ಜೋಪಾನ ಮಾಡೋದು ಸಂಸ್ಕಾರ..!
ಸದಾ ಕುಟುಂಬದ ಕಣ್ಣಾದ ತಾಯಿಯ ಬೇಕು ಬೇಡ ಕೇಳಿ ಈಡೇರಿಸುವದು ಸಂಸ್ಕಾರ..!
ಮುದ್ದಿನ ಮಗ ತಪ್ಪು ಮಾಡಿದಾಗ ಮೃದು ಮಾತಿನಿಂದ ದಾರಿಗೆ ತರೋದು ಸಂಸ್ಕಾರ..!
ಅಡ್ಡ ದಾರಿ ತುಳಿತಾ ಇರೋ ಮಗಳಿಗೆ ನಲ್ಮೆಯ ಮಾತುಗಳಿಂದ ಮನವೊಲಿಸುವುದು ಸಂಸ್ಕಾರ...!
ತನ್ನ ನೂರು ಕಷ್ಟಗಳ ಮಧ್ಯೆಯೂ ಸಹಾಯ ಬೇಡಿದೊಡನೆ ಸಹಾಯ ಮಾಡೊ ಗೆಳೆಯನ ಗುಣ ಸಂಸ್ಕಾರ..!
ಸಣ್ಣ ಸಂಪಾದನೆಯಲ್ಲಿ ತನ್ನ ಇಷ್ಟಾನಿಷ್ಟ ಮರೆತು ನಿಮ್ಮನ್ನೊಪ್ಪಿ ಬಂದ ಹೆಂಡತಿಯ ಉದಾರ ಗುಣ ಸಂಸ್ಕಾರ..!
ಸಂಸ್ಕಾರ ಎಲ್ಲೆಲ್ಲೂ ಇದೆ..
ಅಂಗಳದ ರಂಗೋಲಿಯಲ್ಲಿ..
ದೇವರ ಮುಂದೆ ದೀಪದಲ್ಲಿ..
ಅಡುಗೆಯಾದೊಡನೆ ಬರುವಘಮದಲ್ಲಿ..
ಗೋಡೆಯ ಮೇಲೆ ವರ್ಲಿ ಕಲೆಯ ಚಿತ್ತಾರದಲ್ಲಿ..
ತುಳಸಿ ಕಟ್ಟೆ ಮುಂದೆ ಕೈ ಮುಗಿವ ಕೈಗಳಲ್ಲಿ..
ತಟ್ಟೆಯ ಮುಂದೆ ಕೂತಾಗ ಬಡಿಸುವವನ ಕೈಯಲ್ಲಿ.. ಹುಶಾರಿಲ್ಲದೆ ಮಲಗಿದಾಗ ಏನಾಯಿತು ಎಂದು ಮರಗುವವರ ಮನದಲ್ಲಿ.. ನಮ್ಮ ನಡವಳಿಕೆ ಗುಣ ಮಾತು ನಡತೆ ಯಲ್ಲಿ ಸಂಸ್ಕಾರ ಅಡಗಿದೆ..!



# ಈ 5 ಆರೋಗ್ಯ ಸಮಸ್ಯೆಗಳಿಂದ ಸಿಗುತ್ತೆ ಪರಿಹಾರ....?

• ಉದಯವಾಹಿನಿ, ಬೆಂಗಳೂರು


ನಮ್ಮ ದೇಶದ ಅನೇಕ ಸ್ಥಳಗಳಲ್ಲಿ, ಅಕ್ಕಿ ಜನರ ಮುಖ್ಯ ಆಹಾರವಾಗಿದೆ. ಪ್ರತಿ ದಿನ ತಿನ್ನುವ ಅನ್ನ ರುಚಿಯಾಗಿರಬೇಕು ಮತ್ತು ಆರೋಗ್ಯಕರವಾಗಿರಬೇಕು ಎಂದು ಬಯಸುವು ದರಲ್ಲಿ ತಪ್ಪೇನಿಲ್ಲ. ಆದರೆ ಸಂಪೂರ್ಣವಾಗಿ ಅನ್ನದ ಮೇಲೆ ಅವಲಂಬಿತವಾಗಿದ್ರೆ, ನಮ್ಮ ಆರೋಗ್ಯಕ್ಕೆ ಹಾನಿಕಾರಕ.

**ಅಕ್ಕಿಯಲ್ಲಿ ನಾರಿನಂಶದ ಕೊರತೆಯು ಮಲಬದ್ಧತೆಯಂತಹ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಬದಲಿಗೆ ಫೈಬರ್ ಭರಿತ ಆಹಾರಗಳನ್ನು ನಿಮ್ಮ ಆಹಾರದಲ್ಲಿ ಸೇರಿಸಿಕೊಳ್ಳಬಹುದು. ಫೈಬರ್ ನಿಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸಲು ಸಹಾಯ ಮಾಡುತ್ತದೆ.**



ಅನ್ನದಲ್ಲಿ ಕಾರ್ಬೋಹೈಡ್ರೇಟ್ ಅಧಿಕವಾಗಿದೆ. ಆದರೆ ಇತರ ಅನೇಕ ಪೋಷಕಾಂಶಗಳ ಕೊರತೆಯಿದೆ. ಇಂತಹ ಪರಿಸ್ಥಿತಿಯಲ್ಲಿ ಹೆಚ್ಚು ಅನ್ನವನ್ನು ಸೇವಿಸುವುದರಿಂದ ರಕ್ತದಲ್ಲಿನ ಸಕ್ಕರೆ ಪ್ರಮಾಣ ಹೆಚ್ಚಾಗುವ ಅಪಾಯವಿದೆ. ಇದರೊಂದಿಗೆ ಅನ್ನವನ್ನು ತಿನ್ನುವುದರಿಂದ ನಿಮ್ಮ ತೂಕವು ವೇಗವಾಗಿ ಹೆಚ್ಚಾಗುತ್ತದೆ. ಈಗ 30 ದಿನಗಳ ಕಾಲ ಅನ್ನವನ್ನು ತಿನ್ನದಿದ್ದರೆ ಆಗುವ ಲಾಭಗಳನ್ನು ತಿಳಿದುಕೊಳ್ಳೋಣ.

ತಜ್ಞರ ಪ್ರಕಾರ.. ಒಂದು ತಿಂಗಳು ಅನ್ನ ತಿನ್ನದಿದ್ದರೆ ದೇಹದಲ್ಲಿ ಕ್ಯಾಲೋರಿ ಪ್ರಮಾಣ ಕಡಿಮೆಯಾಗುತ್ತದೆ. ಈ ಕಾರಣದಿಂದಾಗಿ, ನಿಮ್ಮ ತೂಕವು ಕ್ರಮೇಣ ಕಡಿಮೆಯಾಗಲು ಪ್ರಾರಂಭಿಸುತ್ತದೆ. ಅದೇ ಸಮಯದಲ್ಲಿ, ನೀವು ಒಂದು ತಿಂಗಳು ಅನ್ನವನ್ನು ತಿನ್ನದಿದ್ದರೆ ನೀವು ತೂಕವನ್ನು ಕಳೆದುಕೊಳ್ಳಬಹುದು. ಆದರೆ ಅನ್ನದಲ್ಲಿ ಮಾಡಿದ ಪದಾರ್ಥಗಳನ್ನು ತಿನ್ನದೇ ಇರುವುದು ಉತ್ತಮ ಎನ್ನುತ್ತಾರೆ ಆಹಾರ ತಜ್ಞರು. ಅಕ್ಕಿಯಲ್ಲಿ ಹೆಚ್ಚಿನ ಪ್ರಮಾಣದ ಪಿಷ್ಟವಿದೆ, ಇದು ಕೊಲೆಸ್ಟ್ರಾಲ್ ಮಟ್ಟವನ್ನು ಹೆಚ್ಚಿಸುತ್ತದೆ. ಹೃದ್ರೋಗದ ಅಪಾಯವನ್ನು ಹೆಚ್ಚಿಸುವಲ್ಲಿ ಕೊಲೆಸ್ಟ್ರಾಲ್ ಪ್ರಮುಖ ಪಾತ್ರ ವಹಿಸುತ್ತದೆ. ಆದ್ದರಿಂದ ನಿಮ್ಮ ಹೃದಯವನ್ನು ಆರೋಗ್ಯವಾಗಿಡಬೇಕೆಂದರೆ ಅನ್ನದ ಸೇವನೆಯನ್ನು ಕಡಿಮೆ ಮಾಡಿ. ಒಂದು ತಿಂಗಳು ಅನ್ನ ತಿನ್ನದೇ ಇದ್ದರೆ ರಕ್ತದಲ್ಲಿನ ಸಕ್ಕರೆ ಪ್ರಮಾಣ ನಿಯಂತ್ರಣದಲ್ಲಿರುತ್ತದೆ. ನಿಮ್ಮ ಆಹಾರದಲ್ಲಿ ಕಾರ್ಬೋಹೈಡ್ರೇಟ್ ಭರಿತ ಆಹಾರವನ್ನು ಸೇರಿಸದಿದ್ದರೆ ಇದು ಸಾಧ್ಯ. ನೀವು ಅನ್ನವನ್ನು ತಿನ್ನದಿದ್ದರೆ ಅದರಲ್ಲಿರುವ ಪೋಷಕಾಂಶಗಳ ಕೊರತೆಯನ್ನು ನೀಗಿಸಲು ನಿಮ್ಮ ಆಹಾರದಲ್ಲಿ ಇತರ ಕೆಲವು ಆಹಾರ ಪದಾರ್ಥಗಳನ್ನು ಸೇರಿಸಬಹುದು. ಅನ್ನ ತಿನ್ನುವುದನ್ನು ಸಂಪೂರ್ಣವಾಗಿ ನಿಲ್ಲಿಸಬಾರದು. ನೀವು ಅದನ್ನು ವಿಭಿನ್ನ ರೀತಿಯಲ್ಲಿ ತಿನ್ನಬಹುದು. ಪ್ರತಿಯೊಬ್ಬರ ದೇಹವು ವಿಭಿನ್ನವಾಗಿರುತ್ತದೆ. ಅವರ ದೇಹಕ್ಕೆ ಅನುಗುಣವಾಗಿ ಪೋಷಕಾಂಶಗಳು ಬೇಕಾಗುತ್ತವೆ.



# ರಾಮಾಯಣ

**ಮಲದ ದೇಶ ಕರೂಶ ದೇಶ ಗಳ ವೃತ್ತಾಂತ**

• ಹಿಂದಿನ ಸಂಚಿಕೆಯಿಂದ **15ನೆಯ ಅಧ್ಯಾಯ**

ವಿಶ್ವಾಮಿತ್ರ ಮಹರ್ಷಿಯು ಕೇಳು ರಘುನಾಥ್ ಈ ವನವು ಪೂರ್ವದಲ್ಲಿ ಫಲಪೂರಿತ ವಾಗಿದ್ದ ಮಲದದೇಶ ಕರೂಶದೇಶ ಎಂಬ ಎರಡು ದೇಶಗಳಾಗಿತ್ತು. ಇಲ್ಲಿ ದೇವೇಂದ್ರನು ವೃತ್ರಾಸುರನ ವಧೆಯನ್ನು ಮಾಡಲು ಇದು ಆತನ ರುಧಿರಮಾಂಸಾದಿಗಳಿಂದ ಪೂರಿತವಾಯಿತು ದೇವೇಂದ್ರನು ವೃತ್ರಾಸುರನನ್ನು ಕೊಂದದ್ದರಿಂದ ಬ್ರಹ್ಮಹತ್ಯಾದೋಷವು ಆತನಲ್ಲಿ ಪ್ರವೇಶಿಸಿತು. ಆಗ ಆ ದೇಶಗಳಲ್ಲಿದ್ದ ಋಷಿಗಳು ಪಾಪದಿಂದ ಮಲಿನವಾದ ಶರೀರವುಳ್ಳ ದೇವೇಂದ್ರನನ್ನು ಕಂಡು ಅನೇಕ ಕಲಶಗಳಲ್ಲಿ ಉದಕವನ್ನು ತುಂಬಿ ಅಭಿಮಂತ್ರಿಸಿ ಅಭಿಷೇಕವನ್ನು ಮಾಡಿ ಅವನ ಶರೀರದಲ್ಲಿದ್ದ ಮಲವನ್ನು ಪರಿಹರಿಸಿದರು ದೇವೇಂದ್ರನು ಅತಿಹರ್ಷಪಟ್ಟು ಮಲದದೇಶ ಕರೂಶದೇಶಗಳಿಗೆ ' ನನ್ನ ಶರೀರದ ಮಲದಿಂದ ನೆನೆಯಿಸಲ್ಪಟ್ಟ ಈ ದೇಶಗಳು ಪವಿತ್ರಗಳಾಗಿ ಸಮಸ್ತ ಐಶ್ವರಗಳಿಂದ ಪರಿಪೂರ್ಣವಾಗಿರಲಿ ' ಎಂದು ವರವನ್ನು ಕೊಟ್ಟನು.

ಈ ದೇಶಗಳ ಪೂಜ್ಯತೆಯನ್ನು ಕಂಡು ದೇವತೆಗಳು ಸಂತೋಷಪಟ್ಟರು ಅದು ಮೊದಲಾಗಿ ಈ ದೇಶಗಳು ನಿರ್ಮಲಗಳೂ ಮನೋಹರ ಗಳೂ ಆಗಿ ಧನಧಾನ್ಯಗಳಿಂದ ಪರಿಪೂರ್ಣವಾಗಿದ್ದವು. ಈಗ ಕಾಮರೂಪಿಣಿಯಾದ ಸಾವಿರ ಆನೆಗಳ ಸವುಳ್ಳ ಸುಂದನೆಂಬ ಯಕ್ಷನ ಹೆಂಡತಿಯಾದ ತಾಟಕಿ ಎಂಬ ಯಕ್ಷಿಯು ಇಲ್ಲಿದ್ದಾಳೆ ಅವಳಿಗೆ ದೇವೇಂದ್ರನಿಗೆ ಸಮಾನವಾದ ಪರಾಕ್ರಮವುಳ್ಳ ಮಾರೀಚನೆಂಬುವವನು ಜನಿಸಿದನು. ಆ ರಾಕ್ಷಸನು ದುಂಡಾಗಿ ದೀರ್ಘವಾದ ತೋಳುಗಳುಳ್ಳವನು ದೊಡ್ಡ ಶಿರಸ್ಸುಳ್ಳವನು ಅತಿವಿಶಾಲವಾದ ಎದೆಕಟ್ಟುಳ್ಳವನು.

ಮಹಾಭಯಂಕರವಾದ ಆಕಾರವುಳ್ಳವನು. ಆ ರಾಕ್ಷಸನು ಈ ದೇಶದಲ್ಲಿದ್ದ ಪ್ರಜೆಗಳೆಲ್ಲರನ್ನೂ ಸಂಹರಿಸಿ ಮಲದ ಕರೂಶದೇಶಗಳನ್ನು ಕೆಡಿಸಿದನು. ಆತನ ತಾಯಿಯಾದ ತಾಟಕಿಯು ಇಲ್ಲಿಗೆ ಅರೆಗಾವುದ ದಾರಿಯಲ್ಲಿ ವಾಸಮಾಡಿಕೊಂಡು ಮಾರ್ಗವನ್ನು ಅಡ್ಡಕಟ್ಟಿ ಕೊಂಡಿದ್ದಾಳೆ ಆದಕಾರಣ ನಾವು ಆ ವನಕ್ಕೆ ಹೋಗೋಣ ನಿನ್ನ ಭುಜಬಲಪರಾಕ್ರಮದಿಂದ ಆ ದುಷ್ಟೆಯಾದ ತಾಟಕಿಯನ್ನು ನನ್ನ ಅಪ್ಪಣೆಯಿಂದ ಸಂಹರಿಸಿ ಈ ದೇಶಗಳಿಗೆ ಉಪದ್ರವ ವಿಲ್ಲದಹಾಗೆ ಮಾಡು. ಈ ರಾಕ್ಷಸಿಯ ಭಯದಿಂದ ಈ ದೇಶಗಳಿಗೆ ಒಬ್ಬರೂ ಬರುವುದಿಲ್ಲ. ಆದಕಾರಣ ಈ ವನವು ಅತಿಭಯಂಕರವಾಗಿ ಘೋರಾರಣ್ಯವಾಗಿದೆ. ಈ ರಾಕ್ಷಸಿಯ ಭಯದಿಂದ ದೇಶತ್ಯಾಗಮಾಡಿ ಇದುವರೆಗೆ ಹೋದವರೊಬ್ಬರೂ ತಿರುಗಿ ಬಾರದಿದ್ದಾರೆ'' ಎಂದು ನುಡಿದನು.

ಮುಂದುವರಿಯುವುದು...

### ಸಾಮಾಜಿಕ ಕಳಕಳಿ



**ಹೆಚ್.ಎಸ್.ಪ್ರತಿಮಾ ಹಾಸನ್**
**ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ**

• ಉದಯವಾಹಿನಿ, ವಿಶೇಷ

ನೆನಪಿನದೆ ಅಂಗಳದಿ ಕುಳಿತಿರಲು ಸಂತಸದಿ
ಮನೆಯಲಿಯೆ ಹಲವು ಚಿಂತೆ ಕಾಡುತಿರೆ
ಸನಿಹದಲಿ ಪ್ರೀತಿಯಲಿ ಮಾತುಗಳ ಹೇಳುತಲಿ
ಹನಿಯದುವೆ ಮಂಜಿನದು ಲಕ್ಷ್ಮಿ ದೇವಿ....

**ಭಾವಾರ್ಥ:** ಮೇಲಿನ ಮುಕ್ತಕದಂತೆ ನೆನಪಿನ ಅಂಗಳದಲ್ಲಿ ಕುಳಿತಿರುವಾಗ ಸಂತಸದಲ್ಲಿ ಕುಳಿತಿರುವಾಗ ಬಹಳಷ್ಟು ನೆನಪುಗಳು ಕಾಡುತ ಇರುತ್ತವೆ. ಅದೇ ಸಮಯದಲ್ಲಿ ಹಲವಾರು ಚಿಂತೆಗಳು ಕಾಡುತ್ತಿದ್ದರು ಸಹ ಒಮ್ಮೊಮ್ಮೆ ಮನಸ್ಸಿಗೆ ಸಂತಸದ ವಿಷಯಗಳು ಬರುತ್ತವೆ. ಕೆಲವರು ಪ್ರೀತಿಯಿಂದ ಮಾತನಾಡಿದಾಗ ಸಂತೋಷವಾಗುತ್ತದೆ. ಏಕೆಂದರೆ ಮನಸ್ಸಿಗೆ ಕೆಲವರು ಆತ್ಮೀಯರಾಗಿರುತ್ತಾರೆ. ಗಂಡ ಹೆಂಡತಿಗೆ ಪ್ರೀತಿಯಿಂದ ಮಾತನಾಡಿದಾಗ ಆಕೆ ಬಹಳಷ್ಟು ಖುಷಿ ಪಡುತ್ತಾಳೆ. ಹಾಗೆಯೇ ತಾಯಿ ತಂದೆ ಮಕ್ಕಳೊಂದಿಗೆ ಮಾತನಾಡಿದಾಗ ಅಲ್ಲೂ ಪ್ರೀತಿಯನ್ನು ಕಾಣುತ್ತೇವೆ. ಪ್ರೇಯಸಿ ಪ್ರಿಯಕರನಿಗೆ ಪ್ರೀತಿಯಿಂದ ಮಾತನಾಡಿದಾಗ ಅವರ ಭಾವನೆಯೇ ಬೇರೆ ತರ ಇರುತ್ತದೆ.ಮಂಜಿನ ಹನಿಗಳು ಮೈ ಮೇಲೆ ಬಿದ್ದ ರೀತಿ ಪ್ರಿಯಕರನಿಗೆ ಭಾಸವಾಗುತ್ತವೆ. ಜೀವನದಲ್ಲಿ ಕಷ್ಟವೇ ಎಂದು ಕುಳಿತಾಗ ಬದುಕಲು ಬಹಳ ಕಷ್ಟವೇ ಆಗುತ್ತದೆ ಹೊರತು. ಜೀವಿಸಲು ಕಷ್ಟಕ್ಕಿಂತ ಇಷ್ಟ ಪಡಬೇಕು. ಏನೇ ಕೆಲಸ ಮಾಡಿದರು ಸಮಸ್ಯೆಗಳೇ ಎದುರಾಗುತ್ತವೆ ಎನ್ನುವವರು ಎಷ್ಟೇ ಕಷ್ಟಗಳು ಬಂದರೂ ಸಹ ಯಾವುದಕ್ಕೂ ಹೆದರದಂತೆ ಅದನ್ನು ಹೆದರಿಸಿ ಬಾಳುವುದೇ ಒಂದು ಕಲೆ. ಅಂತಹ ಕಲೆಯನ್ನು ಯಾರು ಸಿದ್ಧಿಸಿಕೊಂಡಿರುತ್ತಾರೋ ಅವರ ಮುಖದಲ್ಲಿ ಯಾವಾಗಲೂ ನಗುವೆ ಇರುತ್ತದೆ.



**ದಿನಕ್ಕೊಂದು ಮುಕ್ತಕ -05**

# ಚೆನ್ನೈ ಟ್ರೆಂಡ್ ಫಾಲೋ ಮಾಡ್ತಿದ್ಯಾ ಬೆಂಗಳೂರು!

## ಬೆಂಗಳೂರಿನ ವೆದರ್ ಇಲ್ಲಿನ ಸೌಲಭ್ಯಕ್ಕೆ ಫಿದಾ ಆಗದೆ ಇರುವವರು ಇಲ್ಲ


• ಉದಯವಾಹಿನಿ, ಬೆಂಗಳೂರು

ಅಂದ್ರೆ ಸ್ವರ್ಗ. ಬೆಂಗಳೂರಿನ ವೆದರ್ ಇಲ್ಲಿನ ಸೌಲಭ್ಯಕ್ಕೆ ಫಿದಾ ಆಗದೆ ಇರುವವರು ಇಲ್ಲ. ಆದರೆ, ಸ್ವರ್ಗದಂತಿರುವ ಬೆಂಗಳೂರು ಮಳೆ ಬಂದಾಗ ಮಾತ್ರ ನರಕ ಸದೃಶ್ಯವಾಗುತ್ತದೆ. ಇಂದಿಗೂ ಬೆಂಗಳೂರಲ್ಲಿ ಮಳೆ ಬಂದರೆ, ಸಾಕಾಪ್ಪ ಸಾಕು ಅಂತ ಆಗೋದು ತಪ್ಪಿಲ್ಲ. ಅದೇ ತರ ದಕ್ಷಿಣ ಭಾರತದಲ್ಲಿ ಬೆಂಗಳೂರು ಫೇಮಸ್ ಸಿಟಿ, ಚೆನ್ನೈ ಸಹ ತನ್ನದೇ ಕಾರಣಕ್ಕೆ ಫೇಮಸ್ ಆಗಿದೆ. ಇದೀಗ ಚೆನ್ನೈನ ಟ್ರೆಂಡ್ ವೊಂದನ್ನು ಬೆಂಗಳೂರು ಫಾಲೋ ಮಾಡ್ತಿದೆ.ಬೆಂಗಳೂರು ಸಿಲಿಕಾನ್ ಸಿಟಿ ದಕ್ಷಿಣ ಭಾರತದಲ್ಲಿ ಯಾವುದೇ ಟ್ರೆಂಡ್ಸ್ ಶುರುವಾದರೂ ಅದು ಬೆಂಗಳೂರಿನಿಂದಲೇ ಎನ್ನುವಷ್ಟು ಫೇಮಸ್ ಆಗಿದೆ. ಆದರೆ, ಈಗ ಬೆಂಗಳೂರು ಮಳೆ ಅನಾಹುತ ಜೋರಾಗಿದ್ದು, ಚೆನ್ನೈ ಮಂದಿ ಮಾಡಿದ ಟ್ರೆಂಡ್‌ವೊಂದನ್ನು ಫಾಲೋ ಮಾಡ್ತಿದೆ. ಆದರೆ, ಈ ಟ್ರೆಂಡ್ ಶುರುವಾಗಿದ್ದು ಮಳೆಯ ಕಾರಣಕ್ಕೆ. ಚೆನ್ನೈನ ಟ್ರೆಂಡ್‌ಗೂ ಬೆಂಗಳೂರಿನ ಟ್ರೆಂಡ್‌ಗೂ ವ್ಯತ್ಯಾಸ ಇದೆಯಾದ್ರೂ, ಮ್ಯಾಟರ್ ಮಾತ್ರ ಒಂದೇ. ಎರಡು ಸಿಟಿಗಳಲ್ಲಿ ಟ್ರೆಂಡ್ ಆಗಿರೋದು ಏನು. ಯಾವ ಕಾರಣಕ್ಕೆ ಜನ ಫಾಲೋ ಮಾಡ್ತಿದ್ದಾರೆ. ಬೆಂಗಳೂರು ಭಾರತದಲ್ಲಿ ಮಾತ್ರವಲ್ಲ. ದೇಶದಲ್ಲೇ ಫೇಮಸ್ ಸಿಟಿಗಳಲ್ಲಿ ಒಂದು. ಇಲ್ಲಿ ಯಾವುದೇ ವಿಷಯ ಟ್ರೆಂಡ್ ಆದರೂ ಅದು ದೇಶದಾದ್ಯಂತ ಸುದ್ದಿಯಾಗುತ್ತೆ. ಬೆಂಗಳೂರಲ್ಲಿ ಸಮಸ್ಯೆ ಆದರೂ ಸಹ ಅಷ್ಟೇ ಅದೂ ಕೂಡ ಫುಲ್ ಟ್ರೆಂಡ್ ಸೃಷ್ಟಿ ಮಾಡುತ್ತೆ. ಬುಧವಾರವೂ ಇದೇ ಆಗಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ ಸಿಟಿ ಮೇಲೆ ಕಾರು ನಿಲ್ಲಿಸಿರುವ ಐಟಿ ಜನ ಸರಸರನೆ ನಡೆದು ಹೋಗಿದ್ದಾರೆ. ಇದೇ ತರ ಒಂದು ವಾರದ ಹಿಂದಷ್ಟೇ ಚೆನ್ನೈನಲ್ಲೂ ಫ್ಲೈಓವರ್ ಮೇಲೆ ಕಾರು ನಿಲ್ಲಿಸುವುದು ಟ್ರೆಂಡ್ ಆಗಿತ್ತು. ಬೆಂಗಳೂರಲ್ಲಿ ಧಾರಾಕಾರ ಮಳೆ ಆಗ್ತಿದೆ. ಇನ್ನೊಂದು ವಾರಗಳ ಕಾಲ ಮಳೆ ಮುಂದುವರಿಯುವ ಸಾಧ್ಯತೆ ಇದೆ. ಈ ನಡುವೆ ಚೆನ್ನೈನಲ್ಲೂ ಧಾರಾಕಾರ ಮಳೆಯಾಗಿತ್ತು. ಚೆನ್ನೈನಲ್ಲಿ ಧಾರಾಕಾರ ಮಳೆಯಾದಾಗ ಫ್ಲೈಓವರ್‌ನ ಎರಡೂ ಬದಿಗಳಲ್ಲಿ ಕಾರ್‌ಗಳ ಮಾಲೀಕರು ಕಾರು ನಿಲ್ಲಿಸಿದ್ದರು. ಈ ವಿಡಿಯೋ ಭಾರೀ ವೈರಲ್ ಆಗಿತ್ತು.

**ಟ್ರಾಫಿಕ್ ಜಾಮ್‌ನಿಂದ ತಪ್ಪಿಸಿ**

**ಚೆನ್ನೈನಲ್ಲಿ ಮಳೆ ಬಂದರೆ ಮೊದಲು ಕಾರುಗಳಿಗೆ ಹಾನಿಯಾಗುತ್ತೆ. ಮಳೆ ನೀರಲ್ಲಿ ಕಾರು ಮುಳುಗಿ ಕಾರುಗಳಿಗೆ ಹಾನಿಯಾಗುತ್ತಿದ್ದವು. ಅದನ್ನು ತಪ್ಪಿಸುವ ಉದ್ದೇಶದಿಂದ ಫ್ಲೈಓವರ್‌ಗಳ ಲೆಫ್ಟ್ ಹಾಗೂ ರೈಟ್‌ಸೈಡ್‌ನಲ್ಲಿ ಕಾರು ನಿಲ್ಲಿಸಿದ್ದ ವಾಹನ ಸವಾರರು ಬೊಂಬಾಟ್ ಪ್ಲಾನ್ ಮಾಡಿದ್ರು. ಇದೀಗ ಬುಧವಾರ ಎಲೆಕ್ಟ್ರಾನಿಕ್ ಸಿಟಿ ಫ್ಲೈಓವರ್‌ನ ಮೇಲೆ ವಾಹನ ಸವಾರರು ಕಾರುಗಳನ್ನು ಬಿಟ್ಟು ಹೋಗಿದ್ದಾರೆ.**

**ಬೆಂಗಳೂರಿನ ಜನ ಮಾಡಿರುವುದು ಬೇರೆ ಕಾರಣಕ್ಕೆ. ಬೆಂಗಳೂರಲ್ಲಿ ನೆನ್ನೆ ಸಂಜೆ ಸಾಕಷ್ಟು ಟ್ರಾಫಿಕ್ ಜಾಮ್ ಇತ್ತು. ಆ ಟ್ರಾಫಿಕ್ ಜಾಮ್‌ನಿಂದ ತಪ್ಪಿಸಿಕೊಳ್ಳಲು ಜನ ಹಿಂಗೆ ಮಾಡಿದ್ದಾರೆ. ಎರಡೂ ಟ್ರೆಂಡ್‌ಗೂ ವ್ಯತ್ಯಾಸವಿದೆಯಾದರೂ, ಎರಡೂ ನಗರಗಳಲ್ಲಿ ಫ್ಲೈಓವರ್‌ನ ಮೇಲೆ ಕಾರು ಬಿಟ್ಟು ಹೋಗುವುದು ಮಾತ್ರ ಕಾಮನ್ ಟ್ರೆಂಡ್ ಆಗಿದೆ.**



# ರಾಚೋಟೇಶ್ವರ ದೇವಸ್ಥಾನದಲ್ಲಿ ಮಹಿಳೆಯರಿಂದ ಕುಂಭ ಮೆರವಣಿಗೆ

## ಶಾಸಕ ಸಿ.ಸಿ. ಪಾಟೀಲ ಅವರು ವೀರರಾಣಿ ಕಿತ್ತೂರು ಚನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಣೆ

• ಉದಯವಾಹಿನಿ, ಗದಗ

ಅವಳಿ ನಗರ ಸೇರಿ ಜಿಲ್ಲಾದ್ಯಂತ ಜಿಲ್ಲಾಡಳಿತ, ಕನ್ನಡ, ಸಂಸ್ಕೃತಿ ಇಲಾಖೆ, ಗದಗ ಜಿಲ್ಲಾ ಪಂಚಮಸಾಲಿ ಸಮಾಜ, ಪಂಚಮಸಾಲಿ ಯುವ ಘಟಕದ ವತಿಯಿಂದ ವೀರರಾಣಿ ಕಿತ್ತೂರು ಚನ್ನಮ್ಮ ಅವರ 200ನೇ ವಿಜಯೋತ್ಸವ, 246ನೇ ಜಯಂತ್ಯುತ್ಸವ ಆಚರಿಸಲಾಯಿತು. ನಗರದ ಜಿಲ್ಲಾಡಳಿತ ಭವನದ ಸಮ್ಮೇಳನ ಸಭಾಂಗಣದಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮ ಜಯಂತಿ ಆಚರಿಸಲಾಯಿತು. ನರಗುಂದ ಶಾಸಕ ಸಿ.ಸಿ. ಪಾಟೀಲ ಅವರು ವೀರರಾಣಿ ಕಿತ್ತೂರು ಚನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಹರಸಾಬ್ ಬಬರ್ಜಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಪಂ ಸಿಇಒ ಭರತ್ ಎಸ್., ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ,


ಉದಯವಾಹಿನಿ ಚಿತ್ರ

**ಸ್ವಾತಂತ್ರ್ಯದ ಕಿಚ್ಚು ಹೊತ್ತಿಸಿದ ರಾಣಿ ಚನ್ನಮ್ಮ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ., ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸಿದ್ದು ಪಲ್ಲೇದ, ಶರಣ ಪಾಟೀಲ, ಕೃಷ್ಣಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು. ಜಿಲ್ಲಾ ಪಂಚಮಸಾಲಿ ಸಮಾಜ, ಯುವ ಘಟಕ ಭಾರತದ ಪ್ರಥಮ ಮಹಿಳಾ ಸ್ವಾತಂತ್ರ್ಯ ಹೋರಾಟಗಾರ್ತಿ ವೀರರಾಣಿ ಕಿತ್ತೂರು ಚನ್ನಮ್ಮಾಜೀ 200ನೇ ವಿಜಯೋತ್ಸವ, 246ನೇ ಜಯಂತ್ಯುತ್ಸವ ಜಿಲ್ಲಾ ಪಂಚಮಸಾಲಿ ಸಮಾಜ ಹಾಗೂ ಯುವ ಘಟಕದಿಂದ ನಗರದಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು. ನಗರದ ಕಿತ್ತೂರ ರಾಣಿ ಚನ್ನಮ್ಮ ಪುತ್ಥಳಿಗೆ ಶಾಸಕ

**ಭಾವಚಿತ್ರ ಮೆರವಣಿಗೆ**

**ನಂತರ ಕಿತ್ತೂರು ಚನ್ನಮ್ಮಾಜೀಯ ಬಲಗೈ ಬಂಟ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸರ್ಕಲ್‌ನಿಂದ ಅದ್ದೂರಿ ಡಿಜೆ ಕಾರ್ಯಕ್ರಮ ಹಾಗೂ ಭಾವಚಿತ್ರ ಮೆರವಣಿಗೆ ಆಯೋಜಿಸಲಾಗಿತ್ತು. ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾಕೂಟ, ಬಸವೇಶ್ವರ ಸರ್ಕಲ್, ಪಂಚರಹೊಂಡ, ಬನ್ನಿಕಟ್ಟಿ ಮಾರ್ಗವಾಗಿ ಕಿತ್ತೂರು ರಾಣಿ ಚನ್ನಮ್ಮಾಜಿ ಭಾವಚಿತ್ರದ ಮೆರವಣಿಗೆ ಚನ್ನಮ್ಮ ಸರ್ಕಲ್‌ನಲ್ಲಿ ಸಂಪನ್ನಗೊಂಡಿತು.**

ಸಿ.ಸಿ. ಪಾಟೀಲ ಮಾಲಾರ್ಪಣೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ರಾಚೋಟೇಶ್ವರ ದೇವಸ್ಥಾನದಲ್ಲಿ ಮಹಿಳೆಯರಿಂದ ಕುಂಭ ಮೆರವಣಿಗೆ ಹಮ್ಮಿಕೊಳ್ಳಲಾಯಿತು.

**ಹಳೆ ಜಿಲ್ಲಾಧಿಕಾರಿ ಕಚೇರಿ ಸರ್ಕಲ್ ಹತ್ತಿರದ ಬಸವೇಶ್ವರ ರಕ್ತ ಭಂಡಾರದಲ್ಲಿ ಲಿಂಗಾಯತ ಪಂಚಮಸಾಲಿ ಜಿಲ್ಲಾ ಯುವ ಘಟಕದ ವತಿಯಿಂದ ರಕ್ತದಾನ ಶಿಬಿರ ಜರುಗಿತು. ಶಾಸಕ ಸಿ.ಸಿ. ಪಾಟೀಲ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿದರು. ಇದೇ ವೇಳೆ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ಉಪಾಧ್ಯಕ್ಷ ಬಸವರಾಜ ಗಡ್ಡೆಪ್ಪನವರ ಸೇರಿದಂತೆ ಸುಮಾರು 50ಕ್ಕೂ ಹೆಚ್ಚು ಯುವಕರಿಂದ ರಕ್ತದಾನ ಮಾಡಲಾಯಿತು.**

ಗಾಂಧಿ ಸರ್ಕಲ್ ಹತ್ತಿರ ಇರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮೂರ್ತಿಗೆ ಮಾಲಾರ್ಪಣೆ ಮಾಡಿ, ಮೆರವಣಿಗೆಗೆ ಚಾಲನೆ ನೀಡಲಾಯಿತು. ಕುಂಭಮೇಳ ಮೆರವಣಿಗೆ ಚನ್ನಮ್ಮ ಸರ್ಕಲ್‌ನಲ್ಲಿ ಸಂಪನ್ನಗೊಂಡಿತು. ಮೆರವಣಿಗೆ ಕಾರ್ಯಕ್ರಮದಲ್ಲಿ ಸುಮಾರು 200ಕ್ಕೂ ಹೆಚ್ಚು ಮಹಿಳೆಯರು ಭಾಗವಹಿಸಿದ್ದರು.

ಲಿಂಗಾಯತ ಪಂಚಮಸಾಲಿ ಸಮಾಜದ ಮುಖಂಡ ವಿಜಯಕುಮಾರ ಗಡ್ಡಿ, ಶಾಂತಣ್ಣ ಮುಳವಾಡ, ಬಸವರಾಜ ಗಡ್ಡೆಪ್ಪನವರ, ಶಶಿಧರ್ ದಿಂಡೂರ, ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಸದಸ್ಯೆ ವಿಜಯಲಕ್ಷ್ಮೀ ದಿಂಡೂರ, ವಿಜಯ ಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಶರಣಪ್ಪ ಗೋಳ ಗೊಳಕಿ ಸೇರಿದಂತೆ ಅನೇಕರು ಇದ್ದರು. ರೋಣ ತಾಲ್ಲೂಕಿನ ಬೆಳವಣಕಿ ಗ್ರಾಮದ ವೀರರಾಣಿ ಕಿತ್ತೂರು ಚನ್ನಮ್ಮ ಸರ್ಕಲ್‌ನಲ್ಲಿ ವೀರರಾಣಿ ಕಿತ್ತೂರು ಚನ್ನಮ್ಮ ವಿಜಯೋತ್ಸವ ಅದ್ದೂರಿಯಾಗಿ ಆಚರಿಸಲಾಯಿತು. ರಾಜು ಹಿರೇಮಠ, ಅಂದಪ್ಪ ಹೊಸಂಗಡಿ, ಮುದಕಣ್ಣ ಹೊಸಂಗಡಿ, ವೀರನಗೌಡ ಪಾಟೀಲ, ತಿಪ್ಪಣ್ಣ ತೂಗುಣಸಿ, ಮುತ್ತಪ್ಪ ಕುಸುಗಲ್ಲ, ಶೇಖಪ್ಪ ಬೆಳೆಯಲಿ, ಮುದುಕಪ್ಪ ತೂಗುಣಸಿ, ಈಶಪ್ಪ ಹೊಸಂಗಡಿ, ಅಜ್ಜಪ್ಪ ಹೊಸಂಗಡಿ, ಸಂಗಮೇಶ ಗುದ್ದಿ, ಮಲ್ಲಿಕಾರ್ಜುನ ಪಾಟೀಲ, ಬಸನಗೌಡ ಪಾಟೀಲ, ಸುಭಾಷ ಹೊಸಂಗಡಿ, ಅಮರೇಶ ಹದ್ದಿ, ಮಲ್ಲಪ್ಪ ಹೊಸಂಗಡಿ ಭಾಗವಹಿಸಿದ್ದರು.

# ನಮ್ಮ ಗುರಿ ಈಡೇರುವ ತನಕ ಹೋರಾಟ ನಿಲ್ಲಿಸುವುದಿಲ್ಲ

• ಉದಯವಾಹಿನಿ, ಮುದ್ದೇಬಿಹಾಳ

ಒಳಮೀಸಲಾತಿ ಅನುಷ್ಠಾನಕ್ಕಾಗಿ ಮುದ್ದೇಬಿಹಾಳ ತಾಲ್ಲೂಕು ಒಳಮೀಸಲಾತಿ ಹೋರಾಟ ಐಕ್ಯತಾ ಸಮಿತಿ ನಡೆಸುತ್ತಿರುವ ಜನಜಾಗೃತಿ ಯಾತ್ರೆಯು ಬುಧವಾರ ಅಡವಿ ಸೋಮನಾಳ ಗ್ರಾಮದಿಂದ ಹಗರಗುಂಡ ಗ್ರಾಮದತ್ತ ಸಂಚರಿಸುವಾಗ ಬೈಕ್ ರ್ಯಾಲಿಯಲ್ಲಿ ಪಾಲ್ಗೊಂಡಿದ್ದ ಮಾರುತಿ ಸಿದ್ದಾಪೂರ ಎನ್ನುವವರು ಕುಸಿದು ಬಿದ್ದು ಅಸ್ವಸ್ಥರಾದ ಘಟನೆ ನಡೆದಿದೆ. ತಕ್ಷಣ ಬೈಕ್ ರ್ಯಾಲಿಯನ್ನು ಅರ್ಧಕ್ಕೆ ಮೊಟಕುಗೊಳಿಸಿ ಮಾರುತಿ ಅವರನ್ನು ಅಡವಿ ಸೋಮನಾಳದ ಸರ್ಕಾರಿ ಆಸ್ಪತ್ರೆಗೆ ಕರೆತರಲಾಯಿತು.

ಅಲ್ಲಿದ್ದ ವೈದ್ಯರು ಪ್ರಾಥಮಿಕ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ನಾಲತವಾಡದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕಳಿಸಿದರು. ಅಲ್ಲಿಯೂ ಪ್ರಾಥಮಿಕ ಚಿಕಿತ್ಸೆ ನೀಡಿ ಇನ್ನೂ ಹೆಚ್ಚಿನ ಚಿಕಿತ್ಸೆಗೆ ಮುದ್ದೇಬಿಹಾಳದಲ್ಲಿರುವ ತಾಲ್ಲೂಕು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಕರೆತರಲಾಯಿತು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಸಮಿತಿ ಮುಖಂಡ ಬಸವರಾಜ ಪೂಜಾರಿ ಅವರು ಅ.21ರಿಂದ ತಂಗಡಗಿಯಿಂದ ಹೋರಾಟ, ಜನ ಜಾಗೃತಿ ಯಾತ್ರೆ ಪ್ರಾರಂಭಿಸಿದ್ದೇವೆ. ಹೋರಾಟ ಗಾರರೊಬ್ಬರು ಅಸ್ವಸ್ಥಗೊಂಡಿದ್ದರೂ


ಉದಯವಾಹಿನಿ ಚಿತ್ರ

ನಮ್ಮ ಹೋರಾಟ ನಿಲ್ಲಿಸುವುದಿಲ್ಲ.

ಹೋರಾಟದಲ್ಲಿ ನಾವು ಪ್ರಾಣತ್ಯಾಗ ಮಾಡಿದರೂ ನಮ್ಮ ಗುರಿ ಈಡೇರುವತನಕ ಹೋರಾಟ ನಿಲ್ಲಿಸುವುದಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡಲೇ ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗವು ನೀಡಿದ ವರದಿಯನ್ನು ಸುಪ್ರೀಂ ಕೋರ್ಟನ ಸಲಹೆಯಂತೆ ಕೂಡಲೇ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿದರು. ಇತ್ತ ರ್ಯಾಲಿಯಲ್ಲಿ ಪಾಲ್ಗೊಂಡಿರುವ ಹೋರಾಟಗಾರರು ತಮ್ಮ ರ್ಯಾಲಿ ಮುಂದುವರೆಸಿ ಮಾರ್ಗಮಧ್ಯೆ ಬರುವ ಗ್ರಾಮಗಳಲ್ಲಿ ಸಭೆ ನಡೆಸಿ ಒಳ ಮೀಸಲಾತಿ ಅವಶ್ಯಕತೆ ಕುರಿತು ಮನವರಿಕೆ ಮಾಡಿಕೊಟ್ಟರು. ಸಂಜೆ ರ್ಯಾಲಿ ನಾಗರಬೆಟ್ಟ ಗ್ರಾಪಂ ನಲ್ಲಿ ವಾಸ್ತವ್ಯ ಹೂಡಿದೆ. ಗುರುವಾರ ಬೆಳಿಗ್ಗೆ ನಾಗರ ಬೆಟ್ಟದಿಂದ ಹಿರೇಮುರಾಳ, ಕವಡಿಮಟ್ಟಿ ಗ್ರಾಪಂ ಮಾರ್ಗವಾಗಿ ಸಂಚರಿಸಿ ಸಂಜೆ ಕೋಳೂರು ಗ್ರಾಪಂನಲ್ಲಿ ವಾಸ್ತವ್ಯ ಮಾಡಲಿದೆ.

# ಶಿವಶಕ್ತಿ ಸಾಂಸ್ಕೃತಿಕ ಭವನದ ಉದ್ಘಾಟನೆ, ಸರ್ವಧರ್ಮ ಸಾಮೂಹಿಕ ವಿವಾಹ

• ಉದಯವಾಹಿನಿ, ಸಿರುಗುಪ್ಪ

ನಗರದ ಪಿನಾಕಿನಿ ಆಶ್ರಮದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಶ್ರೀಶೈಲ ಪೀಠದ ಶಿವಶಕ್ತಿ ಸಾಂಸ್ಕೃತಿಕ ಭವನವನ್ನು ಜಗದ್ಗುರುಗಳಾದ ಉಜ್ಜಯಿನಿ, ಶ್ರೀಶೈಲ, ಕಾಶೀ ಪೀಠದ ಶ್ರೀಗಳು ಉದ್ಘಾಟಿಸಿದರು. ಉದ್ಘಾಟನಾ ನಿಮಿತ್ತ ಶ್ರೀ ಜಗದ್ಗುರುಗಳ ಸಾನಿಧ್ಯದಲ್ಲಿ ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಅವರು ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ದೀಪ ಬೆಳಗಿಸಿ ಚಾಲನೆ ನೀಡಿದರು.

ನಂತರ ಮಾತನಾಡಿ ಶಿಕ್ಷಣ, ದಾಸೋಹ, ನೈತಿಕತೆಯ ಮಹತ್ವವನ್ನು ಸಮಾಜಕ್ಕೆ ತಿಳಿಸುವುದರ ಜೊತೆಗೆ ಈ ನಾಡಿನ ಸಂಸ್ಕೃತಿಯನ್ನು ಉಳಿಸುವಲ್ಲಿ ಮಠ ಮಾನ್ಯಗಳ ಪಾತ್ರ ಹಿರಿದಾಗಿದೆ. ಕೇವಲ ಧಾರ್ಮಿಕ ಕೇಂದ್ರಗಳಾಗಿರದೇ ಸಮಾಜದಲ್ಲಿನ ನಮ್ಮೆಲ್ಲರ ಹಿತಚಿಂತನೆಯಲ್ಲಿ ಭಾಗಿಯಾಗಿರುವುದು ಗಮನಾರ್ಹವಾದ ಸಂಗತಿಯಾಗಿದೆಂದರು.

ಉಜ್ಜಯಿನಿ ಪೀಠದ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿ ಕೇಂದ್ರ ಶಿವಾಚಾರ್ಯರು ತಮ್ಮ ಆರ್ಶೀವಚನ


ಉದಯವಾಹಿನಿ ಚಿತ್ರ

ನೀಡಿ ದಾನ ಕೊಡುವಂತವರ ಪಡೆಯುವಂತಹ ವ್ಯಕ್ತಿಯ ಮನಸ್ಸು, ಹೃದಯ ಪರಿಶುದ್ದವಾಗಿರುವುದರೆ ಅದು ಶತಮಾನಗಳ ನಂತರವೂ ಕೂಡ ಸಾರ್ಥಕತೆಯ ಉದ್ದೇಶಕ್ಕೆ ಸದುಪಯೋಗವಾಗುತ್ತದೆ ಎಂಬುದಕ್ಕೆ ಭವನವೇ ಸಾಕ್ಷಿಯೆಂದು ತಿಳಿಸಿದರು.

ಇದೇ ವೇಳೆ ಕಾಶೀಪೀಠದ ಶ್ರೀ 1008 ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದರು, ಕಂಬಾಳಿ ಮಠದ ವೀರ ಭದ್ರ ಶಿವಾಚಾರ್ಯರು, ಇನ್ನಿತರ ಮಠಗಳ ಶ್ರೀಯವರು, ಜಮಖಂಡಿ ಕ್ಷೇತ್ರದ ಶಾಸಕ ಜಗದೀಶ್ ಗುಡಗುಂಟಿ, ಮಾಜಿ ಸಂಸದ ಕರಡಿ ಸಂಗಣ್ಣ, ಮಾಜಿ ಶಾಸಕರಾದ ಟಿ.ಎಮ್.ಚಂದ್ರಶೇಖರಯ್ಯ ಸ್ವಾಮಿ, ಎಮ್.ಎಸ್.ಸೋಮಲಿಂಗಪ್ಪ, ಜಿ.ಸೋಮಶೇಖರರೆಡ್ಡಿ, ಪಿನಾಕಿನಿ ಸೇವಾ ಸಮಿತಿಯ ಪದಾಧಿಕಾರಿಗಳು ಸಾರ್ವಜನಿಕರು ಇದ್ದರು.

**ಏಕೆಂದರೆ ನಿಮ್ಮ ಮದುವೆಗಾಗಿ ಜಗದ್ಗುರುಗಳು, ಮಠಾಧೀಶರು, ಗಣ್ಯರು, ಕೊಡುಗೈ ದಾನಿಗಳ ಆಶೀರ್ವಾದ ದೊರೆಯುತ್ತಿದೆ. ಇಷ್ಟೊಂದು ಅದ್ದೂರಿ ಕಾರ್ಯಕ್ರಮದಲ್ಲಿ ವಿವಾಹ ಆಗಿದ್ದೀರಿ ನಿಮ್ಮ ದಾಂಪತ್ಯ ಜೀವನ ಅನ್ಯೋನ್ಯವಾಗಿರಲೆಂದು ಹರಸಿದರು.**

**ಅದು ಭಾಗ್ಯವಂತರ ಮದುವೆ**

**ಶ್ರೀಶೈಲ ಪೀಠದ ಶ್ರೀ 1008 ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ತಮ್ಮ ಆಶೀರ್ವಚನದಲ್ಲಿ ಸಾಮೂಹಿಕ ಮದುವೆಯೆಂದರೆ ಅದು ಬಡವರ ಮದುವೆ, ಕೈಲಾಗದವರ ಮದುವೆಯಲ್ಲ ಅದು ಭಾಗ್ಯವಂತರ ಮದುವೆಯಾಗಿದೆ.**

# ಒಳ ಮೀಸಲಾತಿ ಅವೈಜ್ಞಾನಿಕ; ಸಚಿವ ಸಂಪುಟ ಸಭೆಯಲ್ಲಿ ತಿರಸ್ಕರಿಸಿ

• ಉದಯವಾಹಿನಿ, ಸಿಂಧನೂರು

ಅಸಮರ್ಥನೀಯ, ಅತಾರ್ಕಿಕ ದತ್ತಾಂಶಗಳು ಆಧರಿಸಿದ. ಒಳ ಮೀಸಲಾತಿ ವರ್ಗೀಕರಣವನ್ನು ಸಚಿವ ಸಂಪುಟ ಸಭೆಯಲ್ಲಿ ತಿರಸ್ಕರಿಸುವಂತೆ. ಹಾಗೂ ಕಾಂತರಾಜು ಆಯೋಗದ ವರದಿಯನ್ನು ಬಹಿರಂಗ ಪಡಿಸುವಂತೆ ಆಗ್ರಹಿಸಿ ಕರ್ನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟ ತಾಲ್ಲೂಕು ತಹಶೀಲ್ದಾರ್ ಮೂಲಕ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ನಗರದ ಪ್ರವಾಸಿ ಮಂದಿರದಿಂದ ತಾಲ್ಲೂಕಿನ ವಿವಿಧ ಸಮಾಜದ ಮುಖಂಡರು ಸೇರಿ ಒಳ ಮೀಸಲಾತಿ ವಿರುದ್ದ ಘೋಷಣೆ ಕೂಗುತ್ತ ತಾಲ್ಲೂಕು ತಹಶೀಲ್ದಾರ್ ಕಛೇರಿ ಆಗಮಿಸಿ ಬೃಹತ್ ಪ್ರತಿಭಟನೆ ನಡೆಸಿದರು. ನಂತರ ಮಾತನಾಡಿದ ಭೋವಿ ಸಮಾಜದ ಹಿರಿಯ ಮುಖಂಡ ಆರ್ ಅಶೋಕ್ ಉಮಲೂಟಿ ಅವರು ಪರಿಶಿಷ್ಟ ಜಾತಿಯ ಪಳ ಮೀಸಲಾತಿಯು ವರ್ಗೀಕರಣ ಸಂಭಂದಿಸಿದಂತೆ ಇತ್ತೀಚೆಗೆ ಗೌರವೀನತ ಸರ್ವೋಚ್ಚ ನ್ಯಾಯಾಲಯದ ಸಪ್ತಪೀಠವು ತೀರ್ಪು ನೀಡಿದ್ದು. ಸರಿ ಅಷ್ಟೇ ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಯ ಒಳ ಮೀಸಲಾತಿಯ ಕುರಿತು ಅವೈಜ್ಞಾನಿಕ ಅವತಾರ್ಕಿಕ, ಅಸಮರ್ಥನೀಯ ದತ್ತಾಂಶಗಳ ಆಧರಿಸಿ ಒಳಮೀಸಲಾತಿ ವರ್ಗೀಕರಣಕ್ಕೆ. ಮುಂದಾಗಿದ್ದು. ನೋಡಿದರೆ ಇದು ಸಾಮಾಜಿಕ ನ್ಯಾಯದ ವಿರುದ್ಧವಾಗಿದೆ. ಎಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ಈ ಸಂ. ರಾಮಕೃಷ್ಣ ಭಜಂತ್ರಿ ದುರ್ಗಪ್ಪ ಮಲದಗುಡ್ಡ. ರವಿ ರಾಠೋಡ್ ಲಕ್ಷ್ಮಣ ರಮೇಶ್ ರಾಮಣ್ಣ ಸೇರಿದಂತೆ ಇತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

**ಸರ್ಕಾರಕ್ಕೆ ಮನವಿ ಪತ್ರ**

**ಪರಿಶಿಷ್ಟ ಜಾತಿಯ 101 ಸಮುದಾಯಗಳ ಸಾಮಾಜಿಕ ಶೈಕ್ಷಣಿಕ ಹಾಗೂ ರಾಜಕೀಯ ಪ್ರಾತಿನಿಧ್ಯ ಸಿಕ್ಕಿಲ್ಲ. ಇದು ಸಮಗ್ರ ತನಿಖೆ ವಸ್ತುನಿಷ್ಠ ಅಂಕಿ ಅಂಶಗಳು ಕೊರತೆ ಇದ್ದು. ಈ ವೈಜ್ಞಾನಿಕ ಅಧ್ಯಯನ ಕೈಗೊಳ್ಳದೇ ಕೆಲವು ಪಟ್ಟ ಭದ್ರ ಹಿತಾಸಕ್ತಿಗಳು ಒತ್ತಡಕ್ಕೆ ಮಣಿದ ಏಕಾಏಕಿ ಒಳ ಮೀಸಲಾತಿ ವರ್ಗೀಕರಣ ರಾಜ್ಯ ಸರ್ಕಾರ ಏಕ ಪಕ್ಷವಾಗಿ ಕೈಕೊಳ್ಳುವ ನಿರ್ಧಾರ ಸರ್ಕಾರದ ನಡೆಯನ್ನು ಕರ್ನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟವು ತೀವ್ರವಾಗಿ ಖಂಡಿಸುತ್ತದೆ ಎಂದು ಆಗ್ರಹಿಸಿ ಸರ್ಕಾರಕ್ಕೆ ಮನವಿ ಪತ್ರ ನೀಡಿ ಒತ್ತಾಯಿಸಿದರು.**

# ಇಂದ್ರಾಳಿ ರೈಲ್ವೆ ಮೇಲ್ಸೇತುವೆ: ಜ.15ರೊಳಗೆ ಸಂಚಾರಕ್ಕೆ ಮುಕ್ತ

• ಉದಯವಾಹಿನಿ, ಉಡುಪಿ

ಇಂದ್ರಾಳಿ ರೈಲ್ವೆ ಮೇಲ್ಸೇತುವೆಯ ಕಾಮಗಾರಿ ಪೂರ್ಣಗೊಳಿಸಿ, ಜನವರಿ 15ರೊಳಗೆ ವಾಹನ ಸಂಚಾರಕ್ಕೆ ಅನುಕೂಲ ಮಾಡಲಾಗುವುದು ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು. ರೈಲ್ವೆ ಮೇಲ್ಸೇತುವೆಯ ಕಾಮಗಾರಿಯನ್ನು ಬುಧವಾರ ವೀಕ್ಷಣೆ ಮಾಡಿದ ಬಳಿಕ ಮಾತನಾಡಿದ ಅವರು, 2018ರಲ್ಲಿ ಈ ಮೇಲ್ಸೇತುವೆಯ ಕಾಮಗಾರಿ ಆರಂಭವಾಗಿದ್ದು, ರೈಲ್ವೆ ಇಲಾಖೆಯ ವಿಳಂಬದಿಂದಾಗಿ ಕಾಮಗಾರಿ ಕುಂಟುತ್ತಿದೆ ಎಂದರು. 138 ಟನ್ ತೂಕದ ಗರ್ಡರ್ ಅಳವಡಿಸುವ ಯೋಜನೆ ಇದಾಗಿತ್ತು. ರಸ್ತೆಯ ಉದ್ದ 38 ಮೀಟರ್ ನಿಂದ 58 ಮೀಟರ್‌ಗೆ ವಿಸ್ತರಣೆಯಾಗಿದೆ. ಗರ್ಡರ್‌ಗಳಿಗೆ ಅಳವಡಿಸುವ ಸ್ಟೀಲ್ 420 ಟನ್‌ಗೆ ಏರಿಕೆಯಾಗಿದೆ. ಕಾಮಗಾರಿ ವಿಳಂಬವಾಗಿರುವುದು ನಿಜ. ಕಾಮಗಾರಿಗೆ ಬೇಕಾದ ಎಲ್ಲಾ ಸಾಮಗ್ರಿ ಗಳು ಈಗ ಬಂದಿವೆ. ಕೆಲಸ ಇನ್ನಷ್ಟು ಚುರುಕುಗೊಳ್ಳಲಿದೆ ಎಂದು ವಿವರಿಸಿದರು. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಡೆಸಿರುವ ಸಭೆಯಲ್ಲಿ


ಉದಯವಾಹಿನಿ ಚಿತ್ರ

**ಕೆಲಸ ಇನ್ನಷ್ಟು ಚುರುಕು**

ಅಧಿಕಾರಿಗಳು, ಗುತ್ತಿಗೆದಾರರ ವಿರುದ್ಧ ಎಫ್‌ಐಆರ್ ದಾಖಲಿಸಲು ತೀರ್ಮಾನವಾಗಿದೆ. ಅಪಘಾತಗಳು ಸಂಭವಿಸುತ್ತಿರುವು ದರಿಂದ ಎಫ್‌ಐಆರ್ ಕೂಡ ದಾಖಲಾಗಿದೆ. ಅಧಿಕಾರಿಗಳು, ಗುತ್ತಿಗೆದಾರರು ಜನವರಿ 15ರೊಳಗೆ ಕಾಮಗಾರಿ ಮುಗಿಸುವುದಾಗಿ ಪೊಲೀಸ್ ಠಾಣೆಯಲ್ಲಿ ಮುಚ್ಚಳಿಕೆ ಬರೆದು ಕೊಟ್ಟಿದ್ದಾರೆ ಎಂದು ಸಂಸದ ತಿಳಿಸಿದರು.

ನಾನು ಸಂಸದನಾದ ಬಳಿಕ ನಾಲ್ಕೈದು ಬಾರಿ ಸಭೆ ಕರೆದಿದ್ದೇನೆ. ಸ್ಥಳಕ್ಕೆ ನಾಲ್ಕು ಬಾರಿ ಭೇಟಿ ಕೊಟ್ಟಿದ್ದೇನೆ ಎಂದು ತಿಳಿಸಿದರು.

# ಒಳಮೀಸಲಾತಿ ವರ್ಗೀಕರಣ ತಿರಸ್ಕರಿಸಲು ಆಗ್ರಹ

• ಉದಯವಾಹಿನಿ, ಗದಗ

ಸೂಕ್ತ ಅಧ್ಯಯನ ಮತ್ತು ಪ್ರಾತಿನಿಧ್ಯದ ಕೊರತೆ ಸಾಬೀತು ಪಡಿಸುವ ದತ್ತಾಂಶಗಳು ಲಭ್ಯವಾಗುವವರೆಗೂ ಸರ್ಕಾರ ಒಳಮೀಸಲಾತಿ ವರ್ಗೀಕರಣ ಮಾಡಬಾರದು ಎಂದು ಅಲೆಮಾರಿ, ಬಂಜಾರ, ಭೋವಿ, ಕೊರಮ, ಕೊರಚ, ಕೊರವ ಸಮುದಾಯಗಳ ಮುಖಂಡರು ಗದಗ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಮುಖಂಡ ಚಂದ್ರಕಾಂತ ಚವ್ಹಾಣ ಮಾತನಾಡಿ, ಪರಿಶಿಷ್ಟ ಜಾತಿಯ ಒಳಮೀಸಲಾತಿಗೆ (ವರ್ಗೀಕರಣ) ಸಂಬಂಧಿಸಿದಂತೆ ಇತ್ತೀಚೆಗೆ ಸುಪ್ರೀಂ ಕೋರ್ಟ್‌ನ ಸಪ್ತಪೀಠ ತೀರ್ಪು ನೀಡಿದ್ದು ಸರಿಯಷ್ಟೇ. ಪರಿಶಿಷ್ಟ ಜಾತಿಯ ಒಳಮೀಸಲಾತಿ ಕುರಿತಾಗಿ ರಾಜ್ಯ ಸರ್ಕಾರ ಅವೈಜ್ಞಾನಿಕ, ಅತಾರ್ಕಿಕ ಹಾಗೂ ಅಸಮರ್ಥನೀಯ ದತ್ತಾಂಶಗಳನ್ನು ಆಧರಿಸಿ ಒಳ ಮೀಸಲಾತಿ ವರ್ಗೀಕರಣಕ್ಕೆ ಮುಂದಾಗಿರುವುದು ಸಾಮಾಜಿಕ ನ್ಯಾಯದ ಕಗ್ಗೊಲೆಯಾಗಿದೆ' ಎಂದು ಹರಿಹಾಯ್ದರು.


ಉದಯವಾಹಿನಿ ಚಿತ್ರ

ಪರಿಶಿಷ್ಟ ಜಾತಿಯ 101 ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ, ರಾಜಕೀಯ ಪ್ರಾತಿನಿಧ್ಯಕ್ಕೆ ಸಂಬಂಧಿಸಿದಂತೆ ಸಮಗ್ರ, ವಸ್ತುನಿಷ್ಠ ಅಂಕಿ-ಅಂಶಗಳ ಕೊರತೆ ಇದೆ.

ಈ ಬಗ್ಗೆ ವೈಜ್ಞಾನಿಕ ಅಧ್ಯಯನ ಕೈಗೊಳ್ಳದೆ, ಕೆಲವು ಪಟ್ಟಭದ್ರ ಹಿತಾಸಕ್ತಿಗಳ ಒತ್ತಡಕ್ಕೆ ಮಣಿದು ಒಳಮೀಸಲಾತಿ ವರ್ಗೀಕರಣ ಕುರಿತಾಗಿ ಏಕ ಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳಲು ಹೊರಟಿರುವ ರಾಜ್ಯ ಸರ್ಕಾರದ ನಡೆಯನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ' ಎಂದರು.

ಸರ್ಕಾರವು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಪರಿಶಿಷ್ಟ ಜಾತಿಯ ಒಳಮೀಸಲಾತಿಯ ಕುರಿತಂತೆ ಯಾವುದೇ ಏಕಪಕ್ಷೀಯ ನಿರ್ಧಾರಗಳನ್ನು ಕೈಗೊಳ್ಳಬಾರದು' ಎಂದು ಒತ್ತಾಯಿಸಿದರು.

# ಮಾದರಿ ನೀತಿ ಸಂಹಿತೆ ಉಲ್ಲಂಘನೆ ಸಂಬಂಧ 8 ಪ್ರಕರಣ ದಾಖಲು

• ಉದಯವಾಹಿನಿ, ಬಳ್ಳಾರಿ

ಸಂಡೂರು ವಿಧಾನಸಭೆ ಉಪಚುನಾವಣೆ ಅಂಗವಾಗಿ ಮಾದರಿ ನೀತಿ ಸಂಹಿತೆಯು ಕಟ್ಟುನಿಟ್ಟಾಗಿ ಜಾರಿಯಲ್ಲಿದ್ದು, ಬುಧವಾರ ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಅನಧಿಕೃತವಾಗಿ ಸಾಗಿಸುತ್ತಿದ್ದ 2616.93 ಲೀಟರ್ (ರೂ.7,76,648 ಮೌಲ್ಯ) ಮದ್ಯ ವಶಪಡಿಸಿಕೊಂಡು 8 ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ಅಬಕಾರಿ ಪೊಲೀಸ್ ಅಧಿಕಾರಿಗಳಿಂದ 2615.49 ಲೀಟರ್ ಮದ್ಯ, ಪೊಲೀಸ್ ಇಲಾಖೆ ಅಧಿಕಾರಿಗಳಿಂದ 1.41 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ. ಸಂಡೂರು ವಿಧಾನಸಭೆ ಉಪಚುನಾವಣೆಯ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಈಗಾಗಲೇ ವಿವಿಧ ತಂಡಗಳನ್ನು ರಚಿಸಲಾಗಿದ್ದು, ಅವುಗಳು ಕಾರ್ಯಪ್ರವೃತ್ತವಾಗಿದೆ. 9 ಫ್ಲೈಯಿಂಗ್ ಸ್ಕ್ವಾಡ್ 1 ಎಸ್‌ಎಸ್‌ಟಿ ತಂಡ ಮತ್ತು 4 ಅಬಕಾರಿ ತಂಡ ಕಾರ್ಯ ನಿರ್ವಹಿಸುತ್ತಿವೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಕೆರೆಯ ನಡುವೆ, ರಸ್ತೆ ಮಧ್ಯೆಯೇ ವಿದ್ಯುತ್ ಕಂಬ

• ಉದಯವಾಹಿನಿ, ಚಿತ್ರದುರ್ಗ

ನಗರದ ವಿವಿಧೆಡೆ ಇರುವ ವಿದ್ಯುತ್ ಕಂಬಗಳ ಅವ್ಯವಸ್ಥೆ ಆಶ್ಚರ್ಯ, ಆತಂಕ ಉಂಟುಮಾಡುವಂತಿದೆ. ತುಂಬಿ ನಿಂತಿರುವ ಕೆರೆಯ ನಡುವೆ, ರಸ್ತೆ ಮಧ್ಯದಲ್ಲಿ ವಿದ್ಯುತ್ ಕಂಬಗಳಿದ್ದು, ಬೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಗೆ ಕನ್ನಡಿ ಹಿಡಿದಂತಿದೆ. ಮುರುಘಾ ಮಠದ ಮುಂದಿನ ಐತಿಹಾಸಿಕ ಅರಸನ ಕೆರೆಯ ನೀರಿನ ನಡುವೆ 10ಕ್ಕೂ ಹೆಚ್ಚು ವಿದ್ಯುತ್ ಕಂಬಗಳಿದ್ದು ಅಲ್ಲಿ ಓಡಾಡುವ ಜನರಿಗೆ ಆಶ್ಚರ್ಯ ತರಿಸುತ್ತಿವೆ. ಈಗ ಎಲ್ಲೆಡೆ ಮಳೆ ಸುರಿಯುತ್ತಿದ್ದು, ಕೆರೆ ತುಂಬಿ ನಿಂತಿದೆ.

ಕೆರೆಯ ದಡದಲ್ಲೇ ವಿದ್ಯುತ್ ಪರಿವರ್ತಕವಿದ್ದು, ಕಂಬಗಳ ಸಾಲು ಕೆರೆಯ ನಡುವೆಯೇ ಸಾಗಿ ಹೋಗಿದೆ. ಹಲವು ವರ್ಷಗಳಿಂದ ಈ ಕಂಬ ಗಳನ್ನು ಸ್ಥಳಾಂತರಿಸುವಂತೆ ಸಾರ್ವಜನಿಕರು ಒತ್ತಾಯಿಸುತ್ತಿದ್ದರೂ ಬೇಡಿಕೆ ಈಡೇರಿಲ್ಲ. ಅರಸನ ಕೆರೆಯಲ್ಲಿ ಮೀನು ಸಾಕಣೆ ಮಾಡಲಾಗಿದ್ದು, ಸ್ಥಳೀಯ ಮೀನುಗಾರರು ಆಗಾಗ ಮೀನು ಹಿಡಿಯಲು


ಉದಯವಾಹಿನಿ ಚಿತ್ರ

ಕೆರೆಗೆ ಇಳಿಯುತ್ತಾರೆ. ವಿದ್ಯುತ್ ಕಂಬಗಳ ತಂತಿಗಳು ಕೆಳಗೇ ನೇತಾಡುತ್ತಿದ್ದು, ಮೀನುಗಾರರಲ್ಲಿ ಭಯ ಸೃಷ್ಟಿಸಿದೆ. ಮೀನುಗಾರರು ಕೂಡ ಈ ಬಗ್ಗೆ ನಗರಸಭೆ, ಮೀನುಗಾರಿಕೆ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ನಗರಸಭೆ ಅಧಿಕಾರಿಗಳು ಕೂಡ ಬೆಸ್ಕಾಂ ಸಿಬ್ಬಂದಿಗೆ ಸೂಚನೆ ನೀಡಿದ್ದರೂ ಇಲ್ಲಿಯವರೆಗೂ ಕಂಬಗಳು ಸ್ಥಳಾಂತರಗೊಂಡಿಲ್ಲ. ಕಂಬಗಳಲ್ಲಿ ಅಳವಡಿಸಲಾಗಿರುವ ತಂತಿಗಳು ಕೈಗೆಟಕುವ ಅಂತರದಲ್ಲಿ ನೇತಾಡುತ್ತಿವೆ. ಯಾವಾಗ ಕಳಚಿ ಬೀಳುತ್ತವೋ ಎಂಬ ಭಯ ಕಾಡುತ್ತಿದೆ. ಕಡೇಪಕ್ಷ ಕೆರೆ ದಡಕ್ಕಾದರೂ ಕಂಬಗಳನ್ನು ಸ್ಥಳಾಂತರಿಸುವಂತೆ ಕೇಳಿದ್ದೇವೆ. ಆದರೂ ಸ್ಥಳಾಂತರ ಮಾಡಿಲ್ಲ ಎಂದು ಮೀನುಗಾರರೊಬ್ಬರು ಅಸಮಾಧಾನ ವ್ಯಕ್ತಪಡಿಸಿದರು.

# ಕಟ್ಟೆಗಳ ಮೇಲೆ ಕುಳಿತು ಆಹಾರ ಸೇವನೆ ಮಾಡಲು ಅನುಕೂಲ

## ನಗರಸಭೆ ಕಚೇರಿ ಹಿಂಭಾಗದ ಖಾಲಿ ಜಾಗದಲ್ಲಿ ಬೇಲೂರು ರಸ್ತೆಗೆ ಪ್ರವೇಶ ದ್ವಾರ ಕಲ್ಪಿಸಿ ಆಹಾರ ಮಳಿಗೆಗಳನ್ನು ನಿರ್ಮಾಣ

• ಉದಯವಾಹಿನಿ, ಚಿಕ್ಕಮಗಳೂರು

ನಗರಸಭೆ ಆವರಣಕ್ಕೆ ಹೊಂದಿಕೊಂಡಂತೆ ನಿರ್ಮಿಸಲಾಗಿರುವ ಆಹಾರ ಮಳಿಗೆ(ಫುಡ್ ಕೋರ್ಟ್) ಕಾಮ ಗಾರಿ ಪೂರ್ಣಗೊಂಡಿದ್ದು, ಹರಾಜು ಪ್ರಕ್ರಿಯೆಗೆ ಕಾದು ನಿಂತಿದೆ. ಇದರಿಂದಾಗಿ ತಳ್ಳುವ ಗಾಡಿಗಳು ರಸ್ತೆಯಲ್ಲೇ ನಿಲ್ಲುವುದು ತಪ್ಪಿಲ್ಲ. ನಗರಸಭೆ ಕಚೇರಿ ಹಿಂಭಾಗದ ಖಾಲಿ ಜಾಗದಲ್ಲಿ ಬೇಲೂರು ರಸ್ತೆಗೆ ಪ್ರವೇಶ ದ್ವಾರ ಕಲ್ಪಿಸಿ ಆಹಾರ ಮಳಿಗೆಗಳನ್ನು ನಿರ್ಮಿಸಲಾಗಿದೆ.

ಬೀದಿ ಬದಿ ವ್ಯಾಪಾರಿಗಳಿಗೆ ಅನುಕೂಲ ಆಗು ವಂತೆ ಫುಡ್‌ಕೋರ್ಟ್ ನಿರ್ಮಿಸಲಾಗಿದೆ. 3.4 ಕೋಟಿ ವೆಚ್ಚದಲ್ಲಿ ಸುಸಜ್ಜಿತ ಮಳಿಗೆ ನಿರ್ಮಾಣವಾಗಿದೆ. ಆದರೆ, ಸಾರ್ವಜನಿಕರಿಗೆ ಲಭ್ಯವಾಗಲು ಇನ್ನಷ್ಟು ದಿನ ಕಾಯಬೇಕಿದೆ. ಫುಡ್‌ಕೋರ್ಟ್ ಆವರಣದ ನಾಲ್ಕು ಕಡೆ ಮಳಿಗೆ ನಿರ್ಮಿಸಿ ಮಧ್ಯ ಭಾಗದಲ್ಲಿ ಖಾಲಿ ಜಾಗ ಉಳಿಸಲಾಗಿದೆ. ಈ ಜಾಗದಲ್ಲಿ ಇಂ ಟರ್


ಉದಯವಾಹಿನಿ ಚಿತ್ರ

**ಫುಡ್ ಕೋರ್ಟ್ ಹರಾಜಿಗೆ ಕಾದಿರುವ ಮಳಿಗೆ**

ಲಾಕ್ ಇರುವ ಪ್ರಾಂಗಣ ನಿರ್ಮಿಸಲಾಗಿದೆ. ಹೈಟೆಕ್ ಶೌಚಾಲಯ, ಫೌಂಟೆನ್ ನಿರ್ಮಿಸಲಾಗಿದೆ. ಮೊದಲೇ ಇದ್ದ ಮರಗಳನ್ನು ಕಡಿಯದೆ ಅದರ ಸುತ್ತಲೂ ಫೌಂಟೆನ್ ರೀತಿ ಕಟ್ಟೆಗಳನ್ನು ಕಟ್ಟಲಾಗಿದೆ. ಮರದ ಕೆಳಗಿನ ಕಟ್ಟೆಗಳ ಮೇಲೆ ಕುಳಿತು ಆಹಾರ ಸೇವನೆ ಮಾಡಲು ಅನುಕೂಲ ಕಲ್ಪಿಸಲಾಗಿದೆ.

46 ಮಳಿಗೆಗಳು ನಿರ್ಮಾಣವಾಗಿದ್ದು, ಬೇ ಲೂರು ರಸ್ತೆಯ ಒಂದು ಬದಿಯಲ್ಲಿ, ಆಜಾದ್ ಪಾರ್ಕ್ ಸುತ್ತಮುತ್ತ, ನಗರಸಭೆ ಸುತ್ತಮುತ್ತ ರಸ್ತೆ ಬದಿಯಲ್ಲಿ ನಿಲ್ಲುವ ತಳ್ಳುವ ಗಾಡಿಗಳನ್ನು ಸ್ಥಳಾಂತರ ಮಾಡುವುದು ಈ ಆಹಾರ ಮಳಿಗೆ ನಿರ್ಮಾಣದ ಉದ್ದೇಶ. ಕುಡಿಯುವ ನೀರು ಸೇರಿ ಎಲ್ಲಾ ಸೌಲಭ್ಯಗಳನ್ನು ಒದಗಿಸಿ ಮಳಿಗೆ ಬಿಟ್ಟುಕೊಡಲು ನಗರಸಭೆ ತಯಾರಿ ನಡೆಸಿದೆ. ಯೋಜನೆಯಂತೆ 2023ರ ನವೆಂಬರ್‌ನಲ್ಲೇ ಕಾಮಗಾರಿ ಪೂರ್ಣಗೊಂಡು ಸಾರ್ವಜನಿಕರಿಗೆ ಲಭ್ಯವಾಗಬೇಕಿತ್ತು. ಕುಂಟುತ್ತಾ ಸಾಗಿದ್ದ ಕಾಮಗಾರಿ ತಾಂತ್ರಿಕ ಕಾರಣಗಳಿಂದ ಸ್ಥಗಿತಗೊಂಡಿತ್ತು. ನಂತರ 2023ರ ಜುಲೈನಲ್ಲಿ ಮತ್ತೆ ಆರಂಭವಾಗಿ ಈಗ ಪೂರ್ಣಗೊಂಡಿದೆ. ಆದರೆ, ಬಾಗಿಲು ಬಂದ್ ಮಾಡಿ ಪಾಳು ಬಿಡಲಾಗಿದೆ.

**ಎಲ್ಲವೂ ಸಾಕಾರಗೊಳ್ಳಲಿದೆ**

**ಎರಡು ಮೂರು ಬಾರಿ ಹರಾಜು ಪ್ರಕ್ರಿಯೆ ನಡೆಸಿದರೂ ವಾಜಿಪೇಯಿ ವಾಣಿಜ್ಯ ಸಂಕೀರ್ಣದಲ್ಲಿ ಹಿಂಭಾಗದ ಮಳಿಗೆ ಪಡೆಯಲು ಜನ ಆಸಕ್ತಿ ತೋರಿಸುತ್ತಿಲ್ಲ. ಆದ್ದರಿಂದ ಕಡಿಮೆ ಬಾಡಿಗೆ ನಿಗದಿ ಮಾಡಿ ಹರಾಜು ಪ್ರಕ್ರಿಯೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದರು. ರಸ್ತೆ ಗುಂಡಿ ಮುಚ್ಚುವುದು ಹೊಸ ರಸ್ತೆಗಳ ನಿರ್ಮಾಣ ಫುಡ್ ಕೋರ್ಟ್ ಉದ್ಘಾಟನೆ ಸೇರಿ ಹಲವು ಅಭಿವೃದ್ಧಿ ಕಾರ್ಯಗಳಿಗೆ ಯೋಜನೆ ರೂಪಿಸಲಾಗಿದೆ. ಮಳೆ ಕಡಿಮೆಯಾದ ಕೂಡಲೇ ಎಲ್ಲವೂ ಸಾಕಾರಗೊಳ್ಳಲಿದೆ ಎಂದರು.**

**ಹರಾಜು ಪ್ರಕ್ರಿಯೆ ಜಿಲ್ಲಾಧಿಕಾರಿಗೆ ಪ್ರಸ್ತಾವನೆಫುಡ್ ಕೋರ್ಟ್ ಕಾಮಗಾರಿ ಪೂರ್ಣಗೊಂಡಿದ್ದು ಹರಾಜು ಪ್ರಕ್ರಿಯೆ ಬಾಕಿ ಇದೆ. ಇದರ ಜೊತೆಗೆ ಎಂ.ಜಿ.ರಸ್ತೆಯಲ್ಲಿನ ವಾಜಿಪೇಯಿ ವಾಣಿಜ್ಯ ಸಂಕೀರ್ಣದಲ್ಲಿ ಖಾಲಿ ಇರುವ ಮಳಿಗೆಗಳ ಹರಾಜು ಪ್ರಕ್ರಿಯೆಯನ್ನೂ ನಡೆಸಲಾಗುವುದು**

**-ಸುಜಾತಾ ಶಿವಕುಮಾರ್, ಅಧ್ಯಕ್ಷೆ**

ಮಳಿಗೆಗಳನ್ನು ಹರಾಜು ಮಾಡಿ ಆಸಕ್ತರಿಗೆ ವಿತರಣೆ ಮಾಡುವುದು ನಗರಸಭೆಯ ಉದ್ದೇಶ. ರಸ್ತೆ ಬದಿಯಲ್ಲಿ ನಿಲ್ಲುವ ಚಾಟ್ಸ್, ಉಪಾಹಾರ ಒಂದೇ ಆವರಣದಲ್ಲಿ ಗ್ರಾಹಕರಿಗೆ ಸಿಗುವಂತೆ ಮಾಡಲು ಈ ಕಾಮಗಾರಿ ಕೈಗೊಂಡಿತ್ತು. ಆದರೆ, ಹರಾಜು ಪ್ರಕ್ರಿಯೆ ವಿಳಂಬ ಆಗಿರುವು ದರಿಂದ ಆಹಾರ ಮಳಿ ಗೆಗಳು ಸಾರ್ವಜನಿಕರಿಗೆ ಲಭ್ಯವಿಲ್ಲದಂತಾಗಿವೆ. ಕಾಮಗಾರಿ ಪೂರ್ಣಗೊಂಡಿದ್ದು ಹರಾಜು ಪ್ರಕ್ರಿಯೆ ನಡೆಸಲು ಅನುಮೋದನೆ ಕೋರಿ ಜಿಲ್ಲಾಧಿ ಕಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ನಗರಸಭೆ ಆಯುಕ್ತ ಬಿ.ಸಿ.ಬಸವರಾಜು ತಿಳಿಸಿದರು.

46 ಮಳಿಗೆ ಆವರಣ ಶೌಚಾಲಯ ನೀರಿನ ವ್ಯವಸ್ಥೆ ಸೇರಿ ಎಲ್ಲಾ ಕಾಮಗಾರಿ ಪೂರ್ಣಗೊಂಡಿದೆ. ಜಿಲ್ಲಾಧಿಕಾರಿ ಅವರಿಂದ ಅನುಮೋದನೆ ದೊರೆತ ಕೂಡಲೇ ಹರಾಜು ಪ್ರಕ್ರಿಯೆ ನಡೆಸಲಾಗುವುದು. ಹರಾಜಿನಲ್ಲಿ ಭಾಗವಹಿಸಿದವರಿಗೆ ಮಳಿಗೆ ದೊರಕಲಿದ್ದು ಬಳಿಕ ಫುಡ್ ಕೋರ್ಟ್ ಉದ್ಘಾಟನೆಯಾಗಲಿದೆ ಎಂದು ಹೇಳಿದರು.

## ಮಿನಿ ನ್ಯೂಸ್

### ಕೆಎಸ್‌ಆರ್‌ಟಿಸಿ ಬಸ್ ಪಲ್ಟಿ: ಮಹಿಳೆ ದುರ್ಮರಣ 20 ಪ್ರಯಾಣಿಕರಿಗೆ ಗಂಭೀರ ಗಾಯ

• ಉದಯವಾಹಿನಿ, ವಿಜಯನಗರ

ಕೆಎಸ್‌ಆರ್‌ಟಿಸಿ ಬಸ್ ಪಲ್ಟಿಯಾಗಿ ಬಿದ್ದ ಪರಿಣಾಮ ಓರ್ವ ಮಹಿಳೆ ಸಾವನ್ನಪ್ಪಿದ್ದು, 20 ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ವಿಜಯನಗರದಲ್ಲಿ ನಡೆದಿದೆ. ಚಾಲಕನ ನಿಯಂತ್ರಣ ತಪ್ಪಿದ ಬಸ್ ರಸ್ತೆ ಪಕ್ಕದಲ್ಲಿ ಪಲ್ಟಿಯಾಗಿ ಬಿದ್ದಿದೆ. ವಿಜಯನಗರ ಜಿಲ್ಲೆಯ ಹರಪನ ಹಳ್ಳಿ ತಾಲ್ಲೂಕಿನ ಸುತ್ತೂರು ಗ್ರಾಮದಲ್ಲಿ ಈ ದುರಂತ ಸಂಭವಿಸಿದೆ. ಘಟನೆಯಲ್ಲಿ ಬಸ್‌ನಲ್ಲಿದ್ದ ಮಹಿಳೆ ಹನುಮಕ್ಕ (45) ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. 20 ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದು, ಗಾಯಾಳುಗಳನ್ನು ದಾವಣಗೆರೆ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಬಸ್ ದಾವಣಗೆರೆಯಿಂದ ಹರಪನಹಳ್ಳಿ ಕಡೆ ಹೊರಟಿತ್ತು ಎಂದು ತಿಳಿದುಬಂದಿದೆ.

### ಹುಲಿಗಿ ದೇವಸ್ಥಾನದ ಹುಂಡಿ; 55 ದಿನಗಳಲ್ಲಿ 1.12 ಕೋಟಿ ಸಂಗ್ರಹ

• ಉದಯವಾಹಿನಿ, ಕೊಪ್ಪಳ

ತಾಲ್ಲೂಕಿನ ಹುಲಿಗಿಯಲ್ಲಿರುವ ಹುಲಿಗೆಮ್ಮ ದೇವಿ ದೇವಸ್ಥಾನದ ಹುಂಡಿಯಲ್ಲಿ ಹಿಂದಿನ 55 ದಿನಗಳಲ್ಲಿ 1.12 ಕೋಟಿ ನಗದು ಸಂಗ್ರಹವಾಗಿದೆ. ದೇವಸ್ಥಾನಕ್ಕೆ ಬಂದ ಹಣ, ಚಿನ್ನಾಭರಣ ಎಣಿಕೆ ಕಾರ್ಯ ಬುಧವಾರ ರಾತ್ರಿ ತನಕ ದೇವಸ್ಥಾನದ ಆವರಣದಲ್ಲಿ ನಡೆಯಿತು. ಅರಗು, ಹರಳು ಮುತ್ತು ಸೇರಿದಂತೆ 134 ಗ್ರಾಂ ಚಿನ್ನ, 10 ಕೆ.ಜಿ.ಕಚ್ಚಾ ಬೆಳ್ಳಿ ಭಕ್ತರಿಂದ ದೇವಸ್ಥಾನಕ್ಕೆ ಬಂದಿದೆ. ಆ. 28ರಂದು ಕೊನೆಯ ಬಾರಿಗೆ ಹುಂಡಿ ತೆರೆಯಲಾಗಿತ್ತು. ಅಂದಿನಿಂದ ಅಕ್ಟೋಬರ್ 22ರ ತನಕದ ಅವಧಿಯಲ್ಲಿ ದಸರಾ ಹಬ್ಬವೂ ಇದ್ದಿದ್ದರಿಂದ ಪ್ರತಿ ದಿನ ರಾಜ್ಯ ಹಾಗೂ ಹೊರರಾಜ್ಯಗಳ ಲಕ್ಷಾಂತರ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿದ್ದರು.

ಪ್ರತಿ ಮಂಗಳವಾರ, ಶುಕ್ರವಾರ ಹಾಗೂ ಹುಣ್ಣಿಮೆ ದಿನಗಳಂದು ಲಕ್ಷಾಂತರ ಭಕ್ತರು ಹುಲಿಗಿಗೆ ಬರುವುದು ಸಾಮಾನ್ಯ. ಬಸ್‌ನಲ್ಲಿ ಉಚಿತ ಪ್ರಯಾಣದ ಶಕ್ತಿ ಯೋಜನೆ ಜಾರಿಯಾದ ಬಳಿಕ ಮಹಿಳಾ ಭಕ್ತರು ಕೂಡ ದೇವಸ್ಥಾನಕ್ಕೆ ಬರುವುದು ಹೆಚ್ಚಾಗಿದ್ದು, ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿರುವ ದೇವಾಲಯದ ಆದಾಯವೂ ಹೆಚ್ಚಾಗುತ್ತಲೇ ಇದೆ.

### ಬೊಮ್ಮಾಯಿ ಮಗನಿಗೆ ಟಿಕೆಟ್ ನೀಡುವ ಮೂಲಕ ಬಿಜೆಪಿ ಕಾರ್ಯಕರ್ತರಿಗೆ ದ್ರೋಹ

• ಉದಯವಾಹಿನಿ, ಹಾವೇರಿ

ಸಂಸದ ಬಸವರಾಜ ಬೊಮ್ಮಾಯಿ ಅವರ ಮಗನಿಗೆ ಶಿಗ್ಗಾವಿ ಕ್ಷೇತ್ರದಲ್ಲಿ ಟಿಕೆಟ್ ನೀಡುವ ಮೂಲಕ ಬಿಜೆಪಿಯ ವರಿಷ್ಠರು ವಂಶ ಪರಂಪರೆ ಆಡಳಿತ ಬೆಂಬಲಿಸಿದ್ದಾರೆ. ಪಕ್ಷದ ಸಿದ್ಧಾಂತ ಮತ್ತು ಕಾರ್ಯಕರ್ತರಿಗೆ ದ್ರೋಹ ವೆಸಗಿದ್ದಾರೆ ಎಂದು ಶ್ರೀರಾಮಸೇನೆ ಸಂಘಟನೆ ಸಂಸ್ಥಾಪಕ ಪ್ರಮೋದ ಮುತಾಲಿಕ್ ಅಸಮಾಧಾನ ವ್ಯಕ್ತಪಡಿಸಿದರು. ಚುನಾವಣೆ ಬಂದಾಗ ಷ್ಟೇ ಬಿಜೆಪಿಯವರಿಗೆ ಹಿಂದುತ್ವ ನೆನಪಾಗುತ್ತದೆ. ಚುನಾವಣೆ ಮುಗಿದ ಬಳಿಕ, ಪಕ್ಷಕ್ಕಾಗಿ ದುಡಿಯುವ ಕಾರ್ಯಕರ್ತರ ಕೂಗಿಗೆ ಸ್ಪಂದಿಸುತ್ತಿಲ್ಲ, ಅವರನ್ನು ಕಡೆಗಣಿಸಲಾಗುತ್ತದೆ. ಹಿಂದೂ ಕಾರ್ಯಕರ್ತರ ಶಾಪದಿಂದ ಬಿಜೆಪಿ ಈ ಬಾರಿ ಅಧಿಕಾರ ಕಳೆದುಕೊಂಡಿದೆ' ಎಂದು ಅವರು ಬುಧವಾರ ಸುದ್ದಿಗಾರರಿಗೆ ತಿಳಿಸಿದರು.

ನಾನು, ನನ್ನ ಪತ್ನಿ, ಮಕ್ಕಳು ಮತ್ತು ಸಹೋದರರು ರಾಜಕೀಯದಲ್ಲಿ ಇರಬೇಕು ಎಂದು ವಂಶ ಪಾರಂಪರ್ಯ ಆಡಳಿತ ನಡೆಸುವವರು ಬಿಜೆಪಿಯಲ್ಲೂ ಹೆಚ್ಚಾಗುತ್ತಿದ್ದಾರೆ. ವಂಶ ಪರಂಪರೆ ಆಡಳಿತ ನಿಲ್ಲಬೇಕು ಎಂದು ಹೇಳುವ ನರೇಂದ್ರ ಮೋದಿ ಅವರ ಮಾತನ್ನೂ ವರಿಷ್ಠರು ಪಾಲಿಸುತ್ತಿಲ್ಲ. ಕಾಂಗ್ರೆಸ್, ಬಿಜೆಪಿಗೂ ವ್ಯತ್ಯಾಸ ಇಲ್ಲದಂತಾಗಿದೆ' ಎಂದರು. ಹಿಂದೂ ಕಾರ್ಯಕರ್ತರ ಮೇಲಿನ ಪ್ರಕರಣಗಳನ್ನು ಹಿಂಪಡೆಯಬೇಕು, ಲವ್ ಜೆಹಾದ್ ಪ್ರಕರಣಗಳನ್ನು ತಡೆಯಬೇಕು ಎಂಬುದು ಸೇರಿ ಹಿಂದೂ ಕಾರ್ಯಕರ್ತರ ಐದು ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ ಬಸವರಾಜ ಬೊಮ್ಮಾಯಿ ಅವರ ಮಗ ಭರತ್‌ಗೆ ಮನವಿ ಸಲ್ಲಿಸಲಾಗುವುದು. ಸ್ಪಂದಿಸಿದರೆ, ಅವರಿಗೆ ಕ್ಷೇತ್ರದಲ್ಲಿ ಬೆಂಬಲಿಸಲಾಗುವುದು. ಇಲ್ಲದಿದ್ದರೆ, ಸಾಮಾನ್ಯ ಹಿಂದೂ ಕಾರ್ಯಕರ್ತನನ್ನು ಚುನಾವಣೆಗೆ ನಿಲ್ಲಿಸಲಾಗುವುದು' ಎಂದರು.

### ಲೋಕಾಯುಕ್ತ ಅಹವಾಲು ಸ್ವೀಕಾರ

• ಉದಯವಾಹಿನಿ, ಕಾರ್ಕಳ

ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಲೋಕಾಯುಕ್ತ ವತಿಯಿಂದ ತಾಲ್ಲೂಕು ಮಟ್ಟದ ಸಾರ್ವಜನಿಕ ಅಹವಾಲು ಸ್ವೀಕಾರ, ಜನ ಸಂಪರ್ಕ ಸಭೆ ನಡೆಯಿತು. ಪುರಸಭೆ, ಸರ್ವೆ ಇಲಾಖೆ, ಕಂದಾಯ ಇಲಾಖೆ, ತಾಲ್ಲೂಕು ಪಂಚಾಯಿತಿ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಗಳಿಗೆ ಸಂಬಂಧಿಸಿದ 19 ದೂರುಗಳನ್ನು ಸ್ವೀಕರಿಸಲಾಯಿತು.

ಲೋಕಾಯುಕ್ತ ಡಿವೈಎಸ್‌ಪಿ ಮಂಜುನಾಥ್ ಮಾತನಾಡಿ, ಸಾರ್ವಜನಿಕರ ಅರ್ಜಿಗಳನ್ನು ಅನಗತ್ಯ ವಿಳಂಬ ಮಾಡದೇ ಶೀಘ್ರ ವಿಲೇವಾರಿ ಮಾಡುವಂತೆ, ಸೂಕ್ತ ಕಾರಣವಿಲ್ಲದೆ ತಿರಸ್ಕರಿಸದಂತೆ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರೊಂದಿಗೆ ತಾಳ್ಮೆ, ಸೌಜನ್ಯದಿಂದ ವರ್ತಿಸಬೇಕು ಎಂದರು.

ತಾಲ್ಲೂಕಿನಲ್ಲಿ ಉತ್ತಮ ಆಡಳಿತ ನಡೆಯುತ್ತಿದ್ದು ಅಧಿಕಾರಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರಿ ನೌಕರರು ಲೋಕಾಯುಕ್ತ ಪೊಲೀಸ್ ಎಂದು ಹೇಳಿಕೊಂಡು ಬರುವ ಬೆದರಿಕೆಯ ಸುಳ್ಳು ಕರೆಗಳನ್ನು ನಂಬಬೇಡಿ. ಲೋಕಾಯುಕ್ತ ಪೋಲೀಸ್ ಎಂದಿಗೂ ಹಾಗೆ ಕರೆ ಮಾಡುವುದಿಲ್ಲ ಎಂದರು. ತಹಶೀಲ್ದಾರ್ ಪ್ರತಿಭಾ ಆರ್. ಮಾತನಾಡಿ, ಅಹವಾಲುಗಳನ್ನು ಪರಿಹರಿಸಲು ನಿಗದಿತ ಸಮಯದೊಳಗೆ ಕ್ರಮವಹಿಸ ಲಾಗುವುದು. ಯಾವುದೇ ಕೆಲಸವಿದ್ದರೂ ನೇರವಾಗಿ ತಹಶೀಲ್ದಾರನ್ನು ಭೇಟಿ ಮಾಡಬಹುದು ಎಂದರು. ಪುರಸಭಾ ಮುಖ್ಯಾಧಿಕಾರಿ ರೂಪಾ ಶೆಟ್ಟಿ ಇದ್ದರು. ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

### ನವೋದಯ ವಿದ್ಯಾಲಯದಲ್ಲಿ 9, 11ನೇ ತರಗತಿ ಪ್ರವೇಶಾತಿಗೆ ಅರ್ಜಿ

• ಉದಯವಾಹಿನಿ, ಧಾರವಾಡ

2025-26 ನೆಯ ಸಾಲಿಗೆ ಜವಾಹರ ನವೋದಯ ವಿದ್ಯಾಲಯದಲ್ಲಿ 9 ನೇ ಮತ್ತು 11ನೇ ತರಗತಿಯಲ್ಲಿ ಖಾಲಿ ಇರುವ ಸೀಟುಗಳಿಗೆ ಪ್ರವೇಶಾವಕಾಶವಿದ್ದು, ಪ್ರಸಕ್ತ ವರ್ಷ (2024-25) 8 ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಮತ್ತು 10ನೆ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಅಕ್ಟೋಬರ್ 30, 2024 ರೊಳಗಾಗಿ www.navodaya.gov.in, https://cbseitms.nic.in/2024/nvsix..., https://cbseitms.nic.in/2024/nvsxi_11... ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಳ್ಳು ಸುದ್ದಿ ನಂಬಿ ಬೀದಿಗಿಳಿದು ಹೋರಾಡಿದ ಪಾಕ್ ವಿದ್ಯಾರ್ಥಿಗಳು

## ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹರಡುವ ಮೂಲಕ ದೇಶದಲ್ಲಿ ಅಸ್ಥಿರತೆ ಮೂಡಿಸಲು ಯತ್ನ



**ಕಾಲೇಜ್ ಕ್ಯಾಂಪಸ್ ನಲ್ಲಿ ರೇಪ್**

**ಪಾಕಿಸ್ತಾನ:** ಕಾಲೇಜ್ ಕ್ಯಾಂಪಸ್‌ಒಂದರಲ್ಲಿ ಯುವತಿ ಮೇಲೆ ಅತ್ಯಾಚಾರ ನಡೆದಿದೆ ಅನ್ನೋ ಸುದ್ದಿ ಪಾಕಿಸ್ತಾನದಲ್ಲಿ ಕಾಡ್ಗಿಚ್ಚಿನಂತೆ ಹರಡಿದೆ. ಸಾಮಾಜಿಕ ಜಾಲತಾಣಗಳಲ್ಲಿ ಈ ಕುರಿತ ಸಂದೇಶಗಳು ವೈರಲ್ ಆಗಿವೆ. ಮಾಧ್ಯಮಗಳಲ್ಲೂ ಈ ಕುರಿತಾಗಿ ಭಾರೀ ಚರ್ಚೆಗಳು ನಡೆಯುತ್ತಿವೆ. ದೇಶಾದ್ಯಂತ ದೊಡ್ಡ ಮಟ್ಟದಲ್ಲಿ ಪ್ರತಿ ಭಟನೆಗಳು ನಡೆಯುತ್ತಿವೆ. ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಿತ್ತಿ ಪತ್ರ, ಬ್ಯಾನರ್‌ಗಳ ಸಮೇತಬೀದಿಗಿಳಿದು ಲೈಂಗಿಕ ದೌರ್ಜನ್ಯದ ವಿರುದ್ಧ ದನಿ ಎತ್ತಿದ್ದಾರೆ. ಪಾಕಿಸ್ತಾನದಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳು ವಿಪರೀತ ಏರಿಕೆ ಆಗುತ್ತಿದ್ದು, ಮಹಿಳೆಯರ ರಕ್ಷಣೆ ಮಾಡುವಲ್ಲಿ ಸರ್ಕಾರ, ಪೊಲೀಸ್ ಇಲಾಖೆ ವಿಫಲವಾಗಿದೆ ಎಂದು ಯುವ ಸಮೂಹ ಆಕ್ರೋಶ ವ್ಯಕ್ತಪಡಿಸುತ್ತಿದೆ.

**ಬೆಂಕಿ ಇಲ್ಲದೆ ಹೊಗೆ ಆಡುತ್ತಾ?:** ಅತ್ಯಾಚಾರದಂಥಾ ವಿಚಾರದಲ್ಲಿ ಸುಳ್ಳು ಸುದ್ದಿ ಹರಡೋದು ಹೇಗೆ? ಸ್ವಲ್ಪವಾದರೂ ಸತ್ಯಾಂಶ ಇರಬೇಕಲ್ಲವೇ ಎಂದು ಪ್ರಶ್ನಿಸುತ್ತಾರೆ, ಲಾಹೋರ್‌ನಲ್ಲಿ ಪ್ರತಿಭಟನೆ ನಡೆ ಸುತ್ತಿರುವ 21 ವರ್ಷ ವಯಸ್ಸಿನ ವಿದ್ಯಾರ್ಥಿ ಹೋರಾಟಗಾರರಾದ ಖದೀಜಾ ಶಬ್ಬೀರ್. ಅವರ ಪ್ರಕಾರ ಕಾಲೇಜು ಕ್ಯಾಂಪಸ್‌ಗಳಲ್ಲಿ ಮಹಿಳೆಯರಿಗೆ ಸುರಕ್ಷತೆ ಇಲ್ಲ, ಲೈಂಗಿಕ ದೌರ್ಜನ್ಯ ಸರ್ವೇ ಸಾಮಾನ್ಯ ಎಂಬಂತಾಗಿದೆ ಅನ್ನೋದು ಅವರ ವಾದ.

ಇನ್ನು ಈ ಪ್ರಕರಣದ ತನಿಖೆ ನಡೆಸುತ್ತಿರುವ ಹಿರಿಯ ಪೊಲೀಸ್ ಅಧಿಕಾರಿ ಸೈಯದಾ ಶೆಹರ್ಬಾನೋ ನಖ್ವಿ ಅವರು ವಿದ್ಯಾರ್ಥಿನಿಯರ ಮೇಲಿನ ಲೈಂಗಿಕ ದೌರ್ಜನ್ಯ ಆರೋಪಗಳನ್ನ ಪರೋಕ್ಷವಾಗಿ ಒಪ್ಪುತ್ತಾರೆ. ಪಾಕಿಸ್ತಾನ ದೇಶದಾದ್ಯಂತ ಬಹುಪಾಲು ಮಹಿಳೆಯರು ಯಾವುದಾದರೂ ಒಂದು ಹಂತದಲ್ಲಿ ಲೈಂಗಿಕ ದೌರ್ಜನ್ಯದ ಬಲಿಪಶು ಆಗಿದ್ದಾರೆ.

**ಸುಳ್ಳು ಸುದ್ದಿಗಳು ಎಂಥ ಅನಾಹುತ ಸೃಷ್ಟಿಸಬಲ್ಲವು ಅನ್ನೋದಕ್ಕೆ ಅತ್ಯುತ್ತಮ ಉದಾಹರಣೆಯೊಂದು ಪಾಕಿಸ್ತಾನದಲ್ಲಿ ಸಿಕ್ಕಿದೆ. ಪಾಕಿಸ್ತಾನದ ವಿದ್ಯಾರ್ಥಿಗಳು ಕಾಲೇಜ್ ಕ್ಯಾಂಪಸ್‌ನಲ್ಲಿ ನಡೆದ ಅತ್ಯಾಚಾರ ವಿರೋಧಿಸಿ ಪ್ರತಿಭಟನೆ ನಡೆಸಿದ್ದಾರೆ. ಆದರೆ, ಅಸಲಿಗೆ ಆ ರೀತಿಯ ಯಾವುದೇ ಪ್ರಕರಣವೇ ನಡೆದಿಲ್ಲ ಎಂದು ಪೊಲೀಸ್ ಇಲಾಖೆ ಹೇಳುತ್ತಿದೆ. ಬೆಂಕಿ ಇಲ್ಲದೆ ಹೊಗೆ ಆಡುತ್ತದೆಯೇ ಎಂದು ಹೋರಾಟಗಾರರು ತಿರುಗೇಟು ನೀಡುತ್ತಿದ್ದಾರೆ. ಒಟ್ಟಿನಲ್ಲಿ ಪರಿಸ್ಥಿತಿ ಅಯೋಮಯ ಎನಿಸಿದೆ.**

### ಅತ್ಯಾಚಾರ ನಡೆದಿದೆ ಅನ್ನೋದೇ ಸುಳ್ಳು ಸುದ್ದಿ?

**ಪಾಕ್ ಸರ್ಕಾರಕ್ಕೆ ಪ್ರತಿಭಟನೆಯ ಬಿಸಿ ತಟ್ಟುತ್ತಿದ್ದಂತೆಯೇ ಪೊಲೀಸ್ ಇಲಾಖೆಗೆ ಚುರುಕು ಮುಟ್ಟಿಸಿತು. ಈ ಪ್ರಕ ರಣದ ಕುರಿತ ಸಮಗ್ರ ತನಿಖೆ ನಡೆಸಿದ ಪೊಲೀಸರು ಕೊಟ್ಟಿರುವ ವರದಿ ಶಾಕಿಂಗ್ ಆಗಿದೆ. ಏಕೆಂದರೆ ಅತ್ಯಾಚಾರದಂಥಾ ಯಾವುದೇ ಪ್ರಕರಣ, ಪಾಕಿಸ್ತಾನದ ಯಾವುದೇ ಕಾಲೇಜು ಕ್ಯಾಂಪಸ್‌ನಲ್ಲೂ ನಡೆದಿಲ್ಲ ಎಂದು ಪೊಲೀಸ್ ಇಲಾಖೆ ವರದಿ ಕೊಟ್ಟಿದೆ. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹರಡುವ ಮೂಲಕ ದೇಶದಲ್ಲಿ ಅಸ್ಥಿರತೆ ಮೂಡಿಸಲು ಯತ್ನಿಸಲಾಗುತ್ತಿದೆ ಎಂದು ಪಾಕಿಸ್ತಾನ ಪೊಲೀಸ್ ಇಲಾಖೆ ಆಪಾದಿಸಿದೆ.**

ಜೊತೆಗೆ ಇದು ಅತ್ಯಂತ ಸೂಕ್ಷ್ಮ ವಿಚಾರ ಎಂದರು.

**ಅಸಲಿಗೆ ಅತ್ಯಾಚಾರ ನಡೆದದ್ದು ಎಲ್ಲಿ? ಆರೋಪ ನಿಜವೇ?:** ಇನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಡಿರುವ ಸುದ್ದಿಯ ಮೂಲ ಹುಡುಕುತ್ತಾ ಹೊರಟ ಪೊಲೀಸರು, ಲಾಹೋರ್‌ನ ಪಂಜಾಬ್ ಕಾಲೇಜ್ ಕ್ಯಾಂಪಸ್ ತಲುಪಿದರು.

ಈ ಕಾಲೇಜಿನ ನೆಲ ಮಹಡಿಯಲ್ಲಿ ಮಹಿಳೆಯೊಬ್ಬರ ಮೇಲೆ ಕಾಲೇಜು ಸಿಬ್ಬಂದಿ ಅತ್ಯಾಚಾರ ಎಸಗಿದ್ದರು ಎಂದು ಸುದ್ದಿ ಹರಡಿತ್ತು. ಈ ಕುರಿತಾಗಿ ತನಿಖೆ ನಡೆಸಿದಾಗ ಅತ್ಯಾಚಾರಕ್ಕೆ ತುತ್ತಾದವರು ಯಾರು ಅನ್ನೋದೇ ಗೊತ್ತಾಗಲಿಲ್ಲ. ಜೊತೆಗೆ ಕಾಲೇಜು ಆಡಳಿತ ಮಂಡಳಿಗೂ ಈ ವಿಚಾರ ಗೊತ್ತಿರಲಿಲ್ಲ. ಹೀಗಾಗಿ ಇದನ್ನು ಸುಳ್ಳು ಸುದ್ದಿ ಎಂದು ಪೊಲೀಸರು ಖಚಿತಪಡಿಸಿದರೂ ಪ್ರತಿಭಟನೆಗಳು ಮಾತ್ರ ನಿಂತಿಲ್ಲ. ಹೀಗಾಗಿ, ಪಂಜಾಬ್ ಪ್ರಾಂತ್ಯದಲ್ಲಿ ಹಲವು ಕಾಲೇಜುಗಳನ್ನ ಮುಚ್ಚಿರುವ ಪಾಕಿಸ್ತಾನ ಸರ್ಕಾರ, ವಿದ್ಯಾರ್ಥಿಗಳು ಗುಂಪುಗೂಡಿದರೆ ಕಠಿಣ ಶಿಕ್ಷೆ ವಿಧಿಸುವ ಎಚ್ಚರಿಕೆ ನೀಡಿದೆ.

# ಅಮೆರಿಕ, ಚೀನಾ ನಮ್ಮನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ



**ವಾಷಿಂಗ್ಟನ್:** ಪ್ರತಿ ಆರು ಜನರಲ್ಲಿ ಒಬ್ಬರು ಭಾರತೀಯರಿರುವುದರಿಂದ ಭಾರತವು ವಿಶ್ವದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಲು ಬಯಸುತ್ತದೆ ಮತ್ತು ಜಗತ್ತು ಭಾರತದ ಆರ್ಥಿಕತೆಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಹಣಕಾಸು ಸಚಿವ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ವಿಶ್ವಬ್ಯಾಂಕ್, ಅಂತರರಾಷ್ಟ್ರೀಯ ವಾರ್ಷಿಕ ಸಭೆಗಳು 2024ರ ಹಿನ್ನೆಲೆಯಲ್ಲಿ ಗ್ಲೋಬಲ್ ಡೆವಲಪ್‌ಮೆಂಟ್ ಕೇಂದ್ರವು ವಾಷಿಂಗ್ಟನ್ ಡಿಸಿಯಲ್ಲಿ ಆಯೋಜಿಸಿದ್ದ ಬ್ರೆಟನ್ ವುಡ್ಸ್ ಇನ್‌ಸ್ಟಿಟ್ಯೂಷನ್ಸ್ ಅಟ್ 80 ಮುಂದಿನ ದಶಕದ ಆದ್ಯತೆಗಳು ಎಂಬ ಪ್ಯಾನೆಲ್ ಚರ್ಚೆಯಲ್ಲಿ ಅವರು ಈ ಮಾತು ಹೇಳಿದ್ದಾರೆ.

ವಿಶ್ವದ ಯಾವ ದೇಶವೇ ಆಗಿರಲಿ ಅದು ಅಮೆರಿಕವಾಗಲಿ ಅಥವಾ ಅತ್ಯಂತ ಹತ್ತಿರದಲ್ಲಿರುವ ಚೀನಾವಾಗಲಿ ಭಾರತವನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

ಭಾರತ ಮತ್ತು ಇತರ ದೊಡ್ಡ ಉದಯೋನ್ಮುಖ ಮಾರುಕಟ್ಟೆಗಳಂತಹರಾಷ್ಟ್ರಗಳು ಹೇಗೆ ಹೆಜ್ಜೆ ಹಾಕುತ್ತವೆ, ಆ ಪ್ರಕ್ರಿಯೆಯ ಮಾಲೀಕತ್ವವನ್ನು ತೆಗೆದು ಕೊಳ್ಳಲು, ಸುಧಾರಣೆಯನ್ನು ಮುಂದಕ್ಕೆ ಓಡಿಸಲು ಸಹಾಯ ಮಾಡುವ ಪಾತ್ರವನ್ನು ಹೇಗೆ ನಿರ್ವಹಿಸುತ್ತವೆ ಎಂದು ಕೇಳಿದಾಗ ಅವರು ಈ ಹೇಳಿಕೆ ನೀಡಿದರು. ನಮ್ಮ ಪ್ರಧಾನ ಮಂತ್ರಿಯ ಚಿಂತನೆಯು ಎಲ್ಲಿಂದ ಪ್ರಾರಂಭವಾಯಿತು ಮತ್ತು ಇದನ್ನು ಚೆನ್ನಾಗಿ ಯೋಚಿಸಲಾಗಿದೆ ಎಂದು ಅವರು ಒಮ್ಮೆ ಹೇಳಿದರು.

### ವಿಧಾನವನ್ನು ನಿರ್ಲಕ್ಷಿಸಬಾರದು

**ನಾವು ಅತಿದೊಡ್ಡ ಪ್ರಜಾಪ್ರಭುತ್ವವನ್ನು ಹೊಂದಿದ್ದೇವೆ, ಅದರ ಪ್ರಾಬಲ್ಯವನ್ನು ಹೇರುವುದು ಅಲ್ಲ ಈಗ ನಾವು ನಮ್ಮ ಪ್ರಭಾವವನ್ನ ಹೆಚ್ಚಿಸಲು ಏಕೆ ಬಯಸುತ್ತೇವೆ, ಏಕೆಂದರೆ ಇಂದು ವಿಶ್ವದ ಪ್ರತಿ ಆರು ವ್ಯಕ್ತಿಗಳಲ್ಲಿ ಒಬ್ಬರು ಭಾರತೀಯರಾಗಿದ್ದಾರೆ, ನಮ್ಮ ಆರ್ಥಿಕತೆ, ಅದು ಬೆಳೆಯುತ್ತಿರುವ ವಿಧಾನವನ್ನು ನೀವು ನಿರ್ಲಕ್ಷಿಸಬಾರದು.**

# ಐಟಿಬಿಪಿ ಪಡೆಯ ಶೌರ್ಯ, ಸಮರ್ಪಣೆಯನ್ನು ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ



**ನವದೆಹಲಿ:** ಚೀನಾದೊಂದಿಗಿನ ಭಾರತದ ಗಡಿಯನ್ನು ಕಾವಲು ಕಾಯುತ್ತಿರುವ ಇಂಡೋ ಟಿಬೆಟಿಯನ್ ಬಾರ್ಡರ್ ಪೊಲೀಸ್ ಪಡೆಯನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಪಡೆಗಳು ಶೌರ್ಯ, ಸಮರ್ಪಣೆಯ ಸಂಕೇತವಾಗಿ ಎತ್ತರವಾಗಿ ನಿಂತಿವೆ ಎಂದು ಅವರು ಹೇಳಿದರು. ಐಟಿಬಿಪಿ ಹಿಮ್‌ವೀರ್‌ಗಳು, ಅವರ ಕುಟುಂಬಗಳಿಗೆ ದಿನದ ಶುಭಾಶಯಗಳು. ಈ ಪಡೆ ಶೌರ್ಯ, ಸಮರ್ಪಣೆಯ ಸಂಕೇತವಾಗಿ ಎತ್ತರವಾಗಿ ನಿಂತಿದೆ. ಕೆಲವು ಅತ್ಯಂತ ಸವಾಲಿನ ಭೂಪ್ರದೇಶಗಳು, ಕಠಿಣ ಹವಾಮಾನ ಪರಿಸ್ಥಿತಿಗಳಲ್ಲಿ ಅವರು ನಮ್ಮನ್ನು ರಕ್ಷಿಸುತ್ತಾರೆ ಎಂದು ಮೋದಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಹೆಚ್ಚುವರಿಯಾಗಿ, ನೈಸರ್ಗಿಕ ವಿಕೋಪಗಳು, ರಕ್ಷಣಾ ಕಾರ್ಯಾಚರಣೆಗಳ ಸಮಯದಲ್ಲಿ ಅವರ ಪ್ರಯತ್ನಗಳು ಜನರಲ್ಲಿ ಅಪಾರ ಹೆಮ್ಮೆಯನ್ನು ಉಂಟುಮಾಡುತ್ತವೆ ಎಂದು ಅವರು ಹೇಳಿದರು.

1962 ರ ಚೀನಾದ ಆಕ್ರಮಣದ ನಂತರ ಐಟಿಬಿಪಿ ಪಡೆ ರಚಿಸಲಾಯಿತು. ಆಂತರಿಕ ಭದ್ರತಾ ಡೊಮೇನ್, ವಿಪತ್ತು ನಿರ್ವಹಣೆಯಲ್ಲಿ ವಿವಿಧ ಕರ್ತವ್ಯಗಳನ್ನು ಸಲ್ಲಿಸುವುದರ ಹೊರತಾಗಿ ಚೀನಾದೊಂದಿಗಿನ 3,488 ಕಿಮೀ ನೈಜ ನಿಯಂತ್ರಣ ರೇಖೆಯನ್ನು ರಕ್ಷಿಸಲು ಸುಮಾರು 90,000 ಸಿಬ್ಬಂದಿ ಬಲಶಾಲಿ ಪಡೆಗಳನ್ನು ಪ್ರಾಥಮಿಕವಾಗಿ ನಿಯೋಜಿಸಲಾಗಿದೆ. ಮತ್ತೊಂದು ಪೋಸ್ಟ್‌ನಲ್ಲಿ, ಪಾಲಿ ಭಾಷೆಗೆ ಶ್ಲಾಘಿಯ ಭಾಷಾ ಸ್ಥಾನಮಾನವನ್ನು ನೀಡುವ ಸರ್ಕಾರದ ಇತ್ತೀಚಿನ ನಿರ್ಧಾರವನ್ನು ಮೋದಿ ಶ್ಲಾಘಿಸಿದ್ದಾರೆ.

# ಇಸ್ರೇಲ್ ದಾಳಿಗೆ ಆರು ಕಟ್ಟಡಗಳು ಧ್ವಂಸ

**ಬೈರುತ್:** ಲೆಬನಾನ್ ಬೈರುತ್‌ನ ದಕ್ಷಿಣ ಉಪನಗರಗಳ ಮೇಲೆ ಇಸ್ರೇಲ್ ಸೇನೆ ನಡೆಸಿದ 17 ದಾಳಿಗಳಲ್ಲಿ ಆರು ಕಟ್ಟಡಗಳು ನೆಲಸಮವಾಗಿದ್ದು ಅಪಾರ ಪ್ರಮಾಣದ ಹಾನಿಯಾಗಿದೆ. ಇರಾನ್-ಹಿಜ್ಬುಲ್ಲಾ ಯುದ್ಧ ದಿನದಿಂದ ದಿನಕ್ಕೆ ತೀವ್ರಗೊಂಡಿದ್ದು ದಾಳಿ ಪ್ರತಿದಾಳಿ ನಡೆದಿದ್ದು ಜನರು ಜೀವ ಕೈಯಲ್ಲಿಡಿದು ಬದುಕುವ ವಾತಾವರಣ ನಿರ್ಮಾಣವಾಗಿದೆ. ಇಸ್ರೇಲ್ ಸೇನೆ ಹಿಜ್ಬುಲ್ಲಾ ಹಿಡಿತ ಹೊಂದಿರುವ ಪ್ರದೇಶಕ್ಕೆ ಸ್ಥಳಾಂತರಿಸುವ ಎಚ್ಚರಿಕೆ ನೀಡಿದ ನಂತರ ಎಎಫ್‌ಪಿಟಿವಿ ದೃಶ್ಯಾವಳಿಗಳಲ್ಲಿ ಬೃಹತ್ ಸ್ಫೋಟ ಸಂಭವಿಸಿದೆ. ದಕ್ಷಿಣದ ಉಪನಗರಗಳಲ್ಲಿ ಸಣ್ಣ ಸ್ಫೋಟಗಳು ಸಂಭವಿಸಿವೆ.

ಅಧಿಕೃತ ರಾಷ್ಟ್ರೀಯ ಸುದ್ದಿ ಸಂಸ್ಥೆ ಕನಿಷ್ಠ 17 ಇಸ್ರೇಲಿ ದಾಳಿಗಳನ್ನು ವರದಿ ಮಾಡಿದೆ, ಸೆಪ್ಟಂಬರ್ 23 ರಂದು ಇಸ್ರೇಲ್-ಹಿಜ್ಬೊಲ್ಲಾಹ್ ಯುದ್ಧ ಸ್ಫೋಟಗೊಂಡ ನಂತರ ಈ ಪ್ರದೇಶದಲ್ಲಿ ಅತ್ಯಂತ ಹಿಂಸಾತ್ಮಕ ರಾತ್ರಿಗಳಲ್ಲಿ ಒಂದಾಗಿದೆ. ಲೈಲಾಕಿಯ ಉಪನಗರದ ಸುತ್ತಲೂ ಆರು ಕಟ್ಟಡಗಳು ನಾಶವಾಗಿದೆ, ಎನ್‌ಎನ್‌ಎ ಈ ದಾಳಿಗಳನ್ನು ಯುದ್ಧದ ಆರಂಭದಿಂದಲೂ ಈ ಪ್ರದೇಶದಲ್ಲಿ ಅತ್ಯಂತ ಹಿಂಸಾತ್ಮಕ ಎಂದು ಕರೆದಿದೆ. ಇಸ್ರೇಲ್ ಮಿಲಿಟರಿಯ ಅರೇಬಿಕ್ ಭಾಷೆಯ ವಕ್ತಾರ ಅವಿಚಾಯ್ ಅಡ್ರೇ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಸ್ಥಳಾಂತರಿಸುವ ಎಚ್ಚರಿಕೆ ನೀಡಿದ ಸ್ವಲ್ಪ ಸಮಯದ ನಂತರ ಈ ದಾಳಿಗಳು ಸಂಭವಿಸಿವೆ.

ಲೆಬನಾನ್‌ನ ಬೈರುತ್‌ನ ದಕ್ಷಿಣ ಉಪನಗರದಲ್ಲಿರುವ ದಹಿಯೆಹ್‌ನಲ್ಲಿ ಇಸ್ರೇಲಿ ವೈಮಾನಿಕ ದಾಳಿಯಿಂದ ಕಟ್ಟಡಗಳಿಂದ ಜ್ವಾಲೆ ಮತ್ತು ಹೊಗೆ ಏರಿದೆ. ಇಸ್ರೇಲ್ ಲೆಬನಾನ್‌ನಲ್ಲಿ ತೀವ್ರವಾದ ವಾಯು ಕಾರ್ಯಾಚರಣೆ ಪ್ರಾರಂಭಿಸಿ, ಗಾಜಾ ಯುದ್ಧದ ಕುರಿತು ಹೆಜ್ಬೊಲ್ಲಾ ಜೊತೆಗಿನ ಗಡಿಯಾಚೆಗಿನ ವಿನಿಮಯದ ಸುಮಾರು ಒಂದು ವರ್ಷದ ದಾಳಿಗಳಲ್ಲಿ ಕನಿಷ್ಠ 1,580 ಜನರು ಸಾವನ್ನಪ್ಪಿದ್ದಾರೆ.

# ಅ.28ರೊಳಗೆ ರಾಜೀನಾಮೆ ನೀಡುವಂತೆ ಟ್ರುಡೊಗೆ ಡೆಡ್‌ಲೈನ್



**ಒಟ್ಟಾವಾ:** ಕೆನಡಾ ಪ್ರಧಾನ ಮಂತ್ರಿ ಜಸ್ಟಿನ್ ಟ್ರುಡೋ ರಾಜೀನಾಮೆಗೆ ಒತ್ತಡ ಹೆಚ್ಚಾಗಿದೆ. ಅ.28ರೊಳಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಲಿಬರಲ್ ಪಕ್ಷದ ಸಂಸದರು ಒತ್ತಡ ಹೇರತೊಡಗಿದ್ದಾರೆ.

ಲಿಬರಲ್ ಪಕ್ಷದ ಸಂಸದರು ಸಂಸತ್ತಿನ ಹಿಲ್‌ನಲ್ಲಿ ಸಮಾವೇಶದಲ್ಲಿ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರರಾಜೀನಾಮೆಗೆ ಆಂತರಿಕ ಕರೆಗಳು ತೀವ್ರಗೊಂಡಿವೆ. ಮುಚ್ಚಿದ ಬಾಗಿಲಿನ ಸಭೆಯ ಸಮಯದಲ್ಲಿ, ಭಿನ್ನಮತೀಯ ಸಂಸದರು ಟ್ರುಡೊಗೆ ತಮ ಕುಂದುಕೊರತೆಗಳನ್ನು ತಿಳಿಸಿದರು.

ಇದು ಪಕ್ಷ ದೊಳಗೆ ಬೆಳೆಯುತ್ತಿರುವ ಅಸಮಾಧಾನವನ್ನು ಪ್ರತಿಬಿಂಬಿಸುತ್ತದೆ. ಈ ಸಭೆಯು ಹೌಸ್ ಆಫ್ ಕಾಮನ್ಸ್ ಅಧಿವೇಶನದಲ್ಲಿರುವಾಗ ನಡೆಯುವ ಸಾಪ್ತಾಹಿಕ ಕಾಕಸ್ ಸಭೆಗಳ ಭಾಗವಾಗಿತ್ತು. ಬುಧವಾರದ ಸಭೆಯು ಸಂಸದರು ತಮ ಕಳ ವಳಗಳು, ಹತಾಶೆಗಳನ್ನು ನೇರವಾಗಿ ಟ್ರುಡೊ ಅವರಿಗೆ ತಿಳಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸಿತು. ಟ್ರುಡೊ ಅವರ ಸ್ವಂತ ಪಕ್ಷದಿಂದಲೇ ಹೆಚ್ಚುತ್ತಿ ರುವ ಒತ್ತಡವನ್ನು ಎದುರಿಸುತ್ತಿದ್ದಾರೆ.

ಭಿನ್ನಮತೀಯ ಲಿಬರಲ್ ಸಂಸದರು ಅಕ್ಟೋಬರ್ 28 ರೊಳಗೆ ಅವರ ಭವಿಷ್ಯವನ್ನು ನಿರ್ಧರಿಸಲು ಅವರಿಗೆ ಗಡುವು ನೀಡಿದ್ದಾರೆ. 24 ಸಂಸದರು ಲಿಬರಲ್ ನಾಯಕತ್ವದಿಂದ ಕೆಳಗಿಳಿಯುವಂತೆ ಟ್ರು ಡೊಗೆ ಕರೆ ನೀಡಲು ಒಪ್ಪಂದಕ್ಕೆ ಸಹಿ ಹಾಕಿದ್ದಾರೆ ಎಂದು ರೇಡಿಯೊ-ಕೆನಡಾದ ಮೂಲಗಳು ತಿಳಿಸಿವೆ ಎಂದು ಸಿಬಿಸಿ ನ್ಯೂಸ್ ವರದಿ ಮಾಡಿದೆ.

ಸಭೆಯಲ್ಲಿ, ಬ್ರಿಟಿಷ್ ಕೊಲಂಬಿಯಾ ಸಂಸದ ಪ್ಯಾಟ್ರಿಕ್ ವೀಲರ್ ಅವರು ಟ್ರುಡೊ ಅವರ ರಾಜೀನಾಮೆಯ ಪರವಾಗಿ ವಾದಿಸಿದ ದಾಖಲೆ ಯನ್ನು ಪ್ರಸ್ತುತಪಡಿಸಿದರು.

**ಬುಧವಾರದ ಕಾಕಸ್ ಸಭೆಯಲ್ಲಿ, ಟ್ರುಡೊ ಅವರ ರಾಜೀನಾಮೆಯ ಪ್ರಕರಣದ ಬಗ್ಗೆ ವಿವರಿಸುವ ದಾಖಲೆಯನ್ನು ಪ್ರಸ್ತುತಪಡಿಸಲಾಯಿತು, ಆದರೆ ಅದು ಆಗಲಿಲ್ಲ. ಅವರು ಗಡುವನ್ನು ಪೂರೈಸಲು ವಿಫಲವಾದರೆ ಯಾವುದೇ ಪರಿಣಾಮಗಳನ್ನು ಎದುರಿಸಲು ಸಿದ್ಧರಾಗಿ ಎಂದು ಎಚ್ಚರಿಸಲಾಗಿದೆ.**

# ವಂದೇ ಭಾರತ್ ರೈಲುಗಳ ಸ್ಲೀಪರ್ ಕೋಚ್‌ಗಳ ಅನಾವರಣ



**ವಿವಿಧ ವೈಶಿಷ್ಟ್ಯಗಳೊಂದಿಗೆ ತಯಾರಿ**

**ಚನ್ನೈ:** ಮೊದಲ ಬಾರಿಗೆ ದೇಶೀಯವಾಗಿ ಐಸಿಎಫ್ ರೈಲ್ವೆ ಕಾರ್ಖಾನೆಯಲ್ಲಿ ನಿರ್ಮಾಣ ಮಾಡಿರುವ ಬಹು ನಿರೀಕ್ಷಿತ ವಂದೇ ಭಾರತ್ ರೈಲುಗಳ ಸ್ಲೀಪರ್ ಕೋಚ್‌ಗಳನ್ನು ಅನಾವರಣಗೊಳಿಸಲಾಗಿದೆ. ವಂದೇ ಭಾರತ್ ರೈಲುಗಳ ಸ್ಲೀಪರ್ ಕೋಚ್‌ಗಳನ್ನು ಚೆನ್ನೈನ ವಿಲ್ಲಿವಾಕಂನಲ್ಲಿರುವ ಇಂಟೆಗ್ರಲ್ ಕೋಚ್ ಫ್ಯಾಕ್ಟರಿಯಲ್ಲಿ ಈಗಾಗಲೇ 77 ವಂದೇ ಭಾರತ್ ರೈಲುಗಳನ್ನು ತಯಾರಿಸಲಾಗಿದೆ. ಈ ಸ್ಲೀಪರ್ ಕೋಚ್‌ನ ವಂದೇ ಭಾರತ್ ರೈಲುಗಳಲ್ಲಿ ಒಟ್ಟು 823 ಪ್ರಯಾಣಿಕರು ಪ್ರಯಾಣಿಸಬಹುದು. ಈ ರೈಲಿನಲ್ಲಿ ಪ್ರಥಮ ದರ್ಜೆ ಎಸಿ ವಿಭಾಗವೂ ಇದೆ. 2ನೇ ದರ್ಜೆ ಎಸಿ ಕೋಚ್‌ಗಳಲ್ಲಿ 188 ಪ್ರಯಾಣಿಕರು ಮತ್ತು 11 ಮೂರನೇ ದರ್ಜೆಯ ಎಸಿ ಕೋಚ್‌ಗಳಲ್ಲಿ 611 ಪ್ರಯಾಣಿಕರು ಪ್ರಯಾಣಿಸಬಹುದು.

ಭಾರತದಾದ್ಯಂತ ವಂದೇ ಭಾರತ್ ರೈಲುಗಳನ್ನು ಪಂಜಾಬ್, ಉತ್ತರಪ್ರದೇಶ ಮತ್ತು ತಮಿಳುನಾಡು ಮೂರು ರಾಜ್ಯಗಳಲ್ಲಿ ತಯಾರಿಸಲಾಗುತ್ತಿದೆ. ಭಾರತದಲ್ಲಿ ಮೊದಲ ಬಾರಿಗೆ ಸ್ಲೀಪರ್ ಸೌಲಭ್ಯದೊಂದಿಗೆ ವಂದೇ ಭಾರತ್ ರೈಲುಗಳನ್ನು ವಿಲ್ಲಿವಕ್ಕಂ ಐಸಿಎನಲ್ಲಿ ತಯಾರಿಸಲಾಗಿದೆ ಎಂದು ಐಸಿಎಫ್ ಪ್ರಧಾನ ವ್ಯವಸ್ಥಾಪಕ ಸುಬ್ಬರಾವ್ ಮಾಹಿತಿ ನೀಡಿದ್ದಾರೆ.

ಚನ್ನೈ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಹಂತದ ಪರೀಕ್ಷೆಯ ನಂತರ ಈ ಸ್ಲೀಪರ್ ಕೋಚ್‌ಗಳನ್ನು ವಂದೇ ಭಾರತ್ ರೈಲುಗಳಲ್ಲಿ ಬಳಕೆಗೆ ತರಲಾಗುವುದು. ಈ ವಂದೇ ಭಾರತ್ ಸ್ಲೀಪರ್ ಕೋಚ್ ರೈಲುಗಳು ಗರಿಷ್ಠ 160 ಕಿಮೀ ವೇಗದಲ್ಲಿ ಚಲಿಸುವಂತೆ ವಿನ್ಯಾಸಗೊಳಿಸಲಾಗಿದೆ.

ಪರೀಕ್ಷಾ ಪ್ರೋಟೋಕಾಲ್ ಸಮಯದಲ್ಲಿ 180 ಕಿಮೀ ವೇಗವನ್ನು ತಲುಪಲಾಗಿದೆ ಎಂದು ಹೇಳಿದ್ದಾರೆ.

**ಸೌಲಭ್ಯಗಳು:** ಈ ವಂದೇ ಭಾರತ್ ಸ್ಲೀಪರ್ ಕೋಚ್ ರೈಲುಗಳನ್ನು ವಿವಿಧ ವೈಶಿಷ್ಟ್ಯಗಳೊಂದಿಗೆ ತಯಾರಿಸಲಾಗುತ್ತದೆ ಎಂದು ರೈಲ್ವೆ ಹೇಳಿಕೊಂಡಿದೆ. ಎಲ್ಲಾ ಕೋಚ್‌ಗಳು ಅಗ್ನಿಶಾಮಕ, ಪ್ರತಿ ಹಾಸಿಗೆಯ ಬಳಿ ತುರ್ತು ನಿಲುಗಡೆ ಬಟನ್ ಹೊಂದಿವೆ. ಒಂದು ಕಂಪಾರ್ಟ್ಮೆಂಟ್ ನಿಂದ ಇನ್ನೊಂದಕ್ಕೆ ಚಲಿಸಲು ಸ್ವಯಂಚಾಲಿತ ಬಾಗಿಲುಗಳಿವೆ ಮತ್ತು ಪ್ರತಿ ವಿಭಾಗವು ತುರ್ತು ಟಾಕ್ ಬ್ಯಾಕ್ ಘಟಕವನ್ನು ಹೊಂದಿದೆ. ಈ ಮೂಲಕ ಪ್ರಯಾಣಿಕರೊಂದಿಗೆ ಲೋಕೋ ಪೈಲಟ್ ಮಾತನಾಡಿ ಅವರು ಸ್ಪಂದಿಸುವ ರೀತಿಯಲ್ಲಿ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಅಲ್ಲದೇ ಲೊಕೊ ಪೈಲಟ್ ಎಂಜಿನ್‌ನಿಂದ ಸಿಸಿಟಿವಿ ದೃಶ್ಯಾವಳಿಗಳನ್ನು ಮೇಲ್ವಿಚಾರಣೆ ಮಾಡಬಹುದು.

ಪ್ರತಿ ಕಂಪಾರ್ಟ್ಮೆಂಟ್‌ನಲ್ಲಿ ಸಿಸಿಟಿವಿ ಕ್ಯಾಮೆರಾಗಳು, ಶೌಚಾಲಯ ಸೌಲಭ್ಯಗಳು, ಚಾರ್ಜಿಂಗ್ ಕೇಬಲ್ ಮತ್ತು ಪ್ರತಿ ಹಾಸಿಗೆಯ ಬಳಿ ಸಣ್ಣ ದೀಪದ ಸೌಲಭ್ಯ ಇದೆ.

ಈ ಸ್ಲೀಪರ್ ಕೋಚ್ ರೈಲನ್ನು ಹಗಲು ಸಮಯಕ್ಕಿಂತ ಹೆಚ್ಚಾಗಿ ರಾತ್ರಿಯಲ್ಲಿ ದೂರದವರೆಗೆ ಪ್ರಯಾಣಿಸಲು ವಿನ್ಯಾಸಗೊಳಿಸಲಾಗಿದೆ. ಪ್ರಾಯೋಗಿಕವಾಗಿ ಆರಂಭಿಕ ಹಂತವು ನವೆಂಬರ್ 15ರ ನಂತರ ಪೂರ್ಣಗೊಳ್ಳಲಿದ್ದು, ನಂತರ ಪಶ್ಚಿಮ ರೈಲ್ವೆ, ಮಧ್ಯ ರೈಲ್ವೆಯಲ್ಲಿ ಪ್ರಯೋಗಗಳನ್ನು ನಡೆಸಲಾಗುವುದು. ಮುಂದಿನ ವರ್ಷ ಜನವರಿ 15ರಿಂದ ವಂದೇ ಭಾರತ್ ಸ್ಲೀಪರ್ ರೈಲುಗಳಿಗೆ ಅನುಮೋದನೆ ದೊರೆಯಲಿದೆ. ಜನವರಿ ಅಂತ್ಯ ಅಥವಾ -ಫೆಬ್ರವರಿ ಮೊದಲ ವಾರ ದಲ್ಲಿ ಸಾರ್ವಜನಿಕರ ಬಳಕೆಗೆ ಲಭ್ಯವಾಗಲಿದೆ.

### ಸುರಕ್ಷತೆಗೆ ಹೆಚ್ಚಿನ ಒತ್ತು

**ರೈಲುಗಳು ಪರಸ್ಪರ ಡಿಕ್ಕಿ ಹೊಡೆದರೆ ಸಂಭವಿಸುವ ದೊಡ್ಡ ಅಪಘಾತಗಳನ್ನು ತಪ್ಪಿಸಲು ಸುರಕ್ಷತಾ ರಚನೆಗಳನ್ನು ಸುಧಾರಿಸಲಾಗಿದೆ ಎಂದು ಅವರು ಇದೇ ವೇಳೆ ಉಲ್ಲೇಖಿಸಿದ್ದಾರೆ. ರೈಲುಗಳು ಡಿಕ್ಕಿ ಹೊಡೆದರೂ ಕೋಚ್‌ಗಳು ಒಂದಕ್ಕೊಂದು ಅಂಟಿಕೊಳ್ಳದಂತಹ ತಂತ್ರ ಜ್ಞಾನವಿದೆ. ಎಲ್ಲಾ ವಂದೇ ಭಾರತ್ ರೈಲುಗಳಂತೆ ಇದು ಕವಚ ವ್ಯವಸ್ಥೆಯನ್ನು ಹೊಂದಿದೆ. ವಂದೇ ಭಾರತ್ ಸ್ಲೀಪರ್ ರೈಲು 120 ಕೋಟಿ ವೆಚ್ಚದಲ್ಲಿ ವಿನ್ಯಾಸಗೊಳಿಸಲಾದ 16 ಕಾರ್ ಮಾದರಿಯಾಗಿದೆ.**

# ದಾನಾ ಚಂಡಮಾರುತದ ಅಬ್ಬರ ಎದುರಿಸಲು ಸಜ್ಜು



**ಕಟಕ್:** ಒಡಿಶಾ, ಪಶ್ಚಿಮ ಬಂಗಾಳದಲ್ಲಿ ಭಾರೀ ಭೂಕುಸಿತ ಉಂಟಾಗುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ನೂರಾರು ರೈಲುಗಳ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಚಂಡಮಾರುತದಿಂದ 2 ರಾಜ್ಯಗಳಲ್ಲಿ ವಿಮಾನ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಲಾಗಿದೆ. 10 ಲಕ್ಷಕ್ಕೂ ಹೆಚ್ಚು ಜನರನ್ನು ಸ್ಥಳಾಂತರ ಮಾಡಲಾಗಿದೆ. ಬಂಗಾಳಕೊಲ್ಲಿಯಲ್ಲಿ ಡಾನಾ ಚಂಡಮಾರುತ ರೂಪು ಗೊಂಡಿದೆ. ಇದು ಒಡಿಶಾ ಮತ್ತು ಪಶ್ಚಿಮ ಬಂಗಾಳದ ಕರಾವಳಿಯನ್ನು ಸಮೀಪಿಸುತ್ತಿದೆ. ಇಂದು ಭಿತರ್ಕಾನಿಕಾ ಪಾರ್ಕ್, ಧಮ್ರಾ ಬಂದರಿನ ನಡು ವೆ ಚಂಡಮಾರುತ ಪ್ರವೇಶಿಸುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ಇಂದು ಒಡಿಶಾ ಮತ್ತು ಬಂಗಾಳಕ್ಕೆ ಭಾರೀ ಮಳೆಯ ರೆಡ್ ಅಲರ್ಟ್ ಘೋಷಿಸಲಾಗಿದೆ.

ಒಡಿಶಾ, ಬಂಗಾಳದಲ್ಲಿ ಅತಿ ಹೆಚ್ಚು ಮಳೆಯಾಗುವ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಇಂದು ಮತ್ತು ನಾಳೆ ರೆಡ್ ಅಲರ್ಟ್ ಘೋಷಿಸಿದೆ. ಇಲಾಖೆ ಮುನ್ಸೂಚನೆಯ ಪ್ರಕಾರ, ಬಲೇಶ್ವರ್, ಮಯೂರ್‌ಭಂಜ್‌ನ ಪ್ರತ್ಯೇಕ ಸ್ಥಳಗಳಲ್ಲಿ ಅತ್ಯಂತ ಭಾರೀ ಮಳೆಯಾಗಲಿದೆ. ಇಂದು ಮತ್ತು ನಾಳೆ ಒಡಿಶಾದ ಭದ್ರಲ್, ಕೇಂದ್ರಪಾರಾ, ಜಗತ್ ಸಿಂಗ್‌ಪುರ್ ಕೆಂಡುಜಾರ, ಜಾಜ್‌ಪುರ್, ಕಟಕ್, ಧೆಂಕನಲ್, ಖೋಡಾರ್, ಪುರಿ ಜಿಲ್ಲೆಗಳಲ್ಲಿ ಮಳೆಯಾಗಲಿದೆ. ಕೋಲ್ಕತ್ತಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಇಂದು ಸಂಜೆ 6ರಿಂದ ನಾಳೆ ಬೆಳಿಗ್ಗೆ 9ರವರೆಗೆ ಸುಮಾರು 15 ಗಂಟೆಗಳ ಕಾಲ ಎಲ್ಲಾ ವಿಮಾನ ಕಾರ್ಯಾಚರಣೆಗಳನ್ನು ಸ್ಥಗಿತಗೊಳಿಸಿದೆ. ಇದರ ಜೊತೆಗೆ, ಭುವನೇಶ್ವರ ವಿಮಾನ ನಿಲ್ದಾಣವು ಇಂದು ಸಂಜೆ 5ರಿಂದ ಇಂದು ಬೆಳಿಗ್ಗೆ 9ರವರೆಗೆ 16 ಗಂಟೆಗಳ ಕಾಲ ವಿಮಾನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ. ತೀವ್ರ ಡಾನಾ ಚಂಡಮಾರುತ ಇಂದು ಒಡಿ ಶಾದಲ್ಲಿ 120 ಕಿಮೀ ವೇಗದ ಗಾಳಿಯೊಂದಿಗೆ ಭೂ ಕುಸಿತವನ್ನು ಮಾಡಲಿದೆ. ಒಡಿಶಾ ಮತ್ತು ನೆರೆಯ ಪಶ್ಚಿಮ ಬಂಗಾಳದ ಅಧಿಕಾರಿಗಳು 10 ಲಕ್ಷಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಿದ ಕಾರಣ ಮುನ್ನೆಚ್ಚರಿಕೆ ಕ್ರಮಗಳನ್ನು ಘೋಷಿಸಿದ್ದಾರೆ. ಚಂಡಮಾರುತದ ನಿರೀಕ್ಷೆಯಲ್ಲಿ ನೂರಾರು ರೈಲು ಗಳನ್ನು ರದ್ದುಗೊಳಿಸಲಾಗಿದೆ ಮತ್ತು ಎರಡು ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳನ್ನು 16 ಗಂಟೆಗಳವರೆಗೆ ಮುಚ್ಚಲಾಗಿದೆ. ಅಕ್ಟೋಬರ್ 25ರವರೆಗೆ ಮೀನುಗಾರರು ಹೊರಗೆ ಹೋಗದಂತೆ ತಿಳಿಸಲಾಗಿದೆ. ಪೂರ್ವ ರೈಲ್ವೆಯು ಪಶ್ಚಿಮ ಬಂಗಾಳದೊಳಗೆ 190 ಸ್ಥಳೀಯ ರೈಲುಗಳನ್ನು ರದ್ದು ಗೊಳಿಸಿದೆ.

ಇಂದು ರಾತ್ರಿ 8ರಿಂದ ಶುಕ್ರವಾರ ಬೆಳಿಗ್ಗೆ 10ರವರೆಗೆ ಸೀಲ್ದಾ ವಿಭಾಗದ ಪ್ರಯಾಣಿಕರಿಗೆ ರೈಲು ಸಂಚಾರಕ್ಕೆ ತೊಡಕು ಉಂಟಾಗಲಿದೆ. ಆಗ್ನೇಯ ರೈಲ್ವೆಯು ಅಕ್ಟೋಬರ್ 25ರವರೆಗೆ ಒಡಿಶಾದಿಂದ ಹಾದುಹೋಗುವ ಅಥವಾ ಅಲ್ಲಿಂದಲೇ ಹೊರಡುವ 150 ಎಕ್ಸ್‌ಪ್ರೆಸ್, ಪ್ಯಾಸೆಂಜರ್ ರೈಲುಗಳನ್ನು ರದ್ದುಗೊಳಿಸುವುದಾಗಿ ಘೋಷಿಸಿದೆ.

# ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ರಾಜೀನಾಮೆಗೆ ಸ್ವಪಕ್ಷೀಯರಿಂದಲೇ ಒತ್ತಡ

## ಅಕ್ಟೋಬರ್ 28ರ ಒಳಗೆ ಜಸ್ಟಿನ್ ಟ್ರುಡೊ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಬೇಕೆಂದು ಆಗ್ರಹ



**ಭಾರತದ ಜೊತೆಗಿನ ಗುದ್ದಾಟ ಕಾರಣ**

**ಕೆನಡಾ:** ಪ್ರಧಾನ ಮಂತ್ರಿಯಾಗಿ ತಮ್ಮ ಸುದೀರ್ಘ 9 ವರ್ಷಗಳ ಆಳ್ವಿಕೆಯಲ್ಲಿ ಇದೇ ಮೊದಲ ಬಾರಿಗೆ ಜಸ್ಟಿನ್ ಟ್ರುಡೊ ಭಾರೀ ರಾಜಕೀಯ ಒತ್ತಡಕ್ಕೆ ಸಿಲುಕಿದ್ದಾರೆ. ತಮ್ಮದೇ ಪಕ್ಷವಾದ ಆಡಳಿತಾರೂಢ ಲಿಬರಲ್ ಪಕ್ಷದ ಸದಸ್ಯರೇ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಜಸ್ಟಿನ್ ಟ್ರುಡೊ ಪ್ರಧಾನಿ ಪಟ್ಟ ಅಲುಗಾಡುತ್ತಿದೆ. ಅಕ್ಟೋಬರ್ 28ರ ಒಳ ಗೆ ಜಸ್ಟಿನ್ ಟ್ರುಡೊ ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಬೇಕು ಎಂದು ಒಟ್ಟು 24 ಸಂಸದರು ಆಗ್ರಹಿಸಿದ್ದಾರೆ. ಈ ಸಂಬಂಧ ಪತ್ರ ಬರೆದು ಸಹಿಯನ್ನೂ ಹಾಕಿದ್ದಾರೆ. ಇತ್ತೀಚಿನ ಚುನಾವಣೆಗಳಲ್ಲಿ ಪಕ್ಷದ ಕಳಪೆ ಪ್ರದರ್ಶನ, ಜಸ್ಟಿನ್ ಟ್ರುಡೊ ಅವರ ನಾಯಕತ್ವದ ಕುರಿತಾಗಿ ಸ್ವಪಕ್ಷೀಯರೇ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

**ನಾಯಕತ್ವ ಬದಲಾವಣೆ ಸದ್ಯಕ್ಕಿಲ್ಲ:** ಲಿಬರಲ್ ಪಕ್ಷವು ಮಾಧ್ಯಮಗಳಿಗೆ ಪ್ರವೇಶ ನೀಡದೆ ಕೊಠಡಿಯಲ್ಲಿ ಮುಚ್ಚಿದ ಬಾಗಿಲುಗಳ ಒಳಗೆ ಸಭೆ ನಡೆಸಿದೆ. ಈ ಸಭೆಯಲ್ಲಿ ನಡೆದ ಮಾತುಕತೆಯ ವಿವರಗಳು ಮೂಲಗಳಿಂದ ಲಭ್ಯವಾಗಿದ್ದು, ಈ ಮಾಹಿತಿ ಪ್ರ ಕಾರ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ನಾಯಕತ್ವ ಬದಲಾವಣೆ ಸದ್ಯಕ್ಕಿಲ್ಲ ಎಂದೇ ಹೇಳಲಾಗ್ತಿದೆ. 2025ರ ಅಕ್ಟೋಬರ್‌ನಲ್ಲಿ ಕೆನಡಾದಲ್ಲಿ ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ಈ ಚುನಾವಣೆ ಹೊತ್ತಿಗೆ ಕೆನಡಾದಲ್ಲಿ ಲಿಬರಲ್ ಪಕ್ಷದ ನಾಯಕತ್ವವನ್ನು ಬೇರೆಯವರಿಗೆ ವಹಿಸುವ ಕುರಿತಾಗಿ ನಿರ್ಣಯ ಕೈಗೊಳ್ಳುವ ಸಾಧ್ಯತೆ ಇದೆ.

ಸುಮಾರು 3 ಗಂಟೆಗಳ ಕಾಲ ನಡೆದ ಸಭೆಯ ಬಳಿಕ ಹೊರ ಬಂದ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಅವರ ಮುಖದಲ್ಲಿ ಮಂದಹಾಸವಿತ್ತು. ಲಿಬರಲ್ ಪಕ್ಷ ಹಿಂದೆಂದಿಗಿಂತಲೂ ಗಟ್ಟಿಯಾಗಿದೆ, ಒಗ್ಗಟ್ಟಿನಿಂದ ಇದೆ ಎಂದು ಹೇಳಿದರು. ಮುಂದಿನ ಚುನಾವಣೆಯಲ್ಲೂ ತಾವೇ ಪಕ್ಷವನ್ನು ಮುನ್ನಡೆಸುವುದಾಗಿ ಹೇಳಿದರು. ಆದರೆ ಸಭೆಯಲ್ಲಿ ಮಾತ್ರ ಇದಕ್ಕೆ ವ್ಯತಿರಿಕ್ತವಾದ ನಿಲುವನ್ನು ಸದಸ್ಯರು ವ್ಯಕ್ತಪಡಿಸಿದರು ಎನ್ನಲಾಗಿದೆ.

ಈ ಸಭೆಯ ಕುರಿತು ಮಾತನಾಡಿದ ಟ್ರುಡೊ ಆಪ್ತ ಸಚಿವ ಮಿಲ್ಲರ್, ಈ ಸಭೆಯಲ್ಲಿ ಎಲ್ಲ ಸಂಸದರು ಪ್ರಧಾನಿ ಅವರಿಗೆ ಸತ್ಯ ಹೇಳಿದರು. ಅವರು ಕೇಳಲಿ, ಕೇಳದೇ ಇರಲಿ ತಮ್ಮ ನಿಲುವನ್ನು ಹೇಳಿದರು' ಎಂದು ಮಾರ್ಮಿಕವಾಗಿ ವಿವರಿಸಿದ್ದಾರೆ.

**ಭಾರತ - ಕೆನಡಾ ಗುದ್ದಾಟದ ಎಫೆಕ್ಟ್:** ಕೆನಡಾದಲ್ಲಿ ಇತ್ತೀಚಿಗೆ ನಡೆದ ಕೆಲವು ಉಪ ಚನಾವಣಾ ಸೋಲು, ಭಾರತದ ಜೊತೆಗಿನ ದ್ವಿಪಕ್ಷೀಯ ಗುದ್ದಾಟ ಸೇರಿದಂತೆ ಹಲವು ವಿಚಾರಗಳು ಈ ಸಭೆಯಲ್ಲಿ ಪ್ರಸ್ತಾಪವಾದವು ಎನ್ನಲಾಗಿದೆ. ಖಲಿಸ್ತಾನ್ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಭಾರತದ ಕೈವಾಡ ಇದೆ ಎಂದು ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ಆರೋಪ ಮಾಡಿದ್ದರು. ಈ ಸಂಬಂಧ ತಮ್ಮ ಬಳಿ ಸಾಕ್ಷ್ಯ ಇಲ್ಲ ಎಂದೂ ಹೇಳಿದ್ದರು. ಹೀಗಾಗಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೆನಡಾ ಮುಖಭಂಗ ಅನುಭವಿಸುವಂತಾಗಿತ್ತು. ಕೆನಡಾದಲ್ಲಿ ಖಲಿಸ್ತಾನಿ ಕಿಡಿಗೇಡಿಗಳ ಆರ್ಭಟ ಹೆಚ್ಚಾಗಿದೆ ಎಂದು ಅಲ್ಲಿನ ಸಂಸ ದರೇ ಹಲವು ಬಾರಿ ಆರೋಪ ಮಾಡಿದ್ದಾರೆ.

### ಲಿಬರಲ್ ಪಕ್ಷ ಸೋಲು

**ಕೆನಡಾ ಪ್ರಧಾನ ಮಂತ್ರಿ ಜಸ್ಟಿನ್ ಟ್ರುಡೊ ಇತ್ತೀಚೆಗೆ ಹಲವು ಕಾರಣಗಳಿಂದಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸುದ್ದಿಯಲ್ಲಿದ್ದಾರೆ. ಭಾರತದ ಜೊತೆಗಿನ ದ್ವಿಪಕ್ಷೀಯ ಗುದ್ದಾಟ ಕೂಡಾ ಈ ಕಾರಣಗಳಲ್ಲಿ ಒಂದು. ಇದರ ಬೆನ್ನಲ್ಲೇ ಕೆನಡಾದಲ್ಲಿ ನಡೆದ ಚುನಾವಣೆಗಳಲ್ಲೂ ಲಿಬರಲ್ ಪಕ್ಷ ಸೋಲು ಕಂಡಿದೆ. ಈ ಎಲ್ಲಾ ಕಾರಣಗಳಿಂದಾಗಿ ಜಸ್ಟಿನ್ ಟ್ರುಡೊ ಅವರ ಪ್ರಧಾನಿ ಹುದ್ದೆಗೇ ಕಂಟಕ ಎದುರಾಗಿದ್ದು, 24 ಸಂಸದರು ಜಸ್ಟಿನ್ ಟ್ರುಡೊ ರಾಜೀನಾಮೆಗೆ ಆಗ್ರಹಿಸಿದ್ದಾರೆ.**

- **ಒಟ್ಟು 24 ಸಂಸದರು ಈ ಸಂಬಂಧ ಪತ್ರ ಬರೆದು ಸಹಿಯನ್ನೂ ಹಾಕಿದ್ದಾರೆ**
- **ಜಸ್ಟಿನ್ ಟ್ರುಡೊ ಅವರ ನಾಯಕತ್ವದ ಕುರಿತಾಗಿ ಸ್ವಪಕ್ಷೀಯರಿಂದಲೇ ಆಕ್ಷೇಪ**

ಉದಯ ವಾಹಿನಿ

ದೇಶ/ವಿದೇಶ

ಶುಕ್ರವಾರ
25 ಅಕ್ಟೋಬರ್ 2024



## ಮಿನಿ ನ್ಯೂಸ್

### ಲಾರೆನ್ಸ್ ಬಿಷ್ಣೋಯ್ ಹೆಸರಲ್ಲಿ ಸಲ್ಮಾನ್ ಖಾನ್‌ಗೆ ಬೆದರಿಕೆ ಹಾಕಿದ್ದವನ ಬಂಧನ

**ಮುಂಬೈ:** ಗ್ಯಾಂಗ್ ಸ್ಟಾರ್ ಲಾರೆನ್ಸ್ ಬಿಷ್ಣೋಯ್ ಹೆಸರಿನಲ್ಲಿ ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಬೆದರಿಕೆ ಹಾಕಿ 5 ಕೋಟಿ ಹಫ್ತಾಗೆ ಒತ್ತಾಯಿಸಿದ್ದ ಜೆಮ್ ಶೆಡ್‌ಪುರದ ವ್ಯಕ್ತಿಯನ್ನು ಮುಂಬೈ ಪೊಲೀಸರು ಬಂಧಿಸಿದ್ದಾರೆ. ಮುಂಬೈ ಪೊಲೀಸರ ಪ್ರಕಾರ, ಮುಂಬೈ ಟ್ರಾಫಿಕ್ ಪೊಲೀಸರಿಗೆ ಬೆದರಿಕೆ ಸಂದೇಶ ಬಂದ ನಂತರ ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಲಾಗಿತ್ತು. ಜೆಮ್ ಶೆಡ್‌ಪುರದ ಸ್ಥಳೀಯ ಪೊಲೀಸರ ಸಹಾಯದಿಂದ ತನಿಖೆ ನಡೆಸಲಾಯಿತು ಮತ್ತು ಇಂದು ಸಂದೇಶ ಕಳುಹಿಸಿದ ವ್ಯಕ್ತಿಯನ್ನು ಬಂಧಿಸಲಾಗಿದೆ. ಅವರನ್ನು ಮುಂಬೈಗೆ ಕರೆತರಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಅಕ್ಟೋಬರ್ 18 ರಂದು ಮುಂಬೈ ಟ್ರಾಫಿಕ್ ಪೊಲೀಸ್ ಕಂಟ್ರೋಲ್ ರೂಮ್ ಸಂಖ್ಯೆಗೆ ಆರಂಭಿಕ ಬೆದರಿಕೆ ಸಂದೇಶ ಕಳುಹಿಸಿದ್ದ ಆರೋಪಿ ನಂತರ ಕ್ಷಮೆ ಕೋರಿ ಸಂದೇಶವನ್ನು ತಪ್ಪಾಗಿ ಕಳುಹಿಸಲಾಗಿದೆ ಎಂದು ಸಬೂಬು ಹೇಳಿಕೊಂಡಿದ್ದ. ಮುಂಬೈ ಪೊಲೀಸರ ಪ್ರಕಾರ, ಈ ಸಂದೇಶವನ್ನು ಕಳುಹಿಸಿದ ವ್ಯಕ್ತಿಯ ಸ್ಥಳವನ್ನು ಜಾರ್ಖಂಡ್‌ನಿಂದ ಟ್ರ್ಯಾಕ್ ಮಾಡಲಾಗಿದೆ. ಸಂದೇಶವನ್ನು ಕಳುಹಿಸಿದ ವ್ಯಕ್ತಿ ತಾನು ಲಾರೆನ್ಸ್ ಬಿಷ್ಣೋಯ್ ಅವರ ಗ್ಯಾಂಗ್‌ಗೆ ಹತ್ತಿರವಾಗಿರುವುದಾಗಿ ಹೇಳಿಕೊಂಡಿದ್ದಾನೆ .

### ಕಾರಿನ ಟೈರ್ ಸಿಡಿದು ಒಂದೇ ಕುಟುಂಬದ 5 ಮಂದಿ ಸಾವು

**ಜೈಪುರ:** ಕಾರಿನ ಟೈರ್ ಸಿಡಿದು ಸಂಭವಿಸಿದ ಅಪಘಾತದಲ್ಲಿ ಒಂದೇ ಕುಟುಂಬದ ಐದು ಮಂದಿ ಧಾರುಣವಾಗಿ ಸಾವನ್ನಪ್ಪಿರುವ ಘಟನೆ ರಾಜಸ್ಥಾನದಲ್ಲಿ ನಡೆದಿದೆ. ಸಿರೋಹಿ ಜಿಲ್ಲೆಯ ಹೆದ್ದಾರಿಯೊಂದರಲ್ಲಿ ಟೈರ್ ಒಡೆದ ಪರಿಣಾಮ ಕಾರು ಪಲ್ಟಿಯಾಗಿ ಗುರುವಾರ ಬೆಳಗ್ಗೆ ಒಂದೇ ಕುಟುಂಬದ ಐವರು ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದಲ್ಲಿ ಮೃತಪಟ್ಟ ಕುಟುಂಬವು ಜೋಧಪುರಕ್ಕೆ ತೆರಳುತ್ತಿದ್ದಾಗ ಬೇವಾರರ್-ಪಿಂಡ್ವಾರಾ ಹೆದ್ದಾರಿಯಲ್ಲಿ ಈ ದುರ್ಘಟನೆ ಸಂಭವಿಸಿದೆ ಎಂದು ಅವರು ಹೇಳಿದರು.

ಚಾಲಕ ಕಾರನ್ನು ಅತಿವೇಗದಲ್ಲಿದ್ದ ಚಲಾಯಿಸುತ್ತಿದ್ದ ಹಿನ್ನೆಲೆಯಲ್ಲಿ ಕಾರಿನ ಟೈರ್ ಸಿಡಿದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಐದು ಮೃತದೇಹಗಳನ್ನು ಮರಣೋತ್ತರ ಪರೀಕ್ಷೆ ಗಾಗಿ ಶವಾಗಾರಕ್ಕೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಕಾರ್ಮಿಕ ಶಿಬಿರದಲ್ಲಿ ನೀರಿನ ಟ್ಯಾಂಕ್ ಕುಸಿದು ಮೂವರ ದುರ್ಮರಣ

**ಪುಣೆ:** ಮಹಾರಾಷ್ಟ್ರದ ಪುಣೆ ಜಿಲ್ಲೆಯ ಕಾರ್ಮಿಕ ಶಿಬಿರದಲ್ಲಿ ಇಂದು ಬೆಳಗ್ಗೆ ತಾತ್ಕಾಲಿಕ ನೀರಿನ ಟ್ಯಾಂಕ್ ಕುಸಿದು ಮೂವರು ಕಾರ್ಮಿಕರು ಸಾವನ್ನಪ್ಪಿದ್ದಾರೆ ಮತ್ತು ಏಳು ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾ ರೆ. ಪಿಂಪ್ರಿ ಚಿಂಚ್‌ವಾಡ್ ಟೌನ್‌ಶಿಪ್‌ನ ಭೋಸಾರಿ ಪ್ರದೇಶದಲ್ಲಿ ಕೆಲವು ಕಾರ್ಮಿಕರು ನೀರಿನ ಟ್ಯಾಂಕ್ ಅಡಿಯಲ್ಲಿ ಸ್ನಾನ ಮಾಡುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಅವರು ಹೇಳಿದರು. ನೀರಿನ ಒತ್ತಡದಿಂದಾಗಿ ನೀರಿನ ತೊಟ್ಟಿಯ ಗೋಡೆ ಸೋಟಗೊಂಡಿದ್ದು, ಟ್ಯಾಂಕ್ ಕುಸಿದು ಬಿದ್ದಿದೆ ಎಂದು ಹೆಚ್ಚುವರಿ ಪೊಲೀಸ್ ಆಯುಕ್ತ ಪಿಂಪ್ರಿ ಚಿಂಚ್‌ವಾಡ್ ವಸಂತ ಪರದೇಶಿ ತಿಳಿಸಿದ್ದಾರೆ. ನೀರಿನ ತೊಟ್ಟಿಯ ಕೆಳಗೆ ಇದ್ದ ಕಾರ್ಮಿಕರು ಅವಶೇಷಗಳಡಿ ಸಿಲುಕಿದ್ದಾರೆ ಎಂದು ಅವರು ಹೇಳಿದರು. ಅವರಲ್ಲಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಮತ್ತು ಏಳು ಮಂದಿ ಗಾಯಗೊಂಡಿದ್ದಾರೆ ಮತ್ತು ಅವರನ್ನು ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

### ಮಹಾರಾಷ್ಟ್ರದಲ್ಲಿ ಅಕ್ರಮವಾಗಿ ತಂಗಿದ್ದ ಬಾಂಗ್ಲಾ ಪ್ರಜೆಗಳ ಬಂಧನ

**ಥಾಣೆ:** ಮಹಾರಾಷ್ಟ್ರದ ನವಿ ಮುಂಬೈ ಟೌನ್‌ಶಿಪ್‌ನಲ್ಲಿ ಅಕ್ರಮವಾಗಿ ತಂಗಿದ್ದ ಆರೋಪದ ಮೇಲೆ ಮೂವರು ಬಾಂಗ್ಲಾದೇಶಿ ಪ್ರಜೆಗಳನ್ನು ಪೊಲೀಸರು ಬಂಧಿಸಿದ್ದಾರೆ. ಖಚಿತ ಸುಳಿವಿನ ಮೇರೆಗೆ ನವಿ ಮುಂಬೈ ಭಯೋತ್ಪಾದನಾ ನಿಗ್ರಹ ದಳದ ಸಿಬ್ಬಂದಿ ತಲೋಜಾ ಪ್ರದೇಶದ ವಸತಿ ಆವರಣದಲ್ಲಿ ದಾಳಿ ನಡೆಸಿ ಮೂವರನ್ನು ಬಂಧಿಸಿದ್ದಾರೆ.

ನವಿ ಮುಂಬೈನ ಫ್ಲಾಟ್ ನಲ್ಲಿ ಅಕ್ರಮವಾಗಿ ನೆಲೆಸಿದ್ದ 28 ರಿಂದ 37 ವರ್ಷ ವಯಸ್ಸಿನ ಬಾಂಗ್ಲಾದೇಶದ ದಂಪತಿ ಮತ್ತು 35 ವರ್ಷದ ಇನ್ನೊಬ್ಬ ಮಹಿಳೆಯನ್ನು ಅವರು ಸೆರೆ ಹಿಡಿದಿದ್ದಾರೆ ಎಂದು ತಲೋಜಾ ಪೊಲೀಸ್ ಠಾಣೆಯ ಅಧಿಕಾರಿ ತಿಳಿಸಿದ್ದಾರೆ. ಆರೋಪಿಗಳ ವಿರುದ್ಧ ಪಾಸ್‌ಪೋರ್ಟ್ ಕಾಯ್ದೆ ವಿದೇಶಿಯರ ಕಾಯಿದೆಯ ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಅಮೆರಿಕ ಅಧ್ಯಕ್ಷರಾಗಲು ಟ್ರಂಪ್ ಅನರ್ಹ: ಕಮಲಾ ಹ್ಯಾರಿಸ್



**ವಾಷಿಂಗ್ಟನ್:** ಅಮೆರಿಕಾ ಮಾಜಿ ಅಧ್ಯಕ್ಷ ಡೋನಾಲ್ಡ್ ಟ್ರಂಪ್ 'ಫ್ಯಾಸಿಸ್ಟ್' ಮನೋಭಾವ ಇರುವ ವ್ಯಕ್ತಿ ಎಂದು ಅಧ್ಯಕ್ಷೀಯ ಚುನಾವಣೆಯ ಪ್ರತಿಸ್ಪರ್ಧಿ ಕಮಲಾ ಹ್ಯಾರಿಸ್ ಆರೋಪಿಸಿದ್ದಾರೆ. ಪ್ಯಾಸಿಸ್ಟ್ ಮನೋಭಾವ 'ಅಪಾಯಕಾರಿ', ಅಮೆರಿಕಾ ಅಧ್ಯಕ್ಷರಾಗಲು ಅನರ್ಹರು ಎಂದು ನೇರ ವಾಗ್ದಾಳಿ ನಡೆಸಿದ್ದಾರೆ. ಅಮೆರಿಕಾ ಅಧ್ಯಕ್ಷೀಯ ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ ಅಮೇರಿಕಾದ ಹಾಲಿ ಉಪಾಧ್ಯಕ್ಷೆ ಮತ್ತು ಅಧ್ಯಕ್ಷೀಯ ಅಭ್ಯರ್ಥಿ ಕಮಲಾ ಹ್ಯಾರೀಸ್ ಅವರು ಡೋನಾಲ್ಡ್ ಟ್ರಂಪ್ ಅವರ ಮನೋಭಾವ ಅಮೆರಿಕಾದ ಜನತೆಗೆ ಒಪ್ಪುವುದಿಲ್ಲ ಎಂದಿದ್ದಾರೆ.

ಕಮಲಾ ಹ್ಯಾರೀಸ್ ಅವರ ಹೇಳಿಕೆಯನ್ನು ಅಮೆರಿಕಾದ ಅನೇಕ ಗಣ್ಯರು ಸ್ವಾಗತ ಮಾಡಿದ್ದಾರೆ. ಅದರಲ್ಲಿ ಡೋನಾಲ್ಡ್ ಟ್ರಂಪ್‌ರ ದೀರ್ಘಾವಧಿಯ ಶ್ವೇತಭವನದ ಮುಖ್ಯಸ್ಥರಾಗಿದ್ದ ನಿವೃತ್ತ ಫೋರ್-ಸ್ಟಾರ್ ಮೆರೈನ್ ಜನರಲ್ ಜಾನ್ ಕೆಲ್ಲಿ ಕೂಡ ಕಮಲಾ ಹ್ಯಾರೀಸ್ ಹೇಳಿಕೆಗೆ ಸಮಹಮತ ವ್ಯಕ್ತಪಡಿಸಿದ್ದಾರೆ. ಮಾಜಿ ಬಾಸ್ ಫ್ಯಾಸಿಸ್ಟ್‌ನ ಸಾಮಾನ್ಯ ವ್ಯಾಖ್ಯಾನ ಹೊಂದಿದ್ದಾರೆ, ಜೊತೆಗೆ ಡೊನಾಲ್ಡ್ ಟ್ರಂಪ್ ಸರ್ವಾಧಿಕಾರ ಮನೋಭಾವ ಹೊಂದಿದ್ದಾರೆ. ನಾಜಿ ನಾಯಕ ಅಡಾಲ್ಫ್ ಹಿಟ್ಲರ್‌ನಷ್ಟು ನಿಷ್ಠಾವಂತ ಮಿಲಿಟರಿ ಜನರಲ್ ಹೊಂದ ಬೇಕೆಂದು ಎಂದು ಬಯಸುವುದಾಗಿ ತಿಳಿಸಿದ್ದಾರೆ. ಚುನಾವಣೆಗೆ ಕೇವಲ ಎರಡು ವಾರಗಳ ಮೊದಲು ಕೆಲ್ಲಿ ಅವರ ಹೇಳಿಕೆ ಮಹತ್ವ ಪಡೆದುಕೊಂಡಿದೆ. ಡೋನಾಲ್ಡ್ ಟ್ರಂಪ್ ಅವರನ್ನು ಹತ್ತಿರದಿಂದ ಬಲ್ಲವರಿಗೆ ಡೋನಾಲ್ಡ್ ಟ್ರಂಪ್ ಅವರ ನಡೆ ಅರ್ಥವಾಗುತ್ತದೆ ಎಂದಿದ್ದಾರೆ. ಸಾರ್ವಜನಿಕವಾಗಿ ಮೊದಲ ಬಾರಿಗೆ ಡೋನಾಲ್ಡ್ ಟ್ರಂಪ್ ಸರ್ವಾಧಿಕಾರಿಗಳನ್ನು ಮೆಚ್ಚುವ, ಫ್ಯಾಸಿಸ್ಟ್ ಆಗಿರುವ ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷರನ್ನು ಹೊಂದಿರುವ ಬಗ್ಗೆ ಮತದಾರರು ಕಾಳಜಿ ವಹಿಸುತ್ತಾರೆ ಎಂದು ಹೇಳಿದ್ದಾರೆ.

# ಎಲ್ಲೋ ಜೋಗಪ್ಪ ನಿನ್ನರಮನೆ



ಆರಂಭದಿಂದ ಇಲ್ಲಿಯವರೆಗೂ ನಾನಾ ರೀತಿಯಲ್ಲಿ ಸಿನಿಮಾ ಎಲ್ಲೋ ಜೋಗಪ್ಪ ನಿನ್ನರಮನೆ ಭರವಸೆ ಮೂಡಿ ಸುತ್ತಾ ಬಂದಿದೆ. ಹೌದಾ ಹುಲಿಯಾ ಹಾಡಿಗೆ ಭರಪೂರ ಮೆಚ್ಚುಗೆ ಸಿಕ್ಕ ಬೆನ್ನಲ್ಲೇ, ಚಿತ್ರತಂಡ ಎರಡನೇ ಹಾಡನ್ನು ಅನಾವರಣ ಮಾಡಿದೆ. ಪ್ರಮೋದ್ ಮರವಂತೆ ಕ್ಯಾಚಿ ಮ್ಯಾಚಿ ಪದಗಳನ್ನು ಪೋಣಿಸಿ ಸಾಹಿತ್ಯ ಬರೆದಿದ್ದು, ಖ್ಯಾತ ಗಾಯಕಿ ರಕ್ಷಿತಾ ಸುರೇಶ್ ಹಾಗೂ ವಿಶಾಕ್ ನಾಗಲಾಪುರ ಧ್ವನಿಯಾಗಿದ್ದಾರೆ. 'ಜಾಣಮರಿ' ಪ್ರೇಮಗೀತೆಗೆ ಶಿಯೋಮ್ ಟ್ಯೂನ್ ಹಾಕಿದ್ದಾರೆ. ಹಾಡಿನಲ್ಲಿ ಅಂಜನ್ ನಾಗೇಂದ್ರ, ಹಾಗೂ ವೆನ್ಯಾ ರೈ ಜೋಡಿಯಾಗಿ ಮಿಂಚಿದ್ದಾರೆ. ಕನ್ನಡ ಹುಡುಗನಾಗಿ ಅಂಜನ್ ಕಾಣಿಸಿಕೊಂಡ್ರೆ, ವೆನ್ಯಾ ರೈ ಮರಾಠಿ ಹುಡುಗಿಯಾಗಿ ಅಭಿನಯಿಸಿದ್ದಾರೆ. ಮಹಾರಾಷ್ಟ್ರದ ಪಂಢರಪುರದಲ್ಲಿ ಇಡೀ ಹಾಡನ್ನು ಚಿತ್ರೀಕರಣ ಮಾಡಿರುವುದು ವಿಶೇಷ. ನಾಯಕ ಹಾಗೂ ನಾಯಕಿ ನಡುವಿನ ಸುಮಧುರ ಪ್ರೇಮಗೀತೆ ಇದಾಗಿದ್ದು, ಸಂಗೀತ ಪ್ರಿಯರನ್ನು ಗುನುಗುವಂತೆ ಮಾಡಿದೆ. ಈ ಚಿತ್ರದಲ್ಲಿ ಸಂಜನಾ ದಾಸ್ ಕೂಡ ಒಂದು ಪ್ರಮುಖ ಪಾತ್ರ ನಿಭಾಯಿಸುತ್ತಿದ್ದಾರೆ. ಬಿರಾದರ್, ಶರತ್ ಲೋಹಿತಾಶ್ವ, ದಾನಪ್ಪ, ಸ್ವಾತಿ, ದಿನೇಶ್ ಮಂಗಳೂರು, ಲಕ್ಷ್ಮೀ ನಾಡಗೌಡ ಮುಂತಾದವರು ಕೂಡ ಈ ಸಿನಿಮಾದಲ್ಲಿ ನಟಿಸಿದ್ದಾರೆ. ಎಲ್ಲೋ ಜೋಗಪ್ಪ ನಿನ್ನರಮನೆ ಜರ್ನಿಯ ಕಥಾನಕ. ಜೊತೆಗೆ ಅಪ್ಪನ ಮಗನ ಬಾಂಧವ್ಯದ ಎಳೆಯೂ ಚಿತ್ರದಲ್ಲಿದೆ.

**ಯುವ ಜನರಿಗೆ ಹೆಚ್ಚು ಮನರಂಜನೆ**



ಬೆಂಗಳೂರಿನಿಂದ ಶುರುವಾದ ಪ್ರಯಾಣ ಹಿಮಾಲಯದವರೆಗೆ ಸಾಗುತ್ತದೆ. ಭಾವನಾತ್ಮಕವಾದ ಈ ಸಿನಿಮಾ ಯುವ ಜನರಿಗೆ ಹೆಚ್ಚು ಮನರಂಜನೆ ನೀಡುತ್ತದೆ. ಹಲವು ಸೂಪರ್ ಹಿಟ್ ಸೀರಿಯಲ್‌ಗಳಾದ ಅಗ್ನಿಸಾಕ್ಷಿ, ನಾಗಿಣಿ, ಕಮಲಿ ನಿರ್ದೇಶಿಸಿರುವ ಹಯವದನ ಅವರು ಚೊಚ್ಚಲ ಬಾರಿಗೆ ನಿರ್ದೇಶನ ಮಾಡಿರುವ 'ಎಲ್ಲೋ ಜೋಗಪ್ಪ ನಿನ್ನರಮನೆ'ಗೆ ಶಿವ ಪ್ರಸಾದ್ ಸಂಗೀತವಿದೆ.

# ಫಸ್ಟ್ ಟೈಂ ಸೆಟ್‌ಗೆ ಬಂದಾಗ ಅಪಹಾಸ್ಯ ಮಾಡಿದ್ದರು

ಜೋಶ್, ಮೈನಾ ಸಿನಿಮಾಗಳ ಮನೆಗೆದ್ದಿರೋ ನಿತ್ಯಾ ಮೆನನ್‌ಗೆ ಪರಭಾಷೆಯಲ್ಲಿ ಭಾರೀ ಬೇಡಿಕೆ ಇದೆ. ಇದೀಗ ಸಂದರ್ಶನವೊಂದರಲ್ಲಿ ತಮ್ಮ ದೇಹದ ಅಂಗಾಂಗಗಳ ಬಗ್ಗೆ ತಾವು ಎದುರಿಸಿದ ಟೀಕೆಯ ಬಗ್ಗೆ ರಾಷ್ಟ್ರ ಪ್ರಶಸ್ತಿ ವಿಜೇತ ನಟಿ ನಿತ್ಯಾ ಮುಕ್ತವಾಗಿ ಮಾತನಾಡಿದ್ದಾರೆ.



**ದಪ್ಪಗಿದ್ದೇನೆ ಕುಳ್ಳಗಿದ್ದೇನೆ**

ತೆಲುಗು ಸಿನಿಮಾವೊಂದರಲ್ಲಿ ನಿತ್ಯಾ ನಟಿಸುವಾಗ ಅವರ ಗುಂಗುರು ಕೂದಲನ್ನು ಯಾರು ಇಷ್ಟಪಡಲಿಲ್ಲವಂತೆ. ನಾನು ಫಸ್ಟ್ ಟೈಮ್ ಸೆಟ್‌ಗೆ ಬಂದಾಗ ಎಲ್ಲಾರೂ ವಿಚಿತ್ರವಾಗಿ ನೋಡುತ್ತಿದ್ದರು. ನಾಯಕಿ ಅಂದ್ಮೇಲೆ ದೇಹದ ತೂಕದ ಬಗ್ಗೆ ಮಾತನಾಡಿದರು. ಅದಕ್ಕೆಲ್ಲಾ ನಾನು ತಲೆ ಕೆಡಿಸಿಕೊಳ್ಳಲಿಲ್ಲ ಎಂದಿದ್ದಾರೆ.

ನಾನು ದಪ್ಪ ಮತ್ತು ಕುಳ್ಳಗೆ ಇದ್ದೇನೆ ಎಂದು ಎಲ್ಲಾರೂ ಅಪಹಾಸ್ಯ ಮಾಡಿದರು. ನನಗೆ ಗುಂಗುರು ಕೂದಲು ಮತ್ತು ದೊಡ್ಡ ಹುಬ್ಬು ಇದೆ ಎಂದು ಅನೇಕರು ಟೀಕೆ ಮಾಡಿದರು. ಯಾರನ್ನಾದರೂ ಅವರ ರೂಪದ ಆಧಾರದ ಮೇಲೆ ನೀವು ಹೇಗೆ ಟೀಕಿಸುತ್ತೀರಿ ಎಂದಿದ್ದಾರೆ. ಅದು ಅವರ ಕೀಳು ಮಟ್ಟದ ಮನಸ್ಥಿತಿ ಎಂದು ಖಡಕ್ ಆಗಿ ನಿತ್ಯಾ ಮಾತನಾಡಿದ್ದಾರೆ. ಸವಾಲುಗಳನ್ನು ಎದುರಿಸಿ ಉತ್ತಮ ವ್ಯಕ್ತಿಯಾಗಲು ಪ್ರಯತ್ನಿಸಬೇಕು ಎಂದು ನಟಿ ಹೇಳಿದ್ದಾರೆ.



# ಹೊಸ ಫೋಟೋಶೂಟ್‌ನಲ್ಲಿ ಮಿಂಚಿದ ದೇಸಿ ಗರ್ಲ್ ಪ್ರಿಯಾಂಕಾ ಚೋಪ್ರಾ

**ಲೈಟ್ ಬಣ್ಣದ ಶಾರ್ಟ್ ಡ್ರೆಸ್‌ನಲ್ಲಿ ದೇಸಿ ಗರ್ಲ್ ಪ್ರಿಯಾಂಕಾ ಹಾಟ್ ಆಗಿ ಕಾಣಿಸಿಕೊಂಡಿದ್ದಾರೆ. ವಿವಿಧ ಭಂಗಿಯಲ್ಲಿ ಪೋಸ್ ನೀಡಿದ್ದಾರೆ. ನಟಿಯ ನಯಾ ಪೋಸ್‌ಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ.**

ಬಾಲಿವುಡ್ ಬೆಡಗಿ ಪ್ರಿಯಾಂಕಾ ಚೋಪ್ರಾ, ಸದ್ಯ ಹಾಲಿವುಡ್ ಸಿನಿಮಾಗಳಲ್ಲಿ ಮಿಂಚುತ್ತಿದ್ದಾರೆ. ಇದೀಗ ಕೆಲಸದ ನಡುವೆ ಹುಟ್ಟೂರು ಮುಂಬೈಗೆ ಬಂದಿರುವ ನಟಿ ಹೊಸ ಫೋಟೋಶೂಟ್ ಮೂಲಕ ಸದ್ದು ಮಾಡುತ್ತಿದ್ದಾರೆ. ಲೈಟ್ ಬಣ್ಣದ ಶಾರ್ಟ್ ಡ್ರೆಸ್‌ನಲ್ಲಿ ದೇಸಿ ಗರ್ಲ್ ಪ್ರಿಯಾಂಕಾ ಹಾಟ್ ಆಗಿ ಕಾಣಿಸಿಕೊಂಡಿದ್ದಾರೆ. ವಿವಿಧ ಭಂಗಿಯಲ್ಲಿ ಪೋಸ್ ನೀಡಿದ್ದಾರೆ. ನಟಿಯ ನಯಾ ಪೋಸ್‌ಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಹಾಲಿವುಡ್ ಸಿನಿಮಾಗಳಲ್ಲಿ ಬ್ಯುಸಿಯಾಗಿರುವ ಪ್ರಿಯಾಂಕಾ ಇದೀಗ 'ಪಾನಿ' ಎಂಬ ಮರಾಠಿ ಚಿತ್ರದ ಮೂಲಕ ನಿರ್ಮಾಪಕಿಯಾಗಿ ಎಂಟ್ರಿ ಕೊಟ್ಟಿದ್ದಾರೆ. ಈ ಚಿತ್ರ ರಿಲೀಸ್ ಆಗಿದೆ. ಪ್ರಿಯಾಂಕಾ ಅವರ ಬಾಲಿವುಡ್ ಚಿತ್ರಕ್ಕಾಗಿ ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಇತ್ತೀಚೆಗೆ ಸಮಂತಾ, ವರುಣ್ ನಟಿಸಿರುವ 'ಸಿಟಾಡೆಲ್ ಹನಿ ಬನಿ' ವೆಬ್ ಸಿರೀಸ್ ಪ್ರಚಾರಕ್ಕೂ ಪ್ರಿಯಾಂಕಾ ಕೈಜೋಡಿಸಿದ್ದರು. ಪ್ರಿಯಾಂಕಾ ನಟಿಸಿದ್ದ ಸಿಟಾಡೆಲ್ ಪಾತ್ರವನ್ನೇ ಹಿಂದಿಯಲ್ಲಿ ಸಮಂತಾ ನಟಿಸಿದ್ದಾರೆ. ಅಂದಹಾಗೆ, ಅಮೆರಿಕನ್ ಸಿಂಗರ್ ನಿಕ್ ಜೋನಸ್ ಜೊತೆ ಪ್ರಿಯಾಂಕಾ 2018ರಲ್ಲಿ ಮದುವೆಯಾದರು. ಪತಿ ಜೊತೆ ವಿದೇಶದಲ್ಲಿ ಸೆಟಲ್ ಆಗಿದ್ದಾರೆ. 2022ರಲ್ಲಿ ಬಾಡಿಗೆ ತಾಯ್ತನದ ಮೂಲಕ ಮುದ್ದಾದ ಹೆಣ್ಣು ಮಗುವನ್ನು ಈ ಜೋಡಿ ಬರಮಾಡಿಕೊಂಡರು.

ಸಿನಿ ವಾಹಿನಿ



# ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನ ಭಯ- ರಶ್ಮಿಕಾಗೂ ಭದ್ರತೆ

ಬಾಲಿವುಡ್ ನಟ ಸಲ್ಮಾನ್ ಖಾನ್‌ಗೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನ ಬೆದರಿಕೆ ಹಿನ್ನೆಲೆ 'ಸಿಖಂದರ್' ಸಿನಿಮಾದ ನಾಯಕಿ ರಶ್ಮಿಕಾ ಮಂದಣ್ಣಗೂ ಹೆಚ್ಚಿನ ಭದ್ರತೆ ನೀಡಲಾಗುತ್ತಿದೆ ಎನ್ನಲಾದ ಸುದ್ದಿಯೊಂದು ಹರಿದಾಡುತ್ತಿದೆ. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಸಲ್ಮಾನ್ ಖಾನ್ ಬೆದರಿಕೆಗಳು ಬರುತ್ತಿವೆ. ಸಲ್ಮಾನ್ ಖಾನ್ ಆಪ್ತರಾಗಿರುವವರು ಬಿಷ್ಣೋಯಿ ಹಿಟ್ ಲಿಸ್ಟ್‌ನಲ್ಲಿದ್ದಾರೆ. ಸಿದ್ದಿಕ್ ಹತ್ಯೆಯ ಬೆನ್ನಲ್ಲೇ ಸಲ್ಮಾನ್ ಖಾನ್‌ಗೆ ಭದ್ರತೆ ಹೆಚ್ಚಿಸಲಾಗಿದೆ. ಜೀವ ಬೆದರಿಕೆಯ ನಡುವೆಯೇ ಸಲ್ಮಾನ್ 'ಸಿಖಂದರ್' ಚಿತ್ರದ ಶೂಟಿಂಗ್‌ನಲ್ಲಿ ಬ್ಯುಸಿಯಾಗಿದ್ದಾರೆ.


ಇನ್ನೂ ಈ ಚಿತ್ರದಲ್ಲಿ ಸಲ್ಮಾನ್ ಖಾನ್‌ಗೆ ನಾಯಕಿಯಾಗಿರುವ ರಶ್ಮಿಕಾ ಮಂದಣ್ಣ ಸೇರಿದಂತೆ ಎಲ್ಲಾ ಕಲಾವಿದರಿಗೂ ಚಿತ್ರತಂಡ ಹೆಚ್ಚಿನ ಭದ್ರತೆ ನೀಡಲು ಯೋಜಿಸಿದೆ ಎಂಬ ಸುದ್ದಿ ಈಗ ಚರ್ಚೆಗೆ ಗ್ರಾಸವಾಗಿದೆ. ತೀವ್ರ ಬೆದರಿಕೆ ಇರುವ ಹಿನ್ನೆಲೆ ಚಿತ್ರತಂಡ ಈ ಕ್ರಮ ಕೈಗೊಳ್ಳಲು ಮುಂದಾಗಿದೆ ಎನ್ನಲಾಗಿದೆ.

# ಡಾಲಿ ಚಿತ್ರಕ್ಕೆ ಕಾಂತಾರ ಬೆಡಗಿ

ಕನ್ನಡದ ಐತಿಹಾಸಿಕ ಸಿನಿಮಾ ಹಲಗಲಿ ಚಿತ್ರಕ್ಕೆ ಡಾಲಿ ಧನಂಜಯ ಹೈಲೆಟ್ ಅನ್ನೋದು ಎಲ್ಲರಿಗೂ ಗೊತ್ತು. ಈಗ ಆ ಚಿತ್ರಕ್ಕೆ ನಾಯಕಿಯಾಗಿ ಕಾಂತಾರ ಖ್ಯಾತಿಯ ಸಪ್ತಮಿ ಗೌಡ ಅವರು ಆಯ್ಕೆಯಾಗಿದ್ದಾರೆ. ಸುಕೇಶ್ ಡಿ ಕೆ ನಿರ್ದೇಶನದ ಯುವ ಉದ್ಯಮಿ ಕಲ್ಯಾಣ್ ಚಕ್ರವರ್ತಿ ಧೂಳಿಪಾಳ್ಳ ನಿರ್ಮಾಣದ ಬಹು ತಾರಾಗಣದ ಅದ್ದೂರಿ ಬಜೆಟ್ ಚಿತ್ರ 'ಹಲಗಲಿ' ಈಗಾಗಲೇ ಸಾಕಷ್ಟು ಸದ್ದು ಮಾಡಿದ್ದು, ಚಿತ್ರೀಕರಣಕ್ಕೆ ಅಣಿಯಾಗುತ್ತಿದೆ.

ಎರಡು ಭಾಗಗಳಲ್ಲಿ, ಮೂಡಿ ಬರಲಿರುವ ಈ ಸಿನಿಮಾ ಕೋಟಿ ವೆಚ್ಚದಲ್ಲಿ ತಯಾರಾಗುತ್ತಿದೆ ಎಂಬುದು ವಿಶೇಷ. ಐದು ಭಾಷೆಯಲ್ಲಿ ಅದ್ದೂರಿಯಾಗಿ ಸೆಟ್ಟೇರಿರುವ ಕನ್ನಡದ ಐತಿಹಾಸಿಕ ಸಿನಿಮಾದಲ್ಲಿ ಕನ್ನಡ ಸೇರಿದಂತೆ ಬಹುಭಾಷಾ ನಟರೂ ಇರಲಿದ್ದಾರೆ. ಕನ್ನಡ ಸೇರಿ ಐದು ಭಾಷೆಯಲ್ಲಿ ಮೂಡಿ ಬರುತ್ತಿರುವ ಕನ್ನಡ ನಾಡಿನ ಸ್ವಾತಂತ್ರ್ಯ ಪೂರ್ವದ ವೀರರ ಕಥೆ ಇದಾಗಿದ್ದು, ಸಿನಿಮಾಗೆ ಬೇಕಾದ ಎಲ್ಲಾ ತಯಾರಿ ಮಾಡಿಕೊಂಡು ಚಿತ್ರೀಕರಣಕ್ಕೆ ಹೊರಡುವ ಉತ್ಸಾಹದಲ್ಲಿದೆ ಚಿತ್ರತಂಡ.

ನಟ ಡಾಲಿ ಧನಂಜಯ ಅವರ ವೃತ್ತಿ ಪಯಣದಲ್ಲಿ ಮತ್ತೊಂದು ಮೈಲುಗಲ್ಲಿನ ಚಿತ್ರವಿದು. ಇಲ್ಲಿವರೆಗೂ ಅವರನ್ನು ತೆರೆ ಮೇಲೆ ವಿಭಿನ್ನ ಪಾತ್ರಗಳಲ್ಲಿ ನೋಡಿ ಮೆಚ್ಚಿದ್ದ ಪ್ರೇಕ್ಷಕರು, ಈಗ ವಾರಿಯರ್ ಪಾತ್ರದಲ್ಲಿ ನೋಡಲಿದ್ದಾರೆ. ಇವರ ಕೈಗೆ ಬಿಲ್ಲು, ಬಾಣ, ಮದ್ದು- ಗುಂಡುಗಳನ್ನು ಕೊಟ್ಟು ಯುದ್ಧದ ಅಖಾಡಕ್ಕೆ ಇಳಿಸಿರುವುದು ಕನ್ನಡ ನಾಡಿನ ಇತಿಹಾಸ ಪುಟಗಳಲ್ಲಿ ಅಚ್ಚಳಿಯದೆ ದಾಖಲಾಗಿರುವ ಒಂದು ರೋಚಕ ಇತಿಹಾಸ.



# ಭಾರತಕ್ಕೆ ಆರಂಭಿಕ ಆಘಾತ; ಮತ್ತೊಮ್ಮೆ ಸೊನ್ನೆಗೆ ರೋಹಿತ್ ಬಲಿ

## 2ನೇ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಮೊದಲ ಇನ್ನಿಂಗ್ಸ್‌ನಲ್ಲಿ ಖಾತೆ ತೆರೆಯದೆ ಔಟ್

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮೂರು ಪಂದ್ಯಗಳ ಟೆಸ್ಟ್ ಸರಣಿಯ ಎರಡನೇ ಪಂದ್ಯವು ಪುಣೆಯ ಮಹಾರಾಷ್ಟ್ರ ಕ್ರಿಕೆಟ್ ಸ್ಟೇಡಿಯಂನಲ್ಲಿ ಗುರುವಾರದಿಂದ ಆರಂಭವಾಗಿದೆ. ಪಂದ್ಯದಲ್ಲಿ ಟಾಸ್ ಗೆದ್ದ ನ್ಯೂಜಿಲೆಂಡ್ ತಂಡ 259 ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿದೆ. ಮೊದಲ ದಿನದಾಟದ ಮೂರನೇ ಸೆಷನ್‌ನಲ್ಲಿ ಕಿವೀಸ್ ಪಡೆಯನ್ನು ಆಲೌಟ್ ಮಾಡಿದ ಟೀಂ ಇಂಡಿಯಾ ಕೂಡ ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿದೆ. ಆದರೆ ತಂಡಕ್ಕೆ ಮತ್ತೊಮ್ಮೆ ಆರಂಭಿಕ ಆಘಾತ ಎದುರಾಗಿದೆ. ನಾಯಕ ರೋಹಿತ್ ಶರ್ಮಾ ಮತ್ತೊಮ್ಮೆ ನಿರಾಸೆ ಮೂಡಿಸಿದ್ದು, ಬೆಂಗಳೂರು ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 2 ರನ್‌ಗಳಿಗೆ ಇನ್ನಿಂಗ್ಸ್ ಮುಗಿಸಿದ್ದ ರೋಹಿತ್, ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಖಾತೆ ತೆರೆಯದೆ ಔಟಾಗಿದ್ದಾರೆ. ಉಳಿದಂತೆ ತಂಡದ ಪರ ಅಜೇಯರಾಗಿ ಉಳಿದಿರುವ ಶುಭ್‌ಮನ್ ಗಿಲ್ ಹಾಗೂ ಯಶಸ್ವಿ ಜೈಸ್ವಾಲ್ ಎರಡನೇ ದಿನದಾಟಕ್ಕೆ ಬ್ಯಾಟಿಂಗ್ ಕಾಯ್ದುಕೊಂಡಿದ್ದು, ದಿನದಾಟದಂತ್ಯಕ್ಕೆ ಟೀಂ ಇಂಡಿಯಾ 1 ವಿಕೆಟ್ ಕಳೆದುಕೊಂಡು 16 ರನ್ ಕಲೆಹಾಕಿದೆ.



**ತಂಡದಲ್ಲಿ 3 ಬದಲಾವಣೆ**

ಪಂದ್ಯದಲ್ಲಿ ಟಾಸ್ ಗೆದ್ದ ನ್ಯೂಜಿಲೆಂಡ್ ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿತು. ಕಿವೀಸ್ ತಂಡದಲ್ಲಿ ಮ್ಯಾಟ್ ಹೆನ್ರಿ ರೂಪದಲ್ಲಿ ಒಂದು ಬದಲಾವಣೆ ಮಾಡಿದ್ದರೆ, ಭಾರತ ತಂಡದಲ್ಲಿ 3 ಬದಲಾವಣೆ ಮಾಡಲಾಗಿತ್ತು. ಅದರಂತೆ ಕೆಎಲ್ ರಾಹುಲ್, ಮೊಹಮ್ಮದ್ ಸಿರಾಜ್ ಮತ್ತು ಕುಲ್ದೀಪ್ ಯಾದವ್‌ರನ್ನು ತಂಡದಿಂದ ಕೈಬಿಟ್ಟಿದ್ದರೆ, ಅವರ ಬದಲಿಗೆ ವಾಷಿಂಗ್ಟನ್ ಸುಂದರ್, ಶುಭ್‌ಮನ್ ಗಿಲ್ ಮತ್ತು ಆಕಾಶ್ ದೀಪ್ ಅವರನ್ನು ತಂಡಕ್ಕೆ ಆಯ್ಕೆ ಮಾಡಿಕೊಳ್ಳಲಾಗಿತ್ತು.

### 10 ವಿಕೆಟ್ ಉರುಳಿಸಿದ ಇಬ್ಬರು

**ಇನ್ನು ಮೊದಲ ಇನ್ನಿಂಗ್ಸ್ ಆರಂಭಿಸಿದ ಕಿವೀಸ್ ಪಡೆಗೆ ಆರಂಭಿಕ ಆಘಾತ ನೀಡುವಲ್ಲಿ ಅಶ್ವಿನ್ ಯಶಸ್ವಿಯಾದರು. ಅಶ್ವಿನ್, ನ್ಯೂಜಿಲೆಂಡ್ ತಂಡದ ಮೊದಲ ಮೂರು ವಿಕೆಟ್‌ಗಳನ್ನು ಉರುಳಿಸಿದರೆ, ಇದಾದ ನಂತರ ವಾಷಿಂಗ್ಟನ್ ಸುಂದರ್ ಜವಾಬ್ದಾರಿ ವಹಿಸಿಕೊಂಡು ಕಿವೀಸ್ ಬ್ಯಾಟ್ಸ್‌ಮನ್‌ಗಳಿಗೆ ಪೆವಿಲಿಯನ್ ಹಾದಿ ತೋರಿಸಿದರು. ಆದಾಗ್ಯೂ ಅಶ್ವಿನ್ ಮತ್ತು ಸುಂದರ್ ಅವರ ಬಿರುಗಾಳಿಯ ನಡುವೆಯೂ ಕಿವೀಸ್ ಪರ ಡೆವೊನ್ ಕಾನ್ವೆ ಅತ್ಯಧಿಕ 76 ರನ್‌ಗಳ ಇನ್ನಿಂಗ್ಸ್ ಆಡಿದರೆ, ರಚಿನ್ ರವೀಂದ್ರ 65 ರನ್‌ಗಳ ಕಾಣಿಕೆ ನೀಡಿದರು. ಕೊನೆಯಲ್ಲಿ ಮಿಚೆಲ್ ಸ್ಯಾಂಟ್ನರ್ 33 ರನ್‌ಗಳ ಕಾಣಿಕೆ ನೀಡಿದರು. ಉಳಿದಂತೆ ಕಿವೀಸ್ ಪಡೆಯ ಐವರು ಬ್ಯಾಟ್ಸ್‌ಮನ್‌ಗಳಿಗೆ ಎರಡಂಕಿ ದಾಟಲು ಸಾಧ್ಯವಾಗದಿದ್ದರೆ, ಇತ್ತ ಟೀಂ ಇಂಡಿಯಾ ಪರ ಜಸ್ಪ್ರೀತ್ ಬುಮ್ರಾ, ಆಕಾಶ್ ದೀಪ್ ಮತ್ತು ರವೀಂದ್ರ ಜಡೇಜಾಗೆ ಯಾವುದೇ ವಿಕೆಟ್ ಪಡೆಯಲು ಸಾಧ್ಯವಾಗಲಿಲ್ಲ.**



# ಪ್ಲೀಸ್ ನಂಬಿಕಾಡಿಬೇಡಿ ರೋಹಿತ್‌ರನ್ನು ಒಪ್ಪಿಸಿದ

ಭಾರತದ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದಿರುವ ನ್ಯೂಝಿಲೆಂಡ್ ತಂಡವು ಬ್ಯಾಟಿಂಗ್ ಆಯ್ದುಕೊಂಡಿದೆ. ಅದರಂತೆ ಪ್ರಥಮ ಇನಿಂಗ್ಸ್ ಆರಂಭಿಸಿರುವ ನ್ಯೂಝಿಲೆಂಡ್ 38 ಓವರ್‌ಗಳ ಮುಕ್ತಾಯದ ವೇಳೆಗೆ 2 ವಿಕೆಟ್ ಕಳೆದುಕೊಂಡು 120 ರನ್ ಕಲೆಹಾಕಿದೆ. ಪುಣೆಯಲ್ಲಿ ನಡೆಯುತ್ತಿರುವ ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಪಂದ್ಯದಲ್ಲಿ ಸ್ವಾರಸ್ಯಕರ ಘಟನೆಯೊಂದು ಕಂಡು ಬಂದಿದೆ. ಅದು ಕೂಡ ವಿಕೆಟ್ ಪಡೆಯಲಿಗೋಸ್ಕರ ಎಂಬುದು ವಿಶೇಷ. ಅಂದರೆ ಈ ಪಂದ್ಯದಲ್ಲಿ ಟಾಸ್ ಗೆದ್ದು ಇನಿಂಗ್ಸ್ ಆರಂಭಿಸಿದ ನ್ಯೂಝಿಲೆಂಡ್ ತಂಡವು ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿತು. ಆದರೆ 8ನೇ ಓವರ್‌ನಲ್ಲಿ ದಾಳಿಗಿಳಿದ ಅಶ್ವಿನ್, ಟಾಮ್ ಲ್ಯಾಥಮ್ (15) ವಿಕೆಟ್ ಪಡೆದು ಮೊದಲ ಯಶಸ್ಸು ತಂದುಕೊಟ್ಟರು.

ಇದಾದ ಬಳಿಕ ಡೆವೊನ್ ಕಾನ್ವೆ ಹಾಗೂ ವಿಲ್ ಯಂಗ್ ಉತ್ತಮ ಜೊತೆಯಾಟವಾಡಿದ್ದರು. ಆದರೆ ಅಶ್ವಿನ್ ಎಸೆದ ಇನಿಂಗ್ಸ್‌ನ 24ನೇ ಓವರ್‌ನ ಕೊನೆಯ ಎಸೆತವು ವಿಲ್ ಯಂಗ್ ಅವರ ಲೆಗ್ ಸೈಡ್ ಮೂಲಕ ಚೆಂಡು ವಿಕೆಟ್ ಕೀಪರ್ ಕೈ ಸೇರಿತು. ರಿಷಭ್ ಪಂತ್ ಕ್ಯಾಚ್ ಹಿಡಿಯುತ್ತಿದ್ದಂತೆ ಸಿಲ್ಲಿ ಪಾಯಿಂಟ್‌ನಲ್ಲಿದ್ದ ಸರ್ಫರಾಝ್ ಖಾನ್ ಔಟ್‌ಗಾಗಿ ಅಪೀಲ್ ಮಾಡಿದರು. ಆದರೆ ಪಂತ್ ಚೆಂಡು ಬ್ಯಾಟ್‌ಗೆ ತಾಗಿಲ್ಲ ಎಂದು ಉತ್ತರಿಸಿದರು. ಇದಾಗ್ಯೂ, ಸರ್ಫರಾಝ್ ಖಾನ್ ತಮ್ಮ ನಿರ್ಧಾರದಿಂದ ಹಿಂದೆ ಸರಿಯಲು ಸಿದ್ಧರಿರಲಿಲ್ಲ. ಮೊದಲಿಗೆ ಅಶ್ವಿನ್ ಅವರ ಮನವೊಲಿಸಲು ಯತ್ನಿಸಿದರು.

ಇದೇ ವೇಳೆ ಆಗಮಿಸಿದ ರೋಹಿತ್ ಶರ್ಮಾ ಡಿಆರ್‌ಎಸ್ ತೆಗೆದುಕೊಳ್ಳಬೇಕಾ ಎಂದು ರಿಷಭ್ ಪಂತ್ ಅವರಲ್ಲಿ ಕೇಳಿದ್ದಾರೆ. ಆದರೆ ಪಂತ್ ಕಡೆಯಿಂದ ಸಕರಾತ್ಮಕ ಉತ್ತರ ಸಿಗಲಿಲ್ಲ. ಈ ವೇಳೆ ದಯವಿಟ್ಟು ನನ್ನನ್ನು ನಂಬಿ ಎನ್ನುವ ಮೂಲಕ ಸರ್ಫರಾಝ್ ಖಾನ್ ರೋಹಿತ್ ಶರ್ಮಾ ಅವರ ಮನವೊಲಿಸಲು ಯತ್ನಿಸಿದರು.

ಇದೇ ವೇಳೆ ವಿರಾಟ್ ಕೊಹ್ಲಿ ಕೂಡ ಸರ್ಫರಾಝ್ ಖಾನ್‌ಗೆ ಬೆಂಬಲ ಸೂಚಿಸಿ ರೋಹಿತ್ ಶರ್ಮಾ ಜೊತೆ ಡಿಆರ್‌ಎಸ್ ತೆಗೆದುಕೊಳ್ಳುವಂತೆ ಸೂಚಿಸಿದರು. ಅದರಂತೆ ರೋಹಿತ್ ಶರ್ಮಾ ಮೂರನೇ ಅಂಪೈರ್‌ಗೆ ಮನವಿ ಸಲ್ಲಿಸಿದರು. ಥರ್ಡ್ ಅಂಪೈರ್ ಪರಿಶೀಲನೆ ವೇಳೆ ಚೆಂಡು ಬ್ಯಾಟ್ ಸವರಿ ವಿಕೆಟ್ ಕೀಪರ್ ಕೈ ಸೇರಿರುವುದು ಗೋಚರಿಸಿತು. ಇದರೊಂದಿಗೆ ವಿಲ್ ಯಂಗ್ ಇನಿಂಗ್ಸ್ ಕೊನೆಗೊಂಡಿತು.

ಅಂದರೆ ಸರ್ಫರಾಝ್ ಖಾನ್ ಅವರ ತದೇಕಚಿತ್ತದಿಂದಾಗಿ ಭಾರತ ತಂಡಕ್ಕೆ ಎರಡನೇ ವಿಕೆಟ್ ಲಭಿಸುವಂತಾಯಿತು. ಇದೀಗ ಯುವ ಆಟಗಾರ ಏಕಾಗ್ರತೆಯ ಫೀಲ್ಡಿಂಗ್‌ಗೆ ಭಾರೀ ಮೆಚ್ಚುಗೆಗಳು ವ್ಯಕ್ತವಾಗುತ್ತಿದೆ. ಸರ್ಫರಾಝ್ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

# ಇತಿಹಾಸ ನಿರ್ಮಿಸಿದ ರವಿಚಂದ್ರನ್ ಅಶ್ವಿನ್

ಟೀಮ್ ಇಂಡಿಯಾ ಸ್ಪಿನ್ನರ್ ರವಿಚಂದ್ರನ್ ಅಶ್ವಿನ್ ಟೆಸ್ಟ್ ಕ್ರಿಕೆಟ್‌ನಲ್ಲಿ ಹೊಸ ಇತಿಹಾಸ ಬರೆದಿದ್ದಾರೆ. ಪುಣೆಯಲ್ಲಿ ನಡೆಯುತ್ತಿರುವ ನ್ಯೂಝಿಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಎರಡು ವಿಕೆಟ್ ಕಬಳಿಸುವುದರೊಂದಿಗೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿಯಲ್ಲಿ ಅತ್ಯಧಿಕ ವಿಕೆಟ್ ಕಬಳಿಸಿದ ಬೌಲರ್ ಎನಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ಈ ದಾಖಲೆ ಪಟ್ಟಿಯಲ್ಲಿ ಆಸ್ಟ್ರೇಲಿಯಾದ ಸ್ಪಿನ್ನರ್ ನಾಥನ್ ಲಿಯಾನ್ ಅಗ್ರಸ್ಥಾನದಲ್ಲಿದ್ದರು. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ 78 ಇನಿಂಗ್ಸ್‌ಗಳಲ್ಲಿ 1809.2 ಓವರ್‌ಗಳನ್ನು ಎಸೆದಿರುವ ಲಿಯಾನ್ ಒಟ್ಟು 187 ವಿಕೆಟ್ ಕಬಳಿಸಿ ವಿಶ್ವ ದಾಖಲೆ ನಿರ್ಮಿಸಿದ್ದರು. ಇದೀಗ ಲಿಯಾನ್ ಅವರನ್ನು ಹಿಂದಿಕ್ಕಿ ಅಶ್ವಿನ್ ಅಗ್ರಸ್ಥಾನಕ್ಕೇರಿದ್ದಾರೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಟೆಸ್ಟ್ ಸರಣಿಯಲ್ಲಿ ಒಟ್ಟು 74 ಇನಿಂಗ್ಸ್ ಆಡಿರುವ ಅಶ್ವಿನ್ 1390★ ಓವರ್‌ಗಳಲ್ಲಿ ಎಸೆದಿದ್ದಾರೆ. ಈ ವೇಳೆ ಒಟ್ಟು 188★ ವಿಕೆಟ್‌ಗಳನ್ನು ಪಡೆದು ಹೊಸ ಇತಿಹಾಸ ನಿರ್ಮಿಸಿದ್ದಾರೆ. ಈ ಮೂಲಕ ಅತ್ಯಧಿಕ ವಿಕೆಟ್ ಕಬಳಿಸಿದ ಬೌಲರ್ ಎನಿಸಿಕೊಂಡಿದ್ದಾರೆ.

ಸದ್ಯ 188 ವಿಕೆಟ್ ಕಬಳಿಸಿರುವ ರವಿಚಂದ್ರನ್ ಅಶ್ವಿನ್‌ಗೆ 200 ವಿಕೆಟ್‌ಗಳ ಸಾಧನೆ ಮಾಡಲು ಇನ್ನೂ 12 ವಿಕೆಟ್‌ಗಳ ಅವಶ್ಯಕತೆಯಿದೆ. ಇದೀಗ ನ್ಯೂಝಿಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯ ನಡೆಯುತ್ತಿದ್ದು, ಇದಾದ ಬಳಿಕ ಮುಂಬೈನಲ್ಲಿ ಮೂರನೇ ಟೆಸ್ಟ್ ಪಂದ್ಯ ಜರುಗಲಿದೆ. ಈ ಪಂದ್ಯಗಳ ಮೂಲಕ ಅಶ್ವಿನ್ ಇನ್ನೂರು ವಿಕೆಟ್‌ಗಳ ಗಡಿದಾಟಲಿದ್ದಾರಾ ಕಾದು ನೋಡಬೇಕಿದೆ.

ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಅತ್ಯಧಿಕ ವಿಕೆಟ್ ಕಬಳಿಸಿದ ಬೌಲರ್‌ಗಳ ಪಟ್ಟಿಯಲ್ಲಿ ರವಿಚಂದ್ರನ್ ಅಶ್ವಿನ್ ಏಳನೇ ಸ್ಥಾನದಲ್ಲಿದ್ದಾರೆ. ಈವರೆಗೆ 104★ ಟೆಸ್ಟ್ ಪಂದ್ಯಗಳನ್ನಾಡಿರುವ ಅಶ್ವಿನ್ 4453 ಓವರ್‌ಗಳ ಮೂಲಕ ಒಟ್ಟು 530★ ವಿಕೆಟ್ ಕಬಳಿಸಿದ್ದಾರೆ. ಅಲ್ಲದೆ ಅನಿಲ್ ಕುಂಬ್ಳೆ (619) ಬಳಿಕ ಟೆಸ್ಟ್‌ನಲ್ಲಿ ಅತ್ಯಧಿಕ ವಿಕೆಟ್ ಪಡೆದ ಭಾರತೀಯ ಬೌಲರ್ ಎನಿಸಿಕೊಂಡಿದ್ದಾರೆ.



# 7 ವಿಕೆಟ್; ವಾರೆ ವ್ಹಾ ವಾಷಿಂಗ್ಟನ್ ಸುಂದರ್



**3 ವರ್ಷಗಳ ಬಳಿಕ ಟೆಸ್ಟ್ ಕ್ರಿಕೆಟ್‌ಗೆ ಪುನರಾಗಮನ**

ಪುಣೆಯಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ವಿರುದ್ಧದ ಎರಡನೇ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾದ ಆಲ್‌ರೌಂಡರ್ ವಾಷಿಂಗ್ಟನ್ ಸುಂದರ್ ತಮ್ಮ ಸ್ಪಿನ್ ಮ್ಯಾಜಿಕ್ ಮೂಲಕ ಕಿವೀಸ್ ತಂಡವನ್ನು ಬೃಹತ್ ಮೊತ್ತ ಕಲೆಹಾಕದಂತೆ ತಡೆದಿದ್ದಾರೆ. ಬರೋಬ್ಬರಿ 3 ವರ್ಷಗಳ ಬಳಿಕ ಟೆಸ್ಟ್ ಕ್ರಿಕೆಟ್‌ಗೆ ಪುನರಾಗಮನ ಮಾಡಿದ ಸುಂದರ್ ಕಿವೀಸ್ ತಂಡದ ಏಳು ಬ್ಯಾಟ್ಸ್‌ಮನ್‌ಗಳಿಗೆ ಪೆವಿಲಿಯನ್ ಹಾದಿ ತೋರಿಸಿದರು. ಇದರಲ್ಲಿ ಸುಂದರ್, ಐವರು ನ್ಯೂಜಿಲೆಂಡ್ ಬ್ಯಾಟ್ಸ್‌ಮನ್‌ಗಳನ್ನು ಕ್ಲೀನ್ ಬೌಲ್ಡ್ ಮಾಡಿದರೆ, ಒಂದು ಎಲ್ಬಿಡಬ್ಲ್ಯು ಮತ್ತು ಒಂದು ಕ್ಯಾಚ್ ಔಟ್ ಮಾಡಿದರು. ಮೊದಲ ಇನ್ನಿಂಗ್ಸ್‌ನಲ್ಲಿ 23.1 ಓವರ್ ಬೌಲ್ ಮಾಡಿದ ಸುಂದರ್ 59 ರನ್ ನೀಡಿ 7 ವಿಕೆಟ್ ಪಡೆದರು. ಈ ಮೂಲಕ ಸುಂದರ್ ಟೆಸ್ಟ್ ಕ್ರಿಕೆಟ್‌ನಲ್ಲಿ ನ್ಯೂಜಿಲೆಂಡ್ ವಿರುದ್ಧ ಅತ್ಯುತ್ತಮ ಸ್ಪೆಲ್ ಮಾಡಿದ ಭಾರತದ ಜಂಟಿ ಮೂರನೇ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

**7 ವಿಕೆಟ್ ಉರುಳಿಸಿದ ಸುಂದರ್**

ಈ ಪಂದ್ಯದಲ್ಲಿ ರಚಿನ್ ರವೀಂದ್ರ ರೂಪದಲ್ಲಿ ಮೊದಲ ವಿಕೆಟ್ ಪಡೆಯುವ ಮೂಲಕ ವಿಕೆಟ್‌ಗಳ ಬೇಟೆ ಆರಂಭಿಸಿದ ಸುಂದರ್, ಇದರ ನಂತರ ಟಾಮ್ ಬ್ಲಂಡೆಲ್, ಡೇರಿಲ್ ಮಿಚೆಲ್, ಗ್ಲೆನ್ ಫಿಲಿಪ್ಸ್, ಟಿಮ್ ಸೌಥಿ, ಅಜಾಜ್ ಪಟೇಲ್ ಮತ್ತು ಮಿಚೆಲ್ ಸ್ಯಾಂಟ್ನರ್ ಅವರನ್ನು ಪೆವಿಲಿಯನ್ ಗಟ್ಟುವಲ್ಲಿ ಯಶಸ್ವಿಯಾದರು. ವಾಷಿಂಗ್ಟನ್ ಸುಂದರ್ ಟೆಸ್ಟ್ ಪಂದ್ಯವೊಂದರ ಇನ್ನಿಂಗ್ಸ್‌ನಲ್ಲಿ 5 ಅಥವಾ ಅದಕ್ಕಿಂತ ಹೆಚ್ಚು ವಿಕೆಟ್ ಪಡೆದಿರುವುದು ಇದೇ ಮೊದಲು. ಈ ಪಂದ್ಯಕ್ಕೂ ಮುನ್ನ ಟೀಂ ಇಂಡಿಯಾ ಪರ 4 ಪಂದ್ಯಗಳಲ್ಲಿ 6 ವಿಕೆಟ್ ಪಡೆದಿದ್ದ ವಾಷಿಂಗ್ಟನ್ ಸುಂದರ್ ಈ ಬಾರಿ ಒಂದೇ ಇನ್ನಿಂಗ್ಸ್‌ನಲ್ಲಿ 7 ವಿಕೆಟ್ ಪಡೆದಿದ್ದಾರೆ.

**ಟೀಕಾಕಾರರ ಬಾಯಿಗೆ ಬೀಗ**

ನಾಯಕ ರೋಹಿತ್ ಶರ್ಮಾ ಎರಡನೇ ಟೆಸ್ಟ್ ಪಂದ್ಯಕ್ಕೆ ಪ್ಲೇಯಿಂಗ್ 11 ಘೋಷಿಸಿದಾಗ, ಎಲ್ಲಾರೂ ಆಶ್ಚರ್ಯಚಕಿತರಾಗಿದ್ದರು. ಕಾರಣ ತಂಡದಲ್ಲಿ ಕುಲ್ದೀಪ್ ಯಾದವ್ ಬದಲಿಗೆ ವಾಷಿಂಗ್ಟನ್ ಸುಂದರ್ ಅವರನ್ನು ಆಯ್ಕೆ ಮಾಡಲಾಗಿತ್ತು. ಹೀಗಿರುವಾಗ ಸುನಿಲ್ ಗವಾಸ್ಕರ್ ಕೂಡ ಈ ನಿರ್ಧಾರವನ್ನು ತಪ್ಪು ಎಂದಿದ್ದರು. ಈ ಪಂದ್ಯದಲ್ಲಿ ಕುಲ್ದೀಪ್‌ಗೆ ಅವಕಾಶ ಸಿಗಬೇಕಿತ್ತು ಎಂದು ಗವಾಸ್ಕರ್ ವೀಕ್ಷಕ ವಿವರಣೆಯಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದರು. ಆದರೆ ವಾಷಿಂಗ್ಟನ್ ಸುಂದರ್ ತಮ್ಮ ಪ್ರದರ್ಶನದ ಮೂಲಕ ಟೀಕಾಕಾರರ ಬಾಯಿ ಮುಚ್ಚಿಸುವಲ್ಲಿ ಯಶಸ್ವಿಯಾಗಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966